# ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಸೆಪ್ಟೆಂಬರ್ 9 ಶನಿವಾರ 2023

ಸಂಪುಟ: 44 | ಸಂಚಿಕೆ: 145 | ಪುಟಗಳು: 12

₹4

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ: Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ/ಜಾಹೀರಾತಿಗಾಗಿ – ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com






## ಮೊದಲ ದಿನವೇ ದಸರಾ ಗಜಪಡೆ ಪೂರ್ಣ ಪ್ರಮಾಣದ ತಾಲೀಮು

**ಅರಮನೆ ಆವರಣದಿಂದ ಹೊರಟು ಒಂದು ಗಂಟೆ ಹತ್ತು ನಿಮಿಷದ ಅವಧಿಯಲ್ಲಿ ಬನ್ನಿಮಂಟಪದ ಪಂಜಿನ ಕವಾಯತು ಮೈದಾನ ತಲುಪಿದ ಆನೆಗಳು**

ಮೈಸೂರು, ಸೆ.8(ಎಂಟಿವೈ)– ದಸರಾ ಮಹೋತ್ಸವದಲ್ಲಿ ಪಾಲ್ಗೊಳ್ಳಲಿರುವ ಅಭಿಮನ್ಯು ನೇತೃತ್ವದ ಗಜಪಡೆಯ ಮೊದಲ ತಂಡದ 8 ಆನೆಗಳು ಮೊದಲ ದಿನವೇ ಪೂರ್ಣ ಪ್ರಮಾಣದಲ್ಲಿ ಯಶಸ್ವಿ ತಾಲೀಮು ನಡೆಸಿ, ಗಮನ ಸೆಳೆದವು.

ಮೈಸೂರು ಅರಮನೆಯ ಕೋಡಿ ಸೋಮೇಶ್ವರ ದೇವಾಲಯದಿಂದ ಶುಕ್ರವಾರ ಬೆಳಗ್ಗೆ ಗಜಪಡೆ ನಾಯಕ ಅಭಿಮನ್ಯು ನೇತೃತ್ವದಲ್ಲಿ ಭೀಮ, ಮಹೇಂದ್ರ, ಧನಂಜಯ, ವಿಜಯ, ವರಲಕ್ಷ್ಮಿ, ಗೋಪಿ, ಕಂಜನ್–ಜಂಬೂಸವಾರಿ ಮಾರ್ಗದಲ್ಲಿ ಮೊದಲ ದಿನದ ತಾಲೀಮಿನಲ್ಲಿ ಯಶಸ್ವಿಯಾಗಿ ಸಾಗಿದವು. ಅರಮನೆ ಆವರಣದಲ್ಲಿ ಕಳೆದ ಮೂರು ದಿನಗಳಿಂದ ಬೀಡು ಬಿಟ್ಟಿರುವ ಗಜಪಡೆಯ ಈ 8 ಆನೆಗಳಿಗೆ ಎರಡು ದಿನ ಅರಮನೆ ಆವರಣದಲ್ಲಿ ತಾಲೀಮು ನಡೆಸಲಾಗಿತ್ತು. ಜಂಬೂಸವಾರಿ ಮಾರ್ಗದಲ್ಲಿ ಇಂದು ಮೊದಲ ದಿನದ ತಾಲೀಮಿಗೆ ಆನೆಗಳನ್ನು ಕರೆದೊಯ್ಯಲಾಯಿತು. ಅರಮನೆಯ ಬಲರಾಮ ದ್ವಾರದಿಂದ ಹೊರಬಂದ ಆನೆಗಳು ಕೆ.ಆರ್.ವೃತ್ತ, ಸಯ್ಯಾಜಿರಾವ್ ರಸ್ತೆಯಲ್ಲಿ ಸರ್ಕಾರಿ ಆಯುರ್ವೇದ ಆಸ್ಪತ್ರೆ, ಹಳೆ ಆರ್‌ಎಂಸಿ ವೃತ್ತ, ಬಂಬೂ ಬಜಾರ್ ವೃತ್ತ, ಹೈವೆ ವೃತ್ತದ ಮೂಲಕ ●7ನೇ ಪುಟಕ್ಕೆ

### ಆನೆಗಳ ಬಳಿ ಹಾರನ್ ಮಾಡಬೇಡಿ...

ಇಂದಿನಿಂದ ಜಂಬೂಸವಾರಿ ಮಾರ್ಗದಲ್ಲಿ ಗಜಪಡೆ, ಅ.23ರವರೆಗೂ ನಿರಂತರವಾಗಿ ಬೆಳಗ್ಗೆ ಹಾಗೂ ಸಂಜೆ ಎರಡು ಬಾರಿ ಅರಮನೆಯಿಂದ ಬನ್ನಿಮಂಟಪದವರೆಗೆ ಹೆಜ್ಜೆ ಹಾಕಲಿದ್ದು, ಈ ವೇಳೆ ಮಾರ್ಗದುದ್ದಕ್ಕೂ ಸಾಗುವ ವಾಹನಗಳ ಸವಾರರು ಆನೆಗಳ ಬಳಿ ಬಂದಾಗ ಹಾರನ್ ಮಾಡದಂತೆ ಅರಣ್ಯ ಇಲಾಖೆ ಮನವಿ ಮಾಡಿದೆ. ವಿವಿಧ ಕ್ಯಾಂಪ್‌ಗಳಿಂದ ಆಗಮಿಸಿರುವ ಆನೆಗಳು ನಗರದ ವಾತಾವರಣಕ್ಕೆ ಹೊಂದಿಕೊಳ್ಳಲು ಸಮಯ ಬೇಕಾಗುತ್ತದೆ. ಈ ಹಿನ್ನಲೆಯಲ್ಲಿ ಗಜಪಡೆ ಸಾಗುವ ವೇಳೆ ಎಲ್ಲಾ ರೀತಿಯ ವಾಹನ ಚಾಲಕರು ಹಾಗೂ ಸವಾರರು ಆನೆಗಳ ಬಳಿ ಕಿರುಚುವುದು, ಹಾರನ್ ಹೊಡೆಯುವುದು ಮಾಡದಂತೆ ಕೋರಿದ್ದಾರೆ. ಆನೆಗಳನ್ನು ನೋಡಲು ಬಯಸುವ ನಾಗರಿಕರು ರಸ್ತೆ ಎರಡೂ ಬದಿಯಲ್ಲಿ ನಿಂತು, ಅವುಗಳ ಮನಸ್ಥಿತಿಯನ್ನು ಅರಿತು, ಅಂತರ ಕಾಯ್ದುಕೊಳ್ಳುವಂತೆ ಕೋರಿದ್ದಾರೆ.

## ಭಾರತದ ನೆಲದಲ್ಲಿ ವಿಶ್ವನಾಯಕರ ಸಮಾಗಮ: ದೆಹಲಿಯಲ್ಲಿ ಇಂದಿನಿಂದ ಎರಡು ದಿನ ಐತಿಹಾಸಿಕ ಜಿ20 ಶೃಂಗಸಭೆ


● ಜಾಗತಿಕ ಮಟ್ಟದಲ್ಲಿ ಗಮನ ಸೆಳೆಯುತ್ತಿರುವ ರಾಷ್ಟ್ರ ರಾಜಧಾನಿ ವಿಶ್ವದ ಗಣ್ಯರಿಗೆ ಅಭೂತಪೂರ್ವ ಆತಿಥ್ಯಕ್ಕೆ ವ್ಯವಸ್ಥೆ
● ಇತಿಹಾಸದಲ್ಲಿ ಕಂಡರಿಯದ ಭದ್ರತಾ ವ್ಯವಸ್ಥೆ



**ನವದೆಹಲಿ, ಸೆ. 8–ರಾಜಧಾನಿ ದೆಹಲಿಯಲ್ಲಿ ಜಿ20 ಶೃಂಗಸಭೆಗೆ ಕ್ಷಣಗಣನೆ ಆರಂಭವಾಗಿದೆ. ದಿಲ್ಲಿಯ ಪ್ರಗತಿ ಮೈದಾನ ಸರ್ವರೀತಿಯಲ್ಲಿ ಸಜ್ಜಾಗಿದೆ. ಅಮೇರಿಕ ಅಧ್ಯಕ್ಷ ಜೋ ಬೈಡನ್, ಇಂಗ್ಲೆಂಡ್ ಪ್ರಧಾನಿ ರಿಷಿ ಸುನಕ್, ಮಾರಿಷಸ್ ಪ್ರಧಾನಿ ಪರ್ವಿಂದ್ ಜಗನ್ನಾಥ್, ಫ್ರೆಂಚ್ ಅಧ್ಯಕ್ಷ ಎಮ್ಯಾನುಯಲ್ ಮ್ಯಾಕ್ರನ್ ಸೇರಿದಂತೆ ಸುಮಾರು 125 ದೇಶಗಳ ಮುಖ್ಯಸ್ಥರು ಹಾಗೂ ಅವರ ಪ್ರತಿನಿಧಿಗಳು ಈಗಾಗಲೇ ದೆಹಲಿಗೆ ಆಗಮಿಸಿದ್ದಾರೆ.**

ಜಿ20 ಶೃಂಗಸಭೆಯು ಸೆಪ್ಟೆಂಬರ್ 9 ಮತ್ತು 10ರಂದು ನಡೆಯಲಿದೆ. ವಿದೇಶದಿಂದ ಆಗಮಿಸಿರುವ ವಿಶ್ವ ನಾಯಕರಿಗೆ ಕೇಂದ್ರ ಸರ್ಕಾರದಿಂದ ರತ್ನಗಂಬಳಿ ಸ್ವಾಗತ ನೀಡಲಾಗಿದೆ. ರಾಜಧಾನಿ ದೆಹಲಿ ರಸ್ತೆಗಳಲ್ಲಿ ಜಿ20 ಶೃಂಗಸಭೆಯ ಸ್ವಾಗತ ಕಮಾನುಗಳು, ಫ್ಲೆಕ್ಸ್‌ಗಳು ರಾರಾಜಿಸುತ್ತಿವೆ. ಜಗತ್ತಿನ ದೊಡ್ಡಣ್ಣ ಸೇರಿದಂತೆ ವಿಶ್ವದ ಘಟಾನುಘಟಿ ನಾಯಕರು ಆಗಮಿಸಿರುವ ಹಿನ್ನೆಲೆಯಲ್ಲಿ ರಾಜಧಾನಿ ದೆಹಲಿಯಲ್ಲಿ ಅಭೂತಪೂರ್ವ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದ್ದು, 13 ಸಾವಿರಕ್ಕೂ ಹೆಚ್ಚು ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ವಾಯುಪಡೆ ಯುದ್ಧ ವಿಮಾನಗಳು ದೆಹಲಿ ಆಗಸದಲ್ಲಿ ಹಾರಾಡುತ್ತಿವೆ. ಕೇಂದ್ರೀಯ ಮೀಸಲು ಪಡೆ, ಸೇನಾಪಡೆ, ಗಡಿ ಭದ್ರತಾ ಪಡೆ ಹಾಗೂ ರಾಜ್ಯ ಪೊಲೀಸರು ವಿಶ್ವದ ಗಣ್ಯರಿಗೆ ಬಹು ಹಂತಗಳಲ್ಲಿ ಭದ್ರತೆ ಒದಗಿಸಿದ್ದಾರೆ. ದೆಹಲಿಯ ವಿವಿಧ ಭಾಗಗಳಲ್ಲಿ ಸಿಸಿ ಕ್ಯಾಮರಾ ಹಾಗೂ ಡ್ರೋಣ್‌ಗಳ ಮೂಲಕ ಕಣ್ಗಾವಲು ಇಡಲಾಗಿದೆ. ದೆಹಲಿಯ ಶಾಲಾ–ಕಾಲೇಜು ಹಾಗೂ ಸರ್ಕಾರಿ ಕಚೇರಿಗಳಿಗೆ ಮೂರು ದಿನ ರಜೆ ಘೋಷಿಸಲಾಗಿದೆ.

**ಔತಣ ಕೂಟ:** ಜಿ20 ಶೃಂಗಸಭೆಗೆ ಆಗಮಿಸಿರುವ ವಿಶ್ವ ನಾಯಕರಿಗೆ ಶನಿವಾರ ರಾತ್ರಿ ರಾಷ್ಟ್ರಪತಿ ●6ನೇ ಪುಟಕ್ಕೆ



### ಬೈಡನ್–ಮೋದಿ ಸೌಹಾರ್ದ ಮಾತುಕತೆ

ನವದೆಹಲಿ, ಸೆ.8– ಭಾರತದ ಚಂದ್ರಯಾನ–3 ಯೋಜನೆಯ ಯಶಸ್ಸಿಗಾಗಿ ಭಾರತೀಯ ಬಾಹ್ಯಾಕಾಶ ಸಂಸ್ಥೆ ಇಸ್ರೋ ವಿಜ್ಞಾನಿಗಳನ್ನು ಅಮೆರಿಕ ಅಧ್ಯಕ್ಷ ಜೋ ಬೈಡನ್ ಅಭಿನಂದಿಸಿದರು. ಜಿ20 ಶೃಂಗಸಭೆಯಲ್ಲಿ ಭಾಗವಹಿಸುವ ಸಲುವಾಗಿ ಭಾರತಕ್ಕೆ ಬಂದಿರುವ ಅವರು ಶುಕ್ರವಾರ ರಾತ್ರಿ ಪ್ರಧಾನಿ ನರೇಂದ್ರ ಮೋದಿ ಜತೆ ದ್ವಿಪಕ್ಷೀಯ ಮಾತುಕತೆ ನಡೆಸಿದರು.

ನಂತರ ಉಭಯ ದೇಶಗಳ ನಡುವೆ ರಾಜಕೀಯ ಪಾಲುದಾರಿಕೆಗಾಗಿ ತಾಂತ್ರಿಕ ಸಹಕಾರದ ಬಗ್ಗೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಜಂಟಿ ಹೇಳಿಕೆಯಲ್ಲಿ ತಿಳಿಸಲಾಗಿದೆ. ಜತೆಗೆ ಚೀನಾದ ಬಗ್ಗೆಯೂ ಮಾತುಕತೆ ನಡೆದಿದೆ. ಕ್ವಾಡ್ ಸಭೆಯಲ್ಲಿ ಪಾಲ್ಗೊಳ್ಳಲು ಮುಂದಿನ ವರ್ಷ ಭಾರತಕ್ಕೆ ಭೇಟಿ ನೀಡುವಂತೆ ಬೈಡನ್ ಅವರನ್ನು ಪ್ರಧಾನಿ ಮೋದಿ ಆಹ್ವಾನಿಸಿದ್ದಾರೆ. ಎಂಕ್ಯು9 ರೀಪರ್ ಡ್ರೋನ್ ಮತ್ತು ಜೆಟ್ ಎಂಜಿನ್ ಬಗ್ಗೆ ಉಭಯ ●6ನೇ ಪುಟಕ್ಕೆ

### ನಾನು ಹೆಮ್ಮೆಯ ಹಿಂದೂ; ಭಾರತದಲ್ಲಿ ದೇವಾಲಯಕ್ಕೆ ಭೇಟಿ

**ಜಿ20 ಶೃಂಗ ಸಭೆಗೆ ಆಗಮಿಸಿದ ಬ್ರಿಟನ್ ಪ್ರಧಾನಿ ರಿಷಿ ಸುನಕ್ ಮೊದಲ ಪ್ರತಿಕ್ರಿಯೆ**



ನವದೆಹಲಿ, ಸೆ.8– ಜಿ20 ಶೃಂಗಸಭೆಯಲ್ಲಿ ಭಾಗವಹಿಸಲು ಬ್ರಿಟನ್ ಪ್ರಧಾನಿ ರಿಷಿ ಸುನಕ್ ಭಾರತಕ್ಕೆ ಬಂದಿದ್ದಾರೆ. ಭಾರತಕ್ಕೆ ಬಂದ ಬಳಿಕ ಸಂದರ್ಶನವೊಂದರಲ್ಲಿ ಅವರು, ಖಲಿಸ್ತಾನ್ ಸಮಸ್ಯೆ, ಪ್ರಧಾನಿ ಮೋದಿ ಜತೆಗಿನ ಸಂಬಂಧ ಸೇರಿದಂತೆ ಹಲವು ವಿಷಯಗಳ ಬಗ್ಗೆ ಮಹತ್ವದ ಹೇಳಿಕೆ ನೀಡಿದ್ದಾರೆ. ಇದೇ ವೇಳೆ ಅವರು 'ನಾನು ಹೆಮ್ಮೆಯ ಹಿಂದೂ' ಎಂದು ಹೇಳಿದ್ದು ಭಾರತದಲ್ಲಿ ಇರುವಾಗ ಇಲ್ಲಿನ ದೇವಾಲಯಕ್ಕೆ ಭೇಟಿ ನೀಡುವುದಾಗಿಯೂ ಹೇಳಿದರು. ನಾನು ಹಿಂದೂ ಎಂದು ಹೇಳಿಕೊಳ್ಳಲು ಹೆಮ್ಮೆ ಪಡುತ್ತೇನೆ. ನಾನು ●6ನೇ ಪುಟಕ್ಕೆ

**ಕೆಆರ್‌ಎಸ್‌ಗೆ ಬಿಜೆಪಿ ನಿಯೋಗ ಭೇಟಿ**

## ಕಾವೇರಿ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ರಾಜ್ಯದ ಹಿತ ಕಾಯುವಲ್ಲಿ ವಿಫಲ

● ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಕ್ರೋಶ
● ಅಣೆಕಟ್ಟೆ ಪ್ರವೇಶಕ್ಕೆ ಮಾಧ್ಯಮದವರಿಗೆ ನಿರ್ಬಂಧಕ್ಕೆ ಖಂಡನೆ

ಶ್ರೀರಂಗಪಟ್ಟಣ, ಸೆ.8– ಈ ವರ್ಷ ಮಳೆ ಕೊರತೆಯಾಗಲಿದೆ ಎಂಬ ಮಾಹಿತಿ ಇದ್ದರೂ, ರಾಜ್ಯ ಸರ್ಕಾರ ಕಾವೇರಿ ನೀರಿನ ವಿಚಾರದಲ್ಲಿ ಯಾವುದೇ ಮುನ್ನೆಚ್ಚರಿಕೆ ವಹಿಸಲಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕಿಡಿಕಾರಿದರು.

ತಾಲೂಕಿನ ಕೆಆರ್‌ಎಸ್ ಅಣೆಕಟ್ಟೆಗೆ ಇಂದು ಭೇಟಿ ನೀಡಿದ ಬಿಜೆಪಿ ನಿಯೋಗದಲ್ಲಿ ಡ್ಯಾಂ ಪರಿಶೀಲನೆ ಬಳಿಕ ಮಾತನಾಡಿ, ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳದೇ ಸರ್ಕಾರ ತಮಿಳುನಾಡಿಗೆ ಕಾವೇರಿ ನೀರು ಹರಿಸಿದೆ. ಜೊತೆಗೆ ಕೆಆರ್‌ಎಸ್ ಸೇರಿದಂತೆ ಕಾವೇರಿ ನದಿ ನೀರು ವ್ಯಾಪ್ತಿಗೆ ಬರುವ ಇನ್ನಿತರ ಡ್ಯಾಂಗಳನ್ನು ನಿರ್ವಹಣೆ ಮಾಡುವಲ್ಲಿ ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ●7ನೇ ಪುಟಕ್ಕೆ



## ತಮಿಳುನಾಡಿಗೆ ಹರಿಯುತ್ತಿದ್ದ ನೀರು ನಿಲುಗಡೆ



ಮಂಡ್ಯ, ಸೆ.8(ಮೋಹನ್‌ರಾಜ್)– ಕಳೆದ 10 ದಿನಗಳಿಂದ ತಮಿಳುನಾಡಿಗೆ ಜಿಲ್ಲೆಯ ಕೃಷ್ಣರಾಜ ಸಾಗರ ಅಣೆಕಟ್ಟೆಯಿಂದ ಪ್ರತಿದಿನ ನಿರಂತರ 5 ಸಾವಿರ ಕ್ಯೂಸೆಕ್‌ಗೂ ಅಧಿಕ ನೀರನ್ನು ಹರಿಸುತ್ತಿದ್ದ ರಾಜ್ಯ ಸರ್ಕಾರ ಶುಕ್ರವಾರ ನೀರು ಸ್ಥಗಿತಗೊಳಿಸಿದೆ. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಸೂಚನೆಯಂತೆ ಬಹುತೇಕ ನೀರು ತಮಿಳುನಾಡಿಗೆ ಹರಿದಿದ್ದರಿಂದ ಈ ನಿರ್ಧಾರಕ್ಕೆ ರಾಜ್ಯ ಸರ್ಕಾರ ಬಂದಿದ್ದು, ಶುಕ್ರವಾರ ಮಧ್ಯಾಹ್ನದ ವೇಳೆಗೆ ನೀರು ಸಂಪೂರ್ಣ ಸ್ಥಗಿತಗೊಳಿಸಲಾಗಿದೆ.

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ತಮಿಳುನಾಡಿಗೆ ಆರಂಭದಲ್ಲಿ ನಿತ್ಯ 25 ಸಾವಿರ ಕ್ಯೂಸೆಕ್ ನೀರನ್ನು 15 ದಿನಗಳ ಕಾಲ ಬಿಡುವಂತೆ ಸೂಚನೆ ನೀಡಿತ್ತು. ಇದಕ್ಕೊಪ್ಪದ ರಾಜ್ಯ ಸರ್ಕಾರ ಪ್ರಾಧಿಕಾರದ ಸೂಚನೆಯನ್ನು ತಿರಸ್ಕರಿಸಿತ್ತು. ನಂತರ 12 ಸಾವಿರ ಕ್ಯೂಸೆಕ್ ಬಿಡುವಂತೆ ಸೂಚಿಸಿತ್ತಾದರೂ, ರಾಜ್ಯದಲ್ಲಿ ಮಳೆಯ ಕೊರತೆ ಇರುವುದರಿಂದ ●7ನೇ ಪುಟಕ್ಕೆ





## ಮಹಿಷ ದಸರಾ ತಡೆಯಲು ಸಂಘರ್ಷಕ್ಕೂ ಸೈ...!

**ಸಂಸದ ಪ್ರತಾಪ್‌ಸಿಂಹ ಘರ್ಜನೆ**

● ಬೇಕಿದ್ದರೆ ಅವರ ಮನೆಯಲ್ಲಿ ಮಹಿಷ ದಸರಾ ಆಚರಿಸಲಿ; ಮಹಿಷನಂತಹ ಮಗು ಬೇಡಲಿ ● ಸಿದ್ದರಾಮಯ್ಯ ಸಿಎಂ ಆದ್ರೆ ಧರ್ಮ ವಿರೋಧಿಗಳಿಗೆ ಶಕ್ತಿ ಬರುತ್ತೆ ● ಚಾಮುಂಡೇಶ್ವರಿ ಬಗ್ಗೆ ಟೀಕಿಸಿದ್ರೂ ಮೈಸೂರಿಗರ ಮೌನವೇಕೆ...?

ಮೈಸೂರು, ಸೆ.8(ಬಿಎಲ್‌ಯು)– ಸಂಘರ್ಷವಾದರೂ ಸರಿ, ನಾವು ಮಹಿಷ ದಸರಾ ತಡೆಯುತ್ತೇವೆ ಎಂದು ಸಂಸದ ಪ್ರತಾಪ್ ಸಿಂಹ ಎಚ್ಚರಿಕೆ ನೀಡಿದ್ದಾರೆ.

ಮೈಸೂರಿನ ಜಲದರ್ಶಿನಿಯಲ್ಲಿ ಪತ್ರಕರ್ತರ ಜೊತೆ ಮಾತನಾಡಿದ ಅವರು, ದೇವಿಯ ಆಶೀರ್ವಾದ ಪಡೆಯಲು ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಸಾವಿರಾರು ಜನರು ಬರುತ್ತಾರೆ. ನಾಡದೇವತೆ ಚಾಮುಂಡೇಶ್ವರಿ ದೇವಿಯನ್ನು ತಮ್ಮ ಆರಾಧ್ಯ ದೇವತೆ ಎಂದು ಭಕ್ತರು ಭಾವಿಸಿದ್ದಾರೆ. ಆದ್ದರಿಂದ ದೇವಿಯ ನೆಲೆಯನ್ನು ಚಾಮುಂಡಿಬೆಟ್ಟ ಎಂಬ ಹೆಸರಿನಿಂದ ಕರೆಯುತ್ತಾರೆಯೇ ಹೊರತು, ಮಹಿಷ ಬೆಟ್ಟ ಎನ್ನುವುದಿಲ್ಲ ಎಂದರು. ಭಕ್ತಿಯ ಕೇಂದ್ರ ಸ್ಥಾನವಾದ ಚಾಮುಂಡಿ ಬೆಟ್ಟದಲ್ಲಿ ಮಹಿಷ ದಸರಾ ಮಾಡುವುದು ಸರಿಯಲ್ಲ. ಬೇಕಿದ್ದರೆ ನಿಮ್ಮ ಮನೆಯಲ್ಲಿ ಮಹಿಷ ದಸರಾ ಆಚರಣೆ ಮಾಡಿಕೊಳ್ಳಿ, ಬೇಕಿದ್ದರೆ ಮಹಿಷನಂತಹ ಮಗನನ್ನು ಕೊಡು ಎಂದು ಬೇಡಿಕೊಳ್ಳಲಿ. ಆದರೆ ಚಾಮುಂಡಿಬೆಟ್ಟ ಮಹಿಷ ದಸರಾ ಆಚರಣೆಗೆ ಸೂಕ್ತ ಸ್ಥಳವಲ್ಲ ಎಂದು ಪ್ರತಾಪ್ ಸಿಂಹ ಅಭಿಪ್ರಾಯಪಟ್ಟರು.

ಮಹಿಷ ದಸರಾ ಆಚರಣೆ ಮಾಡುತ್ತಿರುವವರ ಪತ್ನಿಯರು ಕೂಡ ಚಾಮುಂಡಿಬೆಟ್ಟಕ್ಕೆ ಹೋಗಿ ನಾಡದೇವತೆಯ ಆಶೀರ್ವಾದ ಪಡೆಯುತ್ತಾರೆ. ಆದರೆ ಇವರು ಯಾವುದೋ ಕಾರಣಕ್ಕೆ ಇಲ್ಲಿ ಚಾಮುಂಡೇಶ್ವರಿ ಆರಾಧನೆ ಬಿಟ್ಟು ಮಹಿಷನ ಆರಾಧನೆ ಮಾಡುತ್ತಿದ್ದಾರೆ ●7ನೇ ಪುಟಕ್ಕೆ

### ಹಿಂದೂ ಧರ್ಮಕ್ಕೆ ಸೊಳ್ಳೆ, ನೊಣ, ಡೆಂಗ್ಯೂ ನಾಶ ಮಾಡುವ ಶಕ್ತಿಯಿದೆ!

ಮುಸ್ಲಿಂ ಹಾಗೂ ಕ್ರೈಸ್ತ ಧರ್ಮಿಯರ ದಾಳಿಯಾದರೂ ಸನಾತನ ಧರ್ಮ ಈ ತನಕ ಅಲ್ಲಾಡದೆ ಗಟ್ಟಿಯಾಗಿ ನಿಂತಿದೆ. ಈಗ ಉದಯನಿಧಿ ಸ್ಟಾಲಿನ್‌ನಂತಹವರು ಇಂತಹ ಹೇಳಿಕೆ ನೀಡಿದರೆ ಸನಾತನ ಧರ್ಮ ಹಾಳಾಗುವುದಿಲ್ಲ. ಇಷ್ಟೊಂದು ಟೀಕೆ ಮಾಡುವ ಉದಯನಿಧಿ ಸ್ಟಾಲಿನ್‌ಗೆ ಸನಾತನ ಧರ್ಮದ ತಿರುಳಿನ ಬಗ್ಗೆ ಏನು ಗೊತ್ತಿದೆ ಎಂದು ಪ್ರತಾಪ್ ಸಿಂಹ ಪ್ರಶ್ನಿಸಿದರು. ವಿಜ್ಞಾನ ಹಾಗೂ ತಂತ್ರಜ್ಞಾನದ ತಳಹದಿಯ ಮೇಲೆ ಹಿಂದೂ ಧರ್ಮ ನಿಂತಿದೆ. ಭೂಮಿ ಚಪ್ಪಟ್ಟೆಯಾಗಿದೆ ಎಂದು ಮುಸ್ಲಿಂ ಹಾಗೂ ಕ್ರೈಸ್ತರು ವಾದಿಸುತ್ತಿದ್ದರು. ಆದರೆ ಭೂಮಿ ಗೋಳಾಕಾರದಲ್ಲಿದೆ ಎಂದು ವಿಜ್ಞಾನದ ತಳಹದಿಯಿಂದ ಬೆಳೆದಿರುವ ಹಿಂದೂ ಧರ್ಮ ಸಾರಿ ಹೇಳಿತು. ಇಷ್ಟೊಂದು ಗಟ್ಟಿತನ ಇರುವ ಹಿಂದೂ ಧರ್ಮಕ್ಕೆ ಇಂತಹ ಡೆಂಗ್ಯೂ, ಸೊಳ್ಳೆ, ನೊಣಗಳನ್ನು ನಾಶ ಮಾಡುವ ಶಕ್ತಿ ಇದೆ ಎಂದರು. ಇಂತಹ ಹಿಂದೂ ವಿರೋಧಿಗಳ ಜೊತೆ ಕಾಂಗ್ರೆಸ್ ಸಖ್ಯ ಬೆಳೆಸಿದೆ. ಈ ಮೂಲಕ ಕಾಂಗ್ರೆಸ್ ಸನಾತನ ಧರ್ಮ ವಿರೋಧಿ ಭಾವನೆ ಹೊಂದಿದೆ ಎಂದು ಟೀಕಿಸಿದರು. ಕಾಂಗ್ರೆಸ್‌ನವರಿಗೆ ಯಾವ ನೆಲ, ಜಲದ ಬಗ್ಗೆಯೂ ಪ್ರೀತಿ ಇಲ್ಲ. ಸ್ವಾರ್ಥಕ್ಕಾಗಿ, ಅಧಿಕಾರಕ್ಕಾಗಿ ಯಾವುದೇ ಕೆಲಸ ಮಾಡಲು ಇವರು ಹಿಂದೆ ಮುಂದೆ ನೋಡುವುದಿಲ್ಲ. ಈಗ ನಮ್ಮ ರೈತರ ಬೆಳೆಗೆ ನೀರು ಬಿಡದೆ ತಮಿಳುನಾಡಿಗೆ ನಿರಂತರ ನೀರು ಹರಿಸುತ್ತಿರುವುದು ಇದಕ್ಕೆ ಸ್ಪಷ್ಟ ನಿದರ್ಶನ ಎಂದು ಪ್ರತಾಪ್ ಸಿಂಹ ಆಕ್ರೋಶ ವ್ಯಕ್ತಪಡಿಸಿದರು.

### ಬಿಜೆಪಿ–ಜೆಡಿಎಸ್ ಮೈತ್ರಿ ಕುರಿತಂತೆ ಬಿಎಸ್‌ವೈ ತೀರ್ಮಾನಕ್ಕೆ ಸಹಮತ

ಮೈಸೂರು, ಸೆ.8(ಬಿಎಲ್‌ಯು)–ಬಿಜೆಪಿ ಹಾಗೂ ಜೆಡಿಎಸ್ ನಡುವೆ ಮೈತ್ರಿ ಏರ್ಪಡುವ ಸಂಬಂಧ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ನೀಡಿರುವ ಪೂರಕ ಹೇಳಿಕೆಗೆ ನನ್ನ ಸಹಮತವಿದೆ ಎಂದು ಸಂಸದ ಪ್ರತಾಪ್ ಸಿಂಹ ಸ್ಪಷ್ಟಪಡಿಸಿದರು.

ಯಡಿಯೂರಪ್ಪ ನಮ್ಮ ಪಕ್ಷದ ಪ್ರಶ್ನಾತೀತ ನಾಯಕರು. ಏಕಾಂಗಿಯಾಗಿ ರಾಜ್ಯ ಸುತ್ತಿ ಪಕ್ಷ ಕಟ್ಟಿ ಬೆಳೆಸಿದ್ದಾರೆ. ರಾಜ್ಯದಲ್ಲಿ ಬಿಜೆಪಿ ಈ ಮಟ್ಟಕ್ಕೆ ಬರಲು ಯಡಿಯೂರಪ್ಪ ಅವರೇ ಕಾರಣ. ಈ ಹಿನ್ನೆಲೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಡುವೆ ಮೈತ್ರಿ ಮಾಡಿಕೊಳ್ಳುವ ಸಂಬಂಧ ಯಡಿಯೂರಪ್ಪ ಹಾಗೂ ಕೇಂದ್ರದ ನಾಯಕರು ಯಾವುದೇ ತೀರ್ಮಾನ ಕೈಗೊಂಡರೂ ಅದಕ್ಕೆ ನಾನು ಬದ್ಧನಿದ್ದೇನೆ ಎಂದು ತಿಳಿಸಿದರು. ರಾಜಕೀಯವಾಗಿ ಬಹಳಷ್ಟು ಅನುಭವ ಇರುವ ಯಡಿಯೂರಪ್ಪ ಅವರು ಏನೇ ತೀರ್ಮಾನ ಕೈಗೊಂಡಿದ್ದರೂ ಯೋಚಿಸಿಯೇ ನಿರ್ಧಾರ ಮಾಡಿರುತ್ತಾರೆ ಎಂದರು. ಪ್ರಧಾನ ಮಂತ್ರಿ ನರೇಂದ್ರ ಮೋದಿ ಹಾಗೂ ಜೆಡಿಎಸ್ ವರಿಷ್ಠ ಹೆಚ್.ಡಿ. ದೇವೇಗೌಡರ ನಡುವೆ ಉತ್ತಮ ಸಂಬಂಧವಿದೆ. ಬಿಜೆಪಿಯ ಕೆಲವೊಂದು ವಿಚಾರದ ಬಗ್ಗೆ ದೇವೇಗೌಡರು ಕೆಲವು ಸಲ ಟೀಕೆ ಮಾಡಿದ್ದರೂ ಮೋದಿ ಅವರ ಒಳ್ಳೆಯ ತೀರ್ಮಾನಗಳ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ. ನರೇಂದ್ರ ಮೋದಿ ಅವರು ದೇವೇಗೌಡರನ್ನು ತುಂಬಾ ಗೌರವಯುತವಾಗಿ ನಡೆಸಿಕೊಂಡಿದ್ದಾರೆ ಎಂದು ಪ್ರತಾಪ್‌ಸಿಂಹ ಹೇಳಿದರು.

ರಾಜ್ಯದ ಜನರು ಪ್ರಜ್ಞಾವಂತರಿದ್ದಾರೆ. ಆದರೂ ಗ್ಯಾರಂಟಿ ಯೋಜನೆಯಿಂದ ಯಾಮಾರಿದ್ದಾರೆ. ಆದರೆ ಈಗ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರದ ಆಡಳಿತ ನೋಡಿ ಅವರಿಗೆ ತಪ್ಪಿನ ಅರಿವಾಗಿದೆ. ರಾಜ್ಯ ಸರ್ಕಾರದ ಜನ ವಿರೋಧಿ ನೀತಿ ನೋಡಿರುವ ರಾಜ್ಯದ ಜನತೆ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸುತ್ತಾರೆ. ಈ ಮೂಲಕ ನರೇಂದ್ರ ಮೋದಿ ಅವರು ಮತ್ತೊಮ್ಮೆ ಪ್ರಧಾನಮಂತ್ರಿ ಆಗಲಿದ್ದಾರೆ ಎಂದು ಪ್ರತಾಪ್ ಸಿಂಹ ವಿಶ್ವಾಸ ವ್ಯಕ್ತಪಡಿಸಿದರು.

# ಧರ್ಮದ ಉಳಿವಿಗೆ ಭಗವಂತನ ಅವತಾರ ನಿಶ್ಚಿತ: ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ



ಮೈಸೂರು, ಸೆ. 8– ದುಷ್ಟರ ಶಿಕ್ಷೆ, ಶಿಷ್ಟರ ರಕ್ಷಣೆಗೆ ಯುಗಯುಗಗಳಲ್ಲೂ ಅವತಾರ ಎತ್ತಿ ಬರುತ್ತೇನೆ ಎಂದು ಭಗವದ್ಗೀತೆಯಲ್ಲಿ ಶ್ರೀಕೃಷ್ಣ ಹೇಳಿರುವ ಮಾತು ಎಲ್ಲಾ ಕಾಲಕ್ಕೂ ಪ್ರಸ್ತುತವಾಗಿದೆ. ಧರ್ಮದ ಉಳಿವಿಗೆ ಭಗವಂತನ ಅವತಾರ ಬೇರೆ ಬೇರೆ ರೂಪದಲ್ಲಿ ಆಗುತ್ತಲೇ ಇರುತ್ತದೆ ಎಂದು ಉಡುಪಿಯ ಪೇಜಾವರ ಮಠದ ಶ್ರೀ ವಿಶ್ವಪ್ರಸನ್ನ ತೀರ್ಥ ಸ್ವಾಮೀಜಿ ಅಭಿಪ್ರಾಯ ವ್ಯಕ್ತಪಡಿಸಿದರು.

ಮೈಸೂರಿನ ಕೆ.ಆರ್.ಮೊಹಲ್ಲಾದ ನಾಲಾ ಬೀದಿಯಲ್ಲಿರುವ ವೈಷ್ಣವಿ ಸೇವಾ ಪರಿಷತ್ ಹಮ್ಮಿಕೊಂಡಿದ್ದ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮದಲ್ಲಿ ದೇವರಿಗೆ ಸಮರ್ಪಿಸಲು ವಿವಿಧ ಭಕ್ಷ್ಯಗಳನ್ನು ಸಿದ್ಧಪಡಿಸಲಾಯಿತು.

ಗೋಪೂಜೆ ಸಲ್ಲಿಸಿ ಮಾತನಾಡಿದ ಶ್ರೀಗಳು, ಯುವಕರು ಧರ್ಮದ ಹಾದಿಯಲ್ಲಿ ನಡೆಯಬೇಕು. ಧರ್ಮಕ್ಕೆ ಆಪತ್ತು ಎದುರಾದಲ್ಲಿ ರಕ್ಷಣೆಗೂ ಸಿದ್ಧರಿರಬೇಕು ಎಂದು ಸೂಚಿಸಿದರು.


ಶ್ರೀಕೃಷ್ಣ ಆರಾಧ್ಯ ದೈವ. ಪಶುಪಾಲನೆ ವೃತ್ತಿ ಮಾಡುವ ಗೊಲ್ಲ ಜನಾಂಗದವರಿಗೆ ಗೋಪಾಲಕ ಎಂದು ಖ್ಯಾತಿ ಪಡೆದಿರುವ ಕೃಷ್ಣನೇ ಮುಖ್ಯದೇವರು. ಕೃಷ್ಣನಷ್ಟು ಕಷ್ಟಗಳನ್ನು ಎದುರಿಸಿದವರು ಮತ್ತೊಬ್ಬರು ಇರಲಾರರು. ತನಗೆ ಎದುರಾದ ಎಲ್ಲ ಕಷ್ಟಗಳನ್ನು ನಗುತ್ತಲೇ ಎದುರಿಸಿ ಜಗತ್ತಿಗೆ ಮಾದರಿಯಾದ ದೈವ. ಬೇರೆ ಧರ್ಮಗಳನ್ನು ಗೌರವಿಸೋಣ. ನಮ್ಮ ಧರ್ಮದ ಉನ್ನತಿಗೆ ಎಲ್ಲರೂ ಶ್ರಮಿಸೋಣ ಎಂದು ಹೇಳಿದರು. ವೆಂಗೀಪುರ ಮಠದ ಶ್ರೀ ಇಳೈ ಆಳ್ವಾರ್ ಸ್ವಾಮೀಜಿ, ವೈಷ್ಣವಿ ಸೇವಾ ಪರಿಷತ್ ಅಧ್ಯಕ್ಷ ಚಕ್ರಪಾಣಿ, ಮೈಸೂರು ಜಿಲ್ಲಾ ಬ್ರಾಹ್ಮಣ ಯುವ ವೇದಿಕೆ ಪ್ರಧಾನ ಕಾರ್ಯದರ್ಶಿ ವಿಕ್ರಮ ಅಯ್ಯಂಗಾರ್, ಪುಷ್ಪ ಅಯ್ಯಂಗಾರ್, ವೈದೇಹಿ, ಸುಚಿಂದ್ರ, ಚಿತ್ರ, ನಾಗಶ್ರೀ, ವಿದ್ಯಾ, ಮುರುಳೀಧರ್, ಗೀತಾ, ಜಗದೀಶ್, ಮಧುಸೂದನ್ ಇನ್ನಿತರರು ಉಪಸ್ಥಿತರಿದ್ದರು.

# ಖೋ ಖೋ ಪಂದ್ಯಾವಳಿಯಲ್ಲಿ ಬಹುಮಾನ



ಮೈಸೂರು, ಸೆ. 8– ಮೇಜರ್ ಧ್ಯಾನ್ ಚಂದ್ ಸಿಂಗ್ ಜನ್ಮದಿನದ ಅಂಗವಾಗಿ ರಾಷ್ಟ್ರೀಯ ಕ್ರೀಡಾ ದಿನಾಚರಣೆ ಮತ್ತು ರೋಹಿತ್ ಸ್ಮರಣಾರ್ಥ ಹರಿವಿದ್ಯಾಲಯ ಆವರಣದಲ್ಲಿ ಅಂತರ ಶಾಲಾ ಮಟ್ಟದ ಖೋ ಖೋ ಪಂದ್ಯಾವಳಿ ಆಯೋಜಿಸಲಾಗಿತ್ತು. ಪಂದ್ಯಾವಳಿಯ ಉದ್ಘಾಟನೆಯನ್ನು ಶಾಲೆಯ ಕಾರ್ಯದರ್ಶಿ ಶ್ರೀನಿವಾಸ ಹೊಸಮನೆ, ಪ್ರಾಂಶುಪಾಲರಾದ ಡಾ.ಎನ್.ಭಾರತೀಶಂಕರ್ ನೆರವೇರಿಸಿದರು. ಈ ಸಂದರ್ಭದಲ್ಲಿ 21 ಶಾಲೆಯ ತಂಡದ ತರಬೇತಿದಾರರು ಕ್ರೀಡಾಪಟುಗಳು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು. ಬಾಲಕಿಯರ ತಂಡದಲ್ಲಿ ಈಶ್ವರ್ ವಿದ್ಯಾಲಯ (ಪ್ರಥಮ), ಶಿಷ್ಕರಣಿ ಶಾಲೆ (ದ್ವಿತೀಯ) ಮತ್ತು ಹರಿ ವಿದ್ಯಾಲಯ (ತೃತೀಯ) ಬಹುಮಾನ ಪಡೆದುಕೊಂಡಿತು. ಬಾಲಕರ ತಂಡದಲ್ಲಿ ಹರಿ ವಿದ್ಯಾಲಯ (ಪ್ರಥಮ), ಈಶ್ವರ್ ವಿದ್ಯಾಲಯ (ದ್ವಿತೀಯ) ಮತ್ತು ಈಸ್ಟ್ ವೆಸ್ಟ್ ಇಂಟರ್ನ್ಯಾಷನಲ್ ಶಾಲೆ (ತೃತೀಯ) ಬಹುಮನ ಪಡೆದುಕೊಂಡಿತು.

# ಖ್ಯಾತ ವ್ಯಂಗ್ಯಚಿತ್ರಕಾರ ಅಜಿತ್ ನಿನಾನ್ ನಿಧನ




ಮೈಸೂರು, ಸೆ.8– ದಶಕಗಳ ಕಾಲ 'ಇಂಡಿಯಾ ಟುಡೆ', 'ಔಟ್‌ಲುಕ್' ಮತ್ತು 'ದಿ ಟೈಮ್ಸ್ ಆಫ್ ಇಂಡಿಯಾ' ಪುಟಗಳನ್ನು ಅಲಂಕರಿಸಿದ್ದ ಖ್ಯಾತ ವ್ಯಂಗ್ಯಚಿತ್ರಕಾರ ಅಜಿತ್ ನಿನಾನ್ ಅವರು ನಿನ್ನೆ ರಾತ್ರಿ ನಗರದ ಕೆಆರ್‌ಎಸ್ ರಸ್ತೆಯಲ್ಲಿರುವ ಬ್ರಿಗೇಡ್ ಸಿಂಫೊನಿ ಅಪಾರ್ಟ್‌ಮೆಂಟ್‌ನಲ್ಲಿರುವ ತಮ್ಮ ನಿವಾಸದಲ್ಲಿ ನಿಧನರಾದರು. ಅವರಿಗೆ 68 ವರ್ಷ ವಯಸ್ಸಾಗಿತ್ತು.

ಶ್ರೀಯುತರು ಪತ್ನಿ ಎಲಿಜಬೆತ್, ಪುತ್ರಿಯರಾದ ಸಂಯುಕ್ತ ಮತ್ತು ಅಪರಾಜಿತಾ ಸೇರಿದಂತೆ ಅಪಾರ ಬಂಧು ಬಳಗ ಮತ್ತು ಸ್ನೇಹಿತರನ್ನು ಅಗಲಿದ್ದಾರೆ.

ಚೆರಾನ್ ಲ್ಯಾಬೋರೇಟರೀಸ್ ಪ್ರೈವೇಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮೈಸೂರಿನ ಸಿಐಐ ಥೇರ್ಮ್ ಸ್ಯಾಮ್ ಚೆರಿಯನ್ ಅವರು ನಿನಾನ್ ಅವರ ಕೋ–ಬ್ರದರ್. ಅಂತ್ಯಕ್ರಿಯೆ ಮೈಸೂರಿನಲ್ಲಿ ಭಾನುವಾರ ನಡೆಯುವ ಸಾಧ್ಯತೆ ಇದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ. 1955ರಲ್ಲಿ ಹೈದರಾಬಾದ್‌ನಲ್ಲಿ ಜನಿಸಿದ ಅಜಿತ್ ನಿನಾನ್ ಅವರು ಭಾರತೀಯ ರಾಜಕೀಯ ವ್ಯಂಗ್ಯಚಿತ್ರಕಾರರಾಗಿದ್ದು, ಇಂಡಿಯಾ ಟುಡೆ' ನಿಯತಕಾಲಿಕದಲ್ಲಿ ಸೆಂಟರ್‌ಸ್ಟೇಜ್ ಸರಣಿಯ ಕಾರ್ಟೂನ್‌ಗಳನ್ನು ಮತ್ತು 'ಟೈಮ್ಸ್ ಆಫ್ ಇಂಡಿಯಾ'ದಲ್ಲಿ ನೈನಾನ್ಸ್ ವರ್ಲ್ಡ್ ಅಡಿ ಚಿತ್ರಿಸಿ ಹೆಸರುವಾಸಿಯಾಗಿದ್ದರು.

ಇವರಿಂದ ಕಾರ್ಟೂನ್ ಮೂಲಕ ಸಾವಿರಾರು ಪಾತ್ರಗಳು ಜೀವಂತವಾಗಿದ್ದು, ಮಕ್ಕಳ ನಿಯತಕಾಲಿಕೆ 'ಟಾರ್ಗೆಟ್'ಗಾಗಿ ಅವರು ರಚಿಸಿದ "ಡಿಟೆಕ್ಟಿವ್ ಮೂಚ್ವಾಲಾ" ಎಲ್ಲಾ ವಯೋಮಾನದ ಓದುಗರ ಮನದಲ್ಲಿ ಹಚ್ಚ ಹಸಿರಾಗಿ ಉಳಿದಿದೆ.

ಇವರ ಅತ್ತಿಗೆ ಮೈಸೂರಿನಲ್ಲಿ ನೆಲೆಸಿದ್ದರಿಂದ ಅಜಿತ್ ನಿನಾನ್ ಅವರು ಕೆಲವು ವರ್ಷಗಳಿಂದ ಮೈಸೂರನ್ನು ತಮ್ಮ ತವರು ಮಾಡಿಕೊಂಡಿದ್ದರು.



ಖ್ಯಾತ ವ್ಯಂಗ್ಯಚಿತ್ರಕಾರ ಅಜಿತ್ ನಿನಾನ್ ಅವರು ತಮ್ಮ ಪ್ರಸಿದ್ಧ ಶೀರ್ಷಿಕೆ 'ಡಿಟೆಕ್ಟಿವ್ ಮೂಚುವಾಲಾ' ದಡಿ ರಚಿಸುತ್ತಿರುವ ವ್ಯಂಗ್ಯಚಿತ್ರ. /ಫೈಲ್ ಫೋಟೋ

## ನಿಧನ



**ಮಂಜುನಾಥ್**

ಹೆಡತಲೆ, ಸೆ. 8–ನಂಜನಗೂಡು ತಾಲೂಕು ಹೆಡತಲೆ ಗ್ರಾಮದ ನಿವಾಸಿ, ಮಾಜಿ ಸೈನಿಕ ಮಂಜುನಾಥ್ (45) ಬುಧವಾರ ರಾತ್ರಿ ಕೆಆರ್ ಆಸ್ಪತ್ರೆಯಲ್ಲಿ ನಿಧನರಾದರು. ಮೃತರು ಪತ್ನಿ, ಇಬ್ಬರು ಮಕ್ಕಳು ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಸ್ವಗ್ರಾಮ ಹೆಡತಲೆ ಗ್ರಾಮದಲ್ಲಿ ಅದೇ ದಿನ ಮಧ್ಯಾಹ್ನ 2 ಗಂಟೆಗೆ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಬರ ಎಂಬ ಅಪಪ್ರಚಾರದಿಂದ ಮುಜುಗರ

# ಬರ ಘೋಷಣೆಗೆ ಮುಖ್ಯಮಂತ್ರಿ ಹಿಂದೇಟು!

- ಕೆಲ ದಿನ ಕಾದು ನಿರ್ಧರಿಸಲು ಸಂಪುಟ ಸಭೆಯಲ್ಲಿ ತೀರ್ಮಾನ
- ಅಲ್ಲಿವರೆಗೆ ಫಲಾನುಭವಿಗಳ ಮನೆ ಬಾಗಿಲಿಗೆ ಗ್ಯಾರಂಟಿಗಳು

ಬೆಂಗಳೂರು, ಸೆ.8(ಕೆಎಂಶಿ)–ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ರಾಜ್ಯಕ್ಕೆ ಬರ ಎಂಬ ಮಾತು ಜನಮಾನಸದಲ್ಲಿ ಕೇಳಿಬರುತ್ತದೆ. ಹೀಗಾಗಿ ತಕ್ಷಣಕ್ಕೆ ಬರ ಘೋಷಣೆ ಬೇಡ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಸ್ವತಃ ಸಂಪುಟ ಸಭೆಯಲ್ಲಿ ಸಂಬಂಧಪಟ್ಟ ಸಚಿವರಿಗೆ ತಿಳಿಸಿದ್ದಾರೆ. ನಾವು ಅಧಿಕಾರಕ್ಕೆ ಬಂದು ಇದೀಗ 100 ದಿನ ಪೂರೈಸಿ ಸಂಭ್ರಮಾ ಚರಣೆ ನಡೆದಿದೆ. ನಮ್ಮ ಗ್ಯಾರಂಟಿ ಯೋಜನೆಗಳ ಅನುಷ್ಠಾನದಿಂದ ಜನಮನ ಗೆದ್ದಿದ್ದೇವೆ.

ಮುಂಗಾರು ಮಳೆ ಕೈಕೊಟ್ಟಿದ್ದರೂ ಪರಿಸ್ಥಿತಿ ಇನ್ನೂ ನಮ್ಮ ಕೈ ಮೀರಿಲ್ಲ. ಈ ತಿಂಗಳಲ್ಲಿ ಉತ್ತಮ ಮಳೆಯಾಗಲಿದೆ ಎಂಬ ಹವಾಮಾನ ಇಲಾಖೆ ವರದಿ ಇದೆ.

ಸ್ವಲ್ಪ ದಿನ ಕಾದು ನಂತರ ತೀರ್ಮಾನ ಕೈಗೊಳ್ಳೋಣ. ಬರ ಘೋಷಣೆಗೆ ಇರುವ ನಿರ್ಬಂಧಗಳನ್ನು ಸಡಿಲಿಸಲು ಕೇಂದ್ರದ ಮೇಲೆ ಒತ್ತಡ ತರಲು ನಾನು ಕ್ರಮ ಕೈಗೊಳ್ಳುತ್ತೇನೆ. ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದರಿಂದ ಸ್ವಲ್ಪ ನಾವು ಮುಜುಗರಕ್ಕೆ ಸಿಲುಕಿದ್ದೇವೆ. ಕಾನೂನಿಗೆ ನಾವು ತಲೆ ಬಾಗಲೇಬೇಕು. ಈಗಾಗಲೇ ಸರ್ವಪಕ್ಷಗಳ ಮುಖಂಡರ ಸಭೆಯ ತೀರ್ಮಾನದಂತೆ ದೆಹಲಿಗೆ ನಿಯೋಗ ಕೊಂಡೊಯ್ಯಲು ತೀರ್ಮಾನ ಮಾಡುತ್ತೇನೆ. ಆ ಸಂದರ್ಭದಲ್ಲಿ ಇವೆರಡು ವಿಚಾರ ಚರ್ಚೆ ಮಾಡೋಣ ಎಂದಿದ್ದಾರೆ.

ಹವಾಮಾನ ವೈಪರಿತ್ಯಕ್ಕೂ ನಮಗೂ ಏನು ಸಂಬಂಧ? ನಮ್ಮ ವಿರೋಧಿಗಳು ಮಳೆ ಬಾರದ್ದನ್ನೇ ಮುಂದಿಟ್ಟುಕೊಂಡು ಅಪ ಪ್ರಚಾರ ಮಾಡುತ್ತಿದ್ದಾರೆ.



ನೀವು ತಿಳಿಸಿರುವಂತೆ ಏಕಾಏಕಿ 130–190 ತಾಲೂಕುಗಳನ್ನು ಬರ ಪೀಡಿತವೆಂದು ಘೋಷಣೆ ಮಾಡಿದರೆ. ಅಂಥವರ ಬಾಯಿಗೆ ಆಹಾರವಾದಂತೆ. ಮಳೆ ಬೀಳುವ ವಿಶ್ವಾಸ ನನಗಿದೆ. ದುಡುಕುವುದು ಬೇಡ. ಗ್ಯಾರಂಟಿ ಅನುಷ್ಠಾನದ ನಂತರ ರಾಜ್ಯದ ಯಾವುದೇ ಭಾಗದಲ್ಲೂ ಜನರು ಸಂಕಷ್ಟಕ್ಕೆ ಸಿಲುಕಿಲ್ಲ. ನಮ್ಮ ಯೋಜನೆಗಳು ಜನರ ಮನೆಬಾಗಿಲಿಗೆ ಮುಟ್ಟುವಂತೆ ನೋಡಿಕೊಳ್ಳಿ. ಬರ ಘೋಷಣೆ ಮಾಡಿ ನಮ್ಮ ಅಭಿವೃದ್ಧಿಯನ್ನು ಮರೆ ಮಾಚುವುದು ಬೇಡ ಎಂದು ಕಿವಿ ಮಾತು ಹೇಳಿದ್ದಾರೆ.

ಇದಕ್ಕೂ ಮುನ್ನ ಕಂದಾಯ ಸಚಿವ ಕೃಷ್ಣಭೈರೇಗೌಡ ಅವರು ಮಾತನಾಡಿ, ಸತತವಾಗಿ ಮೂರು ವಾರಗಳಿಂದ ಮಳೆ ಬೀಳದೆ 130–190 ತಾಲೂಕುಗಳಲ್ಲಿ ಬಿತ್ತನೆ ಮಾಡಿದ ಬೆಳೆಗಳು ಒಣಗುತ್ತಿವೆ. ರೈತರು ಬೆಳೆ ಕಳೆದುಕೊಂಡು ಸಂಕಷ್ಟಕ್ಕೆ ಸಿಲುಕಿದ್ದಾರೆ.

ವಾಡಿಕೆಗಿಂತ ಮಳೆ ಕೊರತೆಯಾದ ತಾಲೂಕುಗಳನ್ನು ಆಗಸ್ಟ್‌ನಲ್ಲೇ ಬರ ಘೋಷಣೆ ಮಾಡಬೇಕಾಗಿತ್ತು. ಆದರೆ, ಕೇಂದ್ರದ ಮಾನದಂಡಗಳು ಬರ ಘೋಷಣೆಗೆ ಅಡ್ಡಿಯಾಗಿವೆ. ಆಗಸ್ಟ್‌ನಲ್ಲಿ ಸತತ ಮಳೆ ಕೊರತೆಯಲ್ಲದೆ, ವಾಡಿಕೆಗಿಂತ ಶೇ.70 ರಷ್ಟು ಕಡಿಮೆಯಾಗಿದೆ. ಹೀಗಾಗಿ ಮೊದಲ ಹಂತದಲ್ಲಿ 134 ತಾಲೂಕುಗಳನ್ನಾದರೂ ಬರ ಘೋಷಣೆ ಮಾಡೋಣ ಎಂದಿದ್ದಾರೆ.

## ತೊಗರಿ ಬೇಳೆ ಹಾನಿಗೆ ಪರಿಹಾರ ಬಿಡುಗಡೆ

ಬೆಂಗಳೂರು, ಸೆ.8(ಕೆಎಂಶಿ)–ಉತ್ತರ ಕರ್ನಾಟಕದ ಕಲಬುರಗಿ, ವಿಜಯಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನೆಟೆ ರೋಗದಿಂದ ಕಳೆದ ಸಾಲಿನಲ್ಲಿ ತೊಗರಿ ಬೇಳೆ ಹಾನಿಯಿಂದ ನಷ್ಟ ಅನುಭವಿಸಿದ್ದ ರೈತರಿಗೆ ಬಾಕಿ ಇದ್ದ ಪರಿಹಾರ ಹಣವನ್ನು ರಾಜ್ಯ ಸರ್ಕಾರ ಬಿಡುಗಡೆ ಮಾಡಿದೆ.

ಕೃಷಿ ಸಚಿವರಾದ ಎನ್.ಚಲುವರಾಯಸ್ವಾಮಿ ಅವರ ಮನವಿ ಮೇರೆಗೆ ನೆಟೆ ರೋಗ ಸಂತ್ರಸ್ತರಿಗೆ ಬಾಕಿ ಇದ್ದ 223 ಕೋಟಿ ರೂ.ಗಳನ್ನು ಸರ್ಕಾರ ಮಂಜೂರು ಮಾಡಿ, 74 ಕೋಟಿ ರೂ.ಗಳನ್ನು ಬಿಡುಗಡೆ ಮಾಡಿತ್ತು.

ಪ್ರಸ್ತುತ 2ನೇ ಕಂತಿನಲ್ಲಿ 74 ಕೋಟಿ ರೂ. ಬಿಡುಗಡೆಗೊಳಿಸಲಾಗಿದೆ. ಬಾಕಿ ಉಳಿದ ರೂ 75 ಕೋಟಿ ಹಣವನ್ನು ಸಹ ಶೀಘ್ರವಾಗಿ ಬಿಡುಗಡೆ ಮಾಡಲಾಗುವುದು.

ಇದಕ್ಕಾಗಿ ಕೃಷಿ ಸಚಿವರಾದ ಎನ್ ಚಲುವರಾಯಸ್ವಾಮಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಧನ್ಯವಾದ ಸಮರ್ಪಿಸಿದ್ದು, ನಮ್ಮ ಸರ್ಕಾರ ರೈತರ ನೆರವಿಗೆ ಸದಾ ಇರಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಸ್ಥಾನ ಕಲ್ಯಾಣ ಮಹೋತ್ಸವ

ಮೈಸೂರು, ಸೆ.8–ಮೈಸೂರಿನ ಉದಯಗಿರಿಯ ಶ್ರೀ ವಿಘ್ನೇಶ್ವರ ಪ್ರಸನ್ನ ಭಕ್ತ ಮಂಡಳಿ ಮಾರ್ಪಾಡಿತ ಟ್ರಸ್ಟ್ ವತಿಯಿಂದ ನಾಳೆ (ಸೆ. 9) ಶ್ರೀ ಲಕ್ಷ್ಮೀವೆಂಕಟರಮಣಸ್ವಾಮಿ ದೇವಸ್ಥಾನ ಕಲ್ಯಾಣ ಮಹೋತ್ಸವ ನಡೆಯಲಿದೆ.

ಕಾರ್ಯಕ್ರಮದ ಅಂಗವಾಗಿ ಬೆಳಗ್ಗೆ 8.30ಕ್ಕೆ ಪುಣ್ಯಾಹ, ಸ್ವಸ್ತಿವಾಚನ, ಋತ್ವಿಕ್ ವರ್ಣನೆ, ಕಲಶ ಸ್ಥಾಪನೆ, ಮಹಾಸಂಕಲ್ಪ ಪ್ರಕಾರೋತ್ಸವ, ಬೆಳಗ್ಗೆ 10.45 ರಿಂದ ಶ್ರೀಶ್ರೀನಿವಾಸ ತಿರು ಕಲ್ಯಾಣ, ಧಾರಾ ಮಹೋತ್ಸವ, ರಾಜಾ ಹೋಮ, ಪೂರ್ಣಾಹುತಿ, ಮಹಾಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ ನಡೆಯಲಿದೆ. ಸಂಜೆ 6.30 ರಿಂದ ಶ್ರೀ ಲಕ್ಷ್ಮೀ ವೆಂಕಟರಮಣಸ್ವಾಮಿಯವರನ್ನು ಮಂಗಳವಾದ್ಯ ಸಮೇತ ಮುಖ್ಯ ರಾಜ ಬೀದಿಗಳಲ್ಲಿ ಮೆರವಣಿಗೆ ಮಾಡಲಾಗುವುದು. ರಾತ್ರಿ 8.30ಕ್ಕೆ ಶಯನೋತ್ಸವ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಮಾಡಲಾಗುವುದು ಎಂದು ಪ್ರಧಾನ ಅರ್ಚಕ ಆರ್. ರಘುನಾಥ್, ಟ್ರಸ್ಟ್ ಕಾರ್ಯಾಧ್ಯಕ್ಷ ಗೋವಿಂದರಾಜು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# 'ದಾನಶೂರ ಕರ್ಣ' ಪೌರಾಣಿಕ ನಾಟಕ ಪ್ರದರ್ಶನ


ಮೈಸೂರು, ಸೆ. 8– ಮೈಸೂರಿನ ಪುರಭವನದಲ್ಲಿ ಶುಕ್ರವಾರ 'ದಾನಶೂರ ಕರ್ಣ' ಪೌರಾಣಿಕ ನಾಟಕ ಪ್ರದರ್ಶನಕ್ಕೆ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಚಾಲನೆ ನೀಡಿದರು. ಶ್ರೀ ಚಾಮುಂಡೇಶ್ವರಿ ಸನ್ನಿದಿ ಕಲಾವಿದರ ಸಂಘದಮ ನಾಲ್ಕನೇ ವಾರ್ಷಿಕೋತ್ಸವ ಹಾಗೂ ರಂಗವೈಭವ ಅಂಗವಾಗಿ ಶುಕ್ರವಾರ ನಗರದ ಪುರಭವನದಲ್ಲಿ "ದಾನ ಶೂರ ಕರ್ಣ' ಪೌರಾಣಿಕ ನಾಟಕ ಪ್ರದರ್ಶಿಸಿದರು.

ಮಂಡ್ಯದ ಡಿ.ಸಿ. ಚೇತನ್ ಅವರ ವಜ್ರೇಶ್ವರಿ ಡ್ರಾಮಾ ಸೀನರಿಯಿಂದ ಅಲಂಕೃತವಾದ ರಂಗಸಜ್ಜಿಕೆಯಲ್ಲಿ ಎಚ್.ಪಿ. ನಾಗೇಂದ್ರಪ್ರಸಾದ್ ಅವರ ನಿರ್ದೇಶನದಲ್ಲಿ ನಾಟಕ ಪ್ರದರ್ಶನಗೊಂಡಿತು. ನಿವೃತ್ತ ಪ್ರಾಂಶುಪಾಲ ಶಿ.ಕುಮಾರಸ್ವಾಮಿ ಅಧ್ಯಕ್ಷತೆ ವಹಿಸಿದ್ದರು.

ಆಲನಹಳ್ಳಿ ಶಾಶ್ವತ ಸೇವಾ ಶಾಲೆಯ ಕಾರ್ಯದರ್ಶಿ ಎಂ.ಆರ್. ಚೌಧರಿ, ವ್ಯವಸ್ಥಾಪಕರಾದ ಸುವರ್ಣ, ವೆಂಕಟೇಗೌಡ, ಪೊಲೀಸ್ ಇಲಾಖೆಯ ಎಸ್.ಮಂಜುನಾಥ್,, ಕಾಳಪ್ಪ, ಮರೀಗೌಡ, ಎಲ್.ಎಸ್. ಮಹದೇವಸ್ವಾಮಿ, ಬಿ. ರವಿಪ್ರಕಾಶ್, ಎಚ್.ಜಿ. ಶಿವಕುಮಾರ್, ಕೆ.ಆರ್. ಲೋಕೇಶ್, ಜ್ಞಾನೇಶ್, ಸಿ.ರವಿ, ಬಿ.ಗೋವಿಂದರಾಜು, ಬೋರಲಿಂಗು, ಎಂ.ಜಿ.ಶ್ಯಾಮಣ್ಣ, ಮಹದೇವು ಮೊದಲಾದವರು ಇದ್ದರು. ನಿವೃತ್ತ ಡಿವೈಎಸ್ಪಿ ಎಚ್.ಎಲ್. ಶಿವಬಸಪ್ಪ–ಃ ಕರ್ಣ, ಆರ್‌ಐಇ ನಿವೃತ್ತ ಪ್ರಾಧ್ಯಾಪಕ ಡಾ.ಎನ್.ಎನ್.ಪ್ರಹ್ಲಾದ ಪರಶುರಾಮ ಪಾತ್ರ ನಿರ್ವಹಿಸಿದರು. ಇದಲ್ಲದೇ ಶ್ರೀಕೃಷ್ಣನಾಗಿ ಮಂಜುನಾಥ್, ಧರ್ಮರಾಯನಾಗಿ ಎಲ್.ಮಲ್ಲಶೆಟ್ಟಿ, ಭೀಮನಾಗಿ ಬಸವರಾಜು, ಅರ್ಜುನನಾಗಿ ಕೆ.ಬಿ. ಶಿವರಾಜು, ದ್ರೋಣನಾಗಿ ನಿವೃತ್ತ ಎಎಸ್‌ಐ ಎಸ್. ರಾಜ, ದೇವೇಂದ್ರನಾಗಿ ನಿವೃತ್ತ ಅರಣ್ಯಾಧಿಕಾರಿ ಎ.ಬಿ.ಬಸವರಾಜು, ದುರ್ಯೋಧನನಾಗಿ ವೈ.ಎಸ್. ಶಿವಕುಮಾರ್, ನಾರದನಾಗಿ ಬ್ಯಾಂಕಿನ ನಿವೃತ್ತ ವ್ಯವಸ್ಥಾಪಕ ತಾಂಡವಮೂರ್ತಿ ಅತಿರಥ, ಬಸವನಾಗಿ ಸಿದ್ದಪ್ಪ ಎ. ಚಟ್ನಹಳ್ಳಿ, ವಿಧುರನಾಗಿ ಆರ್.ಎಸ್. ಮಲ್ಲೇಗೌಡ, ಕುಬೇರ, ಸೋಮದತ್ತ, ದುಶ್ಯಾಸನನಾಗಿ ರಮೇಶ್ ಚಟ್ನಹಳ್ಳಿ, ವಾಯು ಮತ್ತು ಅಶ್ವತ್ಥಾಮನಾಗಿ ಕೆ.ಸಿದ್ದಾಚಾರ್ ಪಾತ್ರ ನಿರ್ವಹಿಸಿದರು. ಕುಂತಿ, ರಾಧೆಯಾಗಿ ನಿರ್ಮಲಾ, ಸೋಮಪ್ರಭೆಯಾಗಿ ಧನುಶ್ರೀ, ದ್ರೌಪದಿಯಾಗಿ ಚಿಕ್ಕರೇಖಾ, ವೃಷಿಕೇತುವಾಗಿ ಮೇಘನಾ ಪಾತ್ರ ನಿರ್ವಹಿಸಿದರು. ರಾಧಾ ಮತ್ತು ತಂಡದಿಂದ ನೃತ್ಯ ಪ್ರದರ್ಶನ ಇತ್ತು. ಎಚ್.ಪಿ.ನಾಗೇಂದ್ರಪ್ರಸಾದ್–ಹಾರ್ಮೋನಿಯಂ, ಬಿ.ಶಿವಕುಮಾರ್–ತಬಲಾ, ಪಿ.ಲೋಕೇಶ್– ಕ್ಯಾಷಿಯೋ, ಹರೀಶ್ಃ ತಾಳವಾದ್ಯ ನುಡಿಸಿದರು.



## ಮೈಸೂರು ಹಾಗೂ ಸುತ್ತಮುತ್ತ ಇಂದು...



### ಇಂದಿನ ಪಂಚಾಂಗ

**9.9.2023 ಶುಕ್ರವಾರ, ಮಳೆ ನಕ್ಷತ್ರ: ಪುಬ್ಬ 31.08.2023 ರಿಂದ 13.09.2023**
**ಶ್ರೀ ಶೋಭಕೃತ್ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಶುಕ್ಲ ಪಕ್ಷ, ತಿಥಿ: ದಶಮಿ, ನಕ್ಷತ್ರ: ಆರಿದ್ರಾ, ರಾಹುಕಾಲ: ಬೆಳಗ್ಗೆ 9 ರಿಂದ 10.30ರವರೆಗೆ**

■ **ಶ್ರೀ ವೀರಭದ್ರೇಶ್ವರಸ್ವಾಮಿ ಹಾಗೂ ಶ್ರೀ ಚಾಮರಾಜೇಶ್ವರ ಸ್ವಾಮಿ ದೇವಸ್ಥಾನ ಟ್ರಸ್ಟ್:** ಶ್ರೀ ವೀರಭದ್ರೇಶ್ವರ ಸ್ವಾಮಿಯ ಜನ್ಮೋತ್ಸವ, ಮಹಾ ರಥೋತ್ಸವ ಹಾಗೂ ಶ್ರಾವಣಮಾಸದಲ್ಲಿ ನಡೆಯುವ ಪೂಜಾ ಕಾರ್ಯಕ್ರಮ, ಸ್ಥಳ: ದೇವಸ್ಥಾನ ಆವರಣ, ಕೆ.ಆರ್.ಮೊಹಲ್ಲಾ, ಬೆಳಗ್ಗೆಯಿಂದ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಬೊಜ್ಜು ನಿವಾರಣಾ ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9.30 ರಿಂದ.

■ **ಶ್ರೀ ಕಲಾನಿಕೇತನ ಕಾಲೇಜ್ ಆಫ್ ವಿಷುಯಲ್ ಆರ್ಟ್ :** ಎಂ.ಎಲ್. ಪವನ್‌ಕುಮಾರ್ ಅವರಿಂದ ಸ್ಥಿರ ಚಿತ್ರಣ ಕಲಾ ಪ್ರದರ್ಶನ, ಸ್ಥಳ: ಶ್ರೀ ಕಲಾನಿಕೇತನ ಆರ್ಟ್ ಗ್ಯಾಲರಿ, ಬೆಳಗ್ಗೆ 10 ರಿಂದ.

■ **ಆದ್ಯ ಸೌಹಾರ್ದ ಸಹಕಾರಿ ಸಂಘ :** ವಾರ್ಷಿಕ ಸಾಮಾನ್ಯ ಸಭೆ, ಉದ್ಘಾಟನೆ : ಶಾಸಕ ಜಿ.ಡಿ. ಹರೀಶ್‌ಗೌಡ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಡಾ. ಜೆ.ಜಿ. ವಿಶ್ವನಾಥಯ್ಯ, ಸ್ಥಳ: ಶ್ರೀ ಗಣಪತಿ ದೇವಸ್ಥಾನದ ಆವರಣ, ರಾಮಕೃಷ್ಣನಗರ, ಬೆಳಗ್ಗೆ 10ಕ್ಕೆ.

■ **ಮಹಾಜನ ಪ್ರಥಮ ದರ್ಜೆ ಕಾಲೇಜು :** ಪೋಷಕರ ಸಮಾವೇಶ, ಉದ್ಘಾಟನೆ: ಸಹಾಯಕ ಪೊಲೀಸ್ ಆಯುಕ್ತ ಎಸ್.ಎನ್. ಸಂದೇಶ್‌ಕುಮಾರ್, ಅಧ್ಯಕ್ಷತೆ: ಪೋಷಕರ ಸಂಘದ ಅಧ್ಯಕ್ಷರಾದ ಪಿ. ಸುಮಲತಾ, ಉಪಸ್ಥಿತರು: ಮಹಾಜನ ಶಿಕ್ಷಣ ಸಂಸ್ಥೆ ಅಧ್ಯಕ್ಷ ಟಿ.ಮುರಳೀಧರ್ ಭಾಗವತ್, ಕಾರ್ಯದರ್ಶಿ ಡಾ. ಟಿ. ವಿಜಯಲಕ್ಷ್ಮಿ ಮುರಳೀಧರ್, ಪೋಷಕರ ಸಂಘದ ಕಾರ್ಯದರ್ಶಿ ಕೆ.ಎಸ್.ವಿನಿತಾ, ಸ್ಥಳ: ವಿವೇಕಾನಂದ ಸಭಾಂಗಣ, ಕಾಲೇಜು ಆವರಣ, ಬೆಳಗ್ಗೆ 10.30ಕ್ಕೆ.

■ **ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನ:** ಶ್ರಾವಣ ಮಾಸದ ಪ್ರಯುಕ್ತ ಉಚಿತ ಕಣ್ಣಿನ ತಪಾಸಣಾ ಶಿಬಿರ, ಮುಖ್ಯ ಅತಿಥಿಗಳು: ಶಾಸಕ ಹರೀಶ್‌ಗೌಡ, ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಗುರುಪಾದಸ್ವಾಮಿ, ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಸಮಾಜ ಸೇವಕ ಕೆ.ರಘುರಾಂ ವಾಜಪೇಯಿ, ಲಯನ್ ನಾಗರಾಜ್ ಭೈರಿ, ಲಯನ್ ರವೀಂದ್ರ, ಸ್ಥಳ: ಪಂಚಮುಖಿ ಆಂಜನೇಯಸ್ವಾಮಿ ದೇವಸ್ಥಾನದ ಆವರಣ, ಬೆಳಗ್ಗೆ 11ಕ್ಕೆ.

■ **ಮೈಸೂರು ಆರ್ಟ್ ಗ್ಯಾಲರಿ :** ಸಾಧಕರೊಂದಿಗೆ ಸಂವಾದ–84, ಜನಪದ ಹಾಡಿನ ಮೋಡಿಗಾರ ಅಮ್ಮ ರಾಮಚಂದ್ರ, ಮುಖ್ಯ ಅತಿಥಿಗಳು : ವಿಶ್ರಾಂತ ಶಿಕ್ಷಣಾಧಿಕಾರಿ ಶಿವಕುಮಾರ್, ಅಧ್ಯಕ್ಷತೆ : ಮೈಸೂರು ಆರ್ಟ್ ಗ್ಯಾಲರಿ ಸ್ಥಾಪಕ ಅಧ್ಯಕ್ಷ ಎಲ್. ಶಿವಲಿಂಗಪ್ಪ, ಸ್ಥಳ: ಮೈಸೂರು ಆರ್ಟ್ ಗ್ಯಾಲರಿ, ಬೆಳಗ್ಗೆ 11ಕ್ಕೆ.

■ **ಮೈಸೂರು ಮತ್ತು ಚಾಮರಾಜನಗರ ಜಿಲ್ಲಾ ಕಂದಾಯ ಇಲಾಖಾ ನೌಕರರ ಪತ್ತಿನ ಸಹಕಾರ ಸಂಘ** : ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಎಂ. ನೀಲಕಂಠಸ್ವಾಮಿ, ಸ್ಥಳ: ಎಫ್.ಕೆ. ಇರಾನಿ ಸಭಾಂಗಣ, ಐಡಿಯಲ್ ಜಾವಾ ರೋಟರಿ ಶಾಲೆ ಆವರಣ, ಜೆಎಲ್‌ಬಿ ರಸ್ತೆ, ಬೆಳಗ್ಗೆ 11ಕ್ಕೆ.

■ **ಮೈಸೂರು ವಿಶ್ವವಿದ್ಯಾನಿಲಯ, ಡಾ. ಬಾಬು ಜಗಜೀವನರಾಮ್ ಅಧ್ಯಯನ, ಸಂಶೋಧನಾ ಮತ್ತು ವಿಸ್ತರಣಾ ಕೇಂದ್ರ, ಮಾತಂಗ ನೌಕರರ ಕ್ಷೇಮಾಭಿವೃದ್ಧಿ ಸಂಘ :** ದಲಿತ ಅರಸರ ಸಾಂಸ್ಕೃತಿಕ ನೋಟ ಹಾಗೂ ಅರಸು ಕುರನ್ಗರಾಯನ ಸಂಸ್ಕೃತಿ ಮತ್ತು ಚಾರಿತ್ರಿಕ ನೆಲೆಗಳು ಕುರಿತು ವಿಚಾರ ಸಂಕಿರಣ, ಉದ್ಘಾಟನೆ : ಸಂಸ್ಕೃತಿ ಚಿಂತಕ ಡಾ. ಬಂಜಗೆರೆ ಜಯಪ್ರಕಾಶ್, ಮುಖ್ಯ ಅತಿಥಿಗಳು : ವಿಜಯ ತಜ್ಞ ಎನ್.ಸಿ. ಮುನಿಯಪ್ಪ, ದಿಕ್ಸೂಚಿ ನುಡಿ : ಇತಿಹಾಸ ತಜ್ಞ ಪ್ರೊ. ಕೆ. ಸದಾಶಿವ, ಅಧ್ಯಕ್ಷತೆ: ಕೇಂದ್ರದ ನಿರ್ದೇಶಕ ಪ್ರೊ. ಆರ್. ತಿಮ್ಮರಾಯಪ್ಪ, ಉಪಸ್ಥಿತರು : ಸಂಘದ ಅಧ್ಯಕ್ಷ ಚೇತನ್, ಡಾ. ರವಿಕುಮಾರ್ ನೀಹ, ಸ್ಥಳ: ರಾಣಿ ಬಹದ್ದೂರ್ ಸಭಾಂಗಣ, ಮಾನಸಗಂಗೋತ್ರಿ, ಬೆಳಗ್ಗೆ 11ಕ್ಕೆ.

■ **ರೈಲ್ವೆ ಪೆನ್ಷನರ್ಸ್ ವೆಲ್‌ಫೇರ್ ಅಸೋಸಿಯೇಷನ್ :** ವಾರ್ಷಿಕ ಮಹಾಸಭೆ, ಅಧ್ಯಕ್ಷತೆ : ಸಂಘದ ಅಧ್ಯಕ್ಷ ಪಾರ್ಥಸಾರತಿ, ಸ್ಥಳ: ಸಂಘದ ಕಚೇರಿ, ಬೆಳಗ್ಗೆ 11.30ಕ್ಕೆ.

■ **ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಧಿಕಾರಿಗಳು ಮತ್ತು ನೌಕರರ ಕ್ಷೇಮಾಭಿವೃದ್ಧಿ ಸಂಘ :** ಡಾ. ಬಿ.ಆರ್. ಅಂಬೇಡ್ಕರ್‌ರವರ 132ನೇ ಭೀಮೋತ್ಸವ ಹಾಗೂ ಪ್ರತಿಭಾ ಪುರಸ್ಕಾರ ಮತ್ತು ನಿವೃತ್ತ ನೌಕರರ ಸನ್ಮಾನ ಸಮಾರಂಭ, ಸಾನ್ನಿಧ್ಯ : ಉರಿಲಿಂಗ ಪೆದ್ದಿ ಮಠದ ಶ್ರೀ ಜ್ಞಾನಪ್ರಕಾಶ್ ಸ್ವಾಮೀಜಿ, ಶ್ರೀ ಭೋದಿರತ್ನ ಬಂತೇಜಿ, ಉದ್ಘಾಟನೆ : ಮುಜರಾಯಿ ಮತ್ತು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಭಾವಚಿತ್ರ ಅನಾವರಣ : ಜಿಲ್ಲಾ ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಅಧ್ಯಕ್ಷತೆ : ಶಾಸಕ ತನ್ವೀರ್ ಸೇಠ್, ಮುಖ್ಯ ಅತಿಥಿಗಳು : ಶಾಸಕರಾದ ಹರೀಶ್‌ಗೌಡ, ಡಾ. ಡಿ. ತಿಮ್ಮಯ್ಯ, ಮಾಜಿ ಮೇಯರ್ ಪುರುಷೋತ್ತಮ್, ಪಾಲಿಕೆ ಸದಸ್ಯ ಜಿ.ಎಸ್. ಸತ್ಯರಾಜ್, ಡಾ. ಆರ್. ಮೋಹನ್‌ರಾಜ್, ಸ್ಥಳ:ಜಗನ್ಮೋಹನ ಅರಮನೆ, ಮಧ್ಯಾಹ್ನ 2.30ಕ್ಕೆ.

■ **ಮೈಸೂರು ನಗರ ಮತ್ತು ಜಿಲ್ಲಾ ಯಾದವ (ಗೊಲ್ಲ) ಯುವ ಸಂಘ :** 41ನೇ ವರ್ಷದ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ, ಮ. 3 ಗಂಟೆಗೆ ಯಾದವ ಮಕ್ಕಳಿಗಾಗಿ ಸ್ಥಳದಲ್ಲೇ ಚಿತ್ರ ಬಿಡಿಸುವ ಸ್ಪರ್ಧೆ, ಯಾದವ ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಸ್ಥಳ: ಶ್ರೀ ನಂಜುಂಡೇಶ್ವರ ದೇವಸ್ಥಾನ, ಗೊಲ್ಲಗೇರಿ.

■ **ಭಾರತೀಯ ಜನತಾ ಪಾರ್ಟಿ :** ಕರ್ನಾಟಕ ಕೇಸರಿ ಜಗನ್ನಾಥ ರಾವ್ ಜೋಶಿ ಪುಸ್ತಕ ಬಿಡುಗಡೆ ಸಮಾರಂಭ, ಪುಸ್ತಕ ಬಿಡುಗಡೆ : ಮಾಜಿ ವಿಧಾನ ಪರಿಷತ್ ಸದಸ್ಯ ತೋಂಟದಾರ್ಯ, ಅಧ್ಯಕ್ಷತೆ : ಶಾಸಕ ಟಿ.ಎಸ್. ಶ್ರೀವತ್ಸ, ಮುಖ್ಯ ಅತಿಥಿಗಳು : ಮೇಯರ್ ಶಿವಕುಮಾರ್, ತಿಮ್ಮಣ್ಣ ಭಟ್, ಡಾ. ವಿ. ರಂಗನಾಥ್, ಸ್ಥಳ: ಬಿಜೆಪಿ ಪಾರ್ಟಿ ಕಚೇರಿ, ಚಾಮರಾಜಪುರಂ, ಸಂಜೆ 4ಕ್ಕೆ.

### ಮೈಸೂರು ಆಕಾಶವಾಣಿ



**ಬೆಳಗ್ಗೆ:** 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10ಕ್ಕೆ ಸಿ.ಎಫ್.ಟಿ.ಆರ್.ಐ ಶೋಧ ಅನುಶೋಧ –ಪ್ರಾಯೋಜಿತ, ಕಾರ್ಯಕ್ರಮ, ಪ್ರಸ್ತುತಿ– ಡಾ. ಉಮಾ, 6.40 ಹಾಡು ಹೇಳಿದ ಕಥೆ, ಪ್ರಸ್ತುತಿ– ಡಾ. ಮೈಸೂರ್ ಉಮೇಶ್, 7.15 ಭಾವಗೀತೆಗಳು– ಮಡಿಕೇರಿ ನಾಗೇಂದ್ರ ಮತ್ತು ಸಂಗಡಿಗರು, 8.30 ವಿಶಿಷ್ಟ ವ್ಯಕ್ತಿ–ವಿಶೇಷ ಯತ್ನ, ಬಾನುಲಿ ಸರಣಿ, 9.05 ವಸುಧೈವ ಕುಟುಂಬಕಂ–ಭಾರತ ಜಿ20 ಶೃಂಗಸಭೆಯ ಅಧ್ಯಕ್ಷತೆ ವಹಿಸಿದ ಸಂದರ್ಭದಲ್ಲಿ ವಿಶೇಷ ಸರಣಿ ಕಾರ್ಯಕ್ರಮ, 10.00 ಎಸ್. ಬಾಲಚಂದರ್–ವೀಣಾವಾದನ, 11.00 "ಸ್ವರಾಜ್"– ಭಾರತ ಸ್ವಾತಂತ್ಯ ಸಂಗ್ರಾಮದ ಸಮಗ್ರಗಾಥೆ

**ಮಧ್ಯಾಹ್ನ:** 12.30 ದೇವರನಾಮ, 1.00 ಪ್ರಗತಿ ಪಥ–ಕೇಂದ್ರ ಸರ್ಕಾರದ ಅಭಿವೃದ್ಧಿ ಯೋಜನೆಗಳನ್ನು ಕುರಿತ ಕಾರ್ಯಕ್ರಮ, 12.45 ಜನಪದಗೀತೆ–ಜಯಲಕ್ಷ್ಮಮ್ಮ ಮತು ಸಂಗಡಿಗರು, 1.20 ಭಾವಗೀತೆ –ಅಮೃತ ನಿತಿನ್ ಶಾಸ್ತ್ರಿ, 1.30 ಸಂದೇಶ ಆಧಾರಿತ ಶ್ರೋತೃಗಳ ಮೆಚ್ಚಿನ ಚಿತ್ರಗೀತೆಗಳ ಕಾರ್ಯಕ್ರಮ, 3.30ಮಕ್ಕಳ ಮಂಟಪ–ಶ್ರೀರಂಗಪಟ್ಟಣ ತಾಲೂಕು ಪಾಲಹಳ್ಳಿಯ ಶ್ರೀ ಶಾರದಾದೇವಿ ಹಿರಿಯ ಪ್ರಾಥಮಿಕ ಶಾಲೆಯ ಮಕ್ಕಳಿಂದ ಕಾರ್ಯಕ್ರಮ ವೈವಿಧ್ಯ, 4.30 ನೆನಪಿನಂಗಳ–ಸಂಗೀತ ಶಾಸ್ತ್ರಜ್ಞರು, ಆಕಾಶವಾಣಿಯ ನಿವೃತ್ತ ಅಧಿಕಾರಿ ಎಸ್. ಕೃಷ್ಣಮೂರ್ತಿ ಅವರೊಂದಿಗೆ ಜಿ. ರಾಜಲಕ್ಷ್ಮಿ ಶ್ರೀಧರ್ ಅವರು ನಡೆಸಿದಿದ ಸಂವಾದ, 6.50 ಕೃಷಿರಂಗ–ತೋರಣ ಹೂರಣ–ವಾರದ ಗ್ರಾಮೀಣ ಕಾರ್ಯಕ್ರಮ, ಪ್ರಸ್ತುತಿ– ಎನ್. ಕೇಶವಮೂರ್ತಿ, ಡಾ. ಮೈಸೂರು ಉಮೇಶ್, ಆರ್. ಲೋಕೇಶ್ವರಿ, ಪರಾಗ–ಬೇಸಾಯದ ಬದುಕು ಸರಾಗ–ಬಾನುಲಿ ಸರಣಿ, 8.00 ಯುವವಾಣಿ, 10.00 ರಾಷ್ಟ್ರೀಯ ಸಂಗೀತ ಕಾರ್ಯಕ್ರಮ–ಪ್ಡಿತ್ ಜಯದೀಪ್ ಘೋಷ್–ಸರೋಡ್ ವಾದನ

■ **ಗಾನ ವೈದ್ಯಲೋಕ :** ಹಿರಿಯ ಕವಿಗಳ ಭಾವಗೀತೆ ಹಾಗೂ ಭಾವಪೂರ್ಣ ಚಿತ್ರಗೀತೆಗಳ ಭಾವ ಸಮ್ಮಿಲನ ಎಂದೂ ಮರೆಯದ ಹಾಡು–6, ಉದ್ಘಾಟನೆ : ಚಲನಚಿತ್ರ ಕಲಾವಿದ ಶಂಕರ್ ಅಶ್ವಥ್, ಮುಖ್ಯ ಅತಿಥಿಗಳು : ಸಂಸ್ಕೃತಿ ಚಿಂತಕ ವಿದುಷಿ ಡಾ. ಜ್ಯೋತಿಶಂಕರ್, ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಅಧ್ಯಕ್ಷತೆ : ಗಾನ ವೈದ್ಯಲೋಕ ಗೌರವಾಧ್ಯಕ್ಷ ಡಾ. ವೈ.ಡಿ. ರಾಜಣ್ಣ, ಪ್ರಾಸ್ತಾವಿಕ ನುಡಿ : ಗಾನ ವೈದ್ಯಲೋಕ ಅಧ್ಯಕ್ಷ ಡಾ. ಟಿ. ರವಿಕುಮಾರ್, ಸ್ಥಳ: ಜಿಲ್ಲಾ ಸಾಹಿತ್ಯ ಭವನ, ವಿಜಯನಗರ 1ನೇ ಹಂತ, ಸಂಜೆ 5ಕ್ಕೆ.

■ **ಪ್ರಜ್ಞಾದೀಪ ಕಲಿಕಾ ಕೇಂದ್ರ :** ವಿಜ್ಞಾನ ಮತ್ತು ಗಣಿತ ಕಾರ್ಯಾಗಾರ, ಸ್ಥಳ: ಕೇಂದ್ರದ ಆವರಣ, ಶಾರದಾದೇವಿನಗರ, ಸಂಜೆ 5 ರಿಂದ.

■ **ಚಿದಂಬರನಟೇಶ ನಾಟ್ಯ ಶಾಲೆ ಟ್ರಸ್ಟ್ :** ನೃತ್ಯ ಆರಾಧನಾ–2023–24, ಉದ್ಘಾಟನೆ : ಮೇಯರ್ ಶಿವಕುಮಾರ್, ಅಧ್ಯಕ್ಷತೆ : ಶಾಸಕ ಟಿ.ಎಸ್. ಶ್ರೀವತ್ಸ, ಉಪಸ್ಥಿತರು : ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಎಂ.ಡಿ. ಸುದರ್ಶನ್, ಗ್ಲೋಬಲ್ ಅಕೌಂಟ್ಸ್‌ನ ಲೆಕ್ಕ ಪರಿಶೋಧಕ ಸಿ.ಪಿ. ವೆಂಕಟೇಶ್, ಸ್ಥಳ: ಕರ್ನಾಟಕ ಕಲಾಮಂದಿರ, ವಿನೋಬಾ ರಸ್ತೆ, ಸಂಜೆ 5.30ಕ್ಕೆ.

■ **ಕಲಾಸ್ಪರ್ಶ ಪ್ರದರ್ಶನ ಕಲೆಗಳ ಕೇಂದ್ರ** ಕಲಾ ನೃತ್ಯೋತ್ಸವ, ಉದ್ಘಾಟನೆ: ಹಿರಿಯ ಭರತನಾಟ್ಯ ಕಲಾವಿದೆ ಡಾ. ತುಳಸಿ ರಾಮಚಂದ್ರ, ಮುಖ್ಯ ಅತಿಥಿಗಳು: ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಡಾ.ಪ್ರಕಾಶ್ ಪ್ರಭು, ಸ್ಥಳ: ವಯೋಮ್ ವಿಹಾರ್, ಆಲನಹಳ್ಳಿ, ಸಂಜೆ 5.30ಕ್ಕೆ.

■ **ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್:** ರಾಯಲ್ ಚಾರ್ಟರ್ ಡೇ, ನಾಲ್ವಡಿ ಕೃಷ್ಣರಾಜ ಒಡೆಯರ್ ಕುರಿತು ವಿಚಾರ ಸಂಕಿರಣ, ಪ್ರಾಸ್ತಾವಿಕ ನುಡಿ: ಪದವಿಪೂರ್ವ ಶಿಕ್ಷಣ ಮಂಡಳಿ ನಿವೃತ್ತ ನಿರ್ದೇಶಕ ಬಿ.ಎಸ್. ಶ್ರೀಧರರಾಜೇ ಅರಸ್, ಅಧ್ಯಕ್ಷತೆ: ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಅಧ್ಯಕ್ಷ ಬಿ.ಎಸ್. ಪ್ರಭಾಕರ, ಸ್ಥಳ: ಎಸ್.ಪಿ. ಭಟ್ ಹಾಲ್, ಸಂಜೆ 5.30ಕ್ಕೆ.

■ **ಗಾನಭಾರತೀ :** ವೈ.ಎಸ್. ಸುಬ್ರಹ್ಮಣ್ಯ ಸಂಸ್ಮರಣಾ ಸಂಗೀತ ಕಛೇರಿ, ವಿದುಷಿ ಅಮೃತ ವೆಂಕಟೇಶ್ ಅವರಿಂದ ಗಾಯನ, ವಿದ್ವಾನ್ ಆರ್. ಮಾಧವನ್–ಪಿಟೀಲು, ವಿದ್ವಾನ್ ಅರ್ಜುನ್ ಗಣೇಶ್–ಮೃದಂಗ, ವಿದ್ವಾನ್ ಡಾ. ಎಸ್. ಕಾರ್ತಿಕ್–ಘಟಂ, ಸ್ಥಳ: ವೀಣೆ ಶೇಷಣ್ಣ ಭವನ, ಆದಿಚುಂಚನಗಿರಿ ರಸ್ತೆ, ಕುವೆಂಪುನಗರ, ಸಂಜೆ 6ಕ್ಕೆ.

■ **ಶ್ರೀ ಕೃಷ್ಣ ಸೇವಾ ಸಮಿತಿ ಚಾರಿಟಬಲ್ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಗಾನಸಭಾ :** ಶ್ರೀ ಕೃಷ್ಣ ಜನ್ಮಾಷ್ಟಮಿ ಪೂಜಾ ಕಾರ್ಯಕ್ರಮಗಳು ಮತ್ತು ಸಂಗೀತ ಕಾರ್ಯಕ್ರಮ, ವಿದ್ವಾನ್ ಆರ್.ಕೆ. ಪದ್ಮನಾಭ ಅವರಿಂದ ವೀಣಾವಾದನ, ವಿದ್ವಾನ್ ಜಿ.ಎಸ್. ರಾಮಾನುಜಂ–ಮೃದಂಗ, ವಿದ್ವಾನ್ ವಿ.ಎಸ್. ರಮೇಶ್–ಘಟಂ, ಸ್ಥಳ: ಆಳ್ವಾರ್ ಕಲಾ ಭವನ, ಶ್ರೀ ಕೃಷ್ಣ ದೇವಸ್ಥಾನ, ಗೋಕುಲಂ 3ನೇ ಹಂತ, ಸಂಜೆ 6ಕ್ಕೆ.

■ **ಜೆಎಸ್‌ಎಸ್ ಸಂಗೀತಾ ಸಭಾ ಟ್ರಸ್ಟ್:** ಎಸ್. ಶಂಕರ್ ಅವರಿಂದ ಗಾಯನ, ವಿದ್ವಾನ್ ಅಚ್ಯುತರಾವ್–ವಯೋಲಿನ್, ವಿದ್ವಾನ್ ನೈವೇಲಿ ವೆಂಕಟೇಶ್–ಮೃದಂಗ, ವಿದ್ವಾನ್ ಎಸ್. ಮಂಜುನಾಥ್ – ಘಟಂ, ಸ್ಥಳ: ನವಜ್ಯೋತಿ ಸಭಾಂಗಣ, ಜೆಎಸ್‌ಎಸ್ ಮಹಿಳಾ ಕಾಲೇಜು, ಸರಸ್ವತಿಪುರಂ, ಸಂಜೆ 6ಕ್ಕೆ

■ **ಶ್ರೀ ಸುತ್ತೂರು ಮಠ (ಮೈಸೂರು ಶಾಖೆ), ಚಾಮುಂಡಿಬೆಟ್ಟದ ತಪ್ಪಲು:** ಶ್ರಾವಣ ಮಾಸ ಪೂಜಾನುಷ್ಠಾನ ಮತ್ತು ಪ್ರವಚನ, ವಿಶ್ರಾಂತ ಕನ್ನಡ ಪ್ರಾಧ್ಯಾಪಕ ಡಾ. ಕೆ. ಅನಂತರಾಮು ಅವರಿಂದ ಲಕ್ಕಣ್ಣ ದಂಡೇಶ ವಿರಚಿತ ಶಿವತತ್ತ್ವ ಚಿಂತಾಮಣಿ ಕುರಿತು ಉಪನ್ಯಾಸ, ನಿವೃತ್ತ ಕಾರ್ಯಪಾಲಕ ಅಭಿಯಂತರ ವಿದ್ವಾನ್ ಕೃ. ರಾಮಚಂದ್ರ ಅವರಿಂದ ವಾಚನ, ಸ್ಥಳ: ಮಠದ ಆವರಣ, ಚಾಮುಂಡಿಬೆಟ್ಟದ ತಪ್ಪಲು, ಸಂಜೆ 6.30ಕ್ಕೆ

■ **ಶ್ರೀರಾಮಕೃಷ್ಣ ಆಶ್ರಮ :** ಸ್ವಾಮಿ ಮಹಾಮೇದಾನಂದ ಅವರಿಂದ ಉಪನ್ಯಾಸ, ಸ್ಥಳ: ಆಶ್ರಮದ ಸ್ವಾಮಿ ಶಾಂಭವಾನಂದಜಿ ಸಭಾಂಗಣ, ಯಾದವಗಿರಿ, ಸಂಜೆ 6ಕ್ಕೆ.

■ **ಶ್ರೀ ರಾಮಾಭ್ಯುದಯ ಸಭಾ ಚಾರಿಟಬಲ್ ಟ್ರಸ್ಟ್ :** ವಿದುಷಿ ಧನ್ಯಾ ದಿನೇಶ್ ರುದ್ರಪಟ್ಟಣಂ ಅವರಿಂದ ಕರ್ನಾಟಕ ಶಾಸ್ತ್ರೀಯ ಸಂಗೀತ, ವಿದುಷಿ ಶೃತಿ –ಪಿಟೀಲು, ವಿದ್ವಾನ್ ನಂದನ್ ಕಶ್ಯಪ್–ಮೃದಂಗ, ಸ್ಥಳ: ಶ್ರೀರಾಮಮಂದಿರದ ಆವರಣ, ಶಿವರಾಂಪೇಟೆ, ಸಂಜೆ 6ಕ್ಕೆ.

■ **ನಿರಂತರ ಫೌಂಡೇಷನ್ :** ನಿರಂತರ ಫೌಂಡೇಷನ್ ಕಲಾವಿದರಿಂದ ಅಭಿನಯ ಗೊರೂರು ರಾಮಸ್ವಾಮಿ ಐಯ್ಯಂಗಾರರ 'ನಮ್ಮ ಊರಿನ ರಸಿಕರು' ಹಾಗೂ ಇತರ ಕತೆಗಳನ್ನು ಆಧರಿಸಿದ ನಾಟಕ 'ಗೊರೂರು' ಪ್ರದರ್ಶನ, ಸ್ಥಳ: ರಮಾಗೋವಿಂದ ರಂಗ ಮಂದಿರ, ರಾಮಕೃಷ್ಣನಗರ, ಸಂಜೆ 7ಕ್ಕೆ.

ಮೈಸೂರು ಮಿತ್ರ



ಲೋಕಸಭಾ ಚುನಾವಣೆ-2024

# ಬಿಜೆಪಿ-ಜೆಡಿಎಸ್ ಮೈತ್ರಿ ಚರ್ಚೆಗೆ ಗ್ರಾಸ

**● ಜೆಡಿಎಸ್ ಮೈತ್ರಿಯಿಂದ ನಮಗೆ ಶಕ್ತಿ ಬಂದಿದೆ: ಮಾಜಿ ಸಿಎಂ ಬಿಎಸ್‌ವೈ ● ಮೈತ್ರಿಗೆ ತಲೆ ಕೆಡಿಸಿಕೊಳ್ಳುವುದಿಲ್ಲ: ಸಿಎಂ ಸಿದ್ದರಾಮಯ್ಯ ● ಇದೇನು ಹೊಸ ವಿಚಾರವೇನಲ್ಲ; ಡಿಸಿಎಂ ಡಿ.ಕೆ.ಶಿವಕುಮಾರ್**

ಬೆಂಗಳೂರು, ಸೆ.8(ಕೆಎಂಶಿ)-ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿ ಮಾಡಿಕೊಳ್ಳುತ್ತಿರುವ ವಿಚಾರ ರಾಜಕೀಯ ವಲಯದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ.



ಮೈತ್ರಿಯನ್ನು ಖಚಿತಪಡಿಸಿರುವ ಬಿಜೆಪಿಯ ಸಂಸದೀಯ ಮಂಡಳಿ ಸದಸ್ಯ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು, ನಾವು 24 ಕ್ಷೇತ್ರಗಳಲ್ಲೂ ಹಾಗೂ ಜೆಡಿಎಸ್ 4 ಕ್ಷೇತ್ರಗಳಲ್ಲಿ ಹೊಂದಾಣಿಕೆ ಮಾಡಿಕೊಂಡು ಕಣಕ್ಕಿಳಿಯುತ್ತೇವೆ ಎಂದಿದ್ದಾರೆ.

ಮೈತ್ರಿ ಖಚಿತ ಮಾಹಿತಿ ಹೊರ ಬೀಳುತ್ತಿದ್ದಂತೆ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರಾಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ನಾವು ಆಪರೇಷನ್ ಹಸ್ತ ಮಾಡುವುದಿಲ್ಲ. ಸ್ನೇಹದ ಹಸ್ತ ನೀಡಿ ಮುಂದೆ ಬಂದರೆ ಅಂತಹವರನ್ನು ಪಕ್ಷಕ್ಕೆ ಸೇರಿಸಿಕೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

ಮತ್ತೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮೈತ್ರಿ ಬಗ್ಗೆ ಪ್ರಸ್ತಾಪ ಮಾಡಿ ಲೋಕಸಭೆ ಚುನಾವಣೆಯಲ್ಲಿ ಯಾರು ಮೈತ್ರಿ ಮಾಡಿಕೊಳ್ಳುತ್ತಾರೆ. ಯಾರು ಪ್ರತ್ಯೇಕವಾಗಿ ಸ್ಪರ್ಧಿಸುತ್ತಾರೆ ಎಂಬ ಬಗ್ಗೆ ತಲೆಕೆಡಿಸಿಕೊಳ್ಳುವುದಿಲ್ಲ. ಚುನಾವಣೆಯಲ್ಲಿ ಮತ ಕೇಳುತ್ತೇವೆ. ಜನರು ನಮ್ಮ ಪರವಾಗಿದ್ದಾರೆ. ನಮ್ಮ ಪಕ್ಷವನ್ನು ಬೆಂಬಲಿಸಿ ಹೆಚ್ಚು ಸ್ಥಾನ ಬರುವಂತೆ ನೋಡಿಕೊಳ್ಳುತ್ತಾರೆ ಎಂದರು.

ಯಡಿಯೂರಪ್ಪ ಮುಂದುವರೆದು ಸುದ್ದಿಗಾರರೊಂದಿಗೆ ಮಾತನಾಡಿ, ಜೆಡಿಎಸ್ ಜತೆಗಿನ ಮೈತ್ರಿ ನಮಗೆ ಸಂತೋಷ ತಂದಿದೆ. ಇದರಿಂದ ಪಕ್ಷಕ್ಕೆ ಶಕ್ತಿ ಬಂದಿದೆ. ನಾವು ಮುಂದಿನ ಚುನಾವಣೆಯಲ್ಲಿ 25ಕ್ಕೂ ಹೆಚ್ಚು ಸ್ಥಾನ ಗಳಿಸಲು ಸಹಕಾರಿಯಾಗಲಿದೆ. ಈ ವಿಚಾರವಾಗಿ ಚರ್ಚೆ ಮಾಡಲು ಜೆಡಿಎಸ್ ನಾಯಕರಾದ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಸದ್ಯದಲ್ಲೇ ಭೇಟಿಯಾಗುವುದಾಗಿ ತಿಳಿಸಿದರು.

ಶಿವಕುಮಾರ್ ಅವರು ಸುದ್ದಿಗಾರರೊಂದಿಗೆ ಮಾತನಾಡಿ, "ನಾನು ಆಪರೇಷನ್ ಹಸ್ತ, ಆಪರೇಷನ್ ಕಮಲ ಇವೆರಡರ ವಿರೋಧಿ. ಯಾವುದೇ ಕಾರಣಕ್ಕೂ ಈ ಕೆಲಸಕ್ಕೆ ಮುಂದಾಗುವುದಿಲ್ಲ. ನಮ್ಮದೇನಿದ್ದರು ಕೋ-ಆಪರೇಷನ್" ಎಂದು ಹೇಳಿದರು.

ನಾವು ಸ್ನೇಹದ ಹಸ್ತ ಚಾಚುತ್ತೇವೆ. ನಮ್ಮ ಪಕ್ಷದ ತತ್ವ ಸಿದ್ಧಾಂತ, ಭಾರತ್ ಜೋಡೊ ಬಗ್ಗೆ ಯಾರಿಗೆ ಒಲವಿದೆ ಅವರನ್ನು ತಬ್ಬಿಕೊಳ್ಳುತ್ತೇವೆ. ಅವರ ಹೆಗಲ ಮೇಲೆ ಕೈಹಾಕಿಕೊಂಡು ಹೆಜ್ಜೆ ಹಾಕುತ್ತೇವೆ. ಎಷ್ಟು ಜನ ಸೇರಲಿದ್ದಾರೆ ಎನ್ನುವ ಪಟ್ಟಿ ಹೇಳಲು ಆಗಲ್ಲ. ಅವರವರೇ ಹೇಳಿರುವಂತೆ ಒಳ್ಳೆ ಮುಹೂರ್ತ, ಲಗ್ನ ಕೂಡಿಬಂದಾಗ ನಡೆಯಲಿದೆ ಎಂದು ತಿಳಿಸಿದರು.

ರಾಜಕೀಯದಲ್ಲಿ ಯಾರೂ ಮಿತ್ರರಲ್ಲ, ಶತ್ರುಗಳಲ್ಲ. ರಾಜಕೀಯ ಎನ್ನುವುದು ಸಾಧ್ಯತೆಗಳ ಕಲೆ ನಾವು ಯಾರನ್ನು ಕರೆಯುವುದಿಲ್ಲ. ರಾಜಕೀಯದಲ್ಲಿ ಯಾರೂ ದಡ್ಡರಲ್ಲ. ಎಲ್ಲರೂ ಅವರವರ ಭವಿಷ್ಯ ನೋಡಿಕೊಳ್ಳಬೇಕು. ಮಹಾರಾಷ್ಟ್ರದಲ್ಲಿ ಎಲ್ಲಾ ವಾಷಿಂಗ್ ಮೆಷಿನ್ ಸೇರಿಕೊಂಡು ಬಿಡಲಿಲ್ಲವೇ ಎಂದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಷಾ ಭೇಟಿಯಾಗಿ ಹೊಂದಾಣಿಕೆಯ ಮಾತುಗಳನ್ನಾಡಿದ್ದಾರೆ ಎನ್ನುವ ಪ್ರಶ್ನೆಗೆ ಇದೇನು ಹೊಸ ವಿಚಾರವೇನಲ್ಲ, ಅವರ ಪಕ್ಷದ ಬಗ್ಗೆ ನಾನ್ಯಾಕೆ ಮಾತನಾಡಲಿ, ಒಂದಾಗಲಿ ಬಿಡಿ. ಅವರಿಗೆ ಒಳ್ಳೆಯದಾಗಲಿ, ಆಲ್ ದಿ ಬೆಸ್ಟ್ ಎಂದರು.

ಕುಮಾರಸ್ವಾಮಿ ಹಾಗೂ ಅಶೋಕ್ ಅವರು ಒಂದಾಗಿದ್ದರು, ಈಗ ಯೋಗೇಶ್ವರ್ ಮತ್ತು ಕುಮಾರಸ್ವಾಮಿ ಅವರು ಒಂದಾಗುತ್ತಿದ್ದಾರೆ. ರಾಮನಗರ ಜಿಲ್ಲೆಯಲ್ಲಿ ಯಾರೇ ಒಂದಾದರೂ ನಮಗೆ ಸಂತೋಷ. ಅವರವರ ಉಳಿವಿಗಾಗಿ, ಭವಿಷ್ಯಕ್ಕಾಗಿ ಏನು ಬೇಕಾದರೂ ಮಾಡಲಿ. ಆದರೆ ಅವರುಗಳ ಸಿದ್ಧಾಂತ ಏನಾಗುತ್ತದೆ ಎಂಬುದು ಕುತೂಹಲ ಎಂದರು. ಹಿರಿಯರಾದ ದೇವೇಗೌಡರು ಯಾವುದೇ ಕಾರಣಕ್ಕೂ ಬಿಜೆಪಿ ಜೊತೆ ಹೋಗುವುದಿಲ್ಲ ಎಂದಿದ್ದರು. ಒಂದು ಸಿದ್ಧಾಂತ ಇಟ್ಟುಕೊಂಡು ಪಕ್ಷ ಕಟ್ಟಿರುತ್ತಾರೆ. ಈಗ ಆ ಪಕ್ಷ ಉಳಿಯುತ್ತದೋ, ಏನಾಗುತ್ತದೋ ಗೊತ್ತಿಲ್ಲ? ಹಾಲಿ ಶಾಸಕರು, ಮಾಜಿ ಶಾಸಕರು ಏನಾಗುತ್ತಾರೊ ಅದರ ಬಗ್ಗೆ ನನಗೆ ಗೊತ್ತಿಲ್ಲ ಎಂದು ಹೇಳಿದರು.

## ಸಂಸದ ಪ್ರಜ್ವಲ್ ರೇವಣ್ಣ ಅನರ್ಹತೆಗೆ ತಡೆ ಕೋರಿ ಅರ್ಜಿ

### ತೀರ್ಪನ್ನು ಕಾಯ್ದಿರಿಸಿದ ಹೈಕೋರ್ಟ್

ಬೆಂಗಳೂರು, ಸೆ.8- ಹಾಸನ ಸಂಸದ ಸ್ಥಾನದಿಂದ ತಮ್ಮನ್ನು ಅನರ್ಹಗೊಳಿಸಿದ ಆದೇಶಕ್ಕೆ ತಡೆ ಕೋರಿ ಜೆಡಿಎಸ್ ಯುವ ನಾಯಕ ಪ್ರಜ್ವಲ್ ರೇವಣ್ಣ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್ ಶುಕ್ರವಾರ ಮುಕ್ತಾಯಗೊಳಿಸಿದೆ.



ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಕೆ.ನಟರಾಜನ್ ಅವರು ತೀರ್ಪನ್ನು ಕಾಯ್ದಿರಿಸಿದ್ದು, ಸೆಪ್ಟೆಂಬರ್ 11 ಅಥವಾ 12ರಂದು ಆದೇಶ ಪ್ರಕಟಿಸುವ ಸಾಧ್ಯತೆ ಇದೆ. ಪ್ರಜ್ವಲ್ ರೇವಣ್ಣ ಪರ ಹಿರಿಯ ವಕೀಲ ಉದಯ ಹೊಳ್ಳ ಅವರು, ಸಂಸದ ಸ್ಥಾನದಿಂದ ಅನರ್ಹಗೊಳಿಸಿದ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವವರೆಗೆ ಈ ಆದೇಶಕ್ಕೆ ತಡೆ ನೀಡು ವಂತೆ ಕೋರಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ.

ಚುನಾವಣಾ ಅಕ್ರಮದ ಆಧಾರದ ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರ ಮೊಮ್ಮಗ ಪ್ರಜ್ವಲ್ ರೇವಣ್ಣ ಅವರ ಆಯ್ಕೆಯನ್ನು ಅಸಿಂಧುಗೊಳಿಸಿ ಸೆಪ್ಟೆಂಬರ್ 1 ರಂದು ಹೈಕೋರ್ಟ್ ತೀರ್ಪು ನೀಡಿದೆ.

ಪ್ರಜ್ವಲ್ ರೇವಣ್ಣ ಅವರು ಸಲ್ಲಿಸಿರುವ ಚುನಾವಣಾ ಅಫಿಡವಿಟ್‌ನಲ್ಲಿ ಚುನಾವಣಾ ಆಯೋಗಕ್ಕೆ ಸುಳ್ಳು ಮಾಹಿತಿ ನೀಡಿದ್ದು, ಅವರು ಹೊಂದಿರುವ ಆಸ್ತಿಗಳ ನೈಜ ಮೌಲ್ಯವನ್ನು ಮರೆಮಾಚಲಾಗಿದೆ ಎಂದು ಆರೋಪಿಸಲಾಗಿದೆ.



## ಉಚಿತ ಕಣ್ಣಿನ ತಪಾಸಣಾ ಶಿಬಿರ

ಮೈಸೂರು, ಸೆ. 8- ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನ ವತಿಯಿಂದ ಸ್ಪರ್ಶ ಐ ಆಸ್ಪತ್ರೆಯ ಸಹಯೋಗದೊಂದಿಗೆ ಶ್ರಾವಣ ಮಾಸದ ಪ್ರಯುಕ್ತ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಇರ್ವಿನ್ ರಸ್ತೆಯಲ್ಲಿರುವ ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನ ಆವರಣದಲ್ಲಿ ಸೆಪ್ಟೆಂಬರ್ 9 ರಂದು ಬೆಳಿಗ್ಗೆ 11 ಗಂಟೆಗೆ ಶಿಬಿರವನ್ನು ಆಯೋಜಿಸಲಾಗಿದೆ ಎಂದು ಪಂಚಮುಖಿ ಆಂಜನೇಯ ಸ್ವಾಮಿ ದೇವಸ್ಥಾನದ ಪ್ರಧಾನ ಅರ್ಚಕರಾದ ವಿದ್ವಾನ್ ಕೃಷ್ಣಮೂರ್ತಿ ತಿಳಿಸಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕ ಹರೀಶ್ ಗೌಡ, ಕೆಪಿಸಿಸಿ ರಾಜ್ಯ ಕಾರ್ಯದರ್ಶಿ ಗುರುಪಾದಸ್ವಾಮಿ, ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಸಮಾಜ ಸೇವಕರಾದ ಕೆ ರಘುರಾವ್ ವಾಜಪೇಯಿ, ಲಯನ್ ನಾಗರಾಜ್ ಬೇರಿ, ಲಯನ್ ರವೀಂದ್ರ, ಕಾಂಗ್ರೆಸ್ ಮುಖಂಡ ನವೀನ್ ಕುಮಾರ್ ಕೆ ಆರ್ ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ, ಇನ್ನಿತರರು ಭಾಗವಹಿಸಲಿದ್ದಾರೆ.

## ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ನೇಮಕಾತಿಗೆ ಅರ್ಜಿ ಆಹ್ವಾನ

ಮೈಸೂರು, ಸೆ.8- ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಗ್ರಾಮೀಣ ಪುನರ್ವಸತಿ ಕಾರ್ಯಕ್ರಮದ ಅಡಿಯಲ್ಲಿ ತಿ.ನರಸೀಪುರ ತಾಲೂಕಿನ ಸೋಸಲೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಾಗಿ ಮಾಸಿಕ 9000 ರೂ ಗಳ ಸಹಾಯಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ. ಸಮರ್ಥ ವಿಕಲಚೇತನ ವ್ಯಕ್ತಿಗಳು ಅರ್ಜಿ ನಮೂನೆಯನ್ನು ಸಂಬಂಧಪಟ್ಟ ತಾಲೂಕು ಪಂಚಾಯಿತಿಯಲ್ಲಿರುವ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಂದ ಅರ್ಜಿ ಪಡೆದು, ಸೆ.22ರೊಳಗೆ ಸಲ್ಲಿಸುವಂತೆ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಿ.ನರಸೀಪುರ ತಾಲೂಕು ಪುನರ್ವಸತಿ ಕಾರ್ಯಕರ್ತರಾದ ವೀಣಾ, ದೂ.ಸಂ: 8050829685 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಣಿಪುರದಲ್ಲಿ ಮತ್ತೆ ಹಿಂಸಾಚಾರ; ಇಬ್ಬರು ಸಾವು, 45 ಮಂದಿಗೆ ಗಾಯ

ಇಂಫಾಲ್, ಸೆ.8- ಮಣಿಪುರದಲ್ಲಿ ಮತ್ತೆ ಹಿಂಸಾಚಾರ ಭುಗಿಲೆದಿದ್ದು, ತೆಂಗನೌಪಾಲ್ ಜಿಲ್ಲೆಯ ಪಲ್ಲೆಲ್‌ನಲ್ಲಿ ಶುಕ್ರವಾರ ನಡೆದ ಎರಡು ಪ್ರತ್ಯೇಕ ಗುಂಡಿನ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದಾರೆ ಮತ್ತು ಸುಮಾರು 45 ಜನ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ನಾಲ್ವರು ನಾಗರಿಕರಿಗೆ ಬುಲೆಟ್ ಗಾಯಗಳಾಗಿವೆ ಎಂದು ಅವರು ಹೇಳಿದ್ದಾರೆ.

ಇಂದು ಬೆಳಗ್ಗೆ 6 ಗಂಟೆ ಸುಮಾರಿಗೆ ಪಲ್ಲೆಲ್‌ನಲ್ಲಿ ಅಪರಿಚಿತ ಪುರುಷರ ಎರಡು ಗುಂಪುಗಳ ನಡುವೆ ಗುಂಡಿನ ದಾಳಿ ಪ್ರಾರಂಭವಾಯಿತು. ಈ ದಾಳಿಯಲ್ಲಿ ಒಬ್ಬರು ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಇಂಫಾಲ್‌ನ ಪ್ರಾದೇಶಿಕ ವೈದ್ಯಕೀಯ ವಿಜ್ಞಾನ ಸಂಸ್ಥೆಗೆ(RIMS) ದಾಖಲಾಗಿರುವ ಗಾಯಾಳುಗಳಲ್ಲಿ ಒಬ್ಬರ ಸ್ಥಿತಿ ಗಂಭೀರವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ.

ಗುಂಡಿನ ಸುದ್ದಿ ಹರಡುತ್ತಿದ್ದಂತೆ, ತೌಬಲ್ ಮತ್ತು ಕಾಕ್ಚಿಂಗ್ ಜಿಲ್ಲೆಗಳ ವಿವಿಧ ಕಡೆಗಳಿಂದ ಹೆಚ್ಚಿನ ಸಂಖ್ಯೆಯ ಜನ ಪಲ್ಲೆಲ್‌ಗೆ ಧಾವಿಸಿದರು. ಆದರೆ ಅಸ್ಸಾಂ ರೈಫಲ್ಸ್ ಸಿಬ್ಬಂದಿ ಅವರನ್ನು ತಡೆದರು, ಇದರಿಂದಾಗಿ ಸ್ಥಳದಲ್ಲಿ ಉದ್ವಿಗ್ನ ಪರಿಸ್ಥಿತಿ ಇದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪಲ್ಲೆಲ್‌ನಲ್ಲಿ ಅಪರಿಚಿತ ಶಸ್ತ್ರಧಾರಿಗಳ ಎರಡು ಗುಂಪುಗಳ ನಡುವಿನ ಗುಂಡಿನ ಚಕಮಕಿಯಲ್ಲಿ 48 ವರ್ಷದ ವ್ಯಕ್ತಿಯೊಬ್ಬರು ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರಿಸ್ಥಿತಿಯನ್ನು ಶಾಂತಗೊಳಿಸಲು ಅಸ್ಸಾಂ ರೈಫಲ್ಸ್ ಅಶ್ರುವಾಯು ಪ್ರಯೋಗಿಸಿದ ಪರಿಣಾಮ 45ಕ್ಕೂ ಹೆಚ್ಚು ಮಹಿಳೆಯರು ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ಹೇಳಿದ್ದಾರೆ. ಪರಿಸ್ಥಿತಿ ಇನ್ನೂ ಉದ್ವಿಗ್ನವಾಗಿದ್ದು, ಗುಂಡಿನ ದಾಳಿಯನ್ನು ತಾತ್ಕಾಲಿಕವಾಗಿ ನಿಲ್ಲಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

## ಎರಡು ದಿನ ನೀರು ವ್ಯತ್ಯಯ

ಮೈಸೂರು, ಸೆ.8- ಮೇಳಾಪುರ ಮತ್ತು ರಮ್ಮನಹಳ್ಳಿ ಯಂತ್ರಾಗಾರಗಳಿಗೆ ವಿದ್ಯುತ್ ಸರಬರಾಜು ಕಲ್ಪಿಸಿರುವ ದೇವನೂರು ಸಬ್‌ಸ್ಟೇಷನ್‌ನಲ್ಲಿ 2ನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೆತ್ತಿಕೊಂಡಿರುವ ಹಿನ್ನೆಲೆಯಲ್ಲಿ ಸೆ.12ರಂದು ಬೆಳಗ್ಗೆ 10ರಿಂದ ಸಂಜೆ 6 ಗಂಟೆವರೆಗೆ ವಿದ್ಯುತ್ ಸರಬರಾಜು ನಿಲುಗಡೆ ಮಾಡಲಾಗುವುದು ಎಂದು ಕೆಪಿಟಿಸಿಎಲ್ ಅಧಿಕಾರಿಗಳು ತಿಳಿಸಿದ್ದು, ಈ ಹಿನ್ನೆಲೆಯಲ್ಲಿ ಕೆಸರೆ, ರಾಜೇಂದ್ರನಗರ, ಸುಭಾಷ್‌ನಗರ, ಎನ್.ಆರ್. ಮೊಹಲ್ಲಾ, ಗಾಂಧಿನಗರ, ಉದಯಗಿರಿ, ರಾಜೀವ್‌ನಗರ (1,2, 3ನೇ ಹಂತ), ಶಾಂತಿನಗರ, ಕಲ್ಯಾಣಗಿರಿ, ಡಾ.ರಾಜ್‌ಕುಮಾರ್ ರಸ್ತೆಗೆ ಹೊಂದಿಕೊಂಡ ಪ್ರದೇಶಗಳು, ಯರಗನಹಳ್ಳಿ, ಸಿದ್ಧಾರ್ಥ ಬಡಾವಣೆ, ಆಲನಹಳ್ಳಿ, ನಂದಿನಿ ಬಡಾವಣೆ, ಗಿರಿದರ್ಶಿನಿ ಬಡಾವಣೆ, ಗೌಸಿಯಾನಗರ, ಕ್ಯಾತಮಾರನಹಳ್ಳಿ ಹಾಗೂ ಇನ್ನಿತರ ಪ್ರದೇಶಗಳಿಗೆ ಸೆ.12 ಹಾಗೂ 13ರಂದು ನೀರು ಸರಬರಾಜು ವ್ಯತ್ಯಯವಾಗಲಿದೆ ಎಂದು ಮೈಸೂರು ಮಹಾನಗರ ಪಾಲಿಕೆ ನೀರು ಸರಬರಾಜು ಮತ್ತು ಒಳಚರಂಡಿ ಪೂರ್ವ ವಿಭಾಗ ಕಾರ್ಯಪಾಲಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಕ್ಕರೆ ಅದೇ ಸ್ವರ್ಗ

ಆತ : "ಇತ್ತೀಚೆಗೆ ಕಾಫಿ ಕುಡಿದು ಬಿಟ್ರೆ ನಂಗೆ ನಿದ್ರೇನೇ ಬರೊಲ್ಲ"
ಈತ : "ಹೌದಾ?"
ಆತ : "ನಿನಗೆ?"
ಈತ : "ನಂಗೆ ಉಲ್ಟಾ... ಮಲಗಿ ಬಿಟ್ರೆ ಕಾಫಿ ಕುಡಿಯೋಕೆ ಆಗೊಲ್ಲ!"


ಮೈಸೂರು ಮಿತ್ರ

ಶನಿವಾರ, 9 ಸೆಪ್ಟೆಂಬರ್ 2023

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*


**ಅಮೃತವಾಹಿನಿ..........**

ಬೆಂಕಿ ಚಿನ್ನವನ್ನು ಪರೀಕ್ಷಿಸಿದರೆ ಸಂಕಟಗಳು ಧೈರ್ಯಶಾಲಿಗಳನ್ನು ಪರೀಕ್ಷಿಸುತ್ತದೆ.–ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಪಿತೂರಿ ಮಾಡುವವನಿಗೆ ಪಿತೃವೇನು ಮಾತೃವೇನು?

## ನಿಮ್ಮ ಪತ್ರಗಳು

### ಕಾವೇರಿ ಸಮಸ್ಯೆ ಬಗೆಹರಿಯುವುದೆಂತೋ?!

ಮಾನ್ಯರೆ,


ಕಾವೇರಿ ಜಲಾನಯನ ಪ್ರದೇಶದಲ್ಲಿ ವಾಡಿಕೆ ಮಳೆಗಿಂತ ಕಡಿಮೆಯಾಗಿ ಅಣೆಕಟ್ಟೆಗಳು ತುಂಬದಿರುವ ದಿನಗಳಲ್ಲಿ ನಮ್ಮ ರೈತರಿಗೆ ಸಂಕಷ್ಟ ತಪ್ಪಿದ್ದಲ್ಲ. ಸಮಸ್ಯೆಯು ಬಗೆಹರಿಯಬಹುದಾಗಿದ್ದರೂ ಬಗೆಹರಿಸುವ ದೃಷ್ಟಿಕೋನದಲ್ಲಿ ರಾಜಕೀಯ ಪಕ್ಷಗಳು ಇದ್ದಂತಿಲ್ಲ. ನ್ಯಾಯವಾದಿಗಳ ಬುದ್ದಿವಂತಿಕೆಯಲ್ಲಿ ತೀರ್ಪು ಯಾವ ರಾಜ್ಯದ ಪರ ಬರುತ್ತದೆ ಎಂಬುದು ನಿಂತಿರುತ್ತದೆ! ಆಪರೇಷನ್ ಯಶಸ್ವಿಯಾದರೂ ರೋಗಿ ಸಾಯುತ್ತಾನೆ, ರೋಗಿಯನ್ನು ಉಳಿಸುವ ನಿಟ್ಟಿನಲ್ಲಿ ಚಿಕಿತ್ಸೆ ಆಗಬೇಕಾದರೆ ಕೇಂದ್ರ ಸರ್ಕಾರದ ಮಟ್ಟದಲ್ಲಿ ನೀರಾವರಿ ತಜ್ಞರ ತಂಡವು ಸಮಗ್ರವಾಗಿ ಅಧ್ಯಯನ ಸರಳ ಹಾಗೂ ನ್ಯಾಯಯುತವಾದ ನಿರ್ದೇಶನ ಕೊಡಲಿಕ್ಕೆ ಸಾಧ್ಯ!, ಇದು ಆಗುತ್ತದೆಯೇ?!.

ಯಾವುದೇ ಪಕ್ಷದ ಸರ್ಕಾರಗಳು ಇರಲಿ ನಮ್ಮ ರಾಜ್ಯದ ಅಣೆಕಟ್ಟೆಗಳಲ್ಲಿ ನೀರಿನ ಕೊರತೆ ಇದ್ದಾಗ್ಯೂ ತಮಿಳುನಾಡಿಗೆ ನೀರನ್ನು ಕಾವೇರಿ ನ್ಯಾಯಾಧೀಕರಣದ ಸೂಚನೆಯನ್ವಯ ಬಿಟ್ಟೇ ಬಿಡುತ್ತಾರೆ. ಹಾಗೆಯೇ ವಿರೋಧ ಪಕ್ಷದಲ್ಲಿದ್ದವರು ಅದನ್ನು ವಿರೋಧಿಸುತ್ತಾ ಬಂದಿದ್ದಾರೆ. ಇದು ನಿರಂತರ ಪ್ರಕ್ರಿಯೆ ಹಾಗೂ ಇದರಿಂದ ಮಂಡ್ಯ ರೈತರಿಗೆ ಬಿತ್ತಿದ್ದು, ಬಾಯಿಗೆ ಬರದೆ ಪರಿತಪಿಸುವ ಕರ್ಮ ತಪ್ಪಿದ್ದಲ್ಲ!. ಇಲ್ಲಿ 'ಹಾವೂ ಸಾಯಬಾರದು ಕೋಲೂ ಮುರಿಯಬಾರದು' ಎಂಬ ನೀತಿಯನ್ನು ಅನುಸರಿಸುತ್ತಾರೆ. ಅನ್ನದಾತರು ಮಾತ್ರ ಅರೆಬಟ್ಟೆಯಲ್ಲಿ ರಸ್ತೆಯಲ್ಲಿ ನಿಂತು ನ್ಯಾಯಕ್ಕಾಗಿ ಹೋರಾಡುವುದು ಸಾಮಾನ್ಯವಾಗಿದೆ. ವಿಶೇಷವಾಗಿ ಮಂಡ್ಯ ರೈತರ ಬದುಕು ಹೋರಾಟದಲ್ಲೇ ಕಳೆದುಹೋಗುತ್ತಿದೆ.

ದಿ.08–09–2023ರಲ್ಲಿದ್ದಂತೆ ಹೇಮಾವತಿ, ಹಾರಂಗಿ, ಕಬಿನಿ ಮತ್ತು ಕೆಆರ್‌ಎಸ್ ಅಣೆಕಟ್ಟೆಗಳಲ್ಲಿ ಒಟ್ಟು 114.60 ಟಿಎಂಸಿ ಇದೆ. ಜೊತೆಗೆ 64.06 ಟಿಎಂಸಿ ನೀರು ಶೇಖರಣೆ ಇದೆ (ಇದರಲ್ಲಿ ಅಣೆಕಟ್ಟೆಗಳಲ್ಲಿನ ಹೂಳಿನ ಪರಿಮಾಣವೂ ಒಳಗೊಂಡಿದೆ). ಈ ಸಮಯಕ್ಕೆ ಅಣೆಕಟ್ಟೆಗಳು ತುಂಬಿ ತಮಿಳುನಾಡಿಗೂ ಸಾಕಷ್ಟು ನೀರು ಹರಿದು ಹೋಗಬೇಕಾಗಿತ್ತು. ಮುಂದಿನ ದಿನಗಳಲ್ಲಿ ಮಳೆ ಬರದಿದ್ದರೆ ಕಾವೇರಿ ಜಲಾನಯನ ಪ್ರದೇಶದ ಜನರಿಗೆ ಕುಡಿಯುವುದಕ್ಕೂ ನೀರಿನ ಕೊರತೆ ಆಗಬಹುದು! 'ಸರ್ವೇ ಜನಾಃ ಸುಖಿನೋ ಭವಂತು ಸರ್ವೆ ಸಂತು ನಿರಾಮಯಾಃ' ರೀತಿ ಎರಡೂ ರಾಜ್ಯದವರೂ ಸುಖಿಗಳಾಗಿರಲಿ, ಯಾರಿಗೂ ದುಃಖವಾಗದಿರಲಿ, ಆ ನಿಟ್ಟಿನಲ್ಲಿ ನ್ಯಾಯಯುತ ಪರಿಹಾರ ಸಿಗುವುದೆಂತೋ?!

–ಮಿರ್ಲೆ ಚಂದ್ರಶೇಖರ, ಲೇಖಕರು, ಮೈಸೂರು.

### ಪಾರಂಪರಿಕ ಸೌಂದರ್ಯಕ್ಕಿರುವ ತಡೆಯನ್ನು ತೆರವುಗೊಳಿಸಿ



ಮಾನ್ಯರೆ,

ಮೈಸೂರನ್ನು ಪಾರಂಪರಿಕ ನಗರಿ ಎಂದು ಗುರುತಿಸಲಾಗುತ್ತದೆ. ಮೈಸೂರಿನಲ್ಲಿರುವ ಪರಂಪರೆ ಮತ್ತು ಪಾರಂಪರಿಕ ಕಟ್ಟಡಗಳು ಅದಕ್ಕೆ ಕಾರಣ. ಇದೇ ಕಾರಣಕ್ಕೆ ನಗರದ ಪಾರಂಪರಿಕ ಕಟ್ಟಡಗಳ ರಕ್ಷಣೆಗೆ ಹೆಚ್ಚಿನ ಪ್ರಾಮುಖ್ಯತೆ ಇದೆ. ಆದರೆ ಈ ಬಗ್ಗೆ ಯಾವುದೇ ಪ್ರಜ್ಞೆ ಇಲ್ಲದ ಕೆಲವು ಅಧಿಕಾರಿಗಳು ಪಾರಂಪರಿಕ ನೋಟಕ್ಕೆ ಧಕ್ಕೆಯಾಗುವಂತೆ ಮಾಡುವ ಕಟ್ಟಡ ಕಾಮಗಾರಿಗಳಿಗೆ ಅನುಮತಿ ನೀಡುತ್ತಾರೆ. ಅಥವಾ ಗೊತ್ತಿದ್ದೂ ಆಮಿಷಗಳಿಗೆ ಒಳಗಾಗಿ ಅನುಮತಿ ನೀಡುತ್ತಾರೆ. ಮೈಸೂರಿನ ಹಳೇ ನ್ಯಾಯಾಲಯದ ಎದುರಿನಲ್ಲಿ ನೂರು ಅಡಿ ಅಂತರದಲ್ಲಿ ನಿರ್ಮಿಸಿರುವ ಬೃಹತ್ ಜಾಹೀರಾತು ಫಲಕ ಅದಕ್ಕೆ ತಾಜಾ ಉದಾಹರಣೆ. ಫಲಕ ಅಳವಡಿಸಿರುವ ಕಾರಣ ಹಿಂದೆ ಇದ್ದಂತೆ ಹಳೇ ನ್ಯಾಯಾಲಯದ ಭವ್ಯವಾದ ನೋಟಕ್ಕೆ ಧಕ್ಕೆ ಉಂಟಾಗಿದೆ. ಇದನ್ನು ಈ ಕೂಡಲೇ ತೆರವುಗೊಳಿಸತಕ್ಕದ್ದು.

ಇದು ಇದೇ ರೀತಿ ಮುಂದುವರೆದರೆ ಪಾರಂಪರಿಕತೆಗೆ ಧಕ್ಕೆಯುಂಟಾಗಿ ಒಂದು ದಿನ ಹೆರಿಟೇಜ್ ಸಿಟಿ ಎಂಬ ಪಟ್ಟಿಯಿಂದ ಹೊರಹಾಕಬಹುದು. ಸಂಬಂಧಪಟ್ಟವರು ತಕ್ಷಣ ಕಾರ್ಯ ಪ್ರವೃತ್ತರಾಗತಕ್ಕದ್ದು.

–ಎಸ್.ರವಿ, ವಕೀಲ, ಮೈಸೂರು.

### ಬೃಹತ್ ಸಮಾರಂಭಗಳು ಹೊರ ಭಾಗದಲ್ಲಿ ನಡೆಯುವಂತಾಗಲಿ

ಮಾನ್ಯರೆ,

ಕಳೆದ ವಾರ ಮೈಸೂರಿನ ಮಹಾರಾಜ ಕಾಲೇಜಿನ ಮೈದಾನದಲ್ಲಿ ನಡೆದ ಕಾಂಗ್ರೆಸ್ ಸರ್ಕಾರದ ಮಹತ್ವಾಕಾಂಕ್ಷಿ ಗ್ಯಾರಂಟಿ ಯೋಜನೆಯ ಉದ್ಘಾಟನಾ ಸಮಾರಂಭಕ್ಕೆ ಕಾಂಗ್ರೆಸ್ ನಾಯಕರುಗಳ ನಿರೀಕ್ಷೆಗೂ ಮೀರಿ ರಾಜ್ಯದ ವಿವಿಧ ಭಾಗಗಳಿಂದ ಲಕ್ಷಕ್ಕೂ ಹೆಚ್ಚು 'ಗೃಹಲಕ್ಷ್ಮೀ'ಯರು ಒಂದೆಡೆ ಸಮಾವೇಶಗೊಂಡಿದ್ದರು.

ಇಷ್ಟೊಂದು ಬೃಹತ್ ಸಂಖ್ಯೆಯ ಜನರು ನಗರದ ಮಧ್ಯೆ ಭಾಗದಲ್ಲಿ ಸೇರುವುದರಿಂದ, ಮುಖ್ಯವಾಗಿ ಟ್ರಾಫಿಕ್ ಸಮಸ್ಯೆ ಸೇರಿದಂತೆ, ಹಲವಾರು ರೀತಿಯ ಸಮಸ್ಯೆಗಳು ಜನ ಸಾಮಾನ್ಯರಿಗೆ ಆಗುತ್ತವೆ. ಮುಂದೆ ಇಂತಹ ಬೃಹತ್ ಸಮಾರಂಭಗಳು ನಗರದ ಹೊರ ಭಾಗದಲ್ಲಿ ನಡೆಯುವಂತಾಗಲಿ. ಈ ಬಗ್ಗೆ ರಾಜಕೀಯ ಪಕ್ಷಗಳ ನಾಯಕರು ಚಿಂತನೆ ಮಾಡಲಿ. **–ಬೂಕನಕೆರೆ ವಿಜೇಂದ್ರ, ಲೇಖಕರು, ಕುವೆಂಪು ನಗರ, ಮೈಸೂರು.**


### ಸದ್ದಿಲ್ಲದ ಕನ್ನಡ ಸಾಹಿತ್ಯ ಸೇವೆ



ಮಾನ್ಯರೇ,

ಮೈಸೂರಿನ ಅಗ್ರಹಾರದ ಗುರಿಕಾರ್ ದೇವಣ್ಣ ರಸ್ತೆಯಲ್ಲಿರುವ ಲಕ್ಷ್ಮೀ ಟಿಫಾನೀಸ್ ಮಾಲೀಕರು ಶುಚಿ ರುಚಿಯಾದ ಊಟ ಉಪಾಹಾರದ ಜೊತೆಗೆ ಕನ್ನಡದ ಸೇವೆಯನ್ನು ಸಹ ಮಾಡುತ್ತಿದ್ದಾರೆ. ಪ್ರತಿದಿನ ಹೋಟೆಲ್ ದ್ವಾರದ ಬಳಿ ಫಲಕ ಅಳವಡಿಸಿ ನುಡಿ ಮುತ್ತುಗಳು, ಸಲಹೆ ಸೂಚನೆಗಳನ್ನು ಬರೆಸುತ್ತಿದ್ದಾರೆ. ಶಾಲೆಗಳಲ್ಲಿ ಮಾತ್ರವಲ್ಲದೆ ಈ ರೀತಿಯಲ್ಲೂ ಕನ್ನಡ ಸಾಹಿತ್ಯ ಸೇವೆ ಮಾಡಬಹುದು ಎಂದು ತೋರಿಸಿರುವ ಹೋಟೆಲ್ ಮಾಲೀಕರಿಗೆ ಮತ್ತು ಪ್ರತಿದಿನವೂ ಬರೆಯುತ್ತಿರುವ ಶಿಕ್ಷಕರಿಗೂ ಧನ್ಯವಾದಗಳು.

– ಜಗದೀಶ ಬಿ ಹೊಸೂರು, ಜೆಎಸ್‌ಎಸ್ ನಗರ, ಮೈಸೂರು.





ಡಾ. ವಿ. ರಂಗನಾಥ್
ಲೇಖಕರು ಹಾಗೂ ನಿವೃತ್ತ ತಹಸೀಲ್ದಾರರು
ಮೊ : 94482 08746 / 97421 79000


ಚಿಂತನೆ

# ಸಂಪರ್ಕಕ್ಕಿಂತ ಸಂಬಂಧ ಮುಖ್ಯ...!

ನಾವು ನಮ್ಮ ಜೀವಮಾನದ ಅವಧಿಯಲ್ಲಿ ಅನೇಕರೊಡನೆ ಸಂಪರ್ಕ ಹೊಂದುತ್ತೇವೆ. ಅದರಲ್ಲಿ ಕೆಲವು, ಕೆಲವು ಸಮಯದವರೆಗೆ ಸೀಮಿತವಾದರೆ, ಮತ್ತೆ ಕೆಲವು ಬಹು ಸಮಯದವರೆಗೂ ಉಳಿದಿರುತ್ತವೆ. ಇಂತಹ ಸಂಪರ್ಕದಲ್ಲಿ ಬಂದ ಕೆಲವರು ನಮಗೆ ಆತ್ಮೀಯರಾಗುತ್ತಾರೆ. ಕೆಲವರು ಕೇವಲ ಸ್ನೇಹಿತರು ಎಂಬಂತೆ ಉಳಿದು ಬಿಡುತ್ತಾರೆ. ಕೆಲವರನ್ನು ನಾವು ಬಹಳವಾಗಿ ಹಚ್ಚಿಕೊಂಡು ಬಿಡುತ್ತೇವೆ. ಇಂತಹ ಕೆಲವರನ್ನು ಕೆಲವು ದಿನಗಳು ಕಾಣದಿದ್ದರೂ ಏನೋ ಕಳೆದುಕೊಂಡಂತೆ ಆಗುತ್ತದೆ. ಈ ಹಿಂದೆ ಮೊಬೈಲ್ ಇರದಿದ್ದಾಗ, ಫೋನ್‌ಗಳ ಸಂಪರ್ಕವೂ ಸಾಮಾನ್ಯ ಜನರಿಂದ ದೂರವಿದ್ದಾಗ, ಇಂತಹ ಆತ್ಮೀಯರನ್ನು ಕೆಲವು ಸಮಯ ಕಾಣಲಾಗದಿದ್ದಾಗ, ಅವರನ್ನು ಹುಡುಕಿಕೊಂಡು ಅವರ ಮನೆಗೆ ಹೋಗಿ ಬಿಡುತ್ತಿದ್ದ ಹಲವು ಪ್ರಸಂಗಗಳು ಈಗಲೂ ನಮ್ಮ ಹಿರಿಯರ ಮನದಲ್ಲಿ ಉಳಿದಿದೆ. ಹಾಗೆ ಹೋದಾಗ ದಿನಗಟ್ಟಲೆ ಆ ಸ್ನೇಹಿತರು ಹರಟುತ್ತಾ ಪ್ರಪಂಚವನ್ನು ಮರೆತಿರುತ್ತಿದ್ದುದನ್ನು ಅವರ ಮನೆಯವರು ಈಗಲೂ ನೆನಪಿಸಿಕೊಳ್ಳುತ್ತಾರೆ. ಅದೆಂತಹ ಆತ್ಮೀಯತೆ!! ನಾನು ನಮ್ಮ ಮನೆಯವರನ್ನು ಬೇಕಾದರೂ ಬಿಡಬಲ್ಲೆ, ಆದರೆ ಆ ಸ್ನೇಹಿತನನ್ನು ಮಾತ್ರ ಬಿಡಲಾಗುವುದಿಲ್ಲ ಎಂದು ಹೇಳಿಕೊಳ್ಳುವಷ್ಟರ ಮಟ್ಟಿಗೆ ಆ ಸಂಬಂಧಗಳು ಇರುತ್ತಿದ್ದವು. ಈಗಲೂ ಅಂತಹ ಸಂಬಂಧಗಳಿವೆ, ಇಲ್ಲವೆಂದಲ್ಲ. ಆದರೆ ಸಂವಹನ ಕಷ್ಟ ಸಾಧ್ಯವಾದ ದಿನಗಳಲ್ಲಿ ಬೆಳೆದ ಸಂಬಂಧಗಳು ಗಟ್ಟಿಯಾಗಿ ಉಳಿದುಕೊಳ್ಳುತ್ತಿದ್ದವು. ಕೆಲವೊಮ್ಮೆ ಹಿರಿಯರು ಆಗಾಗ್ಗೆ ಹೇಳುತ್ತಾರೆ, 'ಹಾಳಾದ್ದು ಈ ಮೊಬೈಲ್ ಬಂದು ನಮ್ಮ ಬಾಂಧವ್ಯವನ್ನೇ ಹಾಳುಮಾಡಿಬಿಟ್ಟಿತು' ಎಂದು. ನಮಗೆ ಮೊಬೈಲ್‌ನಂತಹ ಸಂಪರ್ಕ ಸಾಧನಗಳು ಈಗ ಜೀವನದ ಬಹುಮುಖ್ಯ ಹಾಗೂ ಅವಿಭಾಜ್ಯ ಅಂಗವೆನಿಸಿಕೊಂಡುಬಿಟ್ಟಿದೆ. 'ಒಂದು ದಿನ ಮೊಬೈಲ್ ಉಪವಾಸ ಮಾಡಿ ನೋಡಿ. ಆಗ ನಿಮಗೆ ಅದರ ಮೇಲಿನ ವ್ಯಾಮೋಹ ಸ್ವಲ್ಪ ಕಡಿಮೆಯಾಗುತ್ತದೆ ಎಂದು ಕೆಲವರು ಹೇಳುವುದಿದೆ'. ಉಪವಾಸ ಎಂದರೆ ಯಾವುದೇ ಕಾರಣದಿಂದ ಆ ದಿನ ಮೊಬೈಲ್ ಉಪಯೋಗಿಸುವುದಿಲ್ಲ ಎಂದು. ಹೀಗೆ ಮಾಡಿದವರ ಅನುಭವ ಏನೂ ವ್ಯತ್ಯಾಸವಿಲ್ಲ. ಅದನ್ನು ಬಿಟ್ಟೂ ಜೀವನ ಮಾಡಬಹುದು' ಎಂದಾಗಿರುತ್ತದೆ. ಇದಕ್ಕೆ ಮನಸ್ಸು ಗಟ್ಟಿ ಮಾಡಿಕೊಳ್ಳಬೇಕಾಗುತ್ತದೆ ಅಷ್ಟೆ.

ಇಂದು ಪ್ರತಿಯೊಬ್ಬರ ಮೊಬೈಲ್‌ನಲ್ಲೂ ನೂರಾರು (ಕೆಲವರಲ್ಲಿ ಸಾವಿರಾರು) ನಂಬರುಗಳು ದಾಖಲಾಗಿರುತ್ತದೆ. ಕೊನೆಗೆ ನಮ್ಮ ಮೊಬೈಲ್‌ನಲ್ಲಿನ ಸ್ಟೋರೇಜ್ ಸಾಕಾಗದು ಎಂದು ಎರಡೆರಡು ಮೊಬೈಲ್ ಖರೀದಿಸಿ ಬಳಸುವವರೂ ಇದ್ದಾರೆ. ಆದರೆ ನಮ್ಮ ಮೊಬೈಲ್‌ನಲ್ಲಿ ದಾಖಲಾದ ಅಷ್ಟು ನಂಬರುಗಳ ಪೈಕಿ ನಾವು ಎಷ್ಟು ಜನರೊಡನೆ ಸಂಪರ್ಕ ಇಟ್ಟುಕೊಳ್ಳುತ್ತೇವೆ? ಬಹುಶಃ ಇಂತಹ ಸಂಖ್ಯೆ ಐವತ್ತು–ನೂರರ ಗಡಿ ದಾಟಲಾರದು. (ಕೆಲವು ವ್ಯಾಪಾರಸ್ಥರಿಗೆ ಮತ್ತಷ್ಟು ಸಂಖ್ಯೆಗಳು ಬಳಕೆಗೆ ಬರಬಹುದು. ಅದೂ ವ್ಯಾಪಾರದ ದೃಷ್ಟಿಯಿಂದ ಮಾತ್ರ). ಹಾಗಾದರೆ ಅಷ್ಟೊಂದು ಸಂಖ್ಯೆ ಏಕೆ ನಮ್ಮ ಮೊಬೈಲ್‌ನಲ್ಲಿ ದಾಖಲಾಗಿರುತ್ತದೆ ಎಂದಾಗ ಮುಂದೆ ಎಂದೋ ಉಪಯೋಗಕ್ಕೆ ಬರುತ್ತದೆ ಎಂದು ಅದನ್ನು ಮೊಬೈಲ್‌ನಲ್ಲಿ ದಾಖಲಿಸಿ ಇಟ್ಟುಕೊಂಡಿರುತ್ತೇವೆ. ಕೊನೆಗೆ ಎಂದೋ ಒಂದು ದಿನ, ಹೀಗೆ ಯಾವತ್ತೋ ದಾಖಲಿಸಿಕೊಂಡದ್ದು ನೆನಪಾಗಿ ಅಂತಹವರಿಗೆ ಕರೆ ಮಾಡೋಣವೆಂದರೆ ಅವರ ಹೆಸರನ್ನು ಹೇಗೆ ದಾಖಲಿಸಿಕೊಂಡಿದ್ದೇವೆ? ಎಂಬುದೇ ನೆನಪಾಗುವುದಿಲ್ಲ. ಕೆಲವರ ಹೆಸರನ್ನು ಅವರು ಮಾಡುವ ಕೆಲಸದ ಆಧಾರದ ಮೇಲೋ ಏನೋ ಗುರುತು ಮಾಡಿಕೊಂಡಿರುತ್ತೇವೆ. ಆದರೆ ನೆನಪಾಗುವುದಿಲ್ಲ. ಅಲ್ಲದೆ ಹಲವಾರು ಸಮಯದ ನಂತರ (ವರ್ಷಗಳ ನಂತರವೂ ಆಗಬಹುದು) ಕರೆ ಮಾಡಲು ಪ್ರಯತ್ನಿಸಿದರೆ, ಅದಕ್ಕೆ ಬೇರೆ ಯವರು ಉತ್ತರಿಸುತ್ತಾರೆ. ಕಾರಣ ನಾವು ಯಾರನ್ನು ಸಂಪರ್ಕಿಸಲು ಪ್ರಯತ್ನಿಸುತ್ತಿದ್ದೇವೋ ಅವರು ಮತ್ತೊಂದು ಸಿಮ್ ತೆಗೆದುಕೊಂಡು ಹಳೆಯ ದನ್ನು ಉಪಯೋಗಿಸದ ಕಾರಣ ಅದು ಬೇರೆಯ ವರಿಗೆ ವರ್ಗಾಯಿಸಲ್ಪಟ್ಟಿರುತ್ತದೆ. ಹೀಗೆ ನಮ್ಮ ಮೊಬೈಲ್‌ನಲ್ಲಿ ನೂರಾರು ಸಂಖ್ಯೆಗಳು ಉಪ ಯೋಗಿಸದೆ ಉಳಿದುಬಿಟ್ಟಿರುತ್ತವೆ.




ಇದು ಸ್ನೇಹಿತರು ಹಾಗೂ ಸಂಪರ್ಕದಲ್ಲಿ ಬಂದವರ ಬಗ್ಗೆಯಾಯಿತು. ಇನ್ನು ನಮ್ಮ ಒಡಹುಟ್ಟಿದವರು ಹಾಗೂ ನೆಂಟರ ಎಷ್ಟು ನಂಬರುಗಳಿಗೆ ನಾವು ಆಗಾಗ್ಗೆ ಕರೆ ಮಾಡಿ ಮಾತನಾಡುತ್ತೇವೆ? ಸಂಪರ್ಕ ಸಾಧನವಾಗಿ ಮೊಬೈಲ್ ಇದ್ದರೂ ಎಷ್ಟು ಜನರೊಡನೆ ನಾವು ಸಂಪರ್ಕ ಇಟ್ಟುಕೊಂಡು ಮಾತನಾಡುತ್ತೇವೆ? ಹಾಗೆ ಮಾಡುವುದು ಕಡಿಮೆ. ಇದಕ್ಕೆ ನಾವೇ ಕೊಟ್ಟುಕೊಳ್ಳುವ ಕಾರಣ, 'ಏನೂ ಕೆಲಸವಿಲ್ಲದೇ ಏನೆಂದು ಮಾತನಾಡುವುದು?' 'ಮಾತನಾಡಲು ಏನಾದರೂ ಕಾರಣ ಬೇಕಲ್ಲವೇ' ಎಂದೋ ಅಥವಾ 'ಹಾಗೆ ವಿರಾಮವಾಗಿ ಮಾತನಾಡಲು ನಮಗೆ ಸಮಯವೇ ಇಲ್ಲ' ಎಂದೋ ಸಮಾಧಾನದ ಕಾರಣ ಹೇಳಿಬಿಡುತ್ತೇವೆ. ಹಾಗೆ ಹೇಳುತ್ತಿರುವುದು ಸರಿಯಲ್ಲ ಎಂಬುದು ನಮಗೇ ಗೊತ್ತಿರುತ್ತದೆ. ಹೇಗೆ ಹಲವರ ಸಂಪರ್ಕ ಸಂಖ್ಯೆ ನಮಗೆ ಉಪಯೋಗವಿಲ್ಲದೇ ಕಾಂಟೆಕ್ಟ್ ಲೀಸ್ಟ್‌ನಲ್ಲಿ ಉಳಿದುಬಿಡುತ್ತದೆ.

ಈಗಂತೂ ಅಂತರ್ಜಾಲ ಸಂಪರ್ಕ ಸಾಮಾನ್ಯವಾಗಿ ಎಲ್ಲ ಮೊಬೈಲ್‌ಗಳಲ್ಲೂ ಲಭ್ಯವಿದೆ. ಈ ಹಿಂದೆ ಇತರೆ ದೇಶಗಳಲ್ಲಿ ವಾಸಿಸುತ್ತಿದ್ದವರೊಡನೆ ಮಾತನಾಡಲು ಸಾಧ್ಯವೇ ಆಗುತ್ತಿರಲಿಲ್ಲ. ಇಂದು ಹಾಗಿಲ್ಲ. ಬಹಳಷ್ಟು ದೇಶಗಳಲ್ಲಿರುವವರೊಡನೆ ನಾವು ಕ್ಷಣಾರ್ಧದಲ್ಲಿ ಸಂಪರ್ಕ ಸಾಧಿಸಿ ಮಾತನಾಡಬಹುದು. (ಅಲ್ಲಿಗೂ ನಮ್ಮ ದೇಶಕ್ಕೂ ಇರುವ ಸಮಯದ ಅಂತರ ಅರಿತು ಮಾತನಾಡಬಹುದು). ಅಂದರೆ ವ್ಯಕ್ತಿ ವಿಶ್ವದಲ್ಲಿ ಎಲ್ಲೇ ಇದ್ದರೂ ಅವರೊಡನೆ ಮಾತನಾಡಬಹುದು. ಆದರೆ ಹಾಗೆ ಎಷ್ಟು ಜನರೊಡನೆ ಮಾತನಾಡುತ್ತೇವೆ. ಮತ್ತದೇ ಕಾರಣ 'ವಿಷಯ ಬೇಕು ಹಾಗೂ ನಮಗೆ ಪುರುಸೊತ್ತು ಬೇಕು' ಎಂಬುದು.

ಇಂಗ್ಲಿಷಿನಲ್ಲಿ contact ಹಾಗೂ connection ಎಂಬ ಎರಡು ಪದಗಳಿವೆ. ಇವೆರಡೂ ಬೇರೆ ಬೇರೆ ಅರ್ಥ ನೀಡುತ್ತದೆ. ಆದರೆ ನಮ್ಮ ಕನ್ನಡದ ಪದಕೋಶದಲ್ಲಿ ಇವೆರಡಕ್ಕೂ 'ಸಂಪರ್ಕ' ಎಂಬ ಅರ್ಥವೇ ಬರುತ್ತದೆ. ಹಾಗಾದರೆ ಎರಡು ವಾಕ್ಯಗಳೇಕೆ? ಎಂಬ ಪ್ರಶ್ನೆ ಬರುತ್ತದೆ. ಆದರೆ ನಿಜಾರ್ಥದಲ್ಲಿ ಇವೆರಡೂ ಬೇರೆ ಬೇರೆ ಅರ್ಥವನ್ನು ನೀಡುತ್ತವೆ. ನಮ್ಮ ಮೊಬೈಲ್‌ನಲ್ಲಿ ಇರುವ ಸಂಖ್ಯೆ ಕೇವಲ ಕಾಂಟಾಕ್ಟ್‌ನ ಗುಂಪಿಗೆ ಸೇರುವಂತಹುದು. ಆದರೆ ನಾವು ಎಷ್ಟು ಜನರೊಡನೆ ಆಗಾಗ್ಗೆ ಮಾತನಾಡಿ ನಮ್ಮ ಸಂಬಂಧವನ್ನು ಉಳಿಸಿಕೊಂಡಿದ್ದೇವೋ ಅದನ್ನು ಬಾಂಧವ್ಯ ಅಥವಾ ಕನೆಕ್ಷನ್ ಎಂದು ಪರಿಗಣಿಸಬಹುದು.

> “ ಈಗಂತೂ ಅಂತರ್ಜಾಲ ಸಂಪರ್ಕ ಸಾಮಾನ್ಯವಾಗಿ ಎಲ್ಲ ಮೊಬೈಲ್‌ಗಳಲ್ಲೂ ಲಭ್ಯವಿದೆ. ಈ ಹಿಂದೆ ಇತರೆ ದೇಶಗಳಲ್ಲಿ ವಾಸಿಸುತ್ತಿದ್ದವರೊಡನೆ ಮಾತನಾಡಲು ಸಾಧ್ಯವೇ ಆಗುತ್ತಿರಲಿಲ್ಲ. ಇಂದು ಹಾಗಿಲ್ಲ. ಬಹಳಷ್ಟು ದೇಶಗಳಲ್ಲಿರುವವರೊಡನೆ ನಾವು ಕ್ಷಣಾರ್ಧದಲ್ಲಿ ಸಂಪರ್ಕ ಸಾಧಿಸಿ ಮಾತನಾಡಬಹುದು. ಅಂದರೆ ವ್ಯಕ್ತಿ ವಿಶ್ವದಲ್ಲಿ ಎಲ್ಲೇ ಇದ್ದರೂ ಅವರೊಡನೆ ಮಾತನಾಡಬಹುದು. ಆದರೆ ಹಾಗೆ ಎಷ್ಟು ಜನರೊಡನೆ ಮಾತನಾಡುತ್ತೇವೆ. ಮತ್ತದೇ ಕಾರಣ 'ವಿಷಯ ಬೇಕು ಹಾಗೂ ನಮಗೆ ಪುರುಸೊತ್ತು ಬೇಕು' ಎಂಬುದು.

ಇತ್ತೀಚೆಗೆ ಓದಿದ ಒಂದು ಪ್ರಸಂಗವನ್ನು ಈ ಸಮಯದಲ್ಲಿ ನೆನಪಿಸಿಕೊಳ್ಳಬಹುದು. ಇದರಲ್ಲಿ ಒಬ್ಬ ಭಾರತದ ಪ್ರಬುದ್ಧ ಸನ್ಯಾಸಿಯೊಡನೆ ಒಬ್ಬ ನ್ಯೂಯಾರ್ಕ್‌ನ ಪತ್ರಕರ್ತ ನಡೆಸಿದ ಸಂಭಾಷಣೆ ಇದೆ. ಈ ಸನ್ಯಾಸಿ ಹಲವು ದಿನಗಳ ಕಾಲ ಒಂದು ಸ್ಥಳದಲ್ಲಿ ಪ್ರವಚನ ನೀಡಿರುತ್ತಾರೆ. ಅದನ್ನು ಆ ಪತ್ರಕರ್ತ ಪ್ರತಿದಿನ ಹಾಜರಾಗಿ ಕೇಳಿರುತ್ತಾನೆ. ಅವನು ಹಿಂದಿನ ದಿನ ಸ್ವಾಮೀಜಿ ಮಾಡಿದ್ದ ಉಪನ್ಯಾಸ/ಪ್ರವಚನದಲ್ಲಿ ಈ ಎರಡು ಇಂಗ್ಲಿಷ್ ಪದ contact ಮತ್ತು connection ಗಳನ್ನು ಬಹಳ ಸಲ ಬಳಸಿದ್ದನ್ನು ಕೇಳಿರುತ್ತಾನೆ. ಅದರೆ ಇವೆರಡೂ ಒಂದೇ ಅರ್ಥದ ಪದಗಳಾಗಿರುವುದರಿಂದ ಅರ್ಥ ಹೇಗೆ ವ್ಯತ್ಯಾಸವಾಗುತ್ತದೆ? ಎಂಬ ಗೊಂದಲದಲ್ಲಿರುತ್ತಾನೆ ಹಾಗೂ ಈ ಬಗ್ಗೆ ಪ್ರಶ್ನೆ ಕೇಳಿ ಆ ಸ್ವಾಮೀಜಿಯವರನ್ನು ಗೊಂದಲದಲ್ಲಿ ಸಿಲುಕಿಸಬಹುದು ಎಂಬುದು ಅವನ ಭಾವನೆಯಾಗಿರುತ್ತದೆ. ಈ ಬಗ್ಗೆ ಅವನು ಅವರನ್ನು ಕೇಳುತ್ತಾನೆ. 'ಈ ಎರಡು ಪದಗಳನ್ನು ನೀವು ಬಹಳವಾಗಿ ಬಳಸಿದ್ದೀರಿ. ಆದರೆ ಎರಡರ ಅರ್ಥವೂ ಒಂದೇ ಆಗಿರುವುದು ನನ್ನಲ್ಲಿ ಗೊಂದಲ ಸೃಷ್ಟಿಸಿದೆ. ಅದಕ್ಕೆ ವಿವರಣೆ ನೀಡಿ' ಎನ್ನುತ್ತಾನೆ. ಅವನಿಗೆ ನೇರವಾಗಿ ಉತ್ತರ ನೀಡದ ಸ್ವಾಮೀಜಿ, ಕೆಲವು ಪ್ರಶ್ನೆಗಳನ್ನು ಅವನಿಗೆ ಕೇಳಲು ಪ್ರಾರಂಭಿಸುತ್ತಾರೆ.

ನೀನು ನ್ಯೂಯಾರ್ಕ್‌ನಿಂದ ಬಂದವನಲ್ಲವೇ? ನಿಮ್ಮ ಮನೆಯಲ್ಲಿ ಯಾರ್‍ಯಾರು ಇದ್ದಾರೆ? ಎಂದು ಕೇಳುತ್ತಾರೆ. ಆ ಪತ್ರಕರ್ತ ಮನದಲ್ಲಿ ಸ್ವಲ್ಪ ಸಿಟ್ಟಾಗುತ್ತಾನೆ. ನನ್ನ ಪ್ರಶ್ನೆಗೆ ಉತ್ತರಿಸಲು ಗೊತ್ತಿಲ್ಲದೆ ಅವರು ನನ್ನ ಮನಸ್ಸು ಬೇರೆಡೆ ಸೆಳೆಯಲು ಇಂತಹ ಪ್ರಶ್ನೆ ಕೇಳುತ್ತಿದ್ದಾರೆ ಎಂದುಕೊಳ್ಳುತ್ತಾನೆ. ಆದರೂ ಉತ್ತರಿಸೋಣ ಎಂದು 'ಹೌದು ನಾನು ನ್ಯೂಯಾರ್ಕ್‌ನಿಂದ ಬಂದಿದ್ದೇನೆ, ನನ್ನ ತಾಯಿ ಮೃತರಾಗಿದ್ದಾರೆ, ತಂದೆ ಇದ್ದಾರೆ. ಮೂವರು ಸಹೋದರರು ಹಾಗೂ ಒಬ್ಬಳು ಸಹೋದರಿ ಇದ್ದಾಳೆ' ಎಂದು ಉತ್ತರಿಸುತ್ತಾನೆ. ಆಗ ಸನ್ಯಾಸಿ ಮುಗುಳು ನಗೆ ಬೀರುತ್ತಾ 'ಹಾಗಾದರೆ ನೀನು ನಿನ್ನ ತಂದೆಯೊಡನೆ ಮಾತನಾಡುತ್ತಿರುತ್ತೀಯಾ?' ಎಂದು ಪ್ರಶ್ನಿಸುತ್ತಾರೆ. ಪತ್ರಕರ್ತ ಸ್ವಲ್ಪ ಗಲಿಬಿಲಿಗೊಳ್ಳುತ್ತಾನೆ. ಕ್ಷಣ ಕಾಲ ಮೌನ ವಹಿಸುತ್ತಾನೆ. ನಂತರ ಸ್ವಾಮೀಜಿ 'ಹಾಗಾದರೆ ನೀನು ನಿನ್ನ ತಂದೆಯವರೊಡನೆ ಕೊನೆಯದಾಗಿ ಯಾವಾಗ ಮಾತನ್ನಾಡಿದೆ?' ಎಂದು ಕೇಳುತ್ತಾರೆ. ಆಗ ಆತ 'ಬಹುಶಃ ಒಂದು ತಿಂಗಳ ಹಿಂದೆ' ಎನ್ನುತ್ತಾನೆ. 'ನೀನು ಹಾಗೂ ನಿನ್ನ ಸಹೋದರ, ಸಹೋದರಿಯರು ಆಗಾಗ್ಗೆ ಭೇಟಿಯಾಗುತ್ತಿರುತ್ತೀರಾ? ನೀನು ಅವರನ್ನೆಲ್ಲಾ ಯಾವಾಗ ಭೇಟಿಯಾಗಿದ್ದೆ?' ಎಂಬುದು ಸನ್ಯಾಸಿಯ ಮತ್ತೊಂದು ಪ್ರಶ್ನೆ. ಈ ಪ್ರಶ್ನೆ ಅವನಲ್ಲಿ ಸಣ್ಣ ನಡುಕ ತರುತ್ತದೆ. ಅದಕ್ಕೆ ಉತ್ತರವಾಗಿ 'ನಾವು ಈ ಹಿಂದೆ, ಅಂದರೆ ಎರಡು ವರ್ಷಗಳ ಹಿಂದೆ ಒಂದು ಸಮಾರಂಭದಲ್ಲಿ ಸೇರಿದ್ದೆವು' ಎನ್ನುತ್ತಾನೆ. ಸನ್ಯಾಸಿ ಬಿಡದೆ ಪ್ರಶ್ನೆ ಮುಂದುವರೆಸುತ್ತಾನೆ. 'ಆಗ ನೀವೆಲ್ಲಾ ಎಷ್ಟು ಸಮಯ ಒಟ್ಟಾಗಿದ್ದೀರಿ?' 'ಮೂರು ದಿನ' ಎಂಬ ಉತ್ತರ ಬರುತ್ತದೆ. 'ಆಗ ನೀನು ನಿನ್ನ ತಂದೆಯವರೊಡನೆ ಎಷ್ಟು ಸಮಯ ಕಳೆದೆ? ಅವರ ಪಕ್ಕದಲ್ಲಿ ಎಷ್ಟು ಸಮಯ ಕುಳಿತಿದ್ದೆ? ಆಗ ನೀನು ಅವರೊಡನೆ ಉಪಹಾರ ಸೇವಿಸಿದೆಯಾ? ಅವರು ಹೇಗಿದ್ದಾರೆ ಎಂದು ಕೇಳಿದೆಯಾ? ತಾಯಿಯ ನಿಧನದ ನಂತರ ಅವರು ಸಮಯ ಹೇಗೆ ಕಳೆಯುತ್ತಿದ್ದಾರೆ ಎಂದು ಕೇಳಿದೆಯಾ?' ಎಂದೆಲ್ಲಾ ಪ್ರಶ್ನೆ ಕೇಳಿದಾಗ ಆ ಪತ್ರಕರ್ತನ ಕಣ್ಣಲ್ಲಿ ನೀರು ಜಿನುಗುತ್ತದೆ. ಆಗ ಸನ್ಯಾಸಿ ಅವನನ್ನು ಸಮಾಧಾನಪಡಿಸುತ್ತಾ, 'ನಾನು ಕೇಳಿದ ಪ್ರಶ್ನೆಗಳಿಂದ ನಿನಗೆ ತೊಂದರೆಯಾಯಿತೇನೋ? ಆದರೆ ನೀನು ಕೇಳಿದ ಪ್ರಶ್ನೆಗೆ ಇದೇ ಉತ್ತರ. ಸಂಪರ್ಕ ಹಾಗೂ ಸಂಬಂಧ ಬೇರೆ ಬೇರೆಯಾದದ್ದು. ಪದಕೋಶದಲ್ಲಿ ಇದಕ್ಕೆ ವಿವರಣೆ ಇಲ್ಲ. ಆದರೆ ಸಂಬಂಧ ಬೇರೆಯದು, ಸಂಪರ್ಕ ಬೇರೆಯದು. ನೀನು ನಿನ್ನ ತಂದೆಯವರೊಡನೆ ಸಂಪರ್ಕದಲ್ಲಿರುವೆ, ಆದರೆ ಸಂಬಂಧ ಹೊಂದಿಲ್ಲ. ಸಂಬಂಧ ಹೃದಯದ ಜೊತೆಗೆ ಇರುವಂತಹುದು' ಎಂದು ಸನ್ಯಾಸಿ ಹೇಳುತ್ತಾರೆ. ಆಗ ಪತ್ರಕರ್ತನಿಗೆ ಆ ಪದಗಳ ಗೂಢಾರ್ಥ ತಿಳಿಯುತ್ತದೆ.

ಇಂದು ಇದೇ ಪ್ರಶ್ನೆಗಳನ್ನು ನಾವು ನಮಗೇ ಹಾಕಿಕೊಂಡು ಉತ್ತರ ಕಂಡುಕೊಳ್ಳಲು ಪ್ರಯತ್ನಿಸಬೇಕು. ನಮ್ಮ ಮೊಬೈಲ್‌ನಲ್ಲಿರುವುದು ಕೇವಲ ಸಂಪರ್ಕ ಸಂಖ್ಯೆಗಳು. ಆದರೆ ಅದರಲ್ಲಿ ಎಷ್ಟು ಜನರೊಡನೆ ನಾವು ಸಂಬಂಧ ಹೊಂದಿದ್ದೇವೆ? ಎಂಬುದನ್ನು ನಾವೇ ಕೇಳಿಕೊಳ್ಳಬೇಕು. ಇಂದು ಸಂಪರ್ಕ ಮಾಡಲು ಸಾಹಸಪಡಬೇಕಾಗಿಲ್ಲ. ನಮ್ಮ ಕೈಯ್ಯಲ್ಲೇ ಮೊಬೈಲ್ ಇದೆ. ಕ್ಷಣಾರ್ಧದಲ್ಲಿ ಕರೆ ಮಾಡಬಹುದು. ಆದರೆ ಹಾಗೆ ಎಷ್ಟು ಜನರೊಡನೆ ನಾವು ಸಂಬಂಧ ಹೊಂದಿದ್ದೇವೆ? ಅದು ತಂದೆ–ತಾಯಿ, ಸಹೋದರ–ಸಹೋದರಿಯರು, ನೆಂಟರು–ಬಂಧುಗಳು, ಸ್ನೇಹಿತರು ಯಾರೇ ಆಗಿರಬಹುದು. ಅವರೊಡನೆ ಆಗಾಗ್ಗೆ ಮಾತಾಡುತ್ತಾ ಕಷ್ಟ=ಸುಖ ಕೇಳುತ್ತಿದ್ದರೆ ಸಂಬಂಧ ಉಳಿಯುತ್ತದೆ. ಇಲ್ಲದಿದ್ದರೆ ಅವರ ಸಂಪರ್ಕ ಸಂಖ್ಯೆ ಮಾತ್ರ ನಮ್ಮ ಮೊಬೈಲ್‌ನಲ್ಲಿ ಉಳಿಯುತ್ತದೆ. ಕೊನೆಗೊಮ್ಮೆ ನಾವು ಸಾಕಷ್ಟು ಸಂಪರ್ಕಿಸದ ಅವರು ಮೃತರಾದದ್ದು ಗೊತ್ತಾದಾಗ ಮೊಬೈಲ್‌ನಿಂದ ಅವರ ಹೆಸರನ್ನು ಭಾರವಾದ ಹೃದಯದಿಂದ ತೆಗೆದುಹಾಕಬೇಕಾಗುತ್ತದೆ. ಸಂಪರ್ಕಕ್ಕಿಂತ ಸಂಬಂಧ ಮುಖ್ಯ ಎಂಬುದರ ಅರಿವು ನಮಗಿರುವುದು ಒಳ್ಳೆಯದು.

# ಜೆಡಿಎಸ್–ಬಿಜೆಪಿ ಮೈತ್ರಿಕೂಟಕ್ಕೆ 25 ಸ್ಥಾನ

## ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷರೂ ಆದ ಶಾಸಕ ಜಿಟಿಡಿ ವಿಶ್ವಾಸ



ಮೈಸೂರು, ಸೆ.8(ಎಂಟಿವೈ)– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮಣಿಸಲೇಬೇಕೆಂಬ ಉದ್ದೇಶದಿಂದ ಜೆಡಿಎಸ್, ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಂಡಿದ್ದು, ಈ ಬಾರಿ ರಾಜ್ಯದಲ್ಲಿ 25 ಸ್ಥಾನ ಜೆಡಿಎಸ್–ಬಿಜೆಪಿ ಮೈತ್ರಿಕೂಟಕ್ಕೆ ಲಭಿಸಲಿದೆ ಎಂದು ಶಾಸಕ, ಜೆಡಿಎಸ್ ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡ ವಿಶ್ವಾಸ ವ್ಯಕ್ತಪಡಿಸಿದರು.

ಮೈಸೂರಲ್ಲಿ ಶುಕ್ರವಾರ ಪತ್ರಿಕಾ ಹೇಳಿಕೆ ನೀಡಿರುವ ಅವರು, ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಸೋಲಿಸಲು ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳಲು ಜೆಡಿಎಸ್ ಶಾಸಕರು ಒಲವು ತೋರಿದ್ದಾರೆ. ಕಾಂಗ್ರೆಸ್‌ನೊಂದಿಗೆ ಕೈ ಜೋಡಿಸಲು ಪಕ್ಷದ ಶಾಸಕರು ನಿರಾಕರಿಸಿರುವುದರಿಂದ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳಲಾಗುತ್ತಿದೆ ಎಂದರು.

ಈ ಹಿಂದೆ ಕಾಂಗ್ರೆಸ್ ನಾಯಕರು, ಸಮ್ಮಿಶ್ರ ಸರ್ಕಾರದಲ್ಲಿ ಹೆಚ್.ಡಿ.ಕುಮಾರಸ್ವಾಮಿ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದ್ದರು. ಇದೀಗ ಕಾಂಗ್ರೆಸ್‌ನವರ ಹೊಡೆತವನ್ನು ತಡೆಯಲು ಆಗುತ್ತಿಲ್ಲ. ಹೀಗಾಗಿ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಜತೆಗೆ ಸೇರಿ ಒಟ್ಟಾಗಿ ಎದುರಿಸೋಣ ಎನ್ನುವುದು ಎಲ್ಲರ ಒಮ್ಮತದ ಅಭಿಪ್ರಾಯವಾಗಿದೆ. ಶಾಸಕರ ಈ ಅಭಿಪ್ರಾಯಕ್ಕೆ ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಸ್ಪಂದಿಸಿ, ಒಳ್ಳೆಯ ತೀರ್ಮಾನ ಕೈಗೊಳ್ಳುತ್ತೇನೆ ಎಂದು ನಮಗೆ ಧೈರ್ಯ ತುಂಬಿದ್ದಾರೆ ಎಂದು ತಿಳಿಸಿದರು.

ಮಾಜಿ ಸಿಎಂ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಬಿಜೆಪಿಯೊಂದಿಗೆ ಕೈ ಜೋಡಿಸಲು ಯಾವುದೇ ಅಸಮಾಧಾನವಿಲ್ಲ. ಮೈತ್ರಿಯಾದರೆ ಯಾವ ಕ್ಷೇತ್ರದಲ್ಲಿ ಬಿಜೆಪಿಗೆ ಸಮರ್ಥ ಅಭ್ಯರ್ಥಿ ಇದ್ದಾರೆ. ಜೆಡಿಎಸ್‌ಗೆ ಸಮರ್ಥ ಅಭ್ಯರ್ಥಿ ಎಲ್ಲಿದ್ದಾರೆಂದು ನೋಡಬೇಕು. ಈ ಮಾನದಂಡ ಅನುಸರಿಸಿ ಮುಂದಿನ ತೀರ್ಮಾನ ಮಾಡುತ್ತೇವೆ ಎಂದರು.

ಸೆ.6ರಂದು ನಡೆದ ಸಭೆಯಲ್ಲಿ ಜೆಡಿಎಸ್‌ನ 19 ಶಾಸಕರು, 7 ಜನ ವಿಧಾನ ಪರಿಷತ್ ಸದಸ್ಯರು, ಮಾಜಿ ಶಾಸಕರು, ಮುಖಂಡರು ಪಾಲ್ಗೊಂಡಿದ್ದರು. ಸಭೆಯಲ್ಲಿ ಹಾಜರಿದ್ದ ಬಹುತೇಕ ಶಾಸಕರು, ವಿಧಾನ ಪರಿಷತ್ ಸದಸ್ಯರು ಕಾಂಗ್ರೆಸ್ ಪಕ್ಷದ ದಬ್ಬಾಳಿಕೆಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದರು ಎಂದು ಹೇಳಿದರು

ಪಿರಿಯಾಪಟ್ಟಣದಲ್ಲಿ ಪಕ್ಷದ ಕಾರ್ಯಕರ್ತರ ಮೇಲೆ ಸುಳ್ಳು ದೂರು ದಾಖಲಿಸಲಾಗುತ್ತಿದೆ. ಅಧಿಕಾರಿಗಳನ್ನು ಬೇಕಾಬಿಟ್ಟಿ ವರ್ಗಾವಣೆ ಮಾಡುತ್ತಿದ್ದಾರೆ. ಜೆಡಿಎಸ್ ಕಾರ್ಯಕರ್ತರಿಗೆ ರಕ್ಷಣೆ ಸಿಗುತ್ತಿಲ್ಲ. ಗ್ಯಾರಂಟಿ ಹಿನ್ನೆಲೆಯಲ್ಲಿ ಅಭಿವೃದ್ಧಿ ಕೆಲಸಗಳು ಕುಂಠಿತವಾಗುತ್ತಿವೆ. ಗುತ್ತಿಗೆದಾರರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಜನರು ದಂಗೆ ಏಳುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಹೀಗಾಗಿ, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಸೋಲಿಸಬೇಕು. ಇದೇ ಕಾರಣಕ್ಕೆ ಬಿಜೆಪಿಯೊಂದಿಗೆ ಮೈತ್ರಿ ಮಾಡಿಕೊಳ್ಳುವಂತೆ ಎಲ್ಲರೂ ಒಲವು ವ್ಯಕ್ತಪಡಿಸಿದ್ದರು ಎಂದು ತಿಳಿಸಿದರು

ನಾನು ಕಾರ್ಯಕರ್ತರ, ಮುಖಂಡರ ಅಭಿಪ್ರಾಯದ ಪರ ಇರುತ್ತೇನೆ. ಈ ಹಿಂದೆ ಬಿಜೆಪಿ ಜತೆಗೆ ಹೋಗಿದ್ದಕ್ಕೆ ಹುಣಸೂರು ಕ್ಷೇತ್ರದಲ್ಲಿ ನನ್ನನ್ನೇ ಜನ ಸೋಲಿಸಿದ್ದರು. ಆದರೆ, ಈಗ ಪರಿಸ್ಥಿತಿ ಬದಲಾಗಿದೆ. ಈಗ ಯಾರೂ ಬಿಜೆಪಿ ಜತೆಗೆ ಹೋಗುವುದನ್ನು ವಿರೋಧ ಮಾಡುತ್ತಿಲ್ಲ ಎಂದು ಸ್ಪಷ್ಟಪಡಿಸಿದರಲ್ಲದೆ, ಸೆ.10ರಂದು ಜೆಡಿಎಸ್ ಸಮಾವೇಶದ ಮೂಲಕ ಶಕ್ತಿ ಪ್ರದರ್ಶನ ಮಾಡಲಾಗುವುದು. ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯಲಿರುವ ಈ ಸಮಾವೇಶಕ್ಕೆ ಹೆಚ್ಚಿನ ಜನರನ್ನು ಸೇರಿಸಲಾಗುವುದು ಎಂದರು.

ಜಿ–20 ಶೃಂಗಸಭೆ

## ಚೀನಾ ನಿಯೋಗದ ವಿರುದ್ಧ ಟಿಬೆಟಿಯನ್ನರ ಪ್ರತಿಭಟನೆ!

ನವದೆಹಲಿ, ಸೆ.8– ರಾಷ್ಟ್ರ ರಾಜಧಾನಿಯಲ್ಲಿ ನಡೆಯಲಿರುವ ಜಿ–20 ಶೃಂಗಸಭೆಯಲ್ಲಿ ಪಾಲ್ಗೊಳ್ಳುತ್ತಿರುವ ಚೀನಾದ ನಿಯೋಗದ ವಿರುದ್ಧ ಟಿಬೆಟಿಯನ್ನರು ಪ್ರತಿಭಟನೆ ನಡೆಸಿದರು.

ಉತ್ತರ ದಿಲ್ಲಿಯ ಮಜ್ನು ಕಾ ತಿಲಾದಲ್ಲಿ ಜಮಾಯಿಸಿದ ಪ್ರತಿಭಟನಾಕಾರರು, ಚೀನಾ ಸರ್ಕಾರದ ವಿರುದ್ಧ ಬ್ಯಾನರ್ ಹಿಡಿದು, ಘೋಷಣೆ ಕೂಗಿ ಪ್ರತಿಭಟನೆ ನಡೆಸಿದರು. ನಂತರ ಅಲ್ಲಿಗೆ ಆಗಮಿಸಿದ ಪೊಲೀಸರು ಪ್ರತಿಭಟನಾಕಾರರನ್ನು ಚದುರಿಸಿದರು. ಪ್ರತಿಭಟನೆ ಶಾಂತಿಯುತವಾಗಿತ್ತು ಎಂದು ಪೊಲೀಸರು ತಿಳಿಸಿದರು.

ಟಿಬೆಟ್‌ನಲ್ಲಿ ಚೀನಾದ ಕಾನೂನುಬಾಹಿರ ಆಕ್ರಮಣದ ವಿರುದ್ಧ ಟಿಬೆಟ್ ಯುವ ಕಾಂಗ್ರೆಸ್ ಅಧ್ಯಕ್ಷ ಗೊನ್ಪೊ ಧುಂಡಪ್ ಗುರುವಾರ ಪ್ರತಿಭಟನೆ ಘೋಷಿಸಿದ್ದರು. ಟಿಬೆಟ್‌ನಲ್ಲಿನ ಕಠಿಣ ಪರಿಸ್ಥಿತಿಯ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿ, ಶುಕ್ರವಾರ ಚೀನಾ ನಿಯೋಗ ಬಂದಾಗ ಪ್ರತಿಭಟನೆ ನಡೆಸುವುದಾಗಿ ಹೇಳಿದ್ದರು. ಆದ್ದರಿಂದ ಮುಂಚಿತವಾಗಿ ಬ್ಯಾರಿಕೇಡ್ ಹಾಕಿ, ಪೊಲೀಸರು ಅರೆಸೇನಾ ಪಡೆಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯ ಸಿಬ್ಬಂದಿಯನ್ನು ನಿಯೋಜಿಸಲಾಗಿತ್ತು ಎಂದು ಪೊಲೀಸ್ ಅಧಿಕಾರಿ ವಿವರಿಸಿದರು.


*Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com*

# ಪ್ರಯಾಣಿಕರ ಸೋಗಿನಲ್ಲಿ ಅಮಾಯಕ ಆಟೋ ಚಾಲಕರ ಸುಲಿಗೆ; ಇಬ್ಬರ ಬಂಧನ, ನಾಲ್ವರಿಗೆ ಶೋಧ





ಮೈಸೂರು, ಸೆ.8– ಪ್ರಯಾಣಿಕರ ಸೋಗಿನಲ್ಲಿ ಆಟೋ ಚಾಲಕರನ್ನು ಸುಲಿಗೆ ಮಾಡುತ್ತಿದ್ದ ಇಬ್ಬರು ಖದೀಮರನ್ನು ಮೈಸೂರು ದಕ್ಷಿಣ ಗ್ರಾಮಾಂತರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಮೈಸೂರು ತಾಲೂಕು ಕೆಂಪಿಸಿದ್ದನ ಹುಂಡಿ ಗ್ರಾಮದ ಉಮೇಶ್(23) ಹಾಗೂ ಮಂಚಳ್ಳಿಹುಂಡಿಯ ಶಿವಾನಂದ(21) ಬಂಧಿತರು. ಇವರಿಂದ ಆಟೋ ಹಾಗೂ ಬೈಕ್ ವಶಪಡಿಸಿಕೊಳ್ಳಲಾಗಿದೆ. ಇವರೊಂದಿಗೆ ದುಷ್ಕೃತ್ಯದಲ್ಲಿ ಭಾಗಿಯಾಗಿದ್ದ ಇನ್ನೂ ನಾಲ್ವರು ಆರೋಪಿಗಳು ತಲೆ ಮರೆಸಿಕೊಂಡಿದ್ದು, ಅವರ ಬಂಧನಕ್ಕೆ ಪೊಲೀಸರು ಕಾರ್ಯಾಚರಣೆ ಮುಂದುವರೆಸಿದ್ದಾರೆ.

ಆರೋಪಿಗಳು 5 ಸುಲಿಗೆ, 2 ದೇವಸ್ಥಾನದಲ್ಲಿ ಕಳವು ಹಾಗೂ ಮೂರು ಬೈಕ್‌ಗಳನ್ನು ಕಳವು ಮಾಡಿರುವುದು ಪೊಲೀಸರ ತನಿಖೆಯಲ್ಲಿ ತಿಳಿದು ಬಂದಿದೆ. ಈ ಮೂಲಕ ನಂಜನಗೂಡು ಗ್ರಾಮಾಂತರ ಠಾಣೆಯ 3, ಮೈಸೂರು ದಕ್ಷಿಣ ಗ್ರಾಮಾಂತರ ಠಾಣೆ ಹಾಗೂ ವರುಣ ಠಾಣೆಯ ತಲಾ 2, ಬಿಳಿಗೆರೆ, ಜಯಪುರ ಹಾಗೂ ಹುಲ್ಲಹಳ್ಳಿ ಠಾಣೆಯ ತಲಾ 1 ಪ್ರಕರಣ ಪತ್ತೆಯಾದಂತಾಗಿದೆ.

ಈ ಖದೀಮರು ಪ್ರಯಾಣಿಕರ ಸೋಗಿನಲ್ಲಿ ಆಟೋ ಬಾಡಿಗೆಗೆ ಪಡೆದು ನಿರ್ಜನ ಪ್ರದೇಶಕ್ಕೆ ಕರೆದೊಯ್ಯುತ್ತಿದ್ದರು. ಅಲ್ಲಿ ಅಮಾಯಕ ಆಟೋ ಚಾಲಕರ ಮೇಲೆ ಹಲ್ಲೆ ನಡೆಸಿ, ಹಣ, ಮೊಬೈಲ್ ಸುಲಿಗೆ ಮಾಡಿ, ಅದೇ ಆಟೋದಲ್ಲಿ ಪರಾರಿಯಾಗುತ್ತಿದ್ದರು ಎಂದು ತಿಳಿದುಬಂದಿದೆ.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೀಮಾ ಲಾಟ್ಕರ್, ಎಎಸ್ಪಿ ನಂದಿನಿ, ಡಿವೈಎಸ್ಪಿ ಡಾ.ಸುಮಿತ್ ಮಾರ್ಗದರ್ಶನದಲ್ಲಿ ಗ್ರಾಮಾಂತರ ಠಾಣೆ ಇನ್‌ಸ್ಪೆಕ್ಟರ್ ಶೇಖರ್, ಸಬ್ ಇನ್‌ಸ್ಪೆಕ್ಟರ್‌ಗಳಾದ ಚಂದ್ರ, ಬಸಪ್ಪ ಕೊರವಿ, ಸಿಬ್ಬಂದಿ ಮಹೇಶ್, ಪ್ರಸನ್ನ ಕುಮಾರ್, ಸುನಿಲ್ ಕುಮಾರ್, ಪವನ್ ಕುಮಾರ್, ವಿಶ್ವನಾಥ್, ಗೀತಾ, ಸಂಜಯ್ ಹಾಗೂ ಕೃಷ್ಣಮೂರ್ತಿ ಕಾರ್ಯಾಚರಣೆ ನಡೆಸಿ, ಇಬ್ಬರನ್ನು ಬಂಧಿಸಿದ್ದಾರೆ.

# ಶಾಲೆ ಜಾಗ ಒತ್ತುವರಿ ತೆರವು



ಮೈಸೂರು, ಸೆ.8(ಎಸ್‌ಬಿಡಿ)– ಶಾಲೆ ನಿರ್ಮಾಣಕ್ಕೆ ಮಂಜೂರಾಗಿದ್ದ ಜಮೀನು ಒತ್ತುವರಿಯನ್ನು ಮೈಸೂರು ತಾಲೂಕು ಆಡಳಿತ ಶುಕ್ರವಾರ ತೆರವುಗೊಳಿಸಿದೆ.

ಮೈಸೂರು ತಾಲೂಕು, ಜಯಪುರ ಹೋಬಳಿ, ಉದ್ಬೂರು ಗ್ರಾಮದ ಸರ್ವೆ ನಂ.467ರ 4 ಎಕರೆ 32 ಗುಂಟೆ ಜಮೀನನ್ನು ಪ್ರೌಢಶಾಲೆ ಹಾಗೂ ಅಂಗನವಾಡಿ ಕೇಂದ್ರಕ್ಕಾಗಿ ಮಂಜೂರು ಮಾಡಲಾಗಿತ್ತು. ಆದರೆ ಸುಮಾರು 30 ಗುಂಟೆ ಜಮೀನನ್ನು ಖಾಸಗಿ ವ್ಯಕ್ತಿಗಳು ಅತಿಕ್ರಮಿಸಿಕೊಂಡಿದ್ದರು. ಈ ಬಗ್ಗೆ ದೂರು ಬಂದ ಹಿನ್ನೆಲೆಯಲ್ಲಿ ಮೈಸೂರು ತಹಶೀಲ್ದಾರ್ ಜಿ.ಎನ್.ಗಿರೀಶ್, ತಾಲೂಕು ಭೂಮಾಪಕರಿಂದ ಮಾಹಿತಿ ಪಡೆದು ಒತ್ತುವರಿಯಾಗಿರುವುದನ್ನು ಖಚಿತಪಡಿಸಿಕೊಂಡ ನಂತರ ತೆರವು ಕಾರ್ಯಾಚರಣೆಗೆ ಆದೇಶಿಸಿದ್ದರು.


> ಯಾರೂ ಸರ್ಕಾರಿ ಜಮೀನು, ಕೆರೆ, ಕಟ್ಟೆಗಳನ್ನು ಒತ್ತುವರಿ ಮಾಡಿಕೊಳ್ಳಬೇಡಿ. ಏನಾದರೂ ಒತ್ತುವರಿ ಅಥವಾ ಅತಿಕ್ರಮಣ ಮಾಡಿದ್ದರೆ ಸ್ವಯಂ ಪ್ರೇರಣೆಯಿಂದ ತೆರವು ಮಾಡಿ ಎಂದು ಸಾರ್ವಜನಿಕರಲ್ಲಿ ಮನವಿ ಮಾಡುತ್ತೇನೆ.
> –ಜಿ.ಎನ್.ಗಿರೀಶ್, ಮೈಸೂರು ತಹಶೀಲ್ದಾರ್

ಈ ಹಿನ್ನೆಲೆಯಲ್ಲಿ ತಹಶೀಲ್ದಾರ್ ನೇತೃತ್ವದಲ್ಲಿ ತಾಲೂಕು ಅಧಿಕಾರಿಗಳ ತಂಡ ಶುಕ್ರವಾರ ಕಾರ್ಯಾಚರಣೆ ನಡೆಸಿ, ಒತ್ತುವರಿ ಜಾಗದಲ್ಲಿ ನಿರ್ಮಾಣವಾಗಿದ್ದ ಅನಧಿಕೃತ ಕಟ್ಟಡಗಳನ್ನು ಜೆಸಿಬಿ ಮೂಲಕ ನೆಲಸಮಗೊಳಿಸಿತು. ಬಳಿಕ ಸದರಿ ಭೂಮಿಯನ್ನು ವಶಕ್ಕೆ ಪಡೆದು, ಪ್ರೌಢಶಾಲೆ ಮುಖ್ಯ ಶಿಕ್ಷಕರಿಗೆ ಹಸ್ತಾಂತರಿಸಲಾಯಿತು. ಈ ವೇಳೆ ಜಯಪುರ ಠಾಣೆ ಪೊಲೀಸರು ಸೂಕ್ತ ಬಂದೋಬಸ್ತ್ ಮಾಡಿದ್ದರು.

# ಬಿಜೆಪಿ–ಜೆಡಿಎಸ್ ಮೈತ್ರಿಗೆ ಅಮಿತ್ ಶಾ ಒಪ್ಪಿಗೆ

## 4 ಲೋಕಸಭಾ ಕ್ಷೇತ್ರಗಳಲ್ಲಿ 'ತೆನೆ' ಪಕ್ಷ ಸ್ಪರ್ಧೆ: ಬಿ.ಎಸ್.ಯಡಿಯೂರಪ್ಪ

ಬೆಂಗಳೂರು, ಸೆ.8– ಬಿಜೆಪಿ–ಜೆಡಿಎಸ್ ಮೈತ್ರಿ ಪಕ್ಕಾ ಆದಂತಾಗಿದೆ, ಗೃಹ ಸಚಿವ ಅಮಿತ್ ಶಾ ಮೈತ್ರಿಗೆ ಒಪ್ಪಿಕೊಂಡಿದ್ದಾರೆ ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹೇಳಿದ್ದಾರೆ. ಇಂದು ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳ ಮುಂದೆ ಈ ವಿಷಯವನ್ನು ಬಹಿರಂಗವಾಗಿ ಒಪ್ಪಿಕೊಂಡಿರುವ ಬಿಎಸ್ ವೈ, ಬಿಜೆಪಿ–ಜೆಡಿಎಸ್ ಮೈತ್ರಿ ಮಾಡಿಕೊಂಡರೆ ಮುಂಬರುವ ಲೋಕಸಭೆ ಚುನಾವಣೆಗೆ ಸಹಕಾರಿಯಾಗಲಿದೆ, ಅಮಿತ್ ಶಾ ಅವರು 4 ಸ್ಥಾನಗಳನ್ನು ಜೆಡಿಎಸ್‌ಗೆ ಬಿಟ್ಟುಕೊಡಲು ಒಪ್ಪಿಕೊಂಡಿದ್ದಾರೆ. ಎರಡೂ ಪಕ್ಷಗಳು ಮೈತ್ರಿ ಮಾಡಿಕೊಂಡರೆ ಬಿಜೆಪಿ ಪಕ್ಷಕ್ಕೆ ಹೆಚ್ಚು ಶಕ್ತಿ ಬರಲಿದೆ ಎಂದಿದ್ದಾರೆ.



ರಾಜ್ಯದಲ್ಲಿ 4 ಲೋಕಸಭಾ ಸ್ಥಾನಗಳಲ್ಲಿ ಜೆಡಿಎಸ್ ಜೊತೆ ಮೈತ್ರಿ ಮಾಡಿಕೊಳ್ಳುವ ಬಗ್ಗೆ ಈಗಾಗಲೇ ವರಿಷ್ಠರು ನಮಗೆ ದೆಹಲಿಯಿಂದ ಸೂಚನೆ ನೀಡಿದ್ದಾರೆ. ಉಭಯ ಪಕ್ಷಗಳ ವರಿಷ್ಠರ ಮಧ್ಯೆ ಮಾತುಕತೆ ನಡೆದಿದೆ ಎಂದಿದ್ದಾರೆ.

**ಮೈತ್ರಿ ಬಹಳ ಮುಖ್ಯ:** ರಾಜ್ಯದಲ್ಲಿ ಜನ ವಿರೋಧಿ ಕಾಂಗ್ರೆಸ್ ಸರ್ಕಾರ ವಿರುದ್ಧ ಪ್ರಬಲವಾಗಿ ಹೋರಾಡಲು ವಿಪಕ್ಷಗಳ ಮಧ್ಯೆ ಮೈತ್ರಿ ಬಹಳ ಮುಖ್ಯವಾಗಿದೆ. ನಾವು ಒಗ್ಗಟ್ಟಾಗಿ ಸರ್ಕಾರ ವಿರುದ್ಧ ಹೋರಾಡುತ್ತೇವೆ ಎಂದು ಮಾಧ್ಯಮ ಪ್ರತಿನಿಧಿಗಳ ಮುಂದೆ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಪ್ರತಿಕ್ರಿಯೆ ನೀಡಿದ್ದಾರೆ. ರಾಜ್ಯದ 28 ಲೋಕಸಭಾ ಕ್ಷೇತ್ರಗಳ ಪೈಕಿ 20 ಸ್ಥಾನಗಳ ಮೇಲೆ ಕಣ್ಣಿಟ್ಟಿರುವ ಕಾಂಗ್ರೆಸ್‌ಗೆ ಮುಂದಿನ ಚುನಾವಣೆಯಲ್ಲಿ ಮಾಸ್ಟರ್ ಸ್ಟ್ರೋಕ್ ಕೊಡಲು ನಿರ್ಧರಿಸಿರುವ ಜೆಡಿಎಸ್ ವರಿಷ್ಠ ದೇವೇಗೌಡರು ಈಗಾಗಲೇ ಲೋಕಸಭೆ ಚುನಾವಣೆ ಸಂಬಂಧ ದೆಹಲಿಯಲ್ಲಿ ಬಿಜೆಪಿ ವರಿಷ್ಠ ನಾಯಕರನ್ನು ಭೇಟಿ ಮಾಡಿದ್ದಾರೆ ಎಂಬ ಮಾತುಗಳು ಕೇಳಿಬರುತ್ತಿದೆ.

ಇತ್ತೀಚೆಗೆ ಪ್ರಜ್ವಲ್ ರೇವಣ್ಣ ಅವರ ಕೋರ್ಟ್ ಕೇಸ್‌ಗೆ ಸಂಬಂಧಿಸಿದಂತೆ ವಕೀಲರ ಭೇಟಿಗೆ ದೆಹಲಿಗೆ ತೆರಳಿದ್ದ ದೇವೇಗೌಡರು ಇದೇ ವೇಳೆ ರಹಸ್ಯವಾಗಿ ಅಮಿತ್ ಶಾ ಜೊತೆ ಚರ್ಚೆ ನಡೆಸಿದ್ದಾರೆ. ಉಭಯ ನಾಯಕರ ನಡುವೆ ಮೈತ್ರಿ ಬಗ್ಗೆ ಅನೌಪಚಾರಿಕವಾಗಿ ಚರ್ಚೆ ನಡೆದಿದೆ ಎಂದು ತಿಳಿದು ಬಂದಿದೆ.

# ಇಂದು 'ಸಡನ್ನಾಗ್ ಸತ್ತೋದ್ರೆ..' ನಾಟಕ

ಮೈಸೂರು, ಸೆ.8(ಜಿಎ)–ಬೆಂಗಳೂರಿನ ಸೈಡ್‌ವಿಂಗ್ ತಂಡದ ವತಿಯಿಂದ ಸೆ.9ರಂದು ಎಂ.ಎಂ.ಶೈಲೇಶ್ ಕುಮಾರ್ ರಚಿಸಿ, ನಿರ್ದೇಶಿಸಿರುವ ಸಡನ್ನಾಗ್ ಸತ್ತೋದ್ರೆ.? ಹಾಸ್ಯ ನಾಟಕ ಪ್ರದರ್ಶನ ಏರ್ಪಡಿಸಲಾಗಿದೆ ಎಂದು ತಂಡದ ಸದಸ್ಯ ಭರತ್ ನಾ ಜಗನ್ನಾಥ್ ತಿಳಿಸಿದರು. ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಂದು ಸಂಜೆ 6.30ಕ್ಕೆ ಕಲಾಮಂದಿರ ಆವರಣದಲ್ಲಿರುವ ಕಿರು ರಂಗಮಂದಿರದಲ್ಲಿ ಪ್ರದರ್ಶನವಿದ್ದು, ನಾಟಕದ ಮೂಲಕ ನಕ್ಕು ನಲಿಸುತ್ತಲೇ ಸಾವು–ಬದುಕಿನ ಬಗ್ಗೆ ತಿಳಿ ಹೇಳುವ ನಾಟಕವಾಗಿದೆ. ಎಂದರು. ಸುದ್ದಿಗೋಷ್ಠಿಯಲ್ಲಿ ತಂಡದ ಸದಸ್ಯ ಪ್ರಶಾಂತ್ ಉಪಸ್ಥಿತರಿದ್ದರು.

# ಸೆ.13ಕ್ಕೆ ಮೈಸೂರಲ್ಲಿ ಕುರುಕ್ಷೇತ್ರ ನಾಟಕ

ಮೈಸೂರು, ಸೆ.8(ಜಿಎ)– ಮೈಸೂರಿನ ಶ್ರೀ ಚಾಮುಂಡೇಶ್ವರಿ ಸನ್ನಿಧಿ ಕಲಾವಿದರ ಸಂಘ ಆಯೋಜಿಸಿರುವ ರಾಜ್ಯಮಟ್ಟದ ಸ್ಪರ್ಧಾತ್ಮಕ ಪೌರಾಣಿಕ ನಾಟಕೋತ್ಸವದಲ್ಲಿ ಶ್ರೀ ನುಗ್ಗೆಳ್ಳಮ್ಮ ಕಲಾ ಸಂಘದ ವತಿಯಿಂದ ಕುರುಕ್ಷೇತ್ರ ಅಥವಾ ಧರ್ಮರಾಜ್ಯ ಸ್ಥಾಪನೆ ನಾಟಕವನ್ನು ಸೆ.13ರಂದು ನಗರದ ಪುರಭವನದಲ್ಲಿ ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಚಂದ್ರೇಗೌಡ ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಈ ವಿಷಯ ತಿಳಿಸಿ, ಅಂದು ಬೆಳಗ್ಗೆ 11 ಗಂಟೆಯಿಂದ ಸಂಜೆ 7.30ರವರೆಗೂ ಮೈಸೂರು ಪುರಭವನದಲ್ಲಿ ನಾಟಕ ಪ್ರದರ್ಶನ ನಡೆಯಲಿದ್ದು, ಮೈಸೂರಿನಲ್ಲಿ ತಂಡದ ವತಿಯಿಂದ ಇದು ಎರಡನೇ ಪ್ರದರ್ಶನವಾಗಿದೆ ಎಂದರು. ಸುದ್ದಿಗೋಷ್ಠಿಯಲ್ಲಿ ನಾಟಕ ನಿರ್ದೇಶಕಿ ಸವಿತಾ ಕುಮಾರ್ ಮತ್ತು ಸಹ ನಿರ್ದೇಶಕ ಬಿ.ಆರ್.ಬಸವರಾಜು ಉಪಸ್ಥಿತರಿದ್ದರು.

## ಲೋಕಸಭೆ, ಸ್ಥಳೀಯ ಸಂಸ್ಥೆಗಳ ಚುನಾವಣೆ ಹಿನ್ನೆಲೆ

# ಕಾಂಗ್ರೆಸ್ ಸಂಘಟನೆ ಸಂಬಂಧ ಪದಾಧಿಕಾರಿಗಳ ಸಭೆ

- ಕಾಂಗ್ರೆಸ್ ಗ್ಯಾರಂಟಿ ಮನೆ ಮನೆಗೆ ಮುಟ್ಟಿಸಲು ತೀರ್ಮಾನ
- ಪಕ್ಷ ಸಂಘಟನೆ ನಿಟ್ಟಿನಲ್ಲಿ ಕಾರ್ಯಕರ್ತರ ಉತ್ತೇಜಿಸಲು ನಿರ್ಧಾರ



ಮೈಸೂರು, ಸೆ.8(ಎಂಟಿವೈ)– ಮುಂಬರುವ ಲೋಕಸಭಾ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ವಿವಿಧ ಘಟಕಗಳ ಪದಾಧಿಕಾರಿಗಳು ಸಭೆ ನಡೆಸಿ, ಪಕ್ಷ ಸಂಘಟನೆಯೊಂದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಜಾರಿಗೆ ತಂದಿರುವ ಯೋಜನೆಗಳನ್ನು ಮನೆ ಮನೆಗೆ ತಲುಪಿಸಲು ನಿರ್ಣಯ ಕೈಗೊಂಡರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಶುಕ್ರವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಪಕ್ಷದ ವಿವಿಧ ಘಟಕಗಳ ಮುಖಂಡರು ಪಾಲ್ಗೊಂಡಿದ್ದರು.

ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಡಾ.ಬಿ.ಜೆ. ವಿಜಯ್ ಕುಮಾರ್ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದು, ಚುನಾವಣಾ ಪೂರ್ವದಲ್ಲಿ ನೀಡಿದ್ದ ಐದು ಗ್ಯಾರಂಟಿ ಯೋಜನೆಗಳಲ್ಲಿ 4 ಯೋಜನೆಗಳನ್ನು ಅಧಿಕಾರಕ್ಕೆ ಬಂದ 100 ದಿನದಲ್ಲೇ ಜಾರಿ ಮಾಡಿದೆ. ಜನಪರ ಆಡಳಿತ, ಬಡಜನರ ಹಿತಕಾಯುವ ಕಾರ್ಯಕ್ರಮ ಜಾರಿಗೊಳಿಸುವ ಮೂಲಕ ನುಡಿದಂತೆ ನಡೆದ ಸರ್ಕಾರ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಜನರು ಸರ್ಕಾರದ ವಿವಿಧ ಯೋಜನೆ ಗಳ ಪ್ರಯೋಜನೆ ಪಡೆಯುವ ಮೂಲಕ ಕಾಂಗ್ರೆಸ್ ಸರ್ಕಾರಕ್ಕೆ ಶುಭ ಕೋರುವುದು ಮಾತ್ರವಲ್ಲದೆ, ಹರಸುತ್ತಿದ್ದಾರೆ. ಈ ಸಂದರ್ಭದಲ್ಲಿ ಮುಂಬರುವ ಲೋಕಸಭಾ ಚುನಾವಣೆ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಕಾಂಗ್ರೆಸ್ ಕಾರ್ಯಕರ್ತರಿಗೆ ಸವಾಲಾಗಿದೆ. ವಿರೋಧ ಪಕ್ಷಗಳು ಈಗಾಗಲೇ ಜನರಿಂದ ತಿರಸ್ಕರಿಸಲ್ಪಟ್ಟಿದ್ದು, ಕಾಂಗ್ರೆಸ್ ಕಾರ್ಯಕರ್ತರು ಪಕ್ಷ ಸಂಘಟನೆಗೆ ಮುಂದಾಗಬೇಕು ಎಂದು ಮನವಿ ಮಾಡಿದರು.

ಪಂಚಾಯತ್‌ರಾಜ್ ಸಂಘಟನೆ, ವೈಯಕ್ತಿಕ ಮತ್ತು ಪಕ್ಷ ಬೆಳವಣಿಗೆಗೆ ಭದ್ರ ಬುನಾದಿ ಹಾಕುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಈ ಸಂಘಟನೆ ಪ್ರತಿ ಮನೆ ಬಾಗಿಲಿಗೆ ತಲುಪಲು ಸುಲಭ ವಿಧಾನವಾಗಿದೆ. ರಾಜೀವ್ ಗಾಂಧಿ ಅವರ ಪರಿಕಲ್ಪನೆಯಲ್ಲಿ ಸ್ಥಾಪನೆಯಾದ ಈ ಸಂಘಟನೆ ಬೂತ್ ಮಟ್ಟದಲ್ಲಿ ಪಕ್ಷ ಕಟ್ಟಲು ನೆರವಾಗುತ್ತದೆ. ಜಿಲ್ಲಾ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯಲ್ಲಿ ಸಕ್ರಿಯವಾಗಿ ಕೆಲಸ ಮಾಡದವರನ್ನು ಸಂಘಟನೆಯಿಂದ ಕೈ ಬಿಡಬೇಕು. ಪಕ್ಷ ಸಂಘಟನೆ ಮಾಡುವುದು ನಮ್ಮ ಮೂಲ ಉದ್ದೇಶ ಎಂದರು.

ಜಿಲ್ಲಾ ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಅಧ್ಯಕ್ಷ ಮಲ್ಲೇಶ್ ಕೋಟೆ ಮಾತನಾಡಿ, ಮಾಜಿ ಸಂಸದ ದಿ. ಆರ್.ಧ್ರುವನಾರಾಯಣ್ ಅವರ ಪಕ್ಷ ಸಂಘಟನೆಯನ್ನು ನೆನೆಯಬೇಕು. ಮುಂಬರುವ ಚುನಾವಣೆಗಳನ್ನು ಸಮರ್ಥವಾಗಿ ಎದುರಿಸಲು ಕಾಂಗ್ರೆಸ್ ಕಾರ್ಯಕರ್ತರು ಪಣ ತೊಡಬೇಕು. ಜನಸಾಮಾನ್ಯರ ಹಿತಕಾಯುವ ಆಡಳಿತ ನೀಡುವುದು ಕಾಂಗ್ರೆಸ್‌ನಿಂದ ಮಾತ್ರ ಸಾಧ್ಯ ಎಂದು ಮತ್ತೊಮ್ಮೆ ಸಾಬೀತಾಗಿದೆ. ರಾಜ್ಯದಲ್ಲಿ ಅಧಿಕಾರ ದಲ್ಲಿದ್ದ ಬಿಜೆಪಿ ಸರ್ಕಾರ ಅಭಿವೃದ್ಧಿಗೆ ಆದ್ಯತೆ ನೀಡದೆ ಕೋಮುವಾದ ಸೃಷ್ಟಿಸಿ, ರಾಜಕೀಯ ಲಾಭ ಮಾಡಿಕೊಳ್ಳುವತ್ತ ಗಮನ ಹರಿಸಿದ ಫಲವಾಗಿ ಇಂದು ಜನರಿಂದ ತಿರಸ್ಕರಿಸಲ್ಪಟ್ಟಿದೆ. ಆದರೂ ವಿರೋಧ ಪಕ್ಷಗಳು ಕಾಂಗ್ರೆಸ್ ಸರ್ಕಾರದ ವಿರುದ್ಧ ಸುಳ್ಳು ಆರೋಪ ಮಾಡುತ್ತಿದ್ದಾರೆ. ಇದಕ್ಕೆ ಪಕ್ಷದ ಕಾರ್ಯಕರ್ತರು ತಳಮಟ್ಟದಿಂದ ಪಕ್ಷ ಸಂಘಟನೆಯೊಂದಿಗೆ ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿರುವ ಕಾರ್ಯಕ್ರಮಗಳ ಬಗ್ಗೆ ಜನರಿಗೆ ಮಾಹಿತಿ ನೀಡಬೇಕು ಎಂದು ಸಲಹೆ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಹಿಳಾ ವಿಭಾಗ, ಕಾರ್ಮಿಕ ವಿಭಾಗ ಕಾರ್ಮಿಕ, ಅಲ್ಪಸಂಖ್ಯಾತ ಘಟಕದ ಪ್ರಮುಖ ಕಾರ್ಯಕಾರಣಿಯನ್ನು ನಡೆಸಿ ಪ್ರಮುಖ ವಿಚಾರಗಳ ಬಗ್ಗೆ ಚರ್ಚೆ ನಡೆಸಿ ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಯಿತು.

# ನಾಳೆ ಮೈಸೂರಿನ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಸಂತರ ಧರ್ಮಸಭೆ



ಮೈಸೂರು, ಸೆ.8(ಜಿಎ)–ಮೈಸೂರಿನ ಶ್ರೀ ಕೃಷ್ಣಧಾಮ ಚಾತುರ್ಮಾಸ್ಯ ಸಮಿತಿ ಮತ್ತು ವಿಶ್ವ ಹಿಂದೂ ಪರಿಷದ್ ಜಿಲ್ಲಾ ಸಮಿತಿ ವತಿಯಿಂದ ಸೆ.10ರಂದು ಬೆಳಗ್ಗೆ 10 ಗಂಟೆಗೆ ಮೈಸೂರು ನಗರದ ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ 'ಸಂತರ ಧರ್ಮಸಭೆ' ಆಯೋಜಿಸಲಾಗಿದೆ ಎಂದು ಶ್ರೀ ಕೃಷ್ಣಧಾಮ ಚಾತುರ್ಮಾಸ್ಯ ಸಮಿತಿ ಅಧ್ಯಕ್ಷ ಎಂ.ಕೆಪುರಾಣಿಕ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರು ಜಿಲ್ಲೆ ಮತ್ತು ಸುತ್ತಮುತ್ತಲಿನ 35ಕ್ಕೂ ಹೆಚ್ಚು ಸಂತ ಮಹನೀಯರು ಧರ್ಮಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ದಿನೇ ದಿನೆ ಹೆಚ್ಚುತಿರುವ ಅಧರ್ಮದ ಚಟುವಟಿಕೆಗಳು, ವೇದೋಪನಿಷತ್, ಭಗವದ್ಗೀತೆ, ಪುರಾಣಗಳ ಬಗ್ಗೆ ಅಗೌರವ, ವಿನಾಕಾರಣ ಪ್ರಾಚೀನ ಸತ್ಪರಂಪರೆಯ ಬಗ್ಗೆ ಅವಹೇಳನಕಾರಿ ನಿಂದನೆ, ಹಿಂದೂ ಧರ್ಮದ ಬಗ್ಗೆ ತಪ್ಪು ಮಾಹಿತಿಗಳ ರವಾನೆ, ಧರ್ಮವಿರೋಧಿ ಕಾನೂನುಗಳ ಬಗ್ಗೆ ಗಂಭೀರವಾಗಿ ಚರ್ಚಿಸುವ ಸಲುವಾಗಿ ಸಂತರ ಧರ್ಮಸಭೆಯನ್ನು ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಗೋಹತ್ಯೆ ನಿಷೇಧ ಮಸೂದೆ ಮತ್ತು ಮತಾಂತರ ನಿಷೇಧ ಕಾಯ್ದೆಯನ್ನು ಮುಂದುವರಿಸುವ ಬಗ್ಗೆ ರಾಜ್ಯ ಸರ್ಕಾರವನ್ನು ಒತ್ತಾಯಿಸುವ ನಿರ್ಣಯ, ಟಿವಿ ಮತ್ತು ಒಟಿಟಿ ಪ್ಲಾಟ್ ಫಾರ್ಮ್‌ಗಳಲ್ಲಿ ಬಿತ್ತರವಾಗುವ ಧಾರವಾಹಿಗಳು, ಜಾಹೀರಾತುಗಳು, ಸಾಕ್ಷ್ಯಚಿತ್ರಗಳು ಮತ್ತು ಇತರ ಕಾರ್ಯಕ್ರಮಗಳಿಗೆ ಸೆನ್ಸಾರ್ ವ್ಯವಸ್ಥೆಯ ಬಗ್ಗೆ, ಕೇಂದ್ರ ಸರ್ಕಾರವನ್ನು ಒತ್ತಾಯಿಸಲಾಗುವುದು ಎಂದು ಅವರು ತಿಳಿಸಿದರು.

ಹಾಗೇ ಸಭೆಯಲ್ಲಿ ಹಿಂದೂ ಹಬ್ಬ ಹರಿದಿನಗಳು ಮತ್ತು ಧಾರ್ಮಿಕತೆ, ಕವಲುದಾರಿಯಲ್ಲಿರುವ ಭಾರತೀಯ ಕುಟುಂಬ ವ್ಯವಸ್ಥೆ, ಭಾರತದಲ್ಲಿ ಹಿಂದೂ ಧರ್ಮ ಮತ್ತು ಸವಾಲುಗಳು, ಬಾಲ ಸಂಸ್ಕಾರ ಮತ್ತು ಹಿಂದೂ ಯುವ ಜನಾಂಗದ ಜಾಗೃತಿ, ಹಿಂದೂ ಧರ್ಮದ ಬಗ್ಗೆ ರಾಜಕೀಯ ಇಚ್ಛಾಶಕ್ತಿ ಮತ್ತು ರಾಷ್ಟ್ರೀಯತೆ, ಹಿಂದೂ ಧರ್ಮದ ಬಗ್ಗೆ ಚರ್ಚಿಸಲಾಗುತ್ತದೆ ಎಂದು ತಿಳಿಸಿದರು.

ಅಂದು ಬೆಳಗ್ಗೆ 10 ಗಂಟೆಯಿಂದ 11 ಗಂಟೆಯವರೆಗೂ ಎಲ್ಲಾ ಸಂತರು ಒಟ್ಟಾಗಿ ಚರ್ಚೆ ನಡೆಸಿ, ನಂತರ 1.30ರವರೆಗೆ ಧರ್ಮಸಭೆ ನಡೆಸುವರು. ಭಜನೆ ಮತ್ತು ಗಾಯನ ಕಾರ್ಯಕ್ರಮವನ್ನೂ ಏರ್ಪಡಿಸಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಸಮಿತಿಯ ಕಾರ್ಯಾಧ್ಯಕ್ಷ ರವಿ ಶಾಸ್ತ್ರೀ, ವಿಶ್ವ ಹಿಂದೂ ಪರಿಷದ್ ಉಪಾಧ್ಯಕ್ಷ ಜಗದೀಶ್ ಹೆಬ್ಬಾರ್, ಕಾರ್ಯದರ್ಶಿ ಮಧುಶಂಕರ್ ಮತ್ತು ವಿಭಾಗ ಸಂಚಾಲಕಿ ಸವಿತ ಘಾಟ್ಕೆ ಉಪಸ್ಥಿತರಿದ್ದರು.

# ನಾಳೆ ನಾಡ ಕುಸ್ತಿ ಪಂದ್ಯಾವಳಿ




ಮೈಸೂರು, ಸೆ8(ಜಿಎ)–ಮೈಸೂರು ಜಿಲ್ಲಾ ಕುಸ್ತಿ ಸಂಘದ ಉದ್ಘಾಟನೆಯ ಅಂಗವಾಗಿ 30 ಜೊತೆ ನಾಡ ಕುಸ್ತಿ ಪಂದ್ಯಾವಳಿಯನ್ನು ಸೆ.10ರಂದು ಆಯೋಜಿಸಲಾಗಿದೆ ಎಂದು ಸಂಘದ ಅಧ್ಯಕ್ಷ ಪೈಲ್ವಾನ್ ಚಂದ್ರಶೇಖರ್ ಇಟ್ಟಿಗೆಗೂಡು ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಿನಲ್ಲಿ ಕುಸ್ತಿ ಚಟುವಟಿಕೆಗಳು ಕ್ಷೀಣಿಸುತ್ತಿದ್ದು, ಅದನ್ನು ಸಧೃಡಗೊಳಿಸುವ ನಿಟ್ಟಿನಲ್ಲಿ ಮೈಸೂರು ಜಿಲ್ಲಾ ಕುಸ್ತಿ ಸಂಘ ಆರಂಭಿಸಿದ್ದು, ಅದರ ಉದ್ಘಾಟನೆಯ ಅಂಗವಾಗಿ 30 ಜೊತೆ ನಾಡ ಕುಸ್ತಿ ಪಂದ್ಯಾವಳಿ ಏರ್ಪಡಿಸಲಾಗಿದೆ. ಇದು ಮುಂಬರುವ ದಸರಾ ಕುಸ್ತಿ ಪಂದ್ಯಾವಳಿಗೆ ಸಹಕಾರಿಯಾಗಲಿದೆ ಎಂದರು.

ಅಂದು ಮಧ್ಯಾಹ್ನ 3 ಗಂಟೆಗೆ ದಸರಾ ವಸ್ತುಪ್ರದರ್ಶನದ ಬಳಿಯಿರುವ ಡಿ.ದೇವರಾಜ ಅರಸು ವಿವಿದೋದ್ದೇಶ ಕ್ರೀಡಾಂಗಣದಲ್ಲಿ ಪಂದ್ಯಾವಳಿಗಳು ನಡೆಯಲಿದ್ದು, ಮಾರ್ಪಿಟ್ ಕುಸ್ತಿ, 15 ನಿಮಿಷ ಮತ್ತು 20 ನಿಮಿಷದ ಕುಸ್ತಿ ಪಂದ್ಯಗಳು ಆಕರ್ಷಿಸಲಿವೆ. ಪಂದ್ಯಾವಳಿಯಲ್ಲಿ ಭಾಗವಹಿಸುವ ಎಲ್ಲಾ ಕುಸ್ತಿಪಟುಗಳಿಗೆ 5 ಗ್ರಾಂ ಬೆಳ್ಳಿ ನಾಣ್ಯ ಮತ್ತು ವಿಜೇತರಿಗೆ ನಗದು ಬಹುಮಾನ ನೀಡಲಾಗುತ್ತದೆ. ಕೋಟೆ ಆಂಜನೇಯ ದೇವಾಲಯದಿಂದ ಪೈಲ್ವಾನ್ ಅಜಿಜ್ ಪಠಾಣ್ ಕ್ರೀಡಾ ಜ್ಯೋತಿ ತರಲಿದ್ದಾರೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಸಂಘದ ವೆಂಕಟೇಶ್, ಚೋಟು ರಫೀಕ್, ರವಿಶಂಕರ್ ಪಾಲಹಳ್ಳಿ, ರಾಣಿ ವೆಂಕಟೇಶ್ ಮತ್ತು ಪ್ರಸನ್ನ ರಾಜ್ ಉಪಸ್ಥಿತರಿದ್ದರು.

# ಮೈಸೂರು ಜಿಲ್ಲಾಸ್ಪತ್ರೆಗೆ ಹರೀಶ್‌ಗೌಡ ಭೇಟಿ; ಪರಿಶೀಲನೆ

## ವೈದ್ಯರು, ಸಿಬ್ಬಂದಿಗಳಿಂದ ಮಾಹಿತಿ ಸಂಗ್ರಹ



ಮೈಸೂರು, ಸೆ8(ಎಸ್‌ಬಿಡಿ)– ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿರುವ ಜಿಲ್ಲಾ ಆಸ್ಪತ್ರೆಗೆ ಶಾಸಕ ಕೆ.ಹರೀಶ್ ಗೌಡ ಶುಕ್ರವಾರ ದಿಢೀರ್ ಭೇಟಿ ನೀಡಿ, ಪರಿಶೀಲಿಸಿದರು.

ಮೊದಲಿಗೆ ಆಸ್ಪತ್ರೆಯ ಒಳರೋಗಿ ಹಾಗೂ ಹೊರರೋಗಿಗಳ ನೋಂದಣಿ ವಿವರ ಪಡೆದು ಪರಿಶೀಲನೆ ಮಾಡಿದರು. ಬಳಿಕ ಒಂದು ಸುತ್ತು ಹಾಕಿ ರೋಗಿಗಳೊಂದಿಗೆ ಮಾತನಾಡಿ, ಆಸ್ಪತ್ರೆ ವ್ಯವಸ್ಥೆ ಬಗ್ಗೆ ತಿಳಿದುಕೊಂಡರು. ನಂತರ ಪುರುಷ ಮತ್ತು ಮಹಿಳಾ ವಾರ್ಡ್, ಲ್ಯಾಬ್‌ಗೆ ಭೇಟಿ ನೀಡಿದರಲ್ಲದೆ, ಪುರುಷರ ಶೌಚಾಲಯಗಳ ಸ್ವಚ್ಛತೆ ನಿರ್ವಹಣೆಯನ್ನೂ ಪರಿಶೀಲಿಸಿದರು. ಅಲ್ಲದೆ ಆ ವೇಳೆ ಕಾರ್ಯ ನಿರ್ವಹಿಸುತ್ತಿದ್ದ ವೈದ್ಯರ ಸಮಸ್ಯೆಗಳನ್ನು ಆಲಿಸಿ, ಅವಶ್ಯವಿರುವ ಯಂತ್ರೋಪಕರಣ ಹಾಗೂ ಇನ್ನಿತರ ಸೌಲಭ್ಯಗಳ ವಿವರ ಪಡೆದರು.

ಈ ವೇಳೆ ಮಾತನಾಡಿದ ಶಾಸಕರು, ಮೈಸೂರು ಮಾತ್ರವಲ್ಲದೆ ಸುತ್ತಮುತ್ತಲ ಜಿಲ್ಲೆಗಳಿಂದಲೂ ಬಡ ರೋಗಿಗಳು ಇಲ್ಲಿಗೆ ಬರುತ್ತಾರೆ. ಅವರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದಂತೆ ಸೂಕ್ತ ಸಮಯದಲ್ಲಿ ಚಿಕಿತ್ಸೆ ನೀಡಬೇಕು. ಆಸ್ಪತ್ರೆಯಲ್ಲಿನ ನ್ಯೂನತೆಗಳನ್ನು ಸರಿಪಡಿಸಿಕೊಂಡು ಉತ್ತಮ ಸೇವೆ ಒದಗಿಸಬೇಕು ಎಂದು ಜಿಲ್ಲಾ ಸರ್ಜನ್ ಡಾ.ಅಮರ್‌ನಾಥ್‌ಗೆ ಸೂಚನೆ ನೀಡಿದರು.

**ಸಿಎಂಗೆ ದೂರಿದ್ದರು:** ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ ನಡೆದ ಕೆಡಿಪಿ ಸಭೆಯಲ್ಲಿ ಶಾಸಕ ಕೆ.ಹರೀಶ್ ಗೌಡರು, ಜಿಲ್ಲಾ ಆಸ್ಪತ್ರೆ ಅವ್ಯವಸ್ಥೆ ಬಗ್ಗೆ ಪ್ರಸ್ತಾಪಿಸಿದ್ದರು. ಜಿಲ್ಲಾ ಆಸ್ಪತ್ರೆಯಲ್ಲಿ ವೈದ್ಯರುಗಳೇ ಇರುವುದಿಲ್ಲ. ಸಿಬ್ಬಂದಿಯೂ ಸರಿಯಾಗಿ ಕಾರ್ಯ ನಿರ್ವಹಿಸುವುದಿಲ್ಲ. ಔಷಧಿಗೆ ಖಾಸಗಿ ಮೆಡಿಕಲ್‌ಗಳಿಗೆ ಶಿಫಾರಸ್ಸು ಮಾಡುತ್ತಾರೆ ಎಂದು ಸಾರ್ವಜನಿಕರು ದೂರುತ್ತಿರುವುದಾಗಿ ಮುಖ್ಯಮಂತ್ರಿಗಳಿಗೆ ತಿಳಿಸಿದ್ದರು. ಆಗ ಸೂಕ್ತ ರೀತಿಯಲ್ಲಿ ಸೇವೆ ನೀಡುವಂತೆ ಸಿಎಂ ಸೂಚನೆ ನೀಡಿದ್ದರು.

# ಹಳೆ ವಿದ್ಯಾರ್ಥಿಗಳಿಂದ ವಸಂತೋತ್ಸವ



ಮೈಸೂರು, ಸೆ.8(ಜಿಎ)–ವಸಂತ ಮಹಲ್ (ಡಯಟ್)ನ ಹಳೆ ವಿದ್ಯಾರ್ಥಿಗಳ ಸಂಘದ ವತಿಯಿಂದ ಸೆ.10 ರಂದು ವಸಂತೋತ್ಸವ ಮತ್ತು ಗುರು ನಮನ–ಸ್ನೇಹ ಸಿಂಚನ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಘದ ಪ್ರಧಾನ ಸಂಚಾಲಕ ಪ್ರದೀಪ್ ತಿಳಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಸಂತ ಮಹಲಿನ ಟಿಸಿಹೆಚ್ (2000ರಿಂದ2003 ರವರೆಗಿನ ಬ್ಯಾಚ್) ನಿರ್ಗಮಿತ ವಿದ್ಯಾರ್ಥಿಗಳ ಸಂಘದ ವತಿಯಿಂದ ದ್ವಿದಶಮಾನೋತ್ಸವದ ಸಂಭ್ರಮವನ್ನು ಅಂದು ಬೆಳಗ್ಗೆ 9.30ಕ್ಕೆ ವಸಂತ ಮಹಲ್‌ನ ನೃಪತುಂಗ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ ಎಂದರು.

ಅಂದಿನ ಕಾರ್ಯಕ್ರಮದಲ್ಲಿ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ 40 ಅಧ್ಯಾಪಕರು ಮತ್ತು ಪ್ರಾಂಶುಪಾಲರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಈಶ್ವರ್ ಭಟ್, ರಾಮಪ್ಪ, ಶಾರದಮ್ಮ ಮತ್ತು ಗಂಗಾಧರ ಗೌಡ ಅವರು ಘನ ಉಪಸ್ಥಿತಿ ವಹಿಸಲಿದ್ದು, ಅಧ್ಯಕ್ಷತೆಯನ್ನು ಪ್ರಾಂಶುಪಾಲರು ಹಾಗೂ ಪದನಿಮಿತ್ತ ಉಪ ನಿರ್ದೇಶಕರಾದ ಸಿ.ಆರ್.ನಾಗರಾಜಯ್ಯ ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಸಂಘದ ಸಂತೋಷ್, ಪವನ್, ಮಹೇಶ್ ಮತ್ತು ಎಸ್.ದೊರೆಸ್ವಾಮಿ ಉಪಸ್ಥಿತರಿದ್ದರು.

# ಇಂದು ಬೃಹತ್ ರಾಷ್ಟ್ರೀಯ ಲೋಕ್ ಅದಾಲತ್

## 13,315 ಪ್ರಕರಣ ಇತ್ಯರ್ಥ ಸಂಭವ



ಮೈಸೂರು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಜಿ.ಎಸ್.ಸಂಗ್ರೇಶಿ ಅವರು(ಮಧ್ಯ) ಸುದ್ದಿಗೋಷ್ಠಿ ನಡೆಸಿದರು. ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್, ವಕೀಲರ ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ, ಕಾರ್ಯದರ್ಶಿ ಎಸ್.ಉಮೇಶ್ ಹಾಗೂ ಉಪಾಧ್ಯಕ್ಷ ಪುಟ್ಟಸಿದ್ದೇಗೌಡ ಚಿತ್ರದಲ್ಲಿದ್ದಾರೆ.

ಮೈಸೂರು, ಸೆ.8(ಎಸ್‌ಬಿಡಿ)– ಪ್ರಸಕ್ತ ವರ್ಷದ ಮೂರನೇ ಬೃಹತ್ ರಾಷ್ಟ್ರೀಯ ಲೋಕ್ ಅದಾಲತ್ ಶನಿವಾರ(ಸೆ.9) ನಡೆಯಲಿದ್ದು, ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳುವಂತೆ ಮೈಸೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರೂ ಆದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಎಸ್.ಸಂಗ್ರೇಶಿ ತಿಳಿಸಿದರು.

ಮೈಸೂರಿನ ಮಳಲವಾಡಿ ನ್ಯಾಯಾಲಯ ಸಂಕೀರ್ಣದ ವಿಡಿಯೋ ಕಾನ್ಫರೆನ್ಸ್ ಹಾಲ್‌ನಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ಕಾನೂನಿನ ಪ್ರಕಾರ ರಾಜೀ ಮೂಲಕ ಇತ್ಯರ್ಥಪಡಿಸಿಕೊಳ್ಳುವುದರಿಂದ ಸಮಾಜದಲ್ಲಿ ಶಾಂತಿ ನೆಲೆಸುವುದರ ಜೊತೆಗೆ ವೈಯುಕ್ತಿಕವಾಗಿಯೂ ಸಾಕಷ್ಟು ಪ್ರಯೋಜನವಾಗಲಿದೆ ಎಂದು ಹೇಳಿದರು.

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಮೈಸೂರು ಸೇರಿದಂತೆ ರಾಜ್ಯದ ಎಲ್ಲಾ ನ್ಯಾಯಾಲಯಗಳಲ್ಲಿ ಶನಿವಾರ ಲೋಕ್ ಅದಾಲತ್ ನಡೆಸಲಾಗುತ್ತಿದೆ. ವ್ಯಾಜ್ಯಪೂರ್ವ ಪ್ರಕರಣಗಳು ಸೇರಿದಂತೆ ಕಾನೂನು ಪ್ರಕಾರ ರಾಜಿಯಾಗಬಹುದಾದ ಬಾಕಿ ಪ್ರಕರಣಗಳನ್ನು ಇತ್ಯರ್ಥಪಡಿಸುವುದು ಮುಖ್ಯ ಉದ್ದೇಶವಾಗಿದೆ ಎಂದರು.

**13,315 ಪ್ರಕರಣ ಗುರುತು:** ಮೈಸೂರು ನಗರ ಹಾಗೂ ತಾಲೂಕುಗಳ ನ್ಯಾಯಾಲಯಗಳಲ್ಲಿ 55,770 ಸಿವಿಲ್ ಹಾಗೂ 59,220 ಕ್ರಿಮಿನಲ್ ಪ್ರಕರಣ ಸೇರಿದಂತೆ ಒಟ್ಟು 1,14,990 ಪ್ರಕರಣಗಳ ವಿಚಾರಣೆ ಬಾಕಿಯಿದೆ. ಇದರಲ್ಲಿ 21,584 ರಾಜಿಯಾಗಬಹುದಾದ ಪ್ರಕರಣಗಳಾಗಿವೆ. ಈ ಪೈಕಿ 604 ಮೋಟಾರು ವಾಹನ ಅಪಘಾತ, 494 ಕ್ರಿಮಿನಲ್ ಪ್ರಕರಣ, ಚೆಕ್‌ಬೌನ್ಸ್(138 ಎನ್‌ಐ ಆಕ್ಟ್) 4,718( ಒಟ್ಟು 22,649 ಪ್ರಕರಣಗಳಿವೆ), 6,681 ಸಿವಿಲ್ ಹಾಗೂ ಇತರೆ ಕ್ರಿಮಿನಲ್ ಪ್ರಕರಣ ಹಾಗೂ 818 ನ್ಯಾಯಾಲಯಗಳಲ್ಲಿ ದಾಖಲಾಗದ ವ್ಯಾಜ್ಯ ಪೂರ್ವ ಪ್ರಕರಣ ಸೇರಿ ಒಟ್ಟು 13,315 ಪ್ರಕರಣಗಳನ್ನು ರಾಜೀ ಸಾಧ್ಯತೆ ಇರುವ ಪ್ರಕರಣಗಳೆಂದು ಗುರುತಿಸಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಬಿ.ಜಿ.ದಿನೇಶ್ ಮಾತನಾಡಿ, ಹಿಂದಿನ ಲೋಕ್ ಅದಾಲತ್‌ನಲ್ಲಿ 4 ಸಾವಿರ ಪ್ರಕರಣಗಳನ್ನು ಇತ್ಯರ್ಥಗೊಳಿಸುವ ಗುರಿ ಹೊಂದಲಾಗಿತ್ತು. ಆದರೆ ವಕೀಲರು ಸೇರಿದಂತೆ ಎಲ್ಲರ ಸಹಕಾರದಿಂದ 5,582 ಪ್ರಕರಣಗಳನ್ನು ಇತ್ಯರ್ಥಪಡಿಸಲಾಯಿತು. ಸರ್ಕಾರ, ಸಂಚಾರ ನಿಯಮ ಉಲ್ಲಂಘನೆ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50ರಷ್ಟು ರಿಯಾಯ್ತಿ ನೀಡಿದ್ದರಿಂದ ಅದಾಲತ್‌ನಲ್ಲಿ ಸುಮಾರು 2 ಲಕ್ಷ ಪ್ರಕರಣಗಳ ವಿಲೇವಾರಿ ಆಯಿತು. ಈ ಬಾರಿ ಅದಾಲತ್‌ನಲ್ಲೂ ಹಿಂದಿಗಿಂತ ಹೆಚ್ಚು ಪ್ರಕರಣ ಇತ್ಯರ್ಥಪಡಿಸುವ ವಿಶ್ವಾಸವಿದೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಮೈಸೂರು ವಕೀಲರ ಸಂಘದ ಅಧ್ಯಕ್ಷ ಎಂ.ಮಹದೇವಸ್ವಾಮಿ, ಉಪಾಧ್ಯಕ್ಷ ಪುಟ್ಟಸಿದ್ದೇಗೌಡ ಹಾಗೂ ಕಾರ್ಯದರ್ಶಿ ಎಸ್.ಉಮೇಶ್ ಹಾಜರಿದ್ದರು.

## ಲೋಕ್ ಅದಾಲತ್ ಪ್ರಯೋಜನಗಳೇನು?

ಲೋಕ್ ಅದಾಲತ್‌ನಲ್ಲಿ ರಾಜಿಯಾಗುವ ಪ್ರಕರಣಗಳಲ್ಲಿ ಮಾಡಿದ ಆದೇಶ/ಅವಾರ್ಡ್, ನ್ಯಾಯಾಲಯಗಳಲ್ಲಿ ಇತ್ಯರ್ಥಪಡಿಸಿದ ಪ್ರಕರಣದಲ್ಲಿನ ಆದೇಶದಷ್ಟೇ ಮಹತ್ವದ್ದಾಗಿರುತ್ತದೆ. ವ್ಯಾಜ್ಯವನ್ನು ಅತ್ಯಂತ ಕಡಿಮೆ ಖರ್ಚಿನಲ್ಲಿ ಅಲ್ಲದೆ ಶೀಘ್ರವಾಗಿ ಇತ್ಯರ್ಥಪಡಿಸಿಕೊಳ್ಳಬಹುದು. ಸಮಯದ ಉಳಿತಾಯದ ಜೊತೆಗೆ ಕಕ್ಷಿದಾರರ ನಡುವಿನ ಸಂಬಂಧ ಉತ್ತಮವಾಗಿ ಉಳಿಯಲಿದೆ. ಅದಾಲತ್‌ನಲ್ಲಿ ಯಾವುದೇ ಕೋರ್ಟ್ ಶುಲ್ಕ ಪಾವತಿಸುವಂತಿಲ್ಲ. ಅದಾಲತ್‌ನಲ್ಲಿ ಪಕ್ಷಗಾರರು ನೇರವಾಗಿ ಭಾಗವಹಿಸಬಹುದು. ಸಂಧಾನಕಾರರು ಸೂಚಿಸುವ ಪರಿಹಾರ ತೃಪ್ತಿಕರವೆನಿಸಿದ್ದಲ್ಲಿ ಮಾತ್ರ ರಾಜೀ ಮಾಡಿಕೊಳ್ಳಬಹುದು. ಸಿವಿಲ್ ಪ್ರಕರಣಗಳ ಇತ್ಯರ್ಥಕ್ಕೆ ನೀಡಲಾಗುವ ಅವಾರ್ಡ್, ಸಾಮಾನ್ಯ ಡಿಕ್ರಿಯಷ್ಟೇ ಮಹತ್ವ ಹೊಂದಿರುತ್ತದೆ. ರಾಜಿಯಾದಲ್ಲಿ ನ್ಯಾಯಾಲಯ ಶುಲ್ಕವನ್ನು ಸಂಪೂರ್ಣವಾಗಿ ಹಿಂದಿರುಗಿಸಲಾಗುತ್ತದೆ. ಅಲ್ಲದೆ ಲೋಕ್ ಅದಾಲತ್ ಅವಾರ್ಡ್ ವಿರುದ್ಧ ಮೇಲ್ಮನವಿಗೆ ಅವಕಾಶವಿರುವುದಿಲ್ಲ. ಇಷ್ಟೆಲ್ಲಾ ಪ್ರಯೋಜನಗಳಿರುವುದರಿಂದ ಲೋಕ್ ಅದಾಲತ್‌ನಲ್ಲಿ ಭಾಗವಹಿಸಿ, ರಾಜೀ ಮೂಲಕ ಪ್ರಕರಣಗಳ ಇತ್ಯರ್ಥಪಡಿಸಿಕೊಳ್ಳುವುದು ಉತ್ತಮ ಆಯ್ಕೆಯಾಗಿದೆ. ಸಂಬಂಧಪಟ್ಟ ನ್ಯಾಯಾಲಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಥವಾ ಆಯಾ ತಾಲೂಕು ಕಾನೂನು ಸೇವಾ ಸಮಿತಿಗಳಲ್ಲಿ ಅರ್ಜಿ ಸಲ್ಲಿಸಿದರೆ, ಪ್ರಕರಣಗಳ ಪರಿಶೀಲಿಸಿ ಲೋಕ್ ಅದಾಲತ್‌ನಲ್ಲಿ ರಾಜೀ ಸಂಧಾನಕ್ಕೆ ಪರಿಗಣಿಸಲಾಗುತ್ತದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಪಾಂಡವಪುರವನ್ನು ಬರಪೀಡಿತವೆಂದು ಘೋಷಿಸಲು ಶಿರಸ್ತೇದಾರ್‌ಗೆ ಮನವಿ



ಪಾಂಡವಪುರ, ಸೆ.8– ತಮಿಳುನಾಡಿಗೆ ಕಾವೇರಿ ನೀರು ಹರಿಸಬಾರದು ಹಾಗೂ ಪಾಂಡವಪುರವನ್ನು ಬರಪೀಡಿತ ತಾಲೂಕು ಎಂದು ಘೋಷಿಸಬೇಕೆಂದು ಒತ್ತಾಯಿಸಿ ಪಾಂಡವಪುರ ಕಾರ್ಯ ನಿರತ ಪತ್ರಕರ್ತರ ಸಂಘದಿಂದ ಶಿರಸ್ತೇದಾರ್ ಕಮಲಮ್ಮ ಅವರಿಗೆ ಮನವಿ ಸಲ್ಲಿಸಲಾಯಿತು.

ಸಂಘದ ಅಧ್ಯಕ್ಷ ಚಂದ್ರಕೀರ್ತಿ ನೇತೃತ್ವದಲ್ಲಿ ತಾಲೂಕು ಕಚೇರಿಗೆ ತೆರಳಿದ ಪತ್ರಕರ್ತರು ಶಿರಸ್ತೇದಾರ್ ಕಮಲಮ್ಮ ಅವರ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ಸಲ್ಲಿಸಿದರು. ಕೆಆರ್‌ಎಸ್‌ನಲ್ಲಿ ನೀರು ಕಡಿಮೆಯಾಗುತ್ತಿದೆ. ಈ ಬಾರಿ ಮಳೆ ಕೊರತೆಯಿಂದ ಬರಗಾಲ ಉಂಟಾಗಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಿದೆ. ಆದ್ದರಿಂದ ಕಾವೇರಿ ನೀರನ್ನು ತಮಿಳುನಾಡಿಗೆ ಹರಿಸಬಾರದು ಎಂದು ಒತ್ತಾಯಿಸಿದರು.

ಈ ವೇಳೆ ಪತ್ರಕರ್ತರಾದ ಚಂದ್ರಶೇಖರ್, ಬಿ.ಎಸ್.ಜಯರಾಮ್, ಸಿ.ಆರ್.ರಮೇಶ್, ಸಿ.ಎ.ಲೋಕೇಶ್, ಎಸ್.ನಾಗಾನಂದ್, ಚನ್ನಮಾದೇಗೌಡ, ರಘುವೀರ್, ಎಸ್.ರವಿಕುಮಾರ್, ಪ್ರಕಾಶ್, ಕುಮಾರಸ್ವಾಮಿ, ಅನಿಲ್‌ಕುಮಾರ್, ಭಾಸ್ಕರ್, ಕೃಷ್ಣೇಗೌಡ ಇದ್ದರು.

**ಮೈಷುಗರ್, ಕಾವೇರಿ ನೀರು ವಿಚಾರದಲ್ಲಿ**

# ಬಿಜೆಪಿ ರೈತ ಹೋರಾಟದ ಭಾಗವಾಗಿದೆ

**ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ**



ಮಂಡ್ಯ, ಸೆ.8– ಮೈಷುಗರ್ ಕಾರ್ಖಾನೆ ಹಾಗೂ ಕಾವೇರಿ ನೀರು ವಿಚಾರದಲ್ಲಿ ಬಿಜೆಪಿ ಜಿಲ್ಲೆಯ ರೈತ ಹೋರಾಟದ ಭಾಗವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ತಿಳಿಸಿದರು.

ಶುಕ್ರವಾರ ನಗರದ ಸರ್‌ಎಂವಿ ಪ್ರತಿಮೆ ಮುಂಭಾಗ ಅಂತ್ಯಗೊಂಡ ರೈತ ಹಿತ ರಕ್ಷಣಾ ಸಮಿತಿ ಧರಣಿ ಸ್ಥಳಕ್ಕೆ ಭೇಟಿ ನೀಡಿ ಹೋರಾಟಗಾರರೊಂದಿಗೆ ಚರ್ಚಿಸಿ ಮಾತನಾಡಿದ ಅವರು, ರೈತರು ಯಾವ ಪಕ್ಷವೂ ಸೇರಿಲ್ಲ ಅದೇ ಎಲ್ಲಾ ಪಕ್ಷ ರೈತರಿಗೆ ಸೇರಿದ್ದು, ಈ ನೀತಿ ಇಟ್ಟುಕೊಂಡು ನಾವು ರೈತರ ಪರ ಕೆಲಸ ಮಾಡುತ್ತೇವೆ. ಮೈಷುಗರ್ ವಿಚಾರದಲ್ಲೂ ನಾವು ಇದೇ ನಿಯಮ ಅನುಸರಿಸಿದ್ದೆವು. ಕಾವೇರಿ ವಿಚಾರದಲ್ಲೂ ಇದೇ ನಿಯಮ ಪಾಲಿಸುತ್ತೇವೆ ಎಂದರು.

ಹಿತರಕ್ಷಣಾ ಸಮಿತಿ ಸದಾ ರೈತರ ಪರ ದನಿ ಎತ್ತಿ ಹೋರಾಡುತ್ತಾ ಬಂದಿದೆ. ನಮ್ಮ ಸರ್ಕಾರ ಇದ್ದಾಗಲೂ ಮೈಷುಗರ್ ಹೋರಾಟ ನಡೆದಾಗ ಸಿಎಂ ಆಗಿದ್ದ ನಾನು ಹೋರಾಟದ ಸ್ಥಳಕ್ಕೆ ಬಂದು ಅವರ ಬೇಡಿಕೆಗಳನ್ನು ಈಡೇರಿಸುವ ಕೆಲಸ ಮಾಡಿದ್ದೇನೆ. ಅದೇ ರೀತಿ ಸರ್ಕಾರ ಇಲ್ಲದಿದ್ದಾಗಲೂ ಹೋರಾಟಗಾರರಿಗೆ ಬೆಂಬಲ ಕೊಟ್ಟಿದ್ದೇವೆ ಎಂದು ತಿಳಿಸಿದರು.

ಈಗಾಗಲೇ ರಾಜ್ಯ ಸರ್ಕಾರ ತಮಿಳುನಾಡಿಗೆ ಬಿಡುತ್ತಿದ್ದ ನೀರು ನಿಲ್ಲಿಸಿದೆ. ನೀರು ನಿಲ್ಲಿಸುವಂತೆ ನಾವು ಒಕ್ಕೊರಲಿನಿಂದ ಆಗ್ರಹ ಮಾಡಿದ್ದೆವು. ಮುಂದೆ ಸಹ ಬಿಡಬಾರದೆಂದು ತಾಕೀತು ಮಾಡಿದ್ದು, ಒಂದು ವೇಳೆ ನೀರು ಬಿಟ್ಟರೆ ಕಾವೇರಿ ಜಲಾನಯನ ಪ್ರದೇಶ ವ್ಯಾಪ್ತಿಯ ಪಕ್ಷದ ಕಾರ್ಯಕರ್ತರೊಂದಿಗೆ ನಾವು ಬೃಹತ್ ಹೋರಾಟ ಮಾಡುತ್ತೇವೆ ಎಂದು ಎಚ್ಚರಿಸಿದರು.

ಬಿಜೆಪಿ ಸಂಸದರು ಸಂಸತ್‌ನಲ್ಲಿ ಕಾವೇರಿ ವಿಚಾರದ ಬಗ್ಗೆ ದನಿ ಎತ್ತುವುದಿಲ್ಲ ಎಂಬ ವಿಚಾರಕ್ಕೆ ಪ್ರತಿಕ್ರಿಯಿಸಿ, ಸಂಸದರು ದೆಹಲಿಯಲ್ಲಿ ಸಂಸತ್ ನಡೆಯುವಾಗ ಮಾತನಾಡುತ್ತಾರೆ. ನಾವು ಸಹ ರಾಜ್ಯದ ಪರ ಕಾವೇರಿ ವಿಚಾರದಲ್ಲಿ ನಿಲ್ಲುವಂತೆ ಹೇಳಿದ್ದೇವೆ ಎಂದು ಸ್ಪಷ್ಟಪಡಿಸಿದರು.

ಮೇಕೆದಾಟು ವಿಚಾರದಲ್ಲಿ ರಾಜ್ಯ ಸರ್ಕಾರ ತೆಗೆದುಕೊಳ್ಳುವ ನಿರ್ಧಾರಕ್ಕೆ ಬಿಜೆಪಿ ಬೆಂಬಲ ಇದೆ. ಮೇಕೆದಾಟು ವಿಚಾರದಲ್ಲೂ ನಾವು ರೈತರು ಹಾಗೂ ಕರ್ನಾಟಕದ ಪರ ನಿಲ್ಲುತ್ತೇವೆ. ಕರ್ನಾಟಕದ ಪರ ಹೋರಾಡುತ್ತೇವೆ. ರಾಜ್ಯಕ್ಕೆ ಅನ್ಯಾಯವಾದಾಗ ನಾವೂ ಸಂಪೂರ್ಣ ರೈತರ ಪರ ನಿಲ್ಲುತ್ತೇವೆ. ನಿಮ್ಮ ಹೋರಾಟ ಸದಾ ಹೀಗೆ ಮುಂದುವರೆಯಲಿ ನಿಮ್ಮ ಬೆಂಬಲಕ್ಕೆ ಬಿಜೆಪಿ ಇದೆ ಎಂದರು.

ಈ ವೇಳೆ ಮಾಜಿ ಉಪಮುಖ್ಯಮಂತ್ರಿಗಳಾದ ಆರ್.ಅಶೋಕ್, ಸಿ.ಎನ್.ಅಶ್ವತ್ಥ್ ನಾರಾಯಣ, ಗೋವಿಂದ ಕಾರಜೋಳ, ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ಸಿ.ಪಿ. ಉಮೇಶ್, ಮುಖಂಡರಾದ ಇಂಡುವಾಳು ಸಚ್ಚಿದಾನಂದ, ಅಶೋಕ್ ಜಯರಾಂ, ಡಾ.ಇಂದ್ರೇಶ್, ನಾಗಾನಂದ್ ಇತರರಿದ್ದರು.

# ಬಿಜೆಪಿ- ಜೆಡಿಎಸ್ ಮೈತ್ರಿಯಾದರೆ ಕಾಂಗ್ರೆಸ್‌ಗೆ 25 ಸ್ಥಾನ



ಮಂಡ್ಯ, ಸೆ.8– ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ- ಜೆಡಿಎಸ್ ಮೈತ್ರಿ ಮಾಡಿಕೊಂಡರೆ ಕಾಂಗ್ರೆಸ್ ಕನಿಷ್ಠ 25 ಸ್ಥಾನಗಳಲ್ಲಿ ಗೆಲುವು ಸಾಧಿಸಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ ಭವಿಷ್ಯ ನುಡಿದರು.

ಶುಕ್ರವಾರ ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಮೈತ್ರಿಗೆ ಚುನಾವಣೆಯಲ್ಲಿ ಜನರೇ ಉತ್ತರ ಕೊಡುತ್ತಾರೆ. ಅವರು ಮೈತ್ರಿ ಮಾಡಿಕೊಂಡರೆ ನಮಗೆ ಯಾವ ಆತಂಕವೂ ಇಲ್ಲ. ನಾವು ಒಳ್ಳೆಯ ಕೆಲಸ ಮಾಡುತ್ತಿದ್ದೇವೆ. ಜನರು ನಮ್ಮ ಕೈ ಹಿಡಿಯುತ್ತಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮೈತ್ರಿ ಅವರಿಗೆ ಬಿಟ್ಟ ವಿಚಾರ. ಬಿಜೆಪಿಯಲ್ಲಿ ಯಾರು ಅಭ್ಯರ್ಥಿಯಾಗಬೇಕು ಎಂದು ನಾನು ನಿರ್ಧರಿಸಲು ಆಗುವುದಿಲ್ಲ. ನಮಗೂ ಮೈತ್ರಿಗೂ ಯಾವುದೇ ಸಂಬಂಧ ಇಲ್ಲ. ಹೊಂದಾಣಿಕೆ ಯಾರ ಮೇಲೆ ರಾಜಕೀಯವಾಗಿ ಏನು ಹೇಳಬೇಕೋ ಆಮೇಲೆ ಹೇಳೋಣ. ಈಗ ಮೈತ್ರಿ ಬಗ್ಗೆ ಹೇಳಿರೋದು ಯಡಿಯೂರಪ್ಪನವರು. ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷ ಹೆಚ್.ಡಿ. ದೇವೇಗೌಡರು ಹೇಳಿದ್ದಾರಾ? ಎಂದು ಪ್ರಶ್ನಿಸಿದರು.

ಜೆಡಿಎಸ್–ಬಿಜೆಪಿ ಮೈತ್ರಿಯಿಂದ ಕಾಂಗ್ರೆಸ್‌ಗೆ ಲಾಭ ಆಗಲಿದೆ. ಸಂಸದೆ ಸುಮಲತಾ ಅವರ ನಿಲುವು ಏನೆಂಬುದನ್ನು ಅವರನ್ನೇ ಕೇಳಬೇಕು. ಅವರು ಸ್ವತಂತ್ರರಿದ್ದು, ಪಕ್ಷೇತರವಾಗಿ ಗೆದ್ದಿದ್ದಾರೆ. ಅವರ ಇಂಡಿಪೆಂಡೆಂಟ್ ತೀರ್ಮಾನದ ಬಗ್ಗೆ ನಾನು ಏನೂ ಹೇಳಲು ಆಗುವುದಿಲ್ಲ. ಅವರು ಕಾಂಗ್ರೆಸ್‌ಗೆ ಬರುತ್ತಾರೋ ಇಲ್ಲವೋ ಎಂಬುದು ಸಹ ನನಗೆ ಗೊತ್ತಿಲ್ಲ ಎಂದರು.

**ಕೆಆರ್‌ಎಸ್ ವೀಕ್ಷಣೆ ಬಿಟ್ಟು ದೆಹಲಿ ಹೋಗಿ:** ರಾಜ್ಯದ ಬಿಜೆಪಿ ಸಂಸದರು ಹಾಗೂ ಮುಖಂಡರು ಕೆಆರ್‌ಎಸ್ ವೀಕ್ಷಣೆ ಮಾಡುವುದನ್ನು ಬಿಟ್ಟು ದೆಹಲಿಗೆ ಹೋಗಿ ಕಾವೇರಿ ನದಿ ನೀರು ಪ್ರಾಧಿಕಾರಕ್ಕೆ ವಸ್ತುಸ್ಥಿತಿ ಮನವರಿಕೆ ಮಾಡಿಕೊಟ್ಟು ಒತ್ತಡ ಹಾಕಲಿ ಎಂದು ಚಲುವರಾಯಸ್ವಾಮಿ ಟೀಕಿಸಿದರು.

ಮದ್ದೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ಪಕ್ಷದ 25 ಸಂಸದರು ಎಲ್ಲಿ ಹೋದರು? ಅಧಿಕಾರದಿಂದ ಕೆಳಗಿಳಿಯುವುದಕ್ಕೆ 4 ತಿಂಗಳು ಬಾಕಿ ಇರುವಾಗ ಇವರಿಗೆ ರೈತರ ಬಗ್ಗೆ ಕಾಳಜಿ ಬಂದಿದೆಯೇ? ನಮ್ಮ ಸರ್ಕಾರ ನ್ಯಾಯಾಲಯಕ್ಕೆ ಅರ್ಜಿ ಹಾಕಿ ವಾಸ್ತವ ಸ್ಥಿತಿ ಬಗ್ಗೆ ಮನವರಿಕೆ ಮಾಡಿಕೊಟ್ಟು ಹೋರಾಟ ಮಾಡುತ್ತಿದ್ದೇವೆ. ಕುಡಿಯುವ ನೀರು ಉಳಿಸಿಕೊಳ್ಳಲು ಸತತ ಪ್ರಯತ್ನ ಮಾಡುತ್ತಿದ್ದೇವೆ. ರೈತರನ್ನು ಸಂಕಷ್ಟದಿಂದ ಪಾರು ಮಾಡಬೇಕು. ಅದು ಸರ್ಕಾರದ ಕರ್ತವ್ಯ ಖಂಡಿತ ಮಾಡುತ್ತೇವೆ. ಈ ಮಧ್ಯೆ ಬಿಜೆಪಿ ಪಕ್ಷದವರು ರಾಜಕಾರಣ ಮಾಡುವುದು ಸರಿಯಲ್ಲ ಎಂದರು. ಬಿಜೆಪಿ ಸಂಸದರು ಕೃಷ್ಣರಾಜಸಾಗರವನ್ನು ವೀಕ್ಷಣೆ ಮಾಡುವುದನ್ನು ಬಿಟ್ಟು, ದೆಹಲಿಗೆ ಹೋಗಿ ಪ್ರಧಾನಮಂತ್ರಿಗೆ ಒತ್ತಡ ಹಾಕುವುದು ಒಳ್ಳೆಯದು, ಕಾವೇರಿ ವಿಚಾರದಲ್ಲಿ ಅವರು ರಾಜಕಾರಣ ಮಾಡುವುದು ಬೇಡ ಎಂದರು.

# ಆಸ್ಪತ್ರೆಗಳು ಗ್ರಾಮೀಣ ಜನರಿಗೆ ಉತ್ತಮ ಸೇವೆ ನೀಡಲಿ



ಮಂಡ್ಯ, ಸೆ.8– ಪ್ರಸ್ತುತ ಆಸ್ಪತ್ರೆಗಳು ಅತ್ಯಾಧುನಿಕ ತಂತ್ರಜ್ಞಾನ ಬಳಸಿಕೊಂಡು ಗ್ರಾಮೀಣ ಜನರಿಗೆ ಉತ್ತಮ ಸೇವೆ ನೀಡಬೇಕು ಎಂದು ಡಿಹೆಚ್‌ಓ ಡಾ.ಕೆ.ಮೋಹನ್ ತಿಳಿಸಿದರು.

ನಗರದ ಹೊರವಲಯದ ಸ್ಯಾಂಜೋ ಆಸ್ಪತ್ರೆಯಲ್ಲಿ ಕಂಪ್ಯೂಟರ್ ಟ್ರಾಮಾಕೇರ್ ಸ್ಕ್ಯಾನಿಂಗ್ (ಸಿಟಿ) ವಿಭಾಗ ಉದ್ಘಾಟಿಸಿ ಮಾತನಾಡಿದ ಅವರು, ಹಿಂದೆಲ್ಲಾ ರೋಗಪತ್ತೆ ಪ್ರಯೋಗಾಲಯಕ್ಕಾಗಿ ತಾಲೂಕು ಮತ್ತು ಜಿಲ್ಲಾ ಕೇಂದ್ರಗಳಿಗೆ ಹೋಗಬೇಕಿತ್ತು. ಆದರೆ ಇಂದು ನಾಗಾಲೋಟದಲ್ಲಿ ಸಾಗುತ್ತಿರುವ ತಾಂತ್ರಿಕತೆಯಲ್ಲಿ ಹೋಬಳಿ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲೂ ಒಳ್ಳೆಯ ಆರೋಗ್ಯ ಸೇವೆ ದೊರೆಯುತ್ತಿದೆ. ಇದು ಸಮಾಧಾನಕರ ವಿಚಾರ ಎಂದರು.

ಗ್ರಾಮೀಣ ಜನರಿಗೆ ಆರೋಗ್ಯ ಸೇವೆ ನೀಡುವ ನಿಟ್ಟಿನಲ್ಲಿ ಆರೋಗ್ಯ ಶಿಬಿರಗಳನ್ನು ನಡೆಸಬೇಕು. ಇದರಿಂದ ಹಲವು ಮಂದಿಗೆ ಉಪಯೋಗವಾಗಲಿದೆ ಎಂದು ಸಲಹೆ ನೀಡಿದರು.

ಸಂತ ಜೋಸೆಫರ ದೇವಾಲಯದ ಧರ್ಮಾಧಿಕಾರಿ ರೆ.ಫಾ.ಲೂದ್ರ ಪ್ರಸಾದ್ ಮಾತನಾಡಿ, ಅತ್ಯಾಧುನಿಕ ಯಂತ್ರಗಳ ಸಹಾಯದೊಂದಿಗೆ ಕಡಿಮೆ ದರದಲ್ಲಿ ಆರೋಗ್ಯ ಸೇವೆ ನೀಡುತ್ತಿರುವುದು ಹಾಗೂ ಪ್ರತಿ ತಿಂಗಳು ಉಚಿತ ಆರೋಗ್ಯ ಶಿಬಿರಗಳನ್ನು ನಡೆಸುತ್ತಿರುವ ಸ್ಯಾಂಜೋ ಆಸ್ಪತ್ರೆ ಸೇವೆ ಶ್ಲಾಘನೀಯ ಎಂದರು.

ಸ್ಯಾಂತೋಂ ಪ್ರಾದೇಶಿಕ ನಿರ್ದೇಶಕ ರೆ.ಫಾದರ್ ಸೋಜನ್ ಐಕಾರಕುನ್ನೇಲ್, ಆರೋಗ್ಯ ಗುಣಮಟ್ಟ ವಿಭಾಗದ ವೈದ್ಯಾಧಿಕಾರಿ ಡಾ.ಶಶಿಧರ್, ರೈತರ ಸಹಕಾರ ಸಂಘದ ಅಧ್ಯಕ್ಷ ಯು.ಸಿ. ಶಿವಕುಮಾರ್, ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ.ಶರತ್ಚಂದ್ರ, ಆಸ್ಪತ್ರೆ ಆಡಳಿತಾಧಿಕಾರಿ ಸಿಸ್ಟರ್ ಜೋಸ್ಮಿನ್ ಭಾಗವಹಿಸಿದ್ದರು.

**ಇಂದು ಕಡೇ ಶ್ರಾವಣ ಶನಿವಾರ ಹಿನ್ನೆಲೆ**

# ಬೋಳಾರೆ ರಂಗನಾಥಸ್ವಾಮಿ ಬ್ರಹ್ಮ ರಥೋತ್ಸವ



ಕೆ.ಆರ್.ಪೇಟೆ, ಸೆ.8– ತಾಲೂಕಿನ ಪುರಾಣ ಪ್ರಸಿದ್ಧ ಬೆಟ್ಟದ ಹೊಸೂರು ಗ್ರಾಮದ ಶ್ರೀಉದ್ಭವ ಬೋಳಾರೆ ರಂಗನಾಥ ಸ್ವಾಮಿಯವರ 9ನೇ ಬ್ರಹ್ಮ ರಥೋತ್ಸವ ಶ್ರಾವಣ ಮಾಸದ ಕಡೇ ಶ್ರಾವಣ ಶನಿವಾರ (ಸೆ.9) ನಡೆಯಲಿದೆ ಎಂದು ದೇವಸ್ಥಾನ ಸೇವಾ ಟ್ರಸ್ಟ್ ಅಧ್ಯಕ್ಷ ಬಿ.ಟಿ.ವೆಂಕಟೇಶ್ ತಿಳಿಸಿದ್ದಾರೆ.

ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರತಿ ವರ್ಷದಂತೆ ಉದ್ಭವ ಬೋಳಾರೆ ರಂಗನಾಥಸ್ವಾಮಿ ಜಾತ್ರೆ ಮತ್ತು ಬ್ರಹ್ಮ ರಥೋತ್ಸವ ಶ್ರಾವಣ ಮಾಸದ ಕಡೇ ಶನಿವಾರ ನಡೆಯಲಿದ್ದು, ಅದರಂತೆ ನಾಳೆ ಬೆಳಗ್ಗೆ 10.30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚೆಲುವರಾಯಸ್ವಾಮಿ ಸಾಂಪ್ರದಾಯಿಕ ಪೂಜೆ ಸಲ್ಲಿಸಿ ರಥೋತ್ಸವಕ್ಕೆ ಚಾಲನೆ ನೀಡುವರು. ಈ ವೇಳೆ ಶಾಸಕ ಹೆಚ್.ಟಿ.ಮಂಜು, ಮಾಜಿ ಸಚಿವ ನಾರಾಯಣಗೌಡ, ಸಿ.ಎಸ್. ಪುಟ್ಟರಾಜು, ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್, ಬಿ.ಪ್ರಕಾಶ್, ಮೈಸೂರು ಮಿಲ್ಕ್ ಫೆಡರೇಷನ್ ನಿರ್ದೇಶಕ ಸಿಂಧುಘಟ್ಟ ಎಸ್.ಸಿ.ಅಶೋಕ್, ಮುಖ್ಯಮಂತ್ರಿಗಳ ಮಾಜಿ ವಿಶೇಷಾಧಿಕಾರಿ ಸಿಂಧುಘಟ್ಟ ಅರವಿಂದ್, ತಾಲೂಕು ಟಿಎಪಿಸಿಎಂಎಸ್ ಅಧ್ಯಕ್ಷ ಬಿ.ಎಲ್.ದೇವರಾಜು, ಮಿತ್ರ ಫೌಂಡೇಷನ್ ಸಂಸ್ಥಾಪಕ ಅಧ್ಯಕ್ಷ ವಿಜಯ್ ರಾಮೇಗೌಡ, ಆರ್‌ಟಿಓ ಅಧಿಕಾರಿಗಳ ಸಂಘದ ರಾಜ್ಯಾಧ್ಯಕ್ಷ ಮಲ್ಲಿಕಾರ್ಜುನ್, ದೇವಸ್ಥಾನದ ಟ್ರಸ್ಟ್ ಮಾಜಿ ಅಧ್ಯಕ್ಷ ಬೋಳೇಗೌಡ, ಮುಖಂಡರಾದ ಮನ್‌ಮುಲ್ ಮಾಜಿ ಅಧ್ಯಕ್ಷ ಎಂ.ಬಿ.ಹರೀಶ್, ತಹಸೀಲ್ದಾರ್ ನಿಸರ್ಗಪ್ರಿಯ, ರಾಜಸ್ವ ನಿರೀಕ್ಷಕಿ ಚಂದ್ರಕಲಾ ಉಪಸ್ಥಿತರಿರುವರು.

ಈ ಸಂದರ್ಭ ಟ್ರಸ್ಟ್ ಗೌರವಾಧ್ಯಕ್ಷ ಬಿ.ಪುಟ್ಟಸ್ವಾಮಿ, ಉಪಾಧ್ಯಕ್ಷರಾದ ರಂಗಸ್ವಾಮಿ, ಬೆಟ್ಟೇಗೌಡ, ವೆಂಕಟರಮಣೇಗೌಡ, ಪದಾಧಿಕಾರಿಗಳಾದ ಎಂ.ಆರ್.ಸುದರ್ಶನ್, ಮಹೇಶ್, ಜವರೇಗೌಡ, ಲಯನ್ ಡಾ.ರಂಗಸ್ವಾಮಿ ಪಾಪಯ್ಯ ಸೇರಿದಂತೆ ಸಮಿತಿ ಸದಸ್ಯರಿದ್ದರು.



2022–23ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿಗೆ ಭಾಜನರಾದ ಹೆಗ್ಗಡಹಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಜಿ.ಹೆಚ್. ಯೋಗೇಶ್ ಅವರನ್ನು ಕೆ.ಆರ್.ಪೇಟೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಆವರಣದಲ್ಲಿ ಸನ್ಮಾನಿಸಲಾಯಿತು. ಈ ವೇಳೆ ಬಿಇಓ ಆರ್.ಎಸ್.ಸೀತಾರಾಂ, ಕ್ಷೇತ್ರ ಸಮನ್ವಯಾಧಿಕಾರಿ ಹೆಚ್.ಕೆ.ಮಂಜುನಾಥ್, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಸಿ.ಎನ್.ಯತೀಶ್, ಬಿಆರ್‌ಪಿ ಸಂಪನ್ಮೂಲ ವ್ಯಕ್ತಿ ಕೆ.ಪಿ. ಬೋರೇಗೌಡ, ಸಿಆರ್‌ಪಿ ಸಂಪನ್ಮೂಲ ವ್ಯಕ್ತಿ ಎ.ಜೆ.ಧನೇಂದ್ರೇಗೌಡ, ಶಿಕ್ಷಕರಾದ ಮಹೇಶ್, ಆರ್.ಎಸ್.ಮೂರ್ತಿ, ಆರ್.ಕೆ.ಧರ್ಮರತ್ನಾಕರ್, ಭಗವಾನ್, ಲೋಕೇಶ್, ಕೃಷ್ಣೇಗೌಡ, ಆರ್.ಕೆ.ಮಹೇಶ್, ನಾಗೇಂದ್ರ, ನಾರಾಯಣ, ರಾಮಚಂದ್ರು, ಚಂದ್ರಶೇಖರ್, ವಸಂತರಾಜು, ಧನೇಂದ್ರ ಸೇರಿದಂತೆ ಇತರರಿದ್ದರು.

ಒಂದನೇ ಪುಟದಿಂದ

# ಎರಡು ದಿನ ಐತಿಹಾಸಿಕ ಜಿ20 ಶೃಂಗಸಭೆ

ದ್ರೌಪದಿ ಮುರ್ಮು ಅವರ ಸಮ್ಮುಖದಲ್ಲಿ ಔತಣಕೂಟ ಏರ್ಪಡಿಸಲಾಗಿದ್ದು, ಮಾಜಿ ಪ್ರಧಾನಿಗಳಾದ ಡಾ. ಮನಮೋಹನ್ ಸಿಂಗ್, ಹೆಚ್.ಡಿ. ದೇವೇಗೌಡ ಹಾಗೂ ಎಲ್ಲಾ ರಾಜ್ಯಗಳ ಮುಖ್ಯಮಂತ್ರಿಗಳಿಗೆ ಆಹ್ವಾನ ನೀಡಲಾಗಿದೆ. ತಮ್ಮ ಆರೋಗ್ಯದ ಕಾರಣದಿಂದಾಗಿ ಔತಣಕೂಟದಲ್ಲಿ ಭಾಗವಹಿಸುವುದಿಲ್ಲ ಎಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ತಿಳಿಸಿದ್ದಾರೆ. ತಮ್ಮ ನಿರ್ಧಾರವನ್ನು ಕೇಂದ್ರ ಸರ್ಕಾರಕ್ಕೆ ತಿಳಿಸಿದ್ದು, ಜಿ20 ಶೃಂಗಸಭೆ ಯಶಸ್ವಿ ಆಗಲಿ ಎಂದು ಹಾರೈಸಿದ್ದಾರೆ.

ಶೃಂಗಸಭೆಗಾಗಿ ಆಗಮಿಸಿರುವ ವಿಶ್ವ ನಾಯಕರಿಗೆ ಬಗೆಬಗೆಯ ಸಿರಿಧಾನ್ಯಗಳ ತಿನಿಸುಗಳನ್ನು ಸಿದ್ಧಪಡಿಸಲಾಗುತ್ತಿದೆ. ಬಗೆ ಬಗೆಯ ರಾಗಿ ದೋಸೆ, ರಾಗಿ ಲಾಡು, ಸಿರಿಧಾನ್ಯ ಥಾಲಿ, ಪಲಾವ್, ಇಡ್ಲಿ, ರಾಜಾಸ್ತಾನದ ದಾಲ್ ಭಾಟಿ ಚುರ್ಮಾ, ಬಂಗಾಳದ ರಸಗುಲ್ಲಾ, ಕರ್ನಾಟಕದ ಮಸಾಲೆ ದೋಸೆ, ಬಿಹಾರದ ಲಿಟ್ಟಿ ಚೋಖಾ ಸೇರಿದಂತೆ ಹಲವಾರು ತಿನಿಸುಗಳನ್ನು ಸಿದ್ಧಪಡಿಸಲಾಗುತ್ತಿದೆ.

ಬೆಳ್ಳಿ ಹಾಗೂ ಚಿನ್ನ ಲೇಪಿತ ತಟ್ಟೆಗಳು ಅತಿಥಿಗಳ ಭೋಜನದ ವೇಳೆ ಬಳಸಲು ಸಿದ್ಧಪಡಿಸಲಾಗಿದ್ದು, ಟೇಬಲ್‌ವೇರ್‌ಗಳಿಗೂ ಬೆಳ್ಳಿ ಲೇಪನ, ಸ್ವಾಗತ ಪಾನಿಯ ನೀಡಲು ಬಳಕೆಯಾಗುವ ಗ್ಲಾಸ್ ಹಾಗೂ ಪ್ಲೇಟ್‌ಗಳಿಗೂ ಚಿನ್ನದ ಲೇಪನವಿದೆ ಕರ್ನಾಟಕ ಉತ್ತರ ಪ್ರದೇಶ, ಪಶ್ಚಿಮ ಬಂಗಾಳ, ಜೈಪುರ ಮುಂತಾದ ರಾಜ್ಯಗಳ ಸುಮಾರು 200 ಕುಶಲಕರ್ಮಿಗಳು ಇದನ್ನು ವಿನ್ಯಾಸಗೊಳಿಸಿದ್ದಾರೆ.

ಪ್ರಗತಿ ಮೈದಾನದಲ್ಲಿ ನಿರ್ಮಿಸಲಾದ ಇಂಟರ್‌ನ್ಯಾಷನಲ್ ಎಕ್ಸಿಬಿಷನ್ ಅಂಡ್ ಕನ್ವೆಷನ್ ಸೆಂಟರ್‌ನಲ್ಲಿ ಜಿ20 ಶೃಂಗಸಭೆ ನಡೆಯಲಿದ್ದು, ಇಲ್ಲಿ ನಿರ್ಮಿಸಲಾಗಿರುವ 'ಭಾರತ ಮಂಟಪ'ವು ಬಸವಣ್ಣನವರ ಅನುಭವ ಮಂಟಪದ ಪ್ರೇರಣೆಯಾಗಿದೆ ಎಂದು ಹೇಳಲಾಗಿದೆ. ವಾಸ್ತುಶಿಲ್ಪಿ ಸಂಜಯ್ ಸಿಂಗ್ ಅವರು ಈ ಮಂಟಪವನ್ನು ವಿನ್ಯಾಸಗೊಳಿಸಿದ್ದು, ಪ್ರತಿ ಮಹಡಿ ಹಾಗೂ ಪ್ರತಿ ಕೊಠಡಿಯಲ್ಲಿ ಭಾರತೀಯ ಸಂಸ್ಕೃತಿ ಹಾಗೂ ಸಂಪ್ರದಾಯದ ಛಾಪು ಮೂಡಿಸಲಾಗಿದೆ. 3ನೇ ಮಹಡಿಯಲ್ಲಿ ದೊಡ್ಡ ಸಭಾಂಗಣವಿದ್ದು, ಇದರಲ್ಲಿ 7 ಸಾವಿರ ಮಂದಿ ಕುಳಿತುಕೊಳ್ಳಬಹುದಾಗಿದೆ. ಇಲ್ಲಿಂದ ಕರ್ತವ್ಯ ಪಥ, ರಾಷ್ಟ್ರಪತಿ ಭವನ ಮತ್ತು ಇಂಡಿಯಾ ಗೇಟ್ ಅನ್ನು ನೋಡಬಹುದಾಗಿದೆ. ಈ ಕಟ್ಟಡವನ್ನು ಶಂಕದ ಆಕಾರದಲ್ಲಿ ವಿನ್ಯಾಸಗೊಳಿಸಲಾಗಿದೆ.

ಪ್ರಗತಿ ಮೈದಾನದ ಭಾರತ ಮಂಟಪದ ಮುಂದೆ ತಮಿಳುನಾಡಿನಿಂದ ತರಿಸಲಾದ ನಟರಾಜನ ದೈತ್ಯ ಪ್ರತಿಮೆಯನ್ನು ಸ್ಥಾಪಿಸಲಾಗಿದೆ. ದೆಹಲಿಯ ವಿವಿಧ ಪ್ರದೇಶಗಳಲ್ಲಿ ಭಾನುವಾರದವರೆಗೆ ಸಾರ್ವಜನಿಕರು ಮತ್ತು ಪ್ರವಾಸಿಗರಿಗೆ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

## ವಸುದೈವ ಕುಟುಂಬಕಂ ನಮ್ಮ ಅಂತಿಮ ಧ್ಯೇಯ

ಮಾನವ ಕೇಂದ್ರಿತ ಹಾಗೂ ಎಲ್ಲರನ್ನು ಒಳಗೊಳ್ಳುವ ಅಭಿವೃದ್ಧಿಗೆ ಜಿ20 ಶೃಂಗಸಭೆಯು ಹೊಸ ದಾರಿಯನ್ನು ತೋರಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಶುಕ್ರವಾರ ಹೇಳಿದ್ದಾರೆ. ರಾಷ್ಟ್ರ ರಾಜಧಾನಿ ದೆಹಲಿಯ 'ಭಾರತ ಮಂಟಪ'ದಲ್ಲಿ ಶನಿವಾರ ಆರಂಭವಾಗಲಿರುವ ಎರಡು ದಿನಗಳ ಶೃಂಗಸಭೆ ಹಿನ್ನೆಲೆಯಲ್ಲಿ ಅವರು ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಮಾಡಿರುವ ಪೋಸ್ಟ್‌ನಲ್ಲಿ ಈ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ನಿರ್ಗತಿಕರು, ಸಮಾಜದ ಕಟ್ಟಕಡೆಯಲ್ಲಿರುವ ವ್ಯಕ್ತಿಯ ಕಲ್ಯಾಣಕ್ಕೆ ಶ್ರಮಿಸಬೇಕು ಎಂಬ ಮಹಾತ್ಮ ಗಾಂಧಿ ಅವರ ಧ್ಯೇಯವನ್ನು ತಮ್ಮ ಪೋಸ್ಟ್‌ನಲ್ಲಿ ಪ್ರಸ್ತಾಪಿಸಿರುವ ಮೋದಿ, ಬರುವ ದಿನಗಳಲ್ಲಿ ಮಾನವ ಕೇಂದ್ರಿತ ಪ್ರಗತಿ ಸಾಧಿಸುವುದಕ್ಕೆ ಭಾರತ ಒತ್ತು ನೀಡಲಿದೆ ಎಂದಿದ್ದಾರೆ.

ತಂತ್ರಜ್ಞಾನ ಆಧಾರಿತ ಪರಿವರ್ತನೆ, ಸಾರ್ವಜನಿಕ ಡಿಜಿಟಲ್ ಮೂಲಸೌಕರ್ಯದಂತಹ ಭವಿಷ್ಯದ ಕ್ಷೇತ್ರಗಳಿಗೆ ಹೆಚ್ಚು ಆದ್ಯತೆ ನೀಡಿದ್ದೇವೆ. ಲಿಂಗತ್ವ ಸಮಾನತೆ, ಮಹಿಳಾ ಸಬಲೀಕರಣ ಹಾಗೂ ವಿಶ್ವ ಶಾಂತಿಗಾಗಿ ಸಾಮೂಹಿಕ ಕೆಲಸ ಮಾಡಲಿದ್ದೇವೆ ಎಂದು ಹೇಳಿದ್ದಾರೆ. 'ವಸುಧೈವ ಕುಟುಂಬಕಂ' ಒಂದು ಭೂಮಿ, ಒಂದು ಕುಟುಂಬ ಹಾಗೂ ಒಂದು ಭವಿಷ್ಯ ಎಂಬುದು ಜಿ20ರ ಪ್ರಸ್ತುತ ಧ್ಯೇಯವಾಕ್ಯ. ಈ ಮೌಲ್ಯಗಳು ನಮ್ಮ ಸಂಸ್ಕೃತಿಯ ವಿಶಿಷ್ಟ ಲಕ್ಷಣ. ವಿಶ್ವ ಕುರಿತ ನಮ್ಮ ದೃಷ್ಟಿಕೋನದಲ್ಲಿಯೂ ಇದು ಪ್ರತಿಧ್ವನಿಸುತ್ತದೆ ಎಂದು ಮೋದಿ ವಿವರಿಸಿದ್ದಾರೆ.

## ನಾನು ಹೆಮ್ಮೆಯ ಹಿಂದೂ; ಭಾರತದಲ್ಲಿ ದೇವಾಲಯಕ್ಕೆ ಭೇಟಿ

ಹಾಗೆ ಬೆಳೆದಿದ್ದೇನೆ. ಭಾರತಕ್ಕೆ ಭೇಟಿಯ ಸಂದರ್ಭದಲ್ಲಿ ದೇವಸ್ಥಾನಕ್ಕೆ ಭೇಟಿ ನೀಡಬಹುದೆಂದು ಭಾವಿಸುತ್ತೇನೆ. ಇತ್ತೀಚೆಗೆ ನಾನು ಮತ್ತು ನನ್ನ ಸಹೋದರ, ಸಹೋದರಿಯರು ರಕ್ಷಾಬಂಧನವನ್ನು ಆಚರಿಸಿದ್ದೇವೆ. ನನ್ನ ಬಳಿ ಇನ್ನೂ ರಾಖಿಗಳಿವೆ. ಆದರೆ, ಈ ಬಾರಿ ಸಮಯದ ಕೊರತೆಯಿಂದ ಕೃಷ್ಣ ಜನ್ಮಾಷ್ಟಮಿಯನ್ನು ಸರಿಯಾಗಿ ಆಚರಿಸಲು ಸಾಧ್ಯವಾಗಲಿಲ್ಲ. ಆದರೆ ದೇವಸ್ಥಾನಕ್ಕೆ ಹೋಗುವ ಮೂಲಕ ನಾನು ಖಂಡಿತವಾಗಿಯೂ ಅದನ್ನು ಸರಿದೂಗಿಸಬಹುದು.

ಈ ಎಲ್ಲಾ ವಿಷಯಗಳು ನನಗೆ ಬಹಳ ಮುಖ್ಯ. ನಂಬಿಕೆಯು ಪ್ರತಿಯೊಬ್ಬರ ಜೀವನವನ್ನು ಸುಲಭಗೊಳಿಸುತ್ತದೆ ಎಂದು ನಾನು ಭಾವಿಸುತ್ತೇನೆ. ವಿಶೇಷವಾಗಿ ನಿಮ್ಮ ಕೆಲಸವು ನನ್ನಂತೆಯೇ ಒತ್ತಡದಿಂದ ಕೂಡಿರುವಾಗ. ಧಾರ್ಮಿಕ ನಂಬಿಕೆಯು ನಿಮಗೆ ಒಂದು ರೀತಿಯ ಶಕ್ತಿಯನ್ನು ನೀಡುತ್ತದೆ ಎಂದರು.

ಪ್ರಧಾನಿ ಮೋದಿ ಅವರೊಂದಿಗಿನ ಸಂಬಂಧದ ಕುರಿತು ಮಾತನಾಡಿದ ಅವರು, ಪ್ರಧಾನಿ ಮೋದಿ ಬಗ್ಗೆ ನನಗೆ ಅಪಾರ ಗೌರವವಿದೆ. ಪ್ರಧಾನಿ ಮೋದಿ ವೈಯಕ್ತಿಕವಾಗಿ ನನ್ನನ್ನು ತುಂಬಾ ಪರಿಗಣಿಸುತ್ತಾರೆ. ಭಾರತ ಮತ್ತು ಯುಕೆ ಸಂಬಂಧ ಸುಧಾರಣೆಗೆ ನಾವು ಒಟ್ಟಾಗಿ ಶ್ರಮಿಸುತ್ತಿದ್ದೇವೆ. ಏಕೆಂದರೆ ಇದು ಎರಡೂ ದೇಶಗಳಿಗೆ ಅನಿವಾರ್ಯ ಎಂದು ನಾವಿಬ್ಬರೂ ಭಾವಿಸುತ್ತೇವೆ. ಇದು ಉಭಯ ದೇಶಗಳಿಗೆ ಹೇಗೆ ಲಾಭದಾಯಕವಾಗಿದೆ ಎಂಬುದನ್ನು ಖಚಿತಪಡಿಸಿಕೊಳ್ಳುವಲ್ಲಿ ನಾವಿಬ್ಬರೂ ತೊಡಗಿದ್ದೇವೆ. ಈ ರೀತಿಯ ಜಿ20 ವೇದಿಕೆಗಳಲ್ಲಿ, ಭಾರತಕ್ಕೆ ಯಶಸ್ಸನ್ನು ಖಚಿತಪಡಿಸಲು ನಾನು ಪ್ರಧಾನಿ ಮೋದಿಯವರೊಂದಿಗೆ ಕೈಜೋಡಿಸುತ್ತೇನೆ ಎಂದರು. ಭಾರತಕ್ಕೆ ಬರುವುದು ನನಗೆ ವೈಯಕ್ತಿಕವಾಗಿ ತುಂಬಾ ವಿಶೇಷವಾಗಿದೆ. ಇದು ನಾನು ತುಂಬಾ ಪ್ರೀತಿಸುವ ದೇಶ, ನನ್ನ ಕುಟುಂಬ ಇರುವ ದೇಶ. ನಾನು ಬ್ರಿಟನ್ ಅನ್ನು ಪ್ರತಿನಿಧಿಸಲು ಮತ್ತು ಭಾರತದೊಂದಿಗೆ ಬಾಂಧವ್ಯವನ್ನು ಬಲಪಡಿಸುವ ಮಾರ್ಗಗಳನ್ನು ಕಂಡುಕೊಳ್ಳಲು ಇಲ್ಲಿದ್ದೇನೆ. ಜಿ20 ಶೃಂಗ ಸಭೆ ಭಾರತದಲ್ಲಿ ದೊಡ್ಡ ಯಶಸ್ಸನ್ನು ಪಡೆಯುವ ಪ್ರಯತ್ನದಲ್ಲಿ ನಾನು ನನ್ನ ಪಾತ್ರವನ್ನು ನಿರ್ವಹಿಸುತ್ತೇನೆ ಎಂದರು. ಬ್ರಿಟನ್‌ನಲ್ಲಿ ಖಾಲಿಸ್ತಾನ್ ಬೆಂಬಲಿಗರ ಸಮಸ್ಯೆಯ ಕುರಿತು ಮಾತನಾಡಿದ ಸುನಕ್, ಬ್ರಿಟನ್‌ನಲ್ಲಿ ಯಾವುದೇ ರೀತಿಯ ಉಗ್ರವಾದ ಅಥವಾ ಹಿಂಸಾಚಾರ ಸ್ವೀಕಾರಾರ್ಹವಲ್ಲ ಎಂದು ನಾನು ಸ್ಪಷ್ಟವಾಗಿ ಹೇಳಲು ಬಯಸುತ್ತೇನೆ ಎಂದು ಅವರು ಹೇಳಿದರು.


## ಬೈಡನ್–ಮೋದಿ ಸೌಹಾರ್ದ ಮಾತುಕತೆ

ದೇಶಗಳ ನಡುವಿನ ಮಾತುಕತೆಗಳು ಪ್ರಗತಿಯಲ್ಲಿವೆ. ಪ್ರಧಾನಿ ಮೋದಿ ಮತ್ತು ಬೈಡನ್ ದ್ವಿಪಕ್ಷೀಯ ಮಾತುಕತೆಯಲ್ಲಿ ಕ್ವಾಡ್‌ನಲ್ಲಿ ಎರಡೂ ದೇಶಗಳ ಸಕ್ರಿಯ ಪಾತ್ರದ ಬಗ್ಗೆಯೂ ಚರ್ಚಿಸಲಾಗಿದೆ. ಜತೆಗೆ ಜಿ 20 ಅಧ್ಯಕ್ಷ ಸ್ಥಾನಕ್ಕಾಗಿ ಭಾರತವನ್ನು ಬೈಡನ್ ಶ್ಲಾಘಿಸಿದ್ದಾರೆ. ಉಭಯ ರಾಷ್ಟ್ರಗಳ ಮುಖ್ಯಸ್ಥರ ನಡುವಿನ ದ್ವಿಪಕ್ಷೀಯ ಮಾತುಕತೆ ಒಟ್ಟು ನಲವತ್ತೈದು ನಿಮಿಷಗಳ ಕಾಲ ನಡೆದಿದೆ. ದ್ವಿಪಕ್ಷೀಯ ಮಾತುಕತೆ ಮುಗಿದ ನಂತರ, ಅಮೆರಿಕದ ಅಧ್ಯಕ್ಷರು ಐಟಿಸಿ ಮೌರ್ಯ ಹೋಟೆಲ್‌ಗೆ ತೆರಳಿದರು. ಸೆ.9ರಂದು ಪ್ರಧಾನಿ ಮೋದಿ ಅವರು ಜಪಾನ್, ಜರ್ಮನಿ ಮತ್ತು ಇಟಲಿ ನಾಯಕರ ಜತೆ ಮಾತುಕತೆ ನಡೆಸಲಿದ್ದಾರೆ. ಸೆಪ್ಟೆಂಬರ್ 10ರಂದು ಫ್ರೆಂಚ್ ಅಧ್ಯಕ್ಷ ಮ್ಯಾಕ್ರನ್ ಅವರ ಜತೆಯೂ ಮಾತುಕತೆ ನಡೆಸಲಿದ್ದಾರೆ.

**ಕಾಂಗ್ರೆಸ್ ಸರ್ಕಾರದ ವಿರುದ್ಧ ಹೋರಾಟ; ಪಕ್ಷ ಸಂಘಟನೆಗೆ ಕುಮಾರಸ್ವಾಮಿ ಕಂಕಣ**

# ನಾಳೆ ಬೆಂಗಳೂರು ಅರಮನೆ ಮೈದಾನದಲ್ಲಿ ಜೆಡಿಎಸ್ ಸಮಾವೇಶ

- ಪಕ್ಷವ ಮರಳಿ ಕಟ್ಟೋಣ; ಟ್ವೀಟ್ ಮೂಲಕ ಕರೆ ನೀಡಿದ ಮಾಜಿ ಸಿಎಂ
- ಸಹಸ್ರಾರು ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕಾರ್ಯಕರ್ತರಿಗೆ ಹೆಚ್‌ಡಿಕೆ ಮನವಿ



ಬೆಂಗಳೂರು, ಸೆ.8(ಕೆಎಂಶಿ)–ಅನ್ನ ಕೊಡುವ ರೈತರನ್ನು, ತೆರಿಗೆ ತೆರುವ ನಾಗರಿಕರನ್ನು ಕಾಲ ಕಸದಂತೆ ಕಡೆಗಣಿಸುತ್ತಿರುವ ಈ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ಮಾಡುವುದಾಗಿ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ.

ಜನರ ಪ್ರೀತಿ, ಹಾರೈಕೆ, ದೈವದ ಕರುಣೆ, ತಂದೆ–ತಾಯಿಯ ಆಶೀರ್ವಾದದಿಂದ ನನ್ನ ಆರೋಗ್ಯ ಸಂಪೂರ್ಣ ಸುಧಾರಿಸಿದೆ. ಪಕ್ಷದ ಚಟುವಟಿಕೆಗಳಲ್ಲಿ ಮತ್ತೆ ಸಕ್ರಿಯವಾಗಿ ಭಾಗಿಯಾಗುತ್ತಿದ್ದೇನೆ. ನಾವೆಲ್ಲರೂ ಹೋರಾಡೋಣ. ಪಕ್ಷವನ್ನು ಚೈತನ್ಯಶೀಲವಾಗಿ ಮರಳಿ ಕಟ್ಟೋಣ ಎಂದು ಸರಣಿ ಟ್ವೀಟ್ ಮಾಡಿ ತಿಳಿಸಿದ್ದಾರೆ. ರಾಜ್ಯ ಸಂಕಷ್ಟದಲ್ಲಿದೆ. ತೀವ್ರ ಬರ, ನೆರೆ, ಅನಧಿಕೃತ ಲೋಡ್‌ಶೆಡ್ಡಿಂಗ್, ಕಾವೇರಿ ಬಿಕ್ಕಟ್ಟಿನಿಂದ ತತ್ತರಿಸುತ್ತಿದೆ. ರೈತರು ಮತ್ತು ನಾಗರಿಕರನ್ನು ಕಾಲ ಕಸದಂತೆ ನೋಡಿಕೊಳ್ಳುವ ಈ ಸರ್ಕಾರದ ವಿರುದ್ಧ ಹೋರಾಟ ನಡೆಸಿ ಜನರ ಪ್ರೀತಿ, ವಿಶ್ವಾಸ ಗಳಿಸೋಣ.

ಜನಪರ ನಿಲುವು ನಮ್ಮೆಲ್ಲರ ಹೊಣೆ ಎಂದಿರುವ ಅವರು, ಮುಂಬರುವ ಲೋಕಸಭೆ, ಜಿಲ್ಲಾ, ತಾಲೂಕು ಪಂಚಾಯಿತಿ, ಬಿಬಿಎಂಪಿ ಚುನಾವಣೆ ಹಾಗೂ ಪಕ್ಷ ಸಂಘಟನೆಗೆ ಸಂಬಂಧಿಸಿದಂತೆ ಇದೇ ಸೆ.10ರಂದು ಬೆಂಗಳೂರು ಅರಮನೆ ಮೈದಾನದಲ್ಲಿ ಬೃಹತ್ ಜೆಡಿಎಸ್ ಸಮಾವೇಶ ನಡೆಯಲಿದೆ ಎಂದು ತಿಳಿಸಿದ್ದಾರೆ.

ಮಾಜಿ ಪ್ರಧಾನಿಗಳು, ಪಕ್ಷದ ರಾಷ್ಟ್ರೀಯ ಅಧ್ಯಕ್ಷರು ಆಗಿರುವ ಹೆಚ್.ಡಿ.ದೇವೇಗೌಡರು, ಪಕ್ಷದ ರಾಜ್ಯಾಧ್ಯಕ್ಷ ಸಿಎಂ ಇಬ್ರಾಹಿಂ, ಕೋರ್ ಕಮಿಟಿ ಅಧ್ಯಕ್ಷ ಜಿ.ಟಿ.ದೇವೇಗೌಡರು ಸೇರಿದಂತೆ ಪಕ್ಷದ ಎಲ್ಲಾ ಶಾಸಕರು, ಮಾಜಿ ಶಾಸಕರು, ಹಿರಿಯ ಮುಖಂಡರು, ಸಾವಿರಾರು ಕಾರ್ಯಕರ್ತರು ಸಭೆಯಲ್ಲಿ ಭಾಗಿಯಾಗಲಿದ್ದಾರೆ ಎಂದಿದ್ದಾರೆ.

ಅರಮನೆ ಮೈದಾನದ ನಲಪಾಡ್ ಪೆವಿಲಿಯನ್‌ನಲ್ಲಿ ಭಾನುವಾರ ಬೆಳಗ್ಗೆ 10.30 ಗಂಟೆಯಿಂದ ಸಭೆ ಆರಂಭವಾಗಲಿದೆ ಎಂದಿರುವ ಮಾಜಿ ಮುಖ್ಯಮಂತ್ರಿಗಳು, ಎಲ್ಲರೂ ತಪ್ಪದೇ ಭಾಗವಹಿಸಬೇಕು ಎಂದು ಮನವಿ ಮಾಡಿದ್ದಾರೆ.

ಈ ನಡುವೆ ಕಾರ್ಯಕರ್ತರು ಹಾಗೂ ಮುಖಂಡರಿಗೆ ಸಂದೇಶ ನೀಡಿರುವ ಅವರು, ಸೋತಿದ್ದೇವೆ, ನಿಜ. ಸೋಲೇ ಕೊನೆಯಲ್ಲ. ಹೋರಾಟದ ಹಾದಿಯಲ್ಲಿ ನಾವೆಲ್ಲರೂ ಸ್ಥೈರ್ಯ, ಅರ್ಪಣಾಭಾವದಿಂದ ಹೆಜ್ಜೆ ಹಾಕಲೇಬೇಕು. ಈ ಹಿನ್ನೆಲೆಯಲ್ಲಿ ಮಾಜಿ ಪ್ರಧಾನಿಗಳು, ಪಕ್ಷದ ರಾಷ್ಟ್ರೀಯ ಅಧ್ಯಕ್ಷರಾದ ಹೆಚ್.ಡಿ.ದೇವೇಗೌಡರ ಸಾನ್ನಿಧ್ಯದಲ್ಲಿ ಬೆಂಗಳೂರು ಅರಮನೆ ಮೈದಾನದಲ್ಲಿ ಮಹತ್ವದ ಸಭೆ ಕರೆದಿದ್ದೇವೆ. ಆ ಸಭೆಗೆ ಎಲ್ಲರೂ ಬರಬೇಕು ಎಂದಿದ್ದಾರೆ.

ನಾನೂ ಸೇರಿ ಪ್ರತಿಯೊಬ್ಬರೂ ಪಕ್ಷದ ಕಟ್ಟಾಳುಗಳೇ ಎನ್ನುವುದನ್ನು ಯಾರೂ ಮರೆಯುವಂತಿಲ್ಲ. ಪಕ್ಷದ ಉಳಿವು, ಗೆಲುವಿಗಾಗಿ ಅವಿರತವಾಗಿ ಶ್ರಮಿಸೋಣ. ತಪ್ಪದೇ ಸಭೆಗೆ ಬನ್ನಿ, ಮುಕ್ತವಾಗಿ ಮಾತನಾಡೋಣ. ಮುಂದಿನ ಹೆಜ್ಜೆಗಳನ್ನು ದೃಢವಾಗಿ ಇಡೋಣ. "ಏಳಿ ಎದ್ದೇಳಿ, ಗುರಿ ಮುಟ್ಟುವ ತನಕ ನಿಲ್ಲದಿರಿ." ಈ ವಿವೇಕ ವಾಣಿಯೇ ನಮ್ಮ ಪಾಲಿನ ಮೂಲಮಂತ್ರ ಎಂದು ಕಾರ್ಯಕರ್ತರನ್ನು ಮಾಜಿ ಮುಖ್ಯಮಂತ್ರಿಗಳು ಹುರಿದುಂಬಿಸಿದ್ದಾರೆ.

# ಧರಣೆ ಹಿಂಪಡೆದ ಮಂಡ್ಯ ಜಿಲ್ಲಾ ರೈತರ ಹಿತರಕ್ಷಣಾ ಸಮಿತಿ



ಮಂಡ್ಯ, ಸೆ.8(ಮೋಹನ್‌ರಾಜ್)– ಕೆಆರ್‌ಎಸ್‌ನಿಂದ ತಮಿಳು ನಾಡಿಗೆ ಹರಿಸುತ್ತಿದ್ದ ನೀರನ್ನು ಸ್ಥಗಿತಗೊಳಿಸಿರುವ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲಾ ರೈತ ಹಿತ ರಕ್ಷಣಾ ಸಮಿತಿ ನಡೆಸುತ್ತಿದ್ದ ಪ್ರತಿಭಟನಾ ಧರಣಿಯನ್ನು ತಾತ್ಕಾಲಿಕವಾಗಿ ಹಿಂಪಡೆದಿದೆ. ಶುಕ್ರವಾರ ನಗರದ ಸರ್‌ಎಂವಿ ಪ್ರತಿಮೆ ಎದುರು ಕಳೆದ 9 ದಿನದಿಂದ ನಡೆಸುತ್ತಿದ್ದ ಪ್ರತಿಭಟನೆಯನ್ನು ವಾಪಸ್ ಪಡೆದಿರುವುದಾಗಿ ರೈತ ಹಿತ ರಕ್ಷಣಾ ಸಮಿತಿ ಪ್ರಕಟಿಸಿದೆ.

ಕಾವೇರಿ ಕೊಳ್ಳದ ಜಲಾಶಯಗಳಿಂದ ನಿರಂತರವಾಗಿ ನೀರು ಹರಿಸುತ್ತಿದ್ದ ಸರ್ಕಾರದ ವಿರುದ್ಧ ಪ್ರತಿಭಟನಾ ಧರಣಿ ನಡೆಸುತ್ತಾ ಬಂದಿದ್ದೆವು. ಇದೀಗ ರಾಜ್ಯ ಸರ್ಕಾರ ನೆರೆ ರಾಜ್ಯಕ್ಕೆ ಹರಿಸುತ್ತಿದ್ದ ನೀರನ್ನು ಸ್ಥಗಿತಗೊಳಿಸಿರುವುದರಿಂದ ಹೋರಾಟವನ್ನು ತಾತ್ಕಾಲಿಕವಾಗಿ ಕೈ ಬಿಡಲಾಗಿದೆ ಎಂದು ಸಮಿತಿ ಮುಖಂಡರು, ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಸಮ್ಮುಖದಲ್ಲಿ ಘೋಷಿಸಿದರು.

ಧರಣಿ ಸ್ಥಳಕ್ಕೆ ಭೇಟಿ ನೀಡಿ ಮಾತನಾಡಿದ ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ, ಇಂದಿನಿಂದ ತಮಿಳುನಾಡಿಗೆ ನೀರು ನಿಲ್ಲಿಸಿದ್ದೇವೆ. ಇದೇ 12 ರಂದು ನಡೆಯುವ ಸಂಪುಟ ಸಭೆಯಲ್ಲಿ ಒಂದು ತೀರ್ಮಾನಕ್ಕೆ ಬರಲಿದ್ದು, ನಮ್ಮ ಸರ್ಕಾರ ರೈತರ ಹಿತ ಕಾಯಲು ಬದ್ಧವಾಗಿದೆ. ಸಂಪುಟ ಸಭೆಯಲ್ಲಿ ಸೂಕ್ತ ತೀರ್ಮಾನ ತೆಗೆದುಕೊಳ್ಳುತ್ತೇವೆ. ಸೆ.21ರಂದು ನಡೆಯುವ ಸುಪ್ರೀಂ ಕೋರ್ಟ್ ವಿಚಾರಣೆಯಲ್ಲಿ ಸಮರ್ಥವಾಗಿ ವಾದ ಮಂಡಿಸುತ್ತೇವೆ. ಧರಣಿ ಸತ್ಯಾಗ್ರಹ ವಾಪಸ್ ಪಡೆದಿದ್ದಕ್ಕೆ ಪ್ರತಿಭಟನಾಕಾರರಿಗೆ ಧನ್ಯವಾದ ಹೇಳುತ್ತೇನೆ ಎಂದರು.

ಹಿತರಕ್ಷಣಾ ಸಮಿತಿಯ ಸುನಂದಾ ಜಯರಾಂ ಮಾತನಾಡಿ, ಕಾವೇರಿ ಚಳವಳಿ ಸಿಲ್ವರ್ ಜ್ಯೂಬಿಲಿ ಪಾರ್ಕಿನ ಹಿಪ್ಪೆ ಮರದ ಕೆಳಗೆ ನಡೆಯುತ್ತಿತ್ತು. ಹಿಪ್ಪೆ ಮರದ ಚಳವಳಿ ಎಂದೇ ಪ್ರಸಿದ್ಧಿ ಪಡೆದಿತ್ತು ಕಾವೇರಿ ಕೊಳ್ಳದ ರೈತರ ಹಿತ ಕಾಪಾಡುವುದೇ ನಮ್ಮ ಪ್ರಮುಖ ಉದ್ದೇಶವಾಗಿದ್ದು, ನಿರಂತರವಾಗಿ ಹೋರಾಡುತ್ತಾ ಬಂದಿದ್ದೇವೆ. ಯಾವುದೇ ಸರ್ಕಾರ ಬರಲಿ ಕಾವೇರಿ ವಿಚಾರದಲ್ಲಿ ಎಲ್ಲರ ವಿರುದ್ಧವೂ ಹೋರಾಟ ಮಾಡಿದ್ದೇವೆ. ಮುಂದೆಯೂ ಹೋರಾಟ ನಿರಂತರವಾಗಿರಲಿದೆ ಎಂದರು.

ಸಂಸದರು ಜಿಲ್ಲೆಯ ರೈತರ ಹಿತ ಕಾಪಾಡುವಲ್ಲಿ ನಿರ್ಲಕ್ಷ್ಯ ತೋರಿದ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಮೇಲೆ ಒತ್ತಡ ತರಬೇಕಾಯಿತು. ಕಾವೇರಿ ವಿಚಾರದಲ್ಲಿ ಸಮಗ್ರ ಚರ್ಚೆಯಾಗಬೇಕಾಗಿದ್ದು, ಹಾಗಾಗಿ ಮುಖ್ಯಮಂತ್ರಿ ಅಧ್ಯಕ್ಷತೆಯಲ್ಲಿ ಹೋರಾಟಗಾರರ ಸಭೆ ಕರೆಯುವಂತೆ ಮನವಿ ಮಾಡಿದರು.

ಸಂಸದೆ ಸುಮಲತಾ ಕೇಂದ್ರದ ಮೇಲೆ ಒತ್ತಡ ಹಾಕುವುದಿರಲಿ ರೈತರ ಪರ ಹೋರಾಟ ಮಾಡಲಿಲ್ಲ. ಕಾವೇರಿ ಜಲಾನಯನ ಪ್ರದೇಶದ 8 ಜಿಲ್ಲೆಗಳ ಸಂಸದರು ಸೇರಿ ರಾಜ್ಯದ ಯಾವ ಸಂಸದರು ಬಾಯಿ ಬಿಡಲಿಲ್ಲ ಎಂದು ಕಿಡಿಕಾರಿದರು.

ಸಂಘ ಸಂಸ್ಥೆಗಳು ಹೋರಾಟಗಾರರ ಸಹಕಾರದಿಂದ ಕಾವೇರಿ ಹೋರಾಟವನ್ನು ಇಷ್ಟು ದಿನ ಮುನ್ನಡೆಸಿದ್ದೇವೆ. ತಾತ್ಕಾಲಿಕವಾಗಿ ಧರಣಿ ವಾಪಸ್ ಪಡೆದಿದ್ದು, ಮುಂದಿನ ದಿನಗಳಲ್ಲೂ ಜಿಲ್ಲೆಯ ಜನರ ಸಹಕಾರ ಇರಲಿ ಎಂದು ಮನವಿ ಮಾಡಿದರು.

ಈ ವೇಳೆ ಶಾಸಕ ಎ.ಬಿ.ರಮೇಶ್‌ಬಾಬು ಬಂಡಿಸಿದ್ದೇಗೌಡ, ಜಿಲ್ಲಾಧಿಕಾರಿ ಡಾ. ಕುಮಾರ್, ಜಿಪಂ ಸಿಇಓ ಶೇಖ್ ತನ್ವೀರ್ ಆಸೀಫ್, ಮಾಜಿ ಶಾಸಕರಾದ ಎಂ.ಎಸ್. ಆತ್ಮಾನಂದ, ಕೆ.ಟಿ.ಶ್ರೀಕಂಠೇಗೌಡ, ಜಿ.ಬಿ. ಶಿವಕುಮಾರ್, ಹೋರಾಟಗಾರರಾದ ಕನ್ನಡಸೇನೆ ಮಂಜು, ಕೆ.ಬೋರಯ್ಯ, ಚಂದ್ರಶೇಖರ್, ತಗ್ಗಹಳ್ಳಿ ವೆಂಕಟೇಶ್, ಗುರುಪ್ರಸಾದ್ ಕೆರಗೋಡು, ವೆಂಕಟಗಿರಿ, ಸಿ.ಟಿ.ಮಂಜುನಾಥ್ ಸೇರಿದಂತೆ ನೂರಾರು ಮಂದಿ ಪಾಲ್ಗೊಂಡಿದ್ದರು.

## ಸರ್ಪ ಸಂಸ್ಕಾರ, ಆಶ್ಲೇಷ ಬಲಿಪೂಜೆ

ಮೈಸೂರು, ಸೆ.8– ಮೈಸೂರು ದೇವರಾಜ ಮೊಹಲ್ಲಾದ ಶ್ರೀ ಅಮೃತೇಶ್ವರ ದೇವಾಲಯದಲ್ಲಿ ಸೆ.12ರ ಮಂಗಳವಾರ ಬೆಳಗ್ಗೆ 7.30ಕ್ಕೆ ಸರ್ಪಸಂಸ್ಕಾರ ಮತ್ತು ಕಾಲಸರ್ಪ ಶಾಂತಿ ಅಂಗವಾಗಿ ಹೋಮ, ಸೆ.13ರ ಬುಧವಾರ ಬೆಳಗ್ಗೆ 7.30ಕ್ಕೆ ಸರ್ಪ ಸಂಸ್ಕಾರಾಂಗ ಹೋಮ ಆಶ್ಲೇಷ ಬಲಿ, ಕಾಲ ಸರ್ಪ ಶಾಂತಿ ಮತ್ತು ಕುಜ ದೋಷ ನಿವೃತ್ತಿ ಶಾಂತಿ ನೆರವೇರುತ್ತದೆ. ಹೆಚ್ಚಿನ ಮಾಹಿತಿಗೆ ಮೈ. ಕುಮಾರ್, ಜಾತಕ ವಿಮರ್ಶಕರು ಇವರನ್ನು ಮೊ: 98451–83399, 93421–83392 ಸಂಪರ್ಕಿಸಬಹುದು.

## ಮಹದೇವಪ್ಪ ನಿಧನ



ಚಾಮರಾಜನಗರ, ಸೆ.8– ತಾಲೂಕಿನ ಹಳ್ಳಿಕೆರೆಹುಂಡಿ ಗ್ರಾಮದ ನಿವಾಸಿ ಮಹದೇವಪ್ಪ(75) ಶುಕ್ರವಾರ ಸಂಜೆ ನಿಧನರಾದರು.

ಮೃತರು ಪತ್ನಿ, ಪುತ್ರ ಹಳ್ಳಿಕೆರೆಹುಂಡಿ ಸಹಕಾರ ಸಂಘದ ಅಧ್ಯಕ್ಷ ಮಹೇಶ್ ಸೇರಿದಂತೆ ಇಬ್ಬರು ಪುತ್ರರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯ ಕ್ರಿಯೆ ಶನಿವಾರ ಮಧ್ಯಾಹ್ನ 1 ಗಂಟೆಗೆ ಸ್ವಗ್ರಾಮದಲ್ಲಿ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಒಂದನೇ ಪುಟದಿಂದ

## ಪೂರ್ಣ ಪ್ರಮಾಣದ ತಾಲೀಮು

ಬನ್ನಿಮಂಟಪದ ಪಂಜಿನ ಕವಾಯತು ಮೈದಾನ ತಲುಪಿದವು. ಮಾರ್ಗದಲ್ಲಿ ನಾಲ್ಕು ಕಡೆ ಲದ್ದಿ ಹಾಕಿದವು. ಜೊತೆಗೆ ಒಂದೊಂದು ನಿಮಿಷ ವಿರಮಿಸಿದ ಆನೆಗಳು, ನಂತರ ಯಾವುದೇ ಅಡೆತಡೆ, ಅಳುಕಿಲ್ಲದೆ ಸರಾಗವಾಗಿ ಟಾಸ್ಕ್ ಪೂರ್ಣಗೊಳಿಸಿದವು.

**ಜಂಬೂಸವಾರಿ ಮಾರ್ಗದಲ್ಲಿ ಕಳೆ ಕಟ್ಟಿದ ಆನೆಗಳು:** ದಸರಾ ಮಹೋತ್ಸವದ ಪ್ರಮುಖ ಆಕರ್ಷಣೆಯಾದ ಜಂಬೂಸವಾರಿ ಸಾಗುವ ಮಾರ್ಗದಲ್ಲಿ ಗಜಪಡೆ ಇಂದು ದಸರಾ ಕಳೆ ಕಟ್ಟುವಂತೆ ಮಾಡಿದವು. ಮೊದಲ ತಂಡದಲ್ಲಿ ಆಗಮಿಸಿದ 9 ಆನೆಗಳಲ್ಲಿ ಅರ್ಜುನ ಹೊರತುಪಡಿಸಿ ಉಳಿದ ಎಲ್ಲಾ 8 ಆನೆಗಳು ಸಾಲಾಗಿ ಹೆಜ್ಜೆ ಹಾಕಿದವು. ಅರಮನೆಯಿಂದ ಹೊರಟ ಆನೆಗಳು ಕೆ.ಆರ್.ವೃತ್ತದಿಂದ ಸಯ್ಯಾಜಿರಾವ್ ರಸ್ತೆಗೆ ಪ್ರವೇಶಿಸುತ್ತಿದ್ದಂತೆಯೇ ರಸ್ತೆ ಎರಡು ಬದಿಯಲ್ಲಿ ನೂರಾರು ಮಂದಿ ಸಾರ್ವಜನಿಕರು ನಿಂತು ದಸರಾ ಗಜಪಡೆಯನ್ನು ಕಣ್ತುಂಬಿಕೊಂಡು ಸಂಭ್ರಮಿಸಿದರು. ಬನ್ನಿಮಂಟಪದ ಪಂಜಿನ ಕವಾಯತು ಮೈದಾನದವರೆಗೂ ಸುಮಾರು 1.10 ಗಂಟೆ ಅವಧಿಯ ಗಜಪಯಣದಲ್ಲಿ ದಾರಿ ಹೋಕರ ಚಿತ್ತ ಗಜಪಡೆಯ ಮೇಲಿತ್ತು. ಮೊದಲ ದಿನವೇ ಬನ್ನಿಮಂಟಪದವರೆಗೂ ಬಂದು ವಾಪಸ್ಸಾದ ಆನೆಗಳನ್ನು ನೋಡಲು ಜನ ಮುಗಿ ಬಿದ್ದರು.

**ಭದ್ರತೆ:** ತಾಲೀಮಿನ ವೇಳೆ ಸಾರ್ವಜನಿಕರು ಆನೆಗಳ ಬಳಿ ಸುಳಿಯದಂತೆ ಕಟ್ಟೆಚ್ಚರ ವಹಿಸಲಾಗಿತ್ತು. ಆನೆಗಳ ಮುಂದೆ ಹಾಗೂ ಹಿಂದೆ ಪೊಲೀಸ್ ಬೆಂಗಾವಲು ವಾಹನ ತೆರಳುವ ವ್ಯವಸ್ಥೆ ಮಾಡಲಾಗಿತ್ತು. ಅಲ್ಲದೆ ಅರಣ್ಯ ಸಿಬ್ಬಂದಿಗಳು, ಆನೆಗಳ ಉಸ್ತುವಾರಿ ಸಿಬ್ಬಂದಿ ಆನೆಯ ಪಕ್ಕದಲ್ಲೇ ಸಾಗುವ ಮೂಲಕ ಯಾರೂ ಆನೆಗಳ ಬಳಿ ಬರದಂತೆ ನೋಡಿಕೊಳ್ಳುತ್ತಿದ್ದರು. ತಾಲೀಮು ಮುಗಿದ ಬಳಿಕ ಬನ್ನಿಮಂಟಪದ ಮೈದಾನದಲ್ಲಿ ಕೆಲ ಕಾಲ ವಿರಮಿಸಿದ ಆನೆಗಳು ಮತ್ತೆ ಅದೇ ಮಾರ್ಗದಲ್ಲಿ ಸಾಗಿ ಅರಮನೆ ತಲುಪಿದವು. ಹೀಗೆ ಬೆಳಗ್ಗೆ ಹಾಗೂ ಸಂಜೆ ತಾಲೀಮು ನಡೆಯಿತು. ತಾಲೀಮಿನ ವೇಳೆ ಆರ್‌ಎಫ್‌ಓ ಸಂತೋಷ್ ಹೂಗಾರ್, ಪಶುವೈದ್ಯ ಡಾ.ಮುಜೀಬ್ ರೆಹಮಾನ್, ಸಹಾಯಕರಾದ ಅಕ್ರಮ್, ರಂಗರಾಜು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ರಾಜ್ಯದ ಹಿತ ಕಾಯುವಲ್ಲಿ ವಿಫಲ

ಅಸಮಾಧಾನ ವ್ಯಕ್ತಪಡಿಸಿದರು. ಡ್ಯಾಂನಲ್ಲಿ ಸಾಕಷ್ಟು ನೀರಿದ್ದಾಗಲೇ ಕೆರೆ–ಕಟ್ಟೆ ತುಂಬಿಸಲಿಲ್ಲ. ಈ ಸಂಬಂಧ ಜೂನ್‌ನಲ್ಲಿ ನಡೆಸಬೇಕಾದ ಸರ್ವಪಕ್ಷ ಸಭೆಯನ್ನು ಆಗಸ್ಟ್ ತಿಂಗಳಲ್ಲಿ ನಡೆಸಿದ್ದಾರೆ. ಸುಪ್ರೀಂಕೋರ್ಟ್ ಹಾಗೂ ಕಾವೇರಿ ನಿರ್ವಹಣಾ ಪ್ರಾಧಿಕಾರದ ಮುಂದೆ ಸಮರ್ಥ ವಾದ ಮಂಡನೆ ಮಾಡುವಲ್ಲಿಯೂ ಸಂಪೂರ್ಣ ವಿಫಲರಾಗಿದ್ದಾರೆ ಎಂದು ಕಿಡಿಕಾರಿದರು. ನೀರಿನ ವಿಷಯದಲ್ಲಿ ರಾಜಕಾರಣ ಮಾಡಬಾರದು. ಈ ವಿಚಾರದಲ್ಲಿ ಕರ್ನಾಟಕ ಸರ್ಕಾರಕ್ಕೆ ಎಚ್ಚರಿಕೆ ಕೊಡಲು ಇಲ್ಲಿಗೆ ಬಂದಿದ್ದೇವೆ. ನೀರು ಬಿಟ್ಟರೆ ಕಾವೇರಿ ಮಕ್ಕಳಿಗೆ ದ್ರೋಹ ಎಸಗಿದ ಹಾಗೆ. ಬೆಳೆಗಳು ಒಣಗುತ್ತಿದ್ದು, ರಾಜ್ಯದ ಜನರಿಗೆ ನೀರು ಕೊಡುತ್ತಿಲ್ಲ. ನಮ್ಮ ಹಕ್ಕಿನ ನೀರು ತಮಿಳುನಾಡಿಗೆ ಕೊಡುವ ದುಸ್ಸಾಹಸವನ್ನು ರಾಜ್ಯ ಸರ್ಕಾರ ಮಾಡಿದೆ. ನಾಡಿನ ಹಿತಕ್ಕಾಗಿ ಡ್ಯಾಂ ನಿರ್ಮಾಣ ಮಾಡಿದ್ದು, ಅದರ ಉಪಯೋಗವನ್ನು ಪಕ್ಕದ ತಮಿಳುನಾಡು ಪಡೆಯುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು. ಕಾಂಗ್ರೆಸ್ ಸರ್ಕಾರ ಕಾವೇರಿ ವಿಚಾರದಲ್ಲಿ ರಾಜ್ಯದ ಜನರಿಗೆ ಮಾಡಿದ ಮೋಸವನ್ನು ಅವರು ಎಂದಿಗೂ ಕ್ಷಮಿಸಲ್ಲ. ಜನ ನಿಮಗೆ ಬಹುಮತ ಕೊಟ್ಟಿದ್ದಕ್ಕೆ ನೀವು ನೀರು ಬಿಟ್ಟು ಬಹುದೊಡ್ಡ ಬಹುಮಾನ ಕೊಟ್ಟಿದ್ದೀರಿ. ಈ ತಿಂಗಳ 12ರ ಬಳಿಕ ಎಲ್ಲಾ ಜಿಲ್ಲೆಯಲ್ಲಿ ಕಾವೇರಿ ಹಿತರಕ್ಷಣೆಗಾಗಿ ದೊಡ್ಡ ಅಭಿಯಾನ ಮಾಡಲಿದ್ದೇವೆ. ಕಾವೇರಿ ತಾಯಿ ಯಾತ್ರೆ ಮಾಡಲಿದ್ದೇವೆ ಎಂದರು.

**ಮಾಧ್ಯಮದವರ ನಿರ್ಬಂಧಕ್ಕೆ ಬೊಮ್ಮಾಯಿ ಕಿಡಿ:** ಅಣೆಕಟ್ಟೆ ಒಳಗೆ ಮಾಧ್ಯಮದವರನ್ನು ಬಿಡದಿರುವುದು ಸಂಶಯ ಮೂಡಿಸುತ್ತಿದೆ. ಆದೇಶಕ್ಕಿಂತಲೂ ಹೆಚ್ಚುವರಿ ನೀರನ್ನು ತಮಿಳುನಾಡಿಗೆ ಬಿಟ್ಟಿದ್ದಾರೆ. ಹೆಚ್ಚು ನೀರು ಹರಿಸಿರುವುದರಿಂದಲೇ ಡ್ಯಾಂಗೆ ಮಾಧ್ಯಮದವರನ್ನು ಬಿಡಲು ಅಧಿಕಾರಿಗಳು ನಿರಾಕರಿಸಿರುವುದಾಗಿ ರಾಜ್ಯ ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದರು.

ಸಂಸದ ಪ್ರತಾಪ್ ಸಿಂಹ ಮಾತನಾಡಿ, ಡ್ಯಾಂ ವೀಕ್ಷಣೆಗೆ ಮಾಧ್ಯಮದವರನ್ನು ಬಿಡಲಿಲ್ಲ. ಅವರೇನು ಬಾಂಬ್ ಹಾಕಲು ಬಂದಿದ್ದಾರಾ..? ನಿಜ ಸಂಗತಿ ತಿಳಿಸುವ ಮಾಧ್ಯಮಗಳನ್ನು ಬಿಡದಿರೋದು ಸರ್ಕಾರ ಏನೋ ಮುಚ್ಚಿಡುತ್ತಿದೆ ಎಂಬ ಅನುಮಾನ ಮೂಡುತ್ತದೆ. ಆ ಜ್ಯೋತಿ... ಈ ಜ್ಯೋತಿ... ಅಂತ ಜಾತ್ರೆ ಮಾಡುತ್ತಾ ಕುಳಿತ ಸರ್ಕಾರ ಸುಪ್ರೀಂಕೋರ್ಟ್ ಮುಂದೆ ಕಾವೇರಿ ವಸ್ತು ಸ್ಥಿತಿಯನ್ನು ತಿಳಿಸಲಿಲ್ಲ. ತಮಿಳುನಾಡು ಮಾಡಿರುವ ದೋಖಾವನ್ನು ಪ್ರಾಧಿಕಾರಕ್ಕೆ ತಿಳಿಸದೆ ಸುಮ್ಮನಾಗಿದ್ದಾರೆ. ನಮ್ಮ ಜನರ ಹಿತಕ್ಕಿಂತ ಡಿಎಂಕೆ ಜೊತೆಗಿನ ಸಖ್ಯ ಬೆಳಸೋದೆ ಇವರಿಗೆ ಮುಖ್ಯವಾಗಿದೆ ಎಂದು ಟೀಕಿಸಿದರು. ಉದಯನಿಧಿ ಸ್ಟಾಲಿನ್ ಸನಾತನ ಧರ್ಮದ ಬಗ್ಗೆ ಹೇಳಿಕೆ ಕೊಟ್ಟಾಗ ಸಿದ್ದರಾಮಯ್ಯರ ಬಾಯಲ್ಲಿ ಮಾತೆ ಹೊರಡಲಿಲ್ಲ. ಮೋದಿ ಟ್ವಿಟರ್‌ನಲ್ಲಿ ಉತ್ತರ ಕೊಡಿ ಎಂದು ಹೇಳಿದ ತಕ್ಷಣ ಇದು ಪ್ರಚೋದನಾಕಾರಿ ಹೇಳಿಕೆ ಎಂದು ಹೇಳಿದ್ದಾರೆ. ಮಂಡ್ಯ, ಮೈಸೂರು, ಬೆಂಗಳೂರು ಗ್ರಾಮಾಂತರ ನಮ್ಮ ಕೊಡಗಿನವರು ಕಾಂಗ್ರೆಸ್‌ನಿಂದ ಯಾಮಾರಿದ್ದಾರೆ. ಸಿದ್ದರಾಮಯ್ಯ, ದೇವೇಗೌಡರ ಗರಡಿಯಲ್ಲಿ ಪಳಗಿದಂತವರು ಕಾವೇರಿಯನ್ನು ಉಳಿಸಿಕೊಳ್ಳಲು ಏನಾದರೂ ಮಾಡುತ್ತಾರೆ ಅಂದುಕೊಂಡೆವು. ಆದರೆ ಇಂದು ಪರಿಸ್ಥಿತಿ ಬೇರೆ ಆಗಿದೆ. ಹೀಗೆ ಮುಂದುವರೆದರೆ ಮೈಸೂರು, ಮಂಡ್ಯ ಭಾಗದ ಜನರು ಅನ್ನದ ಬದಲು ಮಣ್ಣು ತಿನ್ನಬೇಕಾಗುತ್ತದೆ ಎಂದು ಕಿಡಿಕಾರಿದರು. ಈ ಸಂದರ್ಭ ಸಂಸದೆ ಸುಮಲತಾ, ಮಾಜಿ ಸಚಿವರಾದ ಆರ್.ಅಶೋಕ್, ಅಶ್ವತ್ಥ್‌ನಾರಾಯಣ, ಗೋವಿಂದ ಕಾರಜೋಳ, ಶಾಸಕ ಶ್ರೀವತ್ಸ, ಮುಖಂಡರಾದ ಡಾ.ಸಿದ್ದರಾಮಯ್ಯ, ಸಚ್ಚಿದಾನಂದ, ಡಾ.ಇಂದ್ರೇಶ್, ಅಶೋಕ್ ಜಯರಾಂ, ಮೈಸೂರು ಮೇಯರ್ ಶಿವಕುಮಾರ್, ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಪಿ.ಉಮೇಶ್ ಇತರರಿದ್ದರು.

## ಹರಿಯುತ್ತಿದ್ದ ನೀರು ನಿಲುಗಡೆ

ಈ ನಿಯಮವನ್ನು ಪಾಲಿಸಲು ಕಷ್ಟ ಎಂದು ಪ್ರಾಧಿಕಾರಕ್ಕೆ ಮನವರಿಕೆ ಮಾಡಿತ್ತು. ನಂತರ ಅಂತಿಮವಾಗಿ 15 ದಿನಗಳ ಕಾಲ 5 ಸಾವಿರ ಕ್ಯೂಸೆಕ್ ನೀರು ಬಿಡುವಂತೆ ಪ್ರಾಧಿಕಾರ ಸೂಚನೆ ನೀಡಿತ್ತು. ಹತ್ತು ದಿನಗಳ ಕಾಲ 5 ಸಾವಿರ ಕ್ಯೂಸೆಕ್‌ನಂತೆ 50 ಸಾವಿರ ಕ್ಯೂಸೆಕ್ ನಷ್ಟು ನೀರು ಬಿಟ್ಟಿದ್ದು, ಇದರ ಜೊತೆಗೆ 12 ಸಾವಿರ ಕ್ಯೂಸೆಕ್‌ನಷ್ಟು ಮಳೆ ನೀರು ಸಹ ಕರ್ನಾಟಕದ ಮೂಲಕ ತಮಿಳುನಾಡು ತಲುಪಿರುವ ಹಿನ್ನೆಲೆಯಲ್ಲಿ ಒಟ್ಟಾರೆ ತಮಿಳುನಾಡಿಗೆ ಕಳೆದ ಹತ್ತು ದಿನಗಳಿಂದ 62 ಸಾವಿರ ಕ್ಯುಸೆಕ್‌ನಷ್ಟು ನೀರು ಹರಿದಿದೆ. ಇನ್ನು ಪ್ರಾಧಿಕಾರದ ಸೂಚನೆಯಂತೆ ಇನ್ನು 13 ಸಾವಿರ ಕ್ಯೂಸೆಕ್ ನೀರು ಮಾತ್ರ ಹರಿಸಬೇಕಿದ್ದು, ಮಳೆ ನೀರು ಸೇರಿದಂತೆ ಉಳಿದ 13 ಕ್ಯೂಸೆಕ್ ನೀರು ತಮಿಳುನಾಡಿಗೆ ಹರಿಯಬಹುದೆಂಬ ವಿಶ್ವಾಸ ನೀರಾವರಿ ಅಧಿಕಾರಿಗಳದ್ದಾಗಿದೆ.

**ನಾಲೆಗಳಿಗೆ ನೀರು:** ತಮಿಳುನಾಡಿಗೆ ಹರಿಯುತ್ತಿದ್ದ ನೀರು ನಿಲ್ಲಿಸಿರುವ ಕಾವೇರಿ ನೀರಾವರಿ ನಿಗಮ ಕೆಆರ್‌ಎಸ್ ವ್ಯಾಪ್ತಿಯ ನಾಲೆಗಳಿಗೆ ಕಟ್ಟುಪದ್ಧತಿಯಡಿ ನೀರು ಬಿಟ್ಟಿದೆ. ಸದ್ಯ 1,700 ಕ್ಯುಸೆಕ್ ನೀರನ್ನು ನಾಲೆಗಳಿಗೆ ಹರಿಸಲಾಗುತ್ತಿದೆ. ಶುಕ್ರವಾರ ರಾತ್ರಿಯ ವೇಳೆಗೆ 3,500 ಕ್ಯುಸೆಕ್‌ವರೆಗೆ ಹೆಚ್ಚಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯ ಜಲಾಶಯದ ನೀರಿನ ಮಟ್ಟ 98.06 ಅಡಿ ಇದೆ. 2,873 ಕ್ಯುಸೆಕ್ ಒಳಹರಿವು, 3,990 ಕ್ಯುಸೆಕ್ ಹೊರಹರಿವು ಇದೆ.

ಜುಲೈ 7ರಿಂದ ಇಲ್ಲಿವರೆಗೂ ತಮಿಳುನಾಡಿಗೆ 35.53 ಟಿಎಂಸಿ ಅಡಿ ನೀರು ಹರಿದು ಹೋಗಿದೆ. ಕಳೆದೊಂದು ವಾರದಿಂದ ಬೆಂಗಳೂರಿನ ಸುತ್ತಮುತ್ತಾ ಮಳೆಯಾಗಿದ್ದು ಆ ನೀರು ಕೂಡ ತಮಿಳುನಾಡಿಗೆ ಹರಿದು ಹೋಗುತ್ತಿದೆ. ಈ ಹಿನ್ನೆಲೆಯಲ್ಲಿ ಕೆಆರ್‌ಎಸ್ ಜಲಾಶಯದಿಂದ ತಮಿಳುನಾಡಿಗೆ ನೀರು ನಿಲ್ಲಿಸಲಾಗಿದೆ. ಸದ್ಯ ಜಲಾಶಯದಲ್ಲಿರುವ ನೀರಿನ ಸಂಗ್ರಹದಲ್ಲಿ 2 ಕಟ್ಟು ನೀರು ನಾಲೆಗಳಿಗೆ ಹರಿಸಲು ಸಾಧ್ಯವಿದೆ. ನಂತರ ನೀರನ್ನು ಕುಡಿಯುವುದಕ್ಕೆ ಮಾತ್ರ ಕಾಪಾಡಿಕೊಳ್ಳಲಾಗುವುದು ಕಾವೇರಿ ನೀರಾವರಿ ನಿಗಮದ ಮೂಲಗಳು ತಿಳಿಸಿವೆ.

## ಸಂಘರ್ಷಕ್ಕೂ ಸೈ...!

ಎಂದು ಕಿಡಿಕಾರಿದರು. ಆಷಾಢ ಶುಕ್ರವಾರ, ಶ್ರಾವಣ ಮಾಸ ಸೇರಿದಂತೆ ಬಹಳಷ್ಟು ಸಮಯದಲ್ಲಿ ಮೈಸೂರಿನ ಜನರು ಚಾಮುಂಡಿಬೆಟ್ಟಕ್ಕೆ ಹೋಗಿ ನಾಡದೇವತೆಯನ್ನು ವಿಶೇಷವಾಗಿ ಪೂಜಿಸುತ್ತಾರೆ. ಆದರೆ ತಾವು ಆರಾಧನೆ ಮಾಡುತ್ತಿರುವ ಚಾಮುಂಡೇಶ್ವರಿ ಬಗ್ಗೆ ಅವಹೇಳನಕಾರಿ ಹಾಗೂ ಅಸಹ್ಯವಾಗಿ ಟೀಕೆ ಮಾಡುವಾಗ ಮೈಸೂರು ಜನರು ಮಾತನಾಡದೆ ಏಕೆ ಮೌನವಾಗಿದ್ದಾರೆ ಎಂದು ಪ್ರತಾಪ್ ಸಿಂಹ ಖಾರವಾಗಿ ಪ್ರಶ್ನಿಸಿದರು. ತಾವು ಭಕ್ತಿಯಿಂದ ಆರಾಧನೆ ಮಾಡುವ ದೇವಿಯ ಬಗ್ಗೆ ಅಗೌರವವಾಗಿ ಟೀಕೆ ಮಾಡುವಾಗ ಮೈಸೂರು ಜನರು ಸಿಟೆದು ನಿಲ್ಲಬೇಕು, ಅವರ ಮಾತುಗಳನ್ನು ವಿರೋಧಿಸಬೇಕು ಎಂದು ಕರೆ ನೀಡಿದರು.

ಬಿಜೆಪಿ ಸರ್ಕಾರದ ಅವಧಿಯಲ್ಲಿ ಇಂತಹ ಅನಾಚಾರವನ್ನು ನಿಲ್ಲಿಸಿದ್ದೆವು. ಆಗ ನಾಲ್ಕು ವರ್ಷ ಮೌನವಾಗಿದ್ದ ಪ್ರಗತಿಪರರು ಈಗ ಸಿದ್ದರಾಮಯ್ಯ ಸರ್ಕಾರ ಅಸ್ತಿತ್ವಕ್ಕೆ ಬರುತ್ತಿದ್ದಂತೆ ಅವರಿಗೆ ಶಕ್ತಿ ಬಂದಿದೆ. ಮಹಿಷ ದಸರಾಗೆ ಅನುಮತಿ ಕೊಟ್ಟಿರುವ ಸಿದ್ದರಾಮಯ್ಯ ಸರ್ಕಾರವೇ ಇದಕ್ಕೆ ಕಾರಣ ಎಂದು ಪ್ರತಾಪ್ ಸಿಂಹ ಆಕ್ರೋಶ ವ್ಯಕ್ತಪಡಿಸಿದರು. ಇವರು ಎಷ್ಟೆ ಪ್ರಯತ್ನ ಮಾಡಿದರೂ ಚಾಮುಂಡಿಬೆಟ್ಟದಲ್ಲಿ ಅನಾಚಾರ ಮಾಡಲು ಅವಕಾಶ ಮಾಡಿಕೊಡುವುದಿಲ್ಲ. ಸಂಘರ್ಷವಾದರೂ ಸರಿ ಮಹಿಷ ದಸರಾ ತಡೆಯುತ್ತೇವೆ ಎಂದು ಪ್ರತಾಪ್ ಸಿಂಹ ಎಚ್ಚರಿಕೆ ನೀಡಿದರು.

# ಮೈಸೂರಿನ 75 ಪಾರಂಪರಿಕ ಕಟ್ಟಡಗಳಿಗೆ ತುರ್ತು ದುರಸ್ತಿ ಅನಿವಾರ್ಯತೆ

### 131 ಪಾರಂಪರಿಕ ಕಟ್ಟಡಗಳ ಸಮೀಕ್ಷೆ ಪೂರ್ಣಗೊಳಿಸಿದ ಜಿಲ್ಲಾ ಪರಂಪರೆ ಸಂರಕ್ಷಣಾ ಉಪಸಮಿತಿ ತಜ್ಞರಿಂದ ಸರ್ಕಾರಕ್ಕೆ ಶೀಘ್ರ ವರದಿ ಸಲ್ಲಿಕೆ



ಮೈಸೂರಿನ ಮಾನಸ ಗಂಗೋತ್ರಿಯ ಇತಿಹಾಸ, ಭೂಗೋಳಶಾಸ್ತ್ರ ಅಧ್ಯಯನ ವಿಭಾಗದ ಹಿಂಭಾಗ ಜಯಲಕ್ಷ್ಮಿ ವಿಲಾಸ ಮ್ಯಾನ್ಷನ್ ಬಳಿ ಇರುವ ಪಾರಂಪರಿಕ ಟೆಲಿಸ್ಕೋಪಿಕ್ ಟವರ್.



ಮಾನಸ ಗಂಗೋತ್ರಿಯಲ್ಲಿರುವ ಜಯಲಕ್ಷ್ಮಿ ವಿಲಾಸ ಮ್ಯಾನ್ಷನ್ ಪಾರಂಪರಿಕ ಕಟ್ಟಡ



ಮೈಸೂರು– ಹುಣಸೂರು ರಸ್ತೆಯಲ್ಲಿರುವ ಜಿಲ್ಲಾಧಿಕಾರಿ ನಿವಾಸ

**ಎಸ್.ಟಿ. ರವಿಕುಮಾರ್**

ಮೈಸೂರು, ಸೆ. 8– ಶಿಥಿಲಾವಸ್ಥೆಯಲ್ಲಿರುವ ಮೈಸೂರಿನ 75 ಪಾರಂಪರಿಕ ಕಟ್ಟಡಗಳನ್ನು ತುರ್ತಾಗಿ ದುರಸ್ತಿ ಮಾಡಿ, ಸಂರಕ್ಷಿಸುವ ಅನಿವಾರ್ಯತೆ ಇದೆ ಎಂದು ಜಿಲ್ಲಾ ಪರಂಪರೆ ಸಂರಕ್ಷಣಾ ಉಪ ಸಮಿತಿಯು ಅಭಿಪ್ರಾಯಪಟ್ಟಿದೆ.

ಸಾಂಸ್ಕೃತಿಕ ನಗರಿ, ಪಾರಂಪರಿಕ ಕಟ್ಟಡಗಳ ಇತಿಹಾಸ ಹಿನ್ನೆಲೆ ಹೊಂದಿರುವುದರಿಂದ ದೇಶ–ವಿದೇಶಗಳ ಪ್ರವಾಸಿಗರು ಮೈಸೂರಿನತ್ತ ಮುಖ ಮಾಡಿದ್ದಾರೆ. ಪ್ರವಾಸೋದ್ಯಮಕ್ಕೆ ವಿಫುಲ ಅವಕಾಶ ಕಲ್ಪಿಸಿರುವ ಸುಂದರವಾದ ಪಾರಂಪರಿಕ ಕಟ್ಟಡ ಹಾಗೂ ಸ್ಮಾರಕಗಳನ್ನು ಸಂರಕ್ಷಿಸುವುದು ಅವಶ್ಯವಾಗಿದೆ.

ಕಳೆದ 6 ತಿಂಗಳಿಂದ ಸಮೀಕ್ಷೆ ನಡೆಸಿದ ಉಪ ಸಮಿತಿಯ ಪಾರಂಪರಿಕ ತಜ್ಞರು, ಮೈಸೂರಿನ 131 ಪಾರಂಪರಿಕ ಕಟ್ಟಡಗಳಿಗೆ ಭೇಟಿ ನೀಡಿ ಖುದ್ದು ಪರಿಶೀಲನೆ ನಡೆಸಿದ್ದಾರೆ. ಕಟ್ಟಡ, ಸ್ಮಾರಕದ ಅಡಿಪಾಯ, ಗೋಡೆಯ ಸದೃಢತೆ, ತಾರಸಿಯ ಪರಿಸ್ಥಿತಿ, ಕಬ್ಬಿಣ, ಸುಣ್ಣ, ಇಟ್ಟಿಗೆಯ ಸಾಂಧ್ರತೆ, ಕಟ್ಟಡ ಶಿಥಿಲಗೊಳ್ಳಲು ಕಾರಣಗಳೇನು ಎಂಬುದನ್ನು ಪತ್ತೆ ಮಾಡಲು ಸ್ಯಾಂಪಲ್ ಪಡೆದು ಲ್ಯಾಬೊರೇಟರಿಯಿಂದ ವರದಿ ತರಿಸಿಕೊಂಡಿದ್ದಾರೆ.

ಮೈಸೂರಿನಲ್ಲಿ ಪಾರಂಪರಿಕ ಕಟ್ಟಡಗಳೆಂದು ಗುರ್ತಿಸಿರುವ 131 ನಿರ್ಮಾಣ, ಸ್ಮಾರಕಗಳ ಪೈಕಿ 65ರಿಂದ 75 ಕಟ್ಟಡಗಳು ತೀವ್ರ ಶಿಥಿಲಾವಸ್ಥೆಯಲ್ಲಿದ್ದು, ಅಲ್ಲಿ ವಾಸಿಸಲು ಯೋಗ್ಯವಾಗಿಲ್ಲ ಅಷ್ಟೇ ಅಲ್ಲದೆ, ಯಾವುದೇ ಸಂದರ್ಭದಲ್ಲಾದರೂ ನೆಲಕ್ಕುರುಳುವ ಸಂಭವವಿರುವುದರಿಂದ ತುರ್ತಾಗಿ ದುರಸ್ತಿಗೊಳಿಸಬೇಕೆಂದು ಪಾರಂಪರಿಕ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಸಾಂಸ್ಕೃತಿಕ ನಗರದ ಸಿಎಫ್‌ಟಿಆರ್‌ಐ, ಮಹಾರಾಜ, ಮಹಾರಾಣಿ, ಯುವರಾಜ ಕಾಲೇಜು, ಮಹಾರಾಜ ಕಾಲೇಜು ವಿದ್ಯಾರ್ಥಿನಿಲಯ, ನಜರ್‌ಬಾದ್‌ನ ವಸಂತ ಮಹಲ್, ಮಾನಸ ಗಂಗೋತ್ರಿ ಕ್ಯಾಂಪಸ್‌ನ ಜಯಲಕ್ಷ್ಮಿ ವಿಲಾಸ ಮ್ಯಾನ್ಷನ್, ಲಲಿತ ಮಹಲ್ ರಸ್ತೆಯ ಸರ್ಕಾರಿ ಅನಾಥ ಹೆಣ್ಣು ಮಕ್ಕಳ ಶಾಲೆ, ಸಯ್ಯಾಜಿ ರಾವ್ ರಸ್ತೆಯ ದೇವರಾಜ ಮಾರುಕಟ್ಟೆ, ಲ್ಯಾನ್ಸ್‌ಡೌನ್ ಬಿಲ್ಡಿಂಗ್, ಓರಿಯೆಂಟಲ್ ರೀಸರ್ಚ್ ಇನ್‌ಸ್ಟಿಟ್ಯೂಟ್, ಡಿಸಿ ಕಚೇರಿ ಹಳೇ ಕಟ್ಟಡ, ಕೆ.ಆರ್. ಆಸ್ಪತ್ರೆ, ಕಾವಾ ಹಳೇ ಬಿಲ್ಡಿಂಗ್, ಅಗ್ರಹಾರದ ವಾಣಿವಿಲಾಸ ಮಾರುಕಟ್ಟೆ, ಹಳೇ ಕೇಂದ್ರ ಗ್ರಂಥಾಲಯ ಕಟ್ಟಡ, ಮಾನಸ ಗಂಗೋತ್ರಿಯ ಇತಿಹಾಸ, ಭೂಗೋಳ ಶಾಸ್ತ್ರ ಅಧ್ಯಯನ ವಿಭಾಗದ ಹಿಂಭಾಗ, ಜಯಲಕ್ಷ್ಮಿ ಮ್ಯಾನ್ಷನ್ ಬಳಿಯ ಟೆಲಿಸ್ಕೋಪಿಕ್ ಗೋಪುರ, ದೊಡ್ಡ ಗಡಿಯಾರ ಸೇರಿದಂತೆ 75 ಪಾರಂಪರಿಕ ಕಟ್ಟಡಗಳು ಶಿಥಿಲಾವಸ್ಥೆಯಲ್ಲಿದ್ದು, ಶೀಘ್ರ ರಿಪೇರಿ ಮಾಡಿ ಸಂರಕ್ಷಿಸದಿದ್ದರೆ ಅಪಾಯ ಸಂಭವಿಸುವುದು ನಿಶ್ಚಯ ಎಂಬುದಾಗಿ ತಜ್ಞರು ಸ್ಪಷ್ಟವಾಗಿ ತಿಳಿಸಿದ್ದಾರೆ.

ಪುರಾತತ್ವ ಸಂಗ್ರಹಾಲಯಗಳು ಹಾಗೂ ಪರಂಪರೆ ಇಲಾಖೆ ತಜ್ಞರ ಮಾರ್ಗದರ್ಶನದಂತೆ ವಿನ್ಯಾಸ, ಡಿಪಿಆರ್ ತಯಾರಿಸಿ ಪಾರಂಪರಿಕ ಕಟ್ಟಡಗಳ ರಿಪೇರಿ, ಪುನರುಜ್ಜೀವನ ಅನುಭವವಿರುವ ಕೌಶಲ್ಯ ಹೊಂದಿದ ಕೆಲಸಗಾರರಿಂದ ರಿಪೇರಿ ಕಾಮಗಾರಿ ಮಾಡಿಸುವುದು ಸೂಕ್ತ ಎಂದು ಅವರು ತಮ್ಮ ವರದಿಯಲ್ಲಿ ಅಭಿಪ್ರಾಯಪಟ್ಟಿದ್ದಾರೆ.

ಪಾರಂಪರಿಕ ಆಯುಕ್ತರ ಮೇಲ್ವಿಚಾರಣೆಯಲ್ಲಿ ಜಿಲ್ಲಾ ಪರಂಪರೆ ಸಂರಕ್ಷಣಾ ಸಮಿತಿ ಅಧ್ಯಕ್ಷರಾದ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ನಿರ್ದೇಶನದಂತೆ ಮೈಸೂರಿನ ಪಾರಂಪರಿಕ ಕಟ್ಟಡಗಳ ಸಮೀಕ್ಷೆಗಾಗಿ ನಿಯೋಜಿಸಲಾಗಿದ್ದ ಉಪಸಮಿತಿ ಸದಸ್ಯರು ಕಳೆದ 6 ತಿಂಗಳಿಂದ ಎಲ್ಲಾ ಪಾರಂಪರಿಕ ಕಟ್ಟಡಗಳಿಗೂ ಖುದ್ದು ಭೇಟಿ ನೀಡಿ ಅವುಗಳ ಸ್ಥಿತಿ–ಗತಿ, ಯಾವ ಮಾದರಿಯಲ್ಲಿ ಆಧುನೀಕರಣಗೊಳಿಸಬೇಕೆಂಬುದರ ಕುರಿತು ಪರಿಶೀಲಿಸಿ ಸಮೀಕ್ಷೆ ಪೂರ್ಣಗೊಳಿಸಿದ್ದು, ಸಮಗ್ರ ವರದಿಯನ್ನು ವಾಸ್ತವಾಂಶದ ಆಧಾರದ ಮೇಲೆ ಸಿದ್ಧಪಡಿಸಿದ್ದಾರೆ.

ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿರುವ ಪರಂಪರೆ ಸಂರಕ್ಷಣಾ ಸಮಿತಿಯಲ್ಲಿ ಇತಿಹಾಸ ಮತ್ತು ಪಾರಂಪರಿಕ ತಜ್ಞ ಡಾ. ಎನ್.ಎಸ್. ರಂಗರಾಜು, ಸ್ಟ್ರಕ್ಚರಲ್ ಇಂಜಿನಿಯರ್ ಡಾ. ಸೈಯ್ಯದ್ ಶಕೀಬ್ ಉರ್ ರೆಹಮಾನ್, ಆರ್ಕಿಟೆಕ್ಟ್ ಶರತ್‌ಚಂದ್ರ, ಪರಿಸರವಾದಿ ಪ್ರೊ. ಕೆ.ಎಸ್. ಲೋಕೇಶ್, ನೈಸರ್ಗಿಕ ಇತಿಹಾಸಗಾರ ಡಾ. ಎನ್.ಬಿ. ರಾಮಚಂದ್ರ, ಕಲಾವಿದ ಪ್ರೊ. ವಿಜಯ್‌ರಾವ್, ಬಿ.ಎಸ್. ಶ್ರೀಹರಿ, ರವೀಂದ್ರ ಗುಂಡೂರಾವ್, ಎ.ಎಸ್. ಧರ್ಮೇಂದ್ರಕುಮಾರ್, ಡಾ. ಶೆಲ್ವಪಿಳ್ಳೈ ಅಯ್ಯಂಗಾರ್, ಕುಮಾರಾಚಾರ್ಯ, ಮೈಸೂರು ಮಹಾ ನಗರ ಪಾಲಿಕೆ ಆಯುಕ್ತರು, ಪಾಲಿಕೆ ನಗರ ಯೋಜನಾಧಿಕಾರಿಗಳು, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು, ಮುಡಾ ಆಯುಕ್ತರು ಸದಸ್ಯರಾಗಿದ್ದಾರೆ.

ಪಾರಂಪರಿಕ ಕಟ್ಟಡಗಳ ಸಮೀಕ್ಷೆಗೆ ರಚನೆಯಾಗಿರುವ ಉಪಸಮಿತಿಯಲ್ಲಿ ಡಾ. ಎನ್.ಎಸ್. ರಂಗರಾಜು, ಪ್ರೊ. ಕೆ.ಎಸ್. ಲೋಕೇಶ್, ಡಾ. ಸೈಯ್ಯದ್ ಶಕೀಬ್ ಉರ್ ರೆಹಮಾನ್, ಡಾ. ಶರತ್‌ಚಂದ್ರ, ಪ್ರಾಚ್ಯವಸ್ತು ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಉಪನಿರ್ದೇಶಕಿ ಡಾ. ಮಂಜುಳಾ, ಪಾಲಿಕೆ ನಗರ ಯೋಜನಾ ಶಾಖೆ ಇಂಜಿನಿಯರ್‌ಗಳಾದ ಪವಿತ್ರಾ, ರಮ್ಯ, ರಘು ಹಾಗೂ ಪರಂಪರೆ ಇಲಾಖೆ ಛಾಯಾಗ್ರಾಹಕಿ ಸೌಮ್ಯ ಸದಸ್ಯರಾಗಿದ್ದಾರೆ.

ವಾರದೊಳಗಾಗಿ ಉಪಸಮಿತಿಯು ಪಾರಂಪರಿಕ ಇಲಾಖೆ ಆಯುಕ್ತರ ಮೂಲಕ ಜಿಲ್ಲಾಧಿಕಾರಿಗಳಿಗೆ ತಮ್ಮ ಸ್ಪಷ್ಟ ಅಭಿಪ್ರಾಯ, ಶಿಫಾರಸ್ಸಿನೊಂದಿಗೆ ಸಮಗ್ರ ವರದಿ ಸಲ್ಲಿಸಲಿದೆ. ಜಿಲ್ಲಾಧಿಕಾರಿಗಳು ಪರಿಶೀಲಿಸಿ ತಮ್ಮ ಅಭಿಪ್ರಾಯದೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಪಾರಂಪರಿಕ ಕಟ್ಟಡಗಳ ದುರಸ್ತಿ ಮತ್ತು ಸಂರಕ್ಷಿಸಲು ಅನುಮತಿ ಹಾಗೂ ಅನುದಾನ ಕೋರಲಿದ್ದಾರೆ.

# ಚಾಮುಂಡಿಬೆಟ್ಟದಲ್ಲಿ ರಾತ್ರಿಯಿಡೀ ಮಲಗಿ ಮಹಿಷ ದಸರಾ ತಡೆಯುತ್ತೇವೆ

### ಶಾಸಕ ಟಿ.ಎಸ್.ಶ್ರೀವತ್ಸ ಎಚ್ಚರಿಕೆ



ಮೈಸೂರು, ಸೆ.8(ಬಿಎಲ್‌ಯು)– ಮೈಸೂರಿನ ಚಾಮುಂಡಿಬೆಟ್ಟದಲ್ಲಿ ಮಹಿಷ ದಸರಾ ನಡೆಸಲು ಯಾವುದೇ ಕಾರಣಕ್ಕೂ ಬಿಡುವುದಿಲ್ಲ. ಚಾಮುಂಡಿ ಬೆಟ್ಟದಲ್ಲಿ ರಾತ್ರಿಯಿಡೀ ಮಲಗಿ ಮಹಿಷ ದಸರಾ ತಡೆಯುತ್ತೇವೆ ಎಂದು ಶಾಸಕ ಟಿ.ಎಸ್.ಶ್ರೀವತ್ಸ ಎಚ್ಚರಿಕೆ ನೀಡಿದ್ದಾರೆ.

ಮೈಸೂರಿನ ಟೌನ್‌ಹಾಲ್ ಮುಂಭಾಗದ ಡಾ.ಅಂಬೇಡ್ಕರ್ ಪ್ರತಿಮೆ ಮುಂದೆ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರುದ್ಧ ಬಿಜೆಪಿ ನಡೆಸಿದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ನಾವು ಇಷ್ಟೆಲ್ಲಾ ಎಚ್ಚರಿಕೆ ನೀಡಿದ್ದರೂ ಮಹಿಷ ದಸರಾ ಮಾಡುವುದಾಗಿ ಪಟ್ಟು ಹಿಡಿದಿದ್ದಾರೆ. ಹಾಗೆಯೇ ನಾವು ಕೂಡ ಮಹಿಷ ದಸರಾ ವಿರುದ್ಧದ ಹೋರಾಟದಿಂದ ಹಿಂದೆ ಸರಿಯುವುದಿಲ್ಲ ಎಂದು ಗುಡುಗಿದರು.

ಮಹಿಷ ದಸರಾ ತಡೆಯುವ ನಿಟ್ಟಿನಲ್ಲಿ ಹೋರಾಟ ಯಾವ ರೀತಿ ಇರಬೇಕೆಂದು ಈಗಾಗಲೇ ರೂಪುರೇಷೆ ಸಿದ್ಧ ಪಡಿಸುತ್ತಿದ್ದೇವೆ. ಈ ಮೂಲಕ ತೀವ್ರ ರೀತಿಯ ಹೋರಾಟ ಮಾಡುತ್ತೇವೆ ಎಂದರು.

ದಸರಾ ವೇಳೆ ಮಾತ್ರವಲ್ಲದೆ ಎಲ್ಲಾ ಸಮಯದಲ್ಲೂ ಪೂಜೆ, ಪುನಸ್ಕಾರ ಹಾಗೂ ಪ್ರಸಾದ ನಾಡದೇವತೆ ತಾಯಿ ಚಾಮುಂಡೇಶ್ವರಿಗೆ ಮಾತ್ರ ಸಲ್ಲಬೇಕು. ಇದು ಅನಾದಿ ಕಾಲದಿಂದ ನಡೆದುಕೊಂಡು ಬಂದಿರುವ ಸಂಪ್ರದಾಯ. ಹಾಗೆಯೇ ಮೈಸೂರಿನ ಚಾಮುಂಡಿಬೆಟ್ಟಕ್ಕೆ ಪೌರಾಣಿಕ ಹಿನ್ನೆಲೆ ಇದೆ. ಹೀಗಿರುವಾಗ ಅದ್ಹೇಗೆ ಮಹಿಷ ದಸರಾ ಮಾಡುತ್ತಾರೆ ಎಂದು ಅವರು ಪ್ರಶ್ನಿಸಿದರು.

ಮಹಿಷ ದಸರಾ ಆಚರಣೆ ಮೂಲಕ ಬಹುಸಂಖ್ಯಾತರ ಭಾವನೆಗೆ ಧಕ್ಕೆ ತರುತ್ತಿದ್ದಾರೆ. ಇವರು ಹುಟ್ಟುಹಬ್ಬವನ್ನು ಸ್ಮಶಾನದಲ್ಲಿ ಮಾಡಿಕೊಳ್ಳಲಿ. ಅದು ಅವರ ಇಷ್ಟ, ಇದಕ್ಕೆ ನಮ್ಮ ಅಭ್ಯಂತರವಿಲ್ಲ. ಆದರೆ ನಾಡದೇವತೆಯ ಭಕ್ತಿ ಪ್ರಧಾನ ಸ್ಥಳದಲ್ಲಿ ಬಹು ಸಂಖ್ಯಾತರ ಭಾವನೆಗೆ ಧಕ್ಕೆ ತಂದು ಕೆಟ್ಟ ಆಚರಣೆ ಮಾಡುವುದು ಬೇಡ ಎಂದು ಸಲಹೆ ನೀಡಿದರು.

ಮಹಿಷ ದಸರಾವನ್ನು ಅವರ ಮನೆಯಲ್ಲಿ ಆಚರಣೆ ಮಾಡಿಕೊಳ್ಳಲಿ. ಆದರೆ ಶಕ್ತಿ ದೇವತೆ ತಾಯಿ ಚಾಮುಂಡೇಶ್ವರಿ ಸನ್ನಿಧಿಯಲ್ಲಿ ಮಹಿಷ ದಸರಾ ಆಚರಣೆ ಮಾಡುವುದು ಸರಿಯಲ್ಲ. ಇಷ್ಟಾಗಿಯೂ ಮಹಿಷ ದಸರಾ ಆಚರಣೆ ಮಾಡಲು ಮುಂದಾದರೆ ಹಿಂದಿನ ದಿನವೇ ಚಾಮುಂಡಿ ಬೆಟ್ಟಕ್ಕೆ ತೆರಳುತ್ತೇವೆ. ಅಲ್ಲೇ ಮಲಗಿ ಅವರ ಆಚರಣೆ ತಡೆಯುತ್ತೇವೆ ಯಾವುದೇ ಕಾರಣಕ್ಕೂ ಮಹಿಷ ದಸರಾ ಆಚರಣೆಗೆ ಬಿಡುವುದಿಲ್ಲ. ಅದ್ಹೇಗೆ ನಮ್ಮನ್ನು ತಡೆಯುತ್ತಾರೋ ತಡೆಯಲಿ ಎಂದು ಶ್ರೀವತ್ಸ ಸವಾಲು ಹಾಕಿದರು.

## ವಿದ್ಯುತ್ ವ್ಯತ್ಯಯ

ಮೈಸೂರು, ಸೆ. 8– ಸೆ.10 ರಂದು ಬೆಳಿಗ್ಗೆ 10 ರಿಂದ ಸಂಜೆ 5.30 ಘಂಟೆಯವರೆಗೆ ಕಾಮಗಾರಿ ನಿಮಿತ್ತ ಕಡಕೊಳ, ಬ್ಯಾತಹಳ್ಳಿ, ದಡದಹಳ್ಳಿ, ಸಿಂಧುವಳ್ಳಿ, ದೊಡ್ಡಕಾನ್ಯ, ಚಿಕ್ಕಕಾನ್ಯ, ಕೂಡನಹಳ್ಳಿ, ಕೋಚನಹಳ್ಳಿ, ಮರಸೆ, ಮಾಕನಹುಂಡಿ, ಕೆ.ಐ.ಎ.ಡಿ.ಬಿ ಇಂಡಸ್ಟ್ರೀಯಲ್ ಏರಿಯಾ, ವಿಮಾನ ನಿಲ್ದಾಣ, ಬಿರೇಗೌಡನಹುಂಡಿ, ಕೆ.ಎಂ. ಹುಂಡಿ, ಬಿ.ಜಿ. ಹುಂಡಿ, ಕೆ.ಎನ್. ಹುಂಡಿ, ಆಯರಹಳ್ಳಿ, ಕಿರಾಳು, ದೂರ, ಮುರುಡಗಳ್ಳಿ, ತಳೂರು, ಡಿ. ಕಾಟೂರು, ಟಿ.ವಿ.ಎಸ್. ಫ್ಯಾಕ್ಟರಿ ಹಾಗೂ ಸುತ್ತ–ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ನ.ರಾ ಮೊಹಲ್ಲಾ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ವಿರುದ್ಧ ಬಿಜೆಪಿ ಪ್ರತಿಭಟನೆ



ಮೈಸೂರು, ಸೆ.8(ಬಿಎಲ್‌ಯು)– ತಮಿಳುನಾಡಿಗೆ ಕಾವೇರಿ ನೀರು ಬಿಡುತ್ತಿರುವ ರಾಜ್ಯ ಸರ್ಕಾರದ್ದು ರೈತ ವಿರೋಧಿ ನೀತಿ ಎಂದು ಖಂಡಿಸಿ, ಮೈಸೂರಿನ ಟೌನ್ ಹಾಲ್ ಮುಂಭಾಗದ ಡಾ.ಅಂಬೇಡ್ಕರ್ ಪ್ರತಿಮೆ ಮುಂದೆ ಇಂದು ಬಿಜೆಪಿ ರೈತ ಮೋರ್ಚಾ ವತಿಯಿಂದ ಪ್ರತಿಭಟನೆ ನಡೆಸಲಾಯಿತು.

ಕಾವೇರಿ ಜಲಾನಯನ ಪ್ರದೇಶದ ಬೆಳೆಗಳು ಒಣಗುತ್ತಿವೆ. ಹೀಗಿರುವಾಗ ರಾಜ್ಯ ಸರ್ಕಾರ ನಮ್ಮ ರೈತರ ಬೆಳೆಗೆ ನೀರು ಬಿಡದೆ ರಾಜಕೀಯ ಕಾರಣದಿಂದ ತಮಿಳುನಾಡಿಗೆ ನಿರಂತರ ನೀರು ಬಿಡುತ್ತಿದೆ ಎಂದು ಆರೋಪಿಸಿದರು.

ಗ್ಯಾರಂಟಿ ಯೋಜನೆಗಳನ್ನು ಚಾಚೂ ತಪ್ಪದೆ ಜಾರಿ ಮಾಡುತ್ತೇವೆ ಎಂದು ಪ್ರಚಾರ ಪಡೆಯುತ್ತಿರುವ ರಾಜ್ಯ ಸರ್ಕಾರ, ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳಿಗೆ ಹಣ ನೀಡುವುದನ್ನು ತಡೆದಿದೆ. ನುಡಿದಂತೆ ನಡೆಯುತ್ತೇವೆ ಎಂದು ಹೇಳುತ್ತಾ ಜನರಿಗೆ ನೀಡಿದ್ದ ಭರವಸೆ ಹುಸಿಗೊಳಿಸುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ, ರೈತ ವಿರೋಧಿ ಸರ್ಕಾರಕ್ಕೆ ಧಿಕ್ಕಾರ ಘೋಷ ವಾಕ್ಯಗಳನ್ನು ಮೊಳಗಿಸಿ ಆಕ್ರೋಶ ವ್ಯಕ್ತಪಡಿಸಿದರು. ಶಾಸಕ ಟಿ.ಎಸ್.ಶ್ರೀವತ್ಸ, ಮಾಜಿ ಶಾಸಕ ಎಲ್.ನಾಗೇಂದ್ರ, ಮೇಯರ್ ಶಿವಕುಮಾರ್, ಬಿಜೆಪಿ ಮುಖಂಡರಾದ ಅನಿಲ್ ಥಾಮಸ್, ಸೋಮಶೇಖರ್, ಜಗದೀಶ್ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ರಾಜ್ಯ ಮಟ್ಟದ ಭಾಷಣ ಸ್ಪರ್ಧೆ

ಮೈಸೂರು, ಸೆ. 8– ಸಿಡಿಲ ಸಂತ, ವೀರ ಸನ್ಯಾಸಿ ಸ್ವಾಮಿ ವಿವೇಕಾನಂದರು 1893ರ ಸೆಪ್ಟೆಂಬರ್ 11 ರಂದು ಅಮೆರಿಕಾದಲ್ಲಿ ನಡೆದ ವಿಶ್ವಸರ್ವಧರ್ಮ ಸಮ್ಮೇಳನದಲ್ಲಿ ಭಾರತವನ್ನು ಪ್ರತಿನಿಧಿಸಿ ಭಾಷಣ ಮಾಡಿ ಹಿಂದೂ ಧರ್ಮದ ಕೀರ್ತಿಯನ್ನು ವಿಶ್ವಾದ್ಯಂತ ಪರಿಚಯಿಸಿದ ದಿನವನ್ನು ಭಾರತದಾದ್ಯಂತ ದಿಗ್ವಿಜಯ್ ದಿವಸ್ ಎಂದು ಆಚರಿಸಲಾಗುತ್ತಿದೆ.

ಈ ಹಿನ್ನಲೆಯಲ್ಲಿ ಮೈಸೂರಿನ ರಾಷ್ಟ್ರ ಭಾರತಿ ಚಾರಿಟಬಲ್ ಟ್ರಸ್ಟ್ ವತಿಯಿಂದ ಪಿಯು, ಪದವಿ, ಸ್ನಾತಕೋತ್ತರ ವಿದ್ಯಾರ್ಥಿಗಳಿಗಾಗಿ ರಾಜ್ಯಮಟ್ಟದ ಭಾಷಣ ಸ್ಪರ್ಧೆಯನ್ನು ಸೆಪ್ಟೆಂಬರ್ 10 ರಂದು ಆಯೋಜಿಸಲಾಗಿದೆ. ವಿಶ್ವ ದಿಗ್ವಿಜಯ್ ದಿವಸ್ ವಿಷಯದ ಮೇಲೆ ಕನ್ನಡ ಹಾಗೂ ಆಂಗ್ಲ ಭಾಷೆಗಳೆರಡರಲ್ಲೂ ಭಾಷಣ ಮಾಡಬಹುದು.

ನಗರದ ನಂಜುಮಳಿಗೆ ವೃತ್ತದಲ್ಲಿರುವ ಗೋಪಾಲಸ್ವಾಮಿ ಶಿಶು ವಿಹಾರದಲ್ಲಿ ಬೆಳಗ್ಗೆ 10 ಗಂಟೆಗೆ ಸ್ಪರ್ಧೆ ಆರಂಭ ವಾಗಲಿದೆ. ಭಾಷಣಕ್ಕೆ ನಿಗಧಿಪಡಿಸಿದ ಅವಧಿ 5+ 1 ನಿಮಿಷಗಳು. ವಿಜೇತರಿಗೆ ಮೊದಲ ಬಹುಮಾನ ರೂ. 5,000, ದ್ವಿತೀಯ ಬಹುಮಾನ ರೂ. 3000, ತೃತೀಯ ಬಹುಮಾನ ರೂ. 2,000, ಹಾಗೂ ಸಮಾಧಾನಕರ ಬಹುಮಾನ ರೂ 1,000. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ: ರುದ್ರಮೂರ್ತಿ ಸಿ ಕೆ: 9916821631 ಅಥವಾ ಸತೀಶ್ ಹೆಚ್ ಬಿ: 9663882250.

# ಅನಧಿಕೃತ ಮಸಾಜ್ ಪಾರ್ಲರ್, ಬ್ಯೂಟಿ ಪಾರ್ಲರ್ ವಿರುದ್ಧ ಪಾಲಿಕೆ, ಪೊಲೀಸರು ಕ್ರಮ ಕೈಗೊಳ್ಳುತ್ತಿಲ್ಲ

### ಬ್ಯೂಟಿಷಿಯನ್ಸ್ ವೆಲ್‌ಫೇರ್ ಅಸೋಸಿಯೇಷನ್ ಬೇಸರ



ಮೈಸೂರು, ಸೆ.8(ಜಿಎ)–ಮೈಸೂರಿನಲ್ಲಿ ಅನಧಿಕೃತವಾಗಿ ಕಾರ್ಯನಿರ್ವಹಿಸುತ್ತಿರುವ ಬ್ಯೂಟಿ ಪಾರ್ಲರ್ ಮತ್ತು ಮಸಾಜ್ ಪಾರ್ಲರ್‌ಗಳ ಬಗ್ಗೆ ನಗರ ಪಾಲಿಕೆ ಮತ್ತು ಪೊಲೀಸ್ ಇಲಾಖೆ ಕಠಿಣ ಕ್ರಮ ತೆಗೆದುಕೊಳ್ಳುತ್ತಿಲ್ಲ. ಇದರಿಂದಾಗಿ ಅಧಿಕೃತ ಬ್ಯೂಟಿ ಪಾರ್ಲರ್‌ಗಳಿಗೆ ಕೆಟ್ಟ ಹೆಸರು ಬರುತ್ತಿದೆ ಎಂದು ಮೈಸೂರು ಬ್ಯೂಟಿಷಿಯನ್ಸ್ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷೆ ಕೆ.ವೇದಾವತಿ ಎನ್.ರೈ ಬೇಸರ ವ್ಯಕ್ತಪಡಿಸಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಸೋಸಿಯೇಷನ್ ವತಿಯಿಂದ ಕಳೆದ 25 ವರ್ಷಗಳಿಂದ ಬ್ಯೂಟಿ ಪಾರ್ಲರ್‌ಗಳ ಸಮೀಕ್ಷೆ ನಡೆಸುತ್ತಿದ್ದು, ಯಾವುದೇ ಪರವಾನಗಿ ಇಲ್ಲದೆ ತೆರೆಯಲಾಗುತ್ತಿರುವ ಅಥವಾ ಆರೋಗ್ಯ ಇಲಾಖೆಯಿಂದ ಪರೀಕ್ಷಿಸಲ್ಪಟ್ಟಿರುವ ಪರವಾನಗಿ ಇಲ್ಲದ, ಅನೈರ್ಮಲ್ಯ ಪಾರ್ಲರ್‌ಗಳ ಪಟ್ಟಿಯನ್ನು ನಗರಪಾಲಿಕೆಗೆ ಸಲ್ಲಿಸುತ್ತಿದೆ. ಆದರೆ ನಗರಪಾಲಿಕೆಯು ಈ ಬಗ್ಗೆ ಏನು ಕ್ರಮ ಕೈಗೊಂಡಿದೆ? ಎಂದು ಪ್ರಶ್ನಿಸಿದರು.

ಬ್ಯೂಟಿ ಪಾರ್ಲರ್ ನಡೆಸಲು ನಾವು ಸಂಬಂಧಪಟ್ಟ ದಾಖಲೆಗಳನ್ನು ಪೊಲೀಸ್ ಆಯುಕ್ತರ ಕಛೇರಿಗೆ ಸಲ್ಲಿಸಿ, ಪರಿಶೀಲನೆ ಪ್ರಮಾಣ ಪತ್ರವನ್ನು ಪಡೆಯಬೇಕು. ಆದರೆ, ನಗರದಲ್ಲಿ ಹಲವಾರು ಮಸಾಜ್ ಪಾರ್ಲರ್‌ಗಳನ್ನು ಅನಧಿಕೃತವಾಗಿ ತೆರೆಯುವಾಗ ತೆರೆಯುವಾಗ ಪೊಲೀಸರು ಏನು ಮಾಡುತ್ತಿದ್ದರು? ಎಂದು ಪೊಲೀಸ್ ಇಲಾಖೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ, ಈ ಬಗ್ಗೆ ಕ್ರಮ ಕೈಗೊಳ್ಳುವಂತೆ ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿಗಳಿಗೆ, ಪೊಲೀಸ್ ಆಯುಕ್ತರು ಮತ್ತು ಪಾಲಿಕೆ ಆಯುಕ್ತರಿಗೆ ಮನವಿ ಸಲ್ಲಿಸುತ್ತೇವೆ ಎಂದರು.

ಬ್ಯೂಟಿ ಪಾರ್ಲರ್‌ಗಳು ಮತ್ತು ಮಸಾಜ್ ಪಾರ್ಲರ್‌ಗಳೂ ಸಾಕಷ್ಟು ವ್ಯತ್ಯಾಸವಿದ್ದು, ಪ್ರತಿಬಾರಿ ಮಸಾಜ್ ಪಾರ್ಲರ್‌ಗಳ ಮೇಲೆ ಪೊಲೀಸರ ದಾಳಿಯಾದಾಗ ಬ್ಯೂಟಿ ಪಾರ್ಲರ್ ಮೇಲೆ ದಾಳಿ ಎಂದು ಹೇಳುತ್ತಾರೆ. ಇದು ಬೇಸರ ಸಂಗತಿ ಎಂದು ವಿಷಾಧಿಸಿದರು.

ಮೈಸೂರಿನಲ್ಲಿ ಇತ್ತೀಚೆಗೆ ಮಸಾಜ್ ಪಾರ್ಲರ್‌ನಲ್ಲಿ ವೇಶ್ಯಾವಾಟಿಕೆ ನಡೆಸುತ್ತಿದ್ದಾರೆ ಎಂದು ಪೊಲೀಸ್ ದಾಳಿ ನಡೆಸಿದ್ದರು. ಆದರೆ, ಎಲ್ಲಾ ಕಡೆಗಳಲ್ಲೂ ಬ್ಯೂಟಿ ಪಾರ್ಲರ್ ಮೇಲೆ ದಾಳಿ ಮಾಡಲಾಗಿದೆ ಎಂದು ಬಿಂಬಿಸಲಾಗುತ್ತಿದ್ದು, ಇದು ತಪ್ಪು. ಇದರಿಂದ ಪ್ರತಿ ಬಾರೀ ಈ ರೀತಿ ದಾಳಿಗಳು ಆದಾಗ ಬ್ಯೂಟಿ ಪಾರ್ಲರ್ ಗಳಿಗೆ ಕೆಟ್ಟ ಹೆಸರು ಬರುತ್ತಿದೆ ಎಂದು ಬೇಸರಿಸಿದರು. ಸುದ್ದಿಗೋಷ್ಠಿಯಲ್ಲಿ ಅಸೋಸಿಯೇಷನ್‌ನ ಎಂ.ಎ.ಸಬೀನಾ, ಪ್ರತಿಭಾ ಶೆಟ್ಟಿ, ಮಂಜುಳಾ, ಮಾಲಿನಿ ಮತ್ತು ಸ್ವಪ್ನ ಉಪಸ್ಥಿತರಿದ್ದರು.

ಮೈಸೂರು ಮಿತ್ರ



## ಸೆ.17ರಂದು ಜಿಲ್ಲಾಮಟ್ಟದ ಚೆಸ್ ಪಂದ್ಯಾವಳಿ



ಗೋಣಿಕೊಪ್ಪ, ಸೆ.8– ಪಿಸಿ ಕ್ಲಬ್ ಹಾಗೂ ಜೆಸಿಐ ಪೊನ್ನಂಪೇಟೆ ನಿಸರ್ಗ ವತಿಯಿಂದ ಸೆ.17 ರಂದು ಗೋಣಿಕೊಪ್ಪ ಪ್ರೌಢಶಾಲೆಯಲ್ಲಿ ಜಿಲ್ಲಾ ಮಟ್ಟದ ಚೆಸ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಪಿ. ಸಿ. ಕ್ಲಬ್ ಅಧ್ಯಕ್ಷ ಪೊನ್ನಿಮಾಡ ಆರ್. ಪ್ರದೀಪ್ ತಿಳಿಸಿದ್ದಾರೆ.

ಪೂರ್ವ ಪ್ರಾಥಮಿಕ, ಪ್ರಾಥಮಿಕ, ಪ್ರೌಢ ಮತ್ತು ಮುಕ್ತ ವಿಭಾಗದಲ್ಲಿ ಸ್ಪರ್ಧೆ ನಡೆಯಲಿದೆ. ಸ್ಪರ್ಧಿಗಳು ಚೆಸ್ ಬೋರ್ಡ್, ಗುರುತಿನ ಚೀಟಿ ತರಬೇಕಿದೆ. ಬೆಳಗ್ಗೆ 9 ಗಂಟೆಯಿಂದ ಸ್ಪರ್ಧೆ ನಡೆಯಲಿದೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಸೆ.16 ರೊಳಗೆ ಹೆಸರು ನೋಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗೆ 9448383910, 9972538230 ಸಂಖ್ಯೆಯಲ್ಲಿ ಸಂಪರ್ಕಿಸಬಹುದಾಗಿದೆ. ಗೋಷ್ಠಿಯಲ್ಲಿ ಪಿಸಿ ಕ್ಲಬ್ ಕಾರ್ಯದರ್ಶಿ ಟಿ. ಜೆ. ಅಂಥೋಣಿ, ಜೆಸಿಐ ಪೊನ್ನಂಪೇಟೆ ನಿಸರ್ಗ ಅಧ್ಯಕ್ಷ ನೀತ್ ಅಯ್ಯಪ್ಪ, ಕಾರ್ಯದರ್ಶಿ ಚೆಟ್ಟೋಳಿರ ಶರತ್ ಸೋಮಣ್ಣ ಇದ್ದರು.

### — ಬಿಜೆಪಿಯ ರೈತಪರ ಯೋಜನೆ ಮುಂದುವರಿಕೆಗೆ ಆಗ್ರಹಿಸಿ —

# ಮಡಿಕೇರಿಯಲ್ಲಿ ಬಿಜೆಪಿ ಪ್ರತಿಭಟನೆ




ಮಡಿಕೇರಿ, ಸೆ.8– ಬಿಜೆಪಿ ಸರ್ಕಾರದ ರೈತಪರ ಯೋಜನೆ ಮುಂದುವರಿಸಬೇಕು ಮತ್ತು ಸಮರ್ಪಕ ವಿದ್ಯುತ್ ಪೂರೈಕೆ ಮಾಡಬೇಕೆಂದು ಆಗ್ರಹಿಸಿ, ಬಿಜೆಪಿ ರೈತ ಮೋರ್ಚಾದಿಂದ ಮಡಿಕೇರಿ ತಹಶೀಲ್ದಾರ್ ಕಚೇರಿ ಎದುರು ಪ್ರತಿಭಟನೆ ನಡೆಸಲಾಯಿತು.

ಮಾಜಿ ಸಚಿವ ಅಪ್ಪಚ್ಚು ರಂಜನ್ ಹಾಗೂ ಮಾಜಿ ವಿಧಾನ ಸಭಾಧ್ಯಕ್ಷ ಕೆ.ಜಿ.ಬೋಪಯ್ಯ ಅವರ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ರಾಜ್ಯದ ಕಾಂಗ್ರೆಸ್ ಸರಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು. ಬಿಜೆಪಿ ಸರ್ಕಾರ ನೀಡುತ್ತಿದ್ದ ಕಿಸಾನ್ ಸಮ್ಮಾನ್, ರೈತ ವಿದ್ಯಾನಿಧಿ ಯೋಜನೆ, ಭೂ ಸಿರಿ ಯೋಜನೆ, ಶ್ರಮ ಶಕ್ತಿ ಯೋಜನೆ, ರೈತ ಸಂಪದ ಯೋಜನೆಯನ್ನು ಮುಂದುವರೆಸಬೇಕೆಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಈ ಸಂದರ್ಭ ಮಾತನಾಡಿದ ಮಾಜಿ ಸಚಿವ ಅಪ್ಪಚ್ಚು ರಂಜನ್, ಕಾಂಗ್ರೆಸ್ ಸರಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದಿದ್ದೇ, ರಾಜ್ಯ ಬರಗಾಲದ ಪರಿಸ್ಥಿತಿ ಎದುರಿಸುವಂತಾಗಿದೆ. ಈ ಹಿಂದೆ ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ನೀಡುತ್ತಿದ್ದ ಕಿಸಾನ್ ಸಮ್ಮಾನ್, ರೈತ ವಿದ್ಯಾನಿಧಿ ಯೋಜನೆ ಸೇರಿದಂತೆ ಅನೇಕ ಯೋಜನೆಗಳನ್ನು ಕಾಂಗ್ರೆಸ್ ಸರಕಾರ ಸ್ಥಗಿತಗೊಳಿಸಿದೆ. 200 ಯೂನಿಟ್ ಉಚಿತ ವಿದ್ಯುತ್ ನೀಡುವುದಾಗಿ ಹೇಳಿ, ವಿದ್ಯುತ್ ದರವನ್ನು ಹೆಚ್ಚಿಸಿದೆ ಎಂದು ಆರೋಪಿಸಿದರು. ಜಿಲ್ಲೆಯಲ್ಲಿ ಲೋಡ್ ಶೆಡ್ಡಿಂಗ್ ತಂದಿದ್ದು, ಕಾಂಗ್ರೆಸ್ ಅಂದರೆ ಶನಿ ಹಿಡಿದ ಸರಕಾರವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ವಿಧಾನ ಸಭಾಧ್ಯಕ್ಷ ಕೆ.ಜಿ. ಬೋಪಯ್ಯ ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದು ನೂರು ದಿನ ಕಳೆದಿದೆ. ಆದರೆ ಈ ನೂರು ದಿನಗಳ ಆಡಳಿತದ ಅನುಭವದಿಂದಾಗಿ ಜನರು ಸರಕಾರಕ್ಕೆ ಹಿಡಿಶಾಪ ಹಾಕುವಂತಾಗಿದೆ. ಐದು ಗ್ಯಾರಂಟಿ ಯೋಜನೆಗಳಿಂದಾಗಿ ಜನರಲ್ಲಿ ಗೊಂದಲ ಸೃಷ್ಟಿಸಿದೆ. ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಬ್ಯಾಂಕ್ ಎದುರು ಸಾಲು ನಿಲ್ಲು ವಂತಾಗಿದೆ. 200 ಯೂನಿಟ್ ಉಚಿತ ವಿದ್ಯುತ್ ನೀಡುವುದಾಗಿ ಹೇಳಿ ಮತ್ತೊಂದೆಡೆ ವಿದ್ಯುತ್ ಬಿಲ್ ಹೆಚ್ಚಳ ಮಾಡಿದೆ. ಕೇಂದ್ರ ಸರಕಾರ ನೀಡುತ್ತಿರುವ ಐದು ಕೆ.ಜಿ. ಅಕ್ಕಿಯನ್ನು ತಾವು ನೀಡುತ್ತಿರುವುದಾಗಿ ಹೇಳಿ ಜನರ ದಿಕ್ಕುತಪ್ಪಿಸಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ರಾಜ್ಯದಲ್ಲಿ ವರ್ಗಾವಣೆ ದಂಧೆ ಆಗುತ್ತಿದ್ದೆಯೇ ಹೊರತು ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲವೆಂದು ವಾಗ್ದಾಳಿ ನಡೆಸಿದರು.

ಬಳಿಕ ರೈತ ಮೋರ್ಚಾದ ಜಿಲ್ಲಾಧ್ಯಕ್ಷ ನಾಗೇಶ್ ಕುಂದಲ್ಪಾಡಿ ಅವರು ವಿವಿಧ ಬೇಡಿಕೆಗಳ ಮನವಿ ಪತ್ರವನ್ನು ತಹಶೀಲ್ದಾರ್ ಮೂಲಕ ಸರಕಾರಕ್ಕೆ ಸಲ್ಲಿಸಿದರು. ರಾಜ್ಯ ರೈತ ಮೋರ್ಚಾದ ಕಾರ್ಯಕಾರಿಣಿ ಸದಸ್ಯೆ ಯಮುನಾ ಚಂಗಪ್ಪ, ವಿಧಾನ ಪರಿಷತ್ ಮಾಜಿ ಸದಸ್ಯ ಸುನಿಲ್ ಸುಬ್ರಮಣಿ, ಬಿಜೆಪಿ ಜಿಲ್ಲಾಧ್ಯಕ್ಷ ರಾಬೀನ್ ದೇವಯ್ಯ, ನಗರಸಭಾ ಅಧ್ಯಕ್ಷೆ ಅನಿತಾ ಪೂವಯ್ಯ, ಉಪಾಧ್ಯಕ್ಷೆ ಸವಿತಾ ರಾಕೇಶ್, ನಗರಸಭಾ ಸದಸ್ಯರು, ಬಿಜೆಪಿ ಮಡಿಕೇರಿ ನಗರಾಧ್ಯಕ್ಷ ಮನು ಮಂಜುನಾಥ್ ಸೇರಿದಂತೆ ಮತ್ತಿತರರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಅಪ್ರಾಪ್ತನ ಪ್ರೇಮ ಕೊಲೆಯಲ್ಲಿ ಅಂತ್ಯ

### ಮಗಳನ್ನು ಪ್ರೀತಿಸುತ್ತಿದ್ದ ಬಾಲಕನನ್ನು ಹೊಡೆದು ಕೊಂದ ತಂದೆ

ವಿರಾಜಪೇಟೆ, ಸೆ.8– ತನ್ನ ಅಪ್ರಾಪ್ತ ಮಗಳನ್ನು ಪ್ರೀತಿಸುತ್ತಿದ್ದ ಅಪ್ರಾಪ್ತ ಬಾಲಕನನ್ನು ಸೌದೆಯಿಂದ ಹೊಡೆದು ಕೊಲೆ ಮಾಡಿರುವ ಘಟನೆ ಇಲ್ಲಿಗೆ ಸಮೀಪದ ಗ್ರಾಮವೊಂದರಲ್ಲಿ ಸಂಭವಿಸಿದೆ.

ಅಪ್ರಾಪ್ತ ಬಾಲಕನನ್ನು ಕೊಲೆಗೈದ ಅಪ್ರಾಪ್ತೆ ಬಾಲಕಿಯ ತಂದೆಯನ್ನು ಪೊಲೀಸರು ಬಂಧಿಸಿದ್ದಾರೆ. ಗ್ರಾಮದ 14 ವರ್ಷದ ಬಾಲಕಿಯನ್ನು ಪಕ್ಕದ ಗ್ರಾಮದ 16 ವರ್ಷದ ಬಾಲಕ ಪ್ರೀತಿಸುತ್ತಿದ್ದು, ಇಂದು ಬಾಲಕಿಯ ಮನೆ ಬಳಿಗೆ ಹೋಗಿ ಆಕೆಯನ್ನು ಭೇಟಿ ಮಾಡಲು ಪ್ರಯತ್ನಿಸಿದ. ಈ ಮೊದಲೇ ಇಬ್ಬರಿಬ್ಬರ ಪ್ರೇಮದ ವಿಚಾರ ತಿಳಿದಿದ್ದ ಬಾಲಕಿ ತಂದೆ ಬಾಲಕನೊಂದಿಗೆ ಜಗಳ ಮಾಡಿ ಅದು ವಿಕೋಪಕ್ಕೆ ತಿರುಗಿದಾಗ ಸೌದೆಯಿಂದ ಯದ್ವಾತದ್ವಾ ಥಳಿಸಿದನೆನ್ನಲಾಗಿದೆ.

ಇದರಿಂದ ತೀವ್ರವಾಗಿ ಗಾಯಗೊಂಡು ರಕ್ತದ ಮಡುವಿನಲ್ಲಿ ಬಿದ್ದಿದ್ದ ಬಾಲಕನನ್ನು ಸ್ಥಳೀಯರು ಆಸ್ಪತ್ರೆಗೆ ಕರೆದೊಯ್ಯುವ ಮಾರ್ಗಮಧ್ಯೆ ಸಾವನ್ನಪ್ಪಿದ್ದಾನೆ. ಮೃತದೇಹವನ್ನು ಮಡಿಕೇರಿ ಜಿಲ್ಲಾಸ್ಪತ್ರೆಯ ಶವಾಗಾರಕ್ಕೆ ಸಾಗಿಸಲಾಗಿದೆ. ವಿರಾಜಪೇಟೆ ಗ್ರಾಮಾಂತರ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಆರೋಪಿಯನ್ನು ಬಂಧಿಸಿದ್ದಾರೆ. ಸ್ಥಳಕ್ಕೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಅಡಿಷನಲ್ ಎಸ್ಪಿ, ಡಿವೈಎಸ್ಪಿ, ಸರ್ಕಲ್ ಇನ್ಸ್‌ಪೆಕ್ಟರ್ ಸೇರಿದಂತೆ ಹಲವು ಹಿರಿಯ ಅಧಿಕಾರಿಗಳು ಭೇಟಿ ನೀಡಿದ್ದರು.

## ಬೆಟ್ಟದಪುರದ ಮಹಿಳೆ ಮಡಿಕೇರಿಯಲ್ಲಿ ನಾಪತ್ತೆ

### ಅಬ್ಬಿ ಜಲಪಾತದ ಬಳಿ ಚಪ್ಪಲಿ, ಪರ್ಸ್, ಬಟ್ಟೆಗಳು ಪತ್ತೆ



ಮಡಿಕೇರಿ, ಸೆ.8– ಪಿರಿಯಾಪಟ್ಟಣ ತಾಲೂಕಿನ ಬೆಟ್ಟದಪುರ ಗ್ರಾಮದ ವಿವಾಹಿತ ಮಹಿಳೆಯೋರ್ವರು ಮಡಿಕೇರಿಗೆ ಬಂದು ನಾಪತ್ತೆಯಾಗಿರುವ ಘಟನೆ ನಡೆದಿದೆ.

ಬೆಟ್ಟದಪುರ ನಿವಾಸಿ ಎಂ.ಸರಸ್ವತಿ (33) ಎಂಬಾಕೆಯೇ ನಾಪತ್ತೆಯಾದ ಮಹಿಳೆಯಾಗಿದ್ದು, ಆಕೆಯ ಚಪ್ಪಲಿ, ಪರ್ಸ್, ಬಟ್ಟೆಗಳು, ದಾಖಲಾತಿಗಳು ಮತ್ತು ಡೆತ್ ನೋಟ್ ಕೂಡ ಪ್ರವಾಸಿ ತಾಣ ಅಬ್ಬಿ ಜಲಪಾತದ ಬಳಿ ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಆಕೆ ನೀರಿಗೆ ಬಿದ್ದು ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತಗೊಂಡಿದೆ.

ಈ ಹಿನ್ನೆಲೆಯಲ್ಲಿ ಅಗ್ನಿ ಶಾಮಕ ದಳ, ಮಡಿಕೇರಿ ಗ್ರಾಮಾಂತರ ಪೊಲೀಸರು, ಬೆಟ್ಟದಪುರ ಠಾಣಾ ಪೊಲೀಸರು ಮತ್ತು ಎನ್‌ಡಿಆರ್‌ಎಫ್ ಯೋಧರ ತಂಡ ಅಬ್ಬಿ ಜಲಪಾತದಲ್ಲಿ ಜಂಟಿ ಕಾರ್ಯಾಚರಣೆಯ ಮೂಲಕ ಶೋಧ ಕಾರ್ಯ ನಡೆಸಿತು. ಎಂ.ಸರಸ್ವತಿ ಎಂಬವರು ತನ್ನ ಎರಡು ಮಕ್ಕಳನ್ನು ಮತ್ತು ಗಂಡನನ್ನು ಮನೆಯಲ್ಲಿ ಬಿಟ್ಟು ಮಡಿಕೇರಿಗೆ ಬಂದಿದ್ದು, ಈ ಬಗ್ಗೆ ಬೆಟ್ಟದಪುರ ಪೊಲೀಸರು ತನಿಖೆ ನಡೆಸುತ್ತಿದ್ದಾರೆ. ಮೂಲಗಳ ಪ್ರಕಾರ ಕೌಟುಂಬಿಕ ಕಲಹವೇ ಈ ಘಟನೆಗೆ ಕಾರಣ ಎನ್ನಲಾಗಿದೆ. ಸರಸ್ವತಿ ನಾಪತ್ತೆಯಾಗಿರುವ ಕುರಿತು ಬೆಟ್ಟದಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದೂರು ದಾಖಲಾಗಿತ್ತು.

**ಶೋಧ ಕಾರ್ಯ ಸ್ಥಗಿತ:** ಅಬ್ಬಿ ಜಲಪಾತದ ಆಳದ ಗುಂಡಿಗಳಲ್ಲಿ ನುರಿತ ಮುಳುಗು ತಜ್ಞರು ಸರಸ್ವತಿ ಅವರ ಮೃತದೇಹಕ್ಕಾಗಿ ಕತ್ತಲಾಗುವವರೆಗೂ ಶೋಧ ಕಾರ್ಯ ನಡೆಸಿದರು. ಆದರೆ ಯಾವುದೇ ಪ್ರಯೋಜನವಾಗಲಿಲ್ಲ. ಈ ಹಿನ್ನೆಲೆಯಲ್ಲಿ ಶುಕ್ರವಾರದ ಶೋಧ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತ ಮಾಡಲಾಗಿದೆ. ಮೃತದೇಹಕ್ಕಾಗಿ ಶನಿವಾರವೂ ಶೋಧ ಕಾರ್ಯ ನಡೆಸಲಾಗುತ್ತದೆ ಎಂದು ಮೂಲಗಳು ತಿಳಿಸಿವೆ.

## ಮಡಿಕೇರಿಯಲ್ಲಿ ಕಾಂಗ್ರೆಸ್ಸಿನಿಂದ ಭಾರತ್ ಜೋಡೋ ಯಾತ್ರೆ ವರ್ಷಾಚರಣೆ




ಮಡಿಕೇರಿ, ಸೆ.8– ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ಪೂರ್ಣಗೊಂಡ ಭಾರತ್ ಜೋಡೋ ಯಾತ್ರೆಯ ವರ್ಷಾಚರಣೆಯನ್ನು ಕೊಡಗು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಮಡಿಕೇರಿಯಲ್ಲಿ ಆಚರಿಸಲಾಯಿತು.

ಕಾಂಗ್ರೆಸ್ ಜಿಲ್ಲಾ ಉಪಾಧ್ಯಕ್ಷ ಕೆ.ಎಂ. ಲೋಕೇಶ್ ಅವರ ನೇತೃತ್ವದಲ್ಲಿ ನಗರದ ಕಾಂಗ್ರೆಸ್ ಕಚೇರಿಯಿಂದ ಗಾಂಧಿ ಮೈದಾನದವರೆಗೆ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಮೆರವಣಿಗೆ ನಡೆಸಿದರು.

ಕಾಂಗ್ರೆಸ್ ಸರ್ಕಾರ, ರಾಹುಲ್ ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಪರ ಕಾರ್ಯಕರ್ತರು ಘೋಷಣೆಗಳನ್ನು ಕೂಗಿದರು. ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ಯಶಸ್ವಿಯಾಗಿ ಪೂರ್ಣಗೊಂಡ ಭಾರತ್ ಜೋಡೋ ಯಾತ್ರೆಯ ಕುರಿತು ಕೆ.ಎಂ.ಲೋಕೇಶ್ ಮಾತನಾಡಿದರು.

ಕೆಪಿಸಿಸಿ ಪ್ರಮುಖ ಟಿ.ಪಿ.ರಮೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಕೊಲ್ಯದ ಗಿರೀಶ್, ಮುನೀರ್ ಅಹಮ್ಮದ್, ಉಪಾಧ್ಯಕ್ಷ ಸುಜು ತಿಮ್ಮಯ್ಯ, ನಗರಾಧ್ಯಕ್ಷ ಬಿ.ವೈ. ರಾಜೇಶ್, ಪ್ರಧಾನ ಕಾರ್ಯದರ್ಶಿ ಆರ್.ಪಿ. ಚಂದ್ರಶೇಖರ್, ಉಪಾಧ್ಯಕ್ಷ ಪ್ರಕಾಶ್ ಆಚಾರ್ಯ, ಮಾಜಿ ಅಧ್ಯಕ್ಷ ಕೆ.ಯು.ಅಬ್ದುಲ್ ರಜಾಕ್, ನಗರ ಮಹಿಳಾ ಅಧ್ಯಕ್ಷೆ ಹೊಟ್ಟೆಯಂಡ ಫ್ಯಾನ್ಸಿ ಪಾರ್ವತಿ, ಮೂಡ ಮಾಜಿ ಅಧ್ಯಕ್ಷ ಚುಮ್ಮಿ ದೇವಯ್ಯ, ಸಾಮಾಜಿಕ ಜಾಲತಾಣದ ಅಧ್ಯಕ್ಷ ಸೂರಜ್ ಹೊಸೂರು, ರಾಜೀವ್ ಗಾಂಧಿ ಪಂಚಾಯತ್ ರಾಜ್ ಸಂಘಟನೆಯ ಅಧ್ಯಕ್ಷ ತೆನ್ನಿರ ಮೈನಾ, ಸೇವಾದಳದ ಅಧ್ಯಕ್ಷ ಕಾನೆಹಿತ್ಲು ಮೊಣ್ಣಪ್ಪ, ಬ್ಲಾಕ್ ಕಾಂಗ್ರೆಸ್ ಅಲ್ಪಸಂಖ್ಯಾತರ ಘಟಕದ ಅಧ್ಯಕ್ಷ ಕಲೀಲ್ ಬಾಷ, ಪ್ರಮುಖರಾದ ಉದಯ ಕುಮಾರ್ ಹಾಗೂ ಕಾರ್ಯಕರ್ತರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

## ದೇಹದಾರ್ಢ್ಯ ಸ್ಪರ್ಧೆಯಲ್ಲಿ ಚಿನ್ನ, ಕಂಚು ಗೆದ್ದ ಗಣೇಶ್



ಮಡಿಕೇರಿ, ಸೆ.8– ರಾಷ್ಟ್ರ ಮಟ್ಟದ ದೇಹದಾಢ್ಯ ಸ್ಪರ್ಧೆಯಲ್ಲಿ ಕೊಡಗಿನ ಗಣೇಶ್ ಗಮನಾರ್ಹ ಸಾಧನೆ ಮಾಡಿದ್ದು, ಚಿನ್ನ ಮತ್ತು ಕಂಚು ಗೆದ್ದಿದ್ದಾರೆ. ಬೆಂಗಳೂರಿನಲ್ಲಿ ಹೊಸಕೋಟೆ ಹೋಬಳಿಪುರದಲ್ಲಿ ನಡೆದ 'ವರ್ಲ್ಡ್ ಫಿಟ್ನೆಸ್ ಫೆಡರೇಷನ್ ರಾಯಲ್ ಕ್ಲಾಸಿಕ್–2023' ದೇಹದಾಢ್ಯ ಸ್ಪರ್ಧೆಯಲ್ಲಿ 55 ಕೆ.ಜಿ ವಿಭಾಗದಲ್ಲಿ ಗಣೇಶ್ ದ್ವಿತೀಯ ಸ್ಥಾನ ಪಡೆದು, ಮಿಸ್ಟರ್ ಕರ್ನಾಟಕ ಬಿರುದಿಗೆ ಪಾತ್ರರಾಗಿದ್ದಾರೆ. ಚೆನ್ನೈನಲ್ಲಿ ನಡೆದ ರಾಷ್ಟ್ರ ಮಟ್ಟದ ದೇಹದಾಢ್ಯ ಐಕಾನ್ ಇಂಡಿಯಾ ಸ್ಪರ್ಧೆಯಲ್ಲಿ 'ನ್ಯಾಚುರಲ್ ದೇಹದಾಢ್ಯ ಮುಕ್ತ ವಿಭಾಗ'ದಲ್ಲಿ 1 ಚಿನ್ನ ಮತ್ತು 1 ಕಂಚಿನ ಪದಕವನ್ನು ತಮ್ಮದಾಗಿಸಿಕೊಂಡಿದ್ದಾರೆ.

## ಮಂಡೇಪಂಡ ರಾಧಾ ಗಣಪತಿ ನಿಧನ



ಮೈಸೂರು, ಸೆ. 8 – ಮೈಸೂರಿನ ಟೀಚರ್ಸ್ ಬಡಾವಣೆ ನಿವಾಸಿ ದಿವಂಗತ ಎಂ.ಡಿ. ಗಣಪತಿ ಅವರ ಪತ್ನಿ ಮಂಡೇಪಂಡ ರಾಧಾ ಗಣಪತಿ (70) ಗುರುವಾರ ರಾತ್ರಿ ನಿಧನರಾದರು.

ಮೃತರು ಇಬ್ಬರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಚಾಮುಂಡಿಬೆಟ್ಟದ ತಪ್ಪಲಿನ ರುದ್ರಭೂಮಿಯಲ್ಲಿ ಶುಕ್ರವಾರ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

## ಜನರಲ್ ತಿಮ್ಮಯ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಡಿಕೇರಿ, ಆ.8– 2022–23 ನೇ ಸಾಲಿನಲ್ಲಿ ಹತ್ತನೇ ತರಗತಿ ಮತ್ತು ದ್ವಿತೀಯ ಪಿಯುಸಿ ಸಾರ್ವತ್ರಿಕ ಪರೀಕ್ಷೆಗಳಲ್ಲಿ ಗರಿಷ್ಠ ಅಂಕಗಳನ್ನು ಪಡೆದ ಕರ್ನಾಟಕ ಮೂಲ ನಿವಾಸಿ ಮಾಜಿ ಸೈನಿಕರ ಮಕ್ಕಳಿಗೆ 'ಜನರಲ್ ಕೆ.ಎಸ್.ತಿಮ್ಮಯ್ಯ' ನಗದು ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಅ.31 ಕೊನೆಯ ದಿನವಾಗಿದೆ ಎಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆಯ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

# ಅಪಘಾತದಲ್ಲಿ ತೋಟಗಾರಿಕೆ ನೌಕರನ ಸಾವು ಪ್ರಕರಣಕ್ಕೆ ತಿರುವು

- ಕೊಲೆ ಶಂಕೆ ವ್ಯಕ್ತಪಡಿಸಿರುವ ದಲಿತ ಮುಖಂಡರು
- ತನಿಖಾಧಿಕಾರಿಯಾಗಿ ಇನ್ಸ್‌ಪೆಕ್ಟರ್ ಶ್ರೀಕಾಂತ್ ನೇಮಕ



ರಮೇಶ್

ಚಾಮರಾಜನಗರ, ಸೆ. 8– ಅಪಘಾತದಲ್ಲಿ ತೋಟಗಾರಿಕೆ ಇಲಾಖೆ ನೌಕರ ಸಾವನ್ನಪ್ಪಿದ ಪ್ರಕರಣ ತಿರುವು ಪಡೆದಿದ್ದು, ಕೊಲೆ ಶಂಕೆ ವ್ಯಕ್ತವಾಗಿದೆ.

ವಾಟ್ಸಾಪ್ ಗ್ರೂಪ್‌ಗಳಲ್ಲಿ ಹರಿದಾಡಿದ ದೃಶ್ಯವನ್ನು ಉಲ್ಲೇಖಿಸಿ, ತೋಟಗಾರಿಕೆ ಇಲಾಖೆ ನೌಕರ ಅಪಘಾತದಲ್ಲಿ ಸಾವನ್ನಪ್ಪದೆ ಹತ್ಯೆಗೀಡಾಗಿರಬಹುದು ಎಂದು ದಲಿತ ಮುಖಂಡರು ಜಿಲ್ಲಾ ಎಸ್ಪಿ ಪದ್ಮಿನಿ ಸಾಹು ಅವರಿಗೆ ತಿಳಿಸಿದ್ದು, ಈ ಪ್ರಕರಣದ ಬಗ್ಗೆ ಸಮಗ್ರ ತನಿಖೆಗೆ ಆಗ್ರಹಿಸಿದ ಹಿನ್ನೆಲೆ ಯಲ್ಲಿ ಎಸ್ಪಿಯವರು ಚಾಮರಾಜನಗರ ಪೂರ್ವ ಠಾಣೆಯ ಇನ್ಸ್‌ಪೆಕ್ಟರ್ ಆರ್.ಶ್ರೀಕಾಂತ್ ಅವರನ್ನು ಪ್ರಕರಣದ ತನಿಖಾಧಿಕಾರಿ ಯಾಗಿ ನೇಮಿಸಿದ್ದಾರೆ. ಅಲ್ಲದೇ, ಈ ಪ್ರಕರಣದ ಬಗ್ಗೆ ಚರ್ಚಿಸಲು ನಾಳೆ (ಸೆ. 9) ಮಧ್ಯಾಹ್ನ 2 ಗಂಟೆಗೆ ನಗರದ ಡಾ. ಬಿಆರ್. ಅಂಬೇಡ್ಕರ್ ಭವನದಲ್ಲಿ ದಲಿತ ಹಾಗೂ ಪ್ರಗತಿ ಪರ ಮುಖಂಡರು, ಯಜಮಾನರು, ಅಂಬೇಡ್ಕರ್ ಸಂಘಗಳ ಪದಾಧಿಕಾರಿಗಳ ಸಭೆ ಕರೆಯಲಾಗಿದೆ ಎಂದು ದಲಿತ ಮುಖಂಡ ಸಿ.ಎಂ. ಕೃಷ್ಣಮೂರ್ತಿ ತಿಳಿಸಿದ್ದಾರೆ.

**ವಿವರ:** ಚಾಮರಾಜನಗರ ತಾಲೂಕು ದಡದಹಳ್ಳಿ ನಿವಾಸಿ ರಮೇಶ್(44) ಇಲ್ಲಿನ ತೋಟಗಾರಿಕೆ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದು, ಆಗಸ್ಟ್ 30ರಂದು ರಾತ್ರಿ ಚಾಮರಾಜನಗರದ ಗುಂಡ್ಲುಪೇಟೆ ರಸ್ತೆಯಲ್ಲಿರುವ ಹುದಾ ಪಬ್ಲಿಕ್ ಶಾಲೆಯ ಕಾಂಪೌಂಡ್ ಬಳಿ ನರಳಾಡುತ್ತಾ ಬಿದ್ದಿದ್ದ. ಈತನಿಗೆ ಯಡಬೆಟ್ಟದ ಸಿಮ್ಸ್ ಆಸ್ಪತ್ರೆಯಲ್ಲಿ ಪ್ರಥಮ ಚಿಕಿತ್ಸೆ ಕೊಡಿಸಿ, ಹೆಚ್ಚಿನ ಚಿಕಿತ್ಸೆಗಾಗಿ ಮೈಸೂರಿಗೆ ಕರೆದೊಯ್ಯುವ ಮಾರ್ಗ ಮಧ್ಯೆ ಸಾವನ್ನಪ್ಪಿದ್ದ. ಈ ಸಂಬಂಧ ತನ್ನ ಪತಿ ಬೈಕ್‌ನಲ್ಲಿ ತೆರಳುತ್ತಿದ್ದಾಗ ವೇಗವಾಗಿ ಬಂದ ಲಾರಿ ಡಿಕ್ಕಿ ಹೊಡೆದು ಸಾವನ್ನಪ್ಪಿದ್ದಾನೆ ಎಂದು ಈತನ ಪತ್ನಿ ಪ್ರತಿಮಾ ಚಾಮರಾಜನಗರ ಸಂಚಾರ ಠಾಣೆಗೆ ಆಗಸ್ಟ್ 31ರಂದು ದೂರು ಸಲ್ಲಿಸಿದ್ದು, ಅಪಘಾತದ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಲಾರಿಯನ್ನು ವಶಪಡಿಸಿಕೊಂಡಿದ್ದಾರೆ

> ದಡದಹಳ್ಳಿ ರಮೇಶ್ ಸಾವಿನ ಬಗ್ಗೆ ಹಲವರು ಊಹಾಪೋಹಗಳು ಎದ್ದಿವೆ. ಈ ಬಗ್ಗೆ ಪೊಲೀಸರು ಸಮಗ್ರ ತನಿಖೆ ನಡೆಸಬೇಕು. ಸತ್ಯಾಂಶ ಹೊರತರಬೇಕು. ಇಲ್ಲದಿದ್ದಲ್ಲಿ ಜಿಲ್ಲೆಯಾದ್ಯಂತ ಹೋರಾಟ ರೂಪಿಸಲಾಗುವುದು.
>
> -ಸಿ.ಎಂ. ಕೃಷ್ಣಮೂರ್ತಿ, ದಲಿತ ಮುಖಂಡರು, ಚಾಮರಾಜನಗರ.

> ರಮೇಶ್ ಸಾವಿನ ಬಗ್ಗೆ ಹಲವಾರು ಮಂದಿ ನನ್ನನ್ನು ಭೇಟಿ ಮಾಡಿ ಅನುಮಾನ ವ್ಯಕ್ತಪಡಿಸಿದ್ದಾರೆ. ಹೀಗಾಗಿ, ತನಿಖಾಧಿಕಾರಿಗಳಾಗಿ ಆರ್. ಶ್ರೀಕಾಂತ್ ಅವರನ್ನು ನೇಮಕ ಮಾಡಲಾಗಿದ್ದು, ತನಿಖೆ ಆರಂಭಿಸಲಾಗಿದೆ. ಮರಣೋತ್ತರ ಪರೀಕ್ಷೆ ವರದಿ ಬಂದ ನಂತರ ಸತ್ಯಾಂಶ ಗೊತ್ತಾಗಲಿದೆ.
>
> - ಪದ್ಮನಿ ಸಾಹು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ಚಾಮರಾಜನಗರ.

ಈ ಮಧ್ಯೆ ರಮೇಶ್ ನರಳಾಡುತ್ತಿರುವ ವಿಡಿಯೋ ವಾಟ್ಸಾಪ್ ಗ್ರೂಪ್‌ಗಳಲ್ಲಿ ವೈರಲ್ ಆಗಿದ್ದು, ಆತನ ಮರ್ಮಾಂಗಕ್ಕೆ ತೀವ್ರ ಪೆಟ್ಟು ಬಿದ್ದಿರುವುದು ಕಂಡು ಬಂದಿದೆ. ಇದನ್ನು ನೋಡಿದ ದಲಿತ ಮುಖಂಡರು, ಅಪಘಾತ ನಡೆದಿದ್ದರೆ ದೇಹದ ಹಲವು ಭಾಗಗಳಿಗೆ ಪೆಟ್ಟು ಬೀಳುತ್ತಿತ್ತು. ಆದರೆ, ರಮೇಶ್‌ನ ಮರ್ಮಾಂಗಕ್ಕೆ ಮಾತ್ರ ಪೆಟ್ಟು ಬಿದ್ದಿರುವುದರಿಂದ ಇದು ಕೊಲೆ ಆಗಿರಬಹುದೆಂದು ಅನುಮಾನ ವ್ಯಕ್ತಪಡಿಸಿ ಸಮಗ್ರ ತನಿಖೆಗೆ ಆಗ್ರಹಿಸಿದ್ದರು. ಈ ಹಿನ್ನೆಲೆಯಲ್ಲಿ ಜಿಲ್ಲಾ ಎಸ್ಪಿಯವರು ಇನ್ಸ್‌ಪೆಕ್ಟರ್ ಶ್ರೀಕಾಂತ್ ಅವರನ್ನು ತನಿಖಾಧಿಕಾರಿಯಾಗಿ ನೇಮಿಸಿದ್ದಾರೆ.

### ಭಾರತ್ ಜೋಡೋ ವರ್ಷಾಚರಣೆ ಹಿನ್ನೆಲೆ

## ಜಿಲ್ಲಾ ಕಾಂಗ್ರೆಸ್ ಯಶಸ್ವಿ ನಡಿಗೆ



ಚಾಮರಾಜನಗರ, ಸೆ.7– ಭಾರತ್ ಜೋಡೋ ವರ್ಷಾಚರಣೆ ಅಂಗವಾಗಿ ನಗರದಲ್ಲಿ ಜಿಲ್ಲಾ ಕಾಂಗ್ರೆಸ್‌ನಿಂದ ಭಾರತ್ ಜೋಡೋ ನಡಿಗೆ ಯಶಸ್ವಿಯಾಗಿ ನಡೆಯಿತು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಿಂದ ಆರಂಭವಾದ ಭಾರತ್ ಜೋಡೋ ನಡಿಗೆ ಸತ್ತಿ ರಸ್ತೆ, ಅನ್ವರ್ ಪಾಷ ವೃತ್ತ, ದೊಡ್ಡಂಗಡಿ ಬೀದಿ, ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿ ರಸ್ತೆ ಮಾರ್ಗವಾಗಿ ಜಿಲ್ಲಾಡಳಿತ ಭವನಕ್ಕೆ ತಲುಪಿತು. ನಂತರ ಡಾ.ಬಿ.ಆರ್.ಅಂಬೇಡ್ಕರ್ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಭಾರತ್ ಜೋಡ್ ನಡಿಗೆ ಅಂತ್ಯಗೊಳಿಸಲಾಯಿತು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ ಮಾತನಾಡಿ, ಕಾಂಗ್ರೆಸ್ ಯುವ ನೇತಾರ ರಾಹುಲ್ ಗಾಂಧಿ ಅವರು ಬಿಜೆಪಿ ಸರ್ಕಾರದ ದುರಾಡಳಿತ ಕೋಮವಾದ ಹಾಗೂ ದ್ವೇಷದ ರಾಜಕಾರಣದ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸಿ, ಒಡೆದ ಮನಸ್ಸುಗಳನ್ನು ಒಗ್ಗೂಡಿಸುವ ಭಾರತ್ ಜೋಡೋ ಯಾತ್ರೆಗೆ 2022ರ ಸೆ.7ರಂದು ಕನ್ಯಾಕುಮಾರಿಯಲ್ಲಿ ಚಾಲನೆ ನೀಡಿದ್ದರು. ಇದು 12 ರಾಜ್ಯ, 137 ಜಿಲ್ಲೆಗಳನ್ನು ದಾಟಿ ಜಮ್ಮು ಕಾಶ್ಮೀರದಲ್ಲಿ ಅಂತ್ಯಗೊಂಡಿತು. ರಾಹುಲ್ ಗಾಂಧಿ ಕೈಗೊಂಡಿದ್ದ ಈ ಯಾತ್ರೆಗೆ ದೇಶಾದ್ಯಂತ ಉತ್ತಮ ಜನ ಬೆಂಬಲ ವ್ಯಕ್ತವಾಗಿ ರಾಜ್ಯದಲ್ಲಿದ್ದ ಬಿಜೆಪಿ ಸರ್ಕಾರ ಪತನವಾಗಿ 136ಕ್ಕೂ ಹೆಚ್ಚು ಸ್ಥಾನಗಳೊಂದಿಗೆ ಕಾಂಗ್ರೆಸ್ ಅಧಿಕಾರಕ್ಕೆ ಬರಲು ಸಹಕಾರಿಯಾಗಿದೆ ಎಂದರು.

ಮಾಜಿ ಶಾಸಕ ಸಿ.ಎನ್.ನಂಜುಂಡಸ್ವಾಮಿ ಮಾತನಾಡಿ, ಯುವ ನಾಯಕ ರಾಹುಲ್ ಗಾಂಧಿ ಭಾರತ್ ಜೋಡೋ ಯಾತ್ರೆ ಮೂಲಕ ಇಡೀ ದೇಶವನ್ನು ಜೋಡಿಸುವ ಕೆಲಸ ಮಾಡಿದ್ದಾರೆ. ಇನ್ನಾದರೂ ವಿಪಕ್ಷಗಳು ರಾಹುಲ್ ಗಾಂಧಿ ವಿರುದ್ಧ ಮಾತನಾಡುವುದನ್ನು ನಿಲ್ಲಿಸಲಿ ಎಂದರು.

ರಾಜ್ಯ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪ ಅಮರನಾಥ್ ಮಾತನಾಡಿದರು. ಈ ವೇಳೆ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್. ಮಹದೇವ್, ಜಿಲ್ಲಾ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎ.ಎಸ್.ಗುರುಸ್ವಾಮಿ, ಮಹಮದ್ ಅಸ್ಗರ್, ಚಂದ್ರು, ತೋಟೇಶ್, ಮಹಿಳಾ ಘಟಕದ ಅಧ್ಯಕ್ಷೆ ಲತಾ ರಾಜಶೇಖರ್ ಜತ್ತಿ, ಕನಿಷ್ಠ ವೇತನಾ ಸಲಹಾ ಸಮಿತಿ ಮಾಜಿ ಅಧ್ಯಕ್ಷ ಉಮೇಶ್, ಜಿಪಂ ಮಾಜಿ ಸದಸ್ಯರಾದ ಮಹದೇವನಾಯಕ, ಯೋಗೇಶ್, ರಮೇಶ್, ಎಪಿಎಂಸಿ ಮಾಜಿ ಅಧ್ಯಕ್ಷ ಡಿ. ನಾಗೇಂದ್ರ, ನಿರ್ದೇಶಕ ಪ್ರವೀಣ್, ಚಂದ್ರು, ಶಿವಸ್ವಾಮಿ, ಸಿ.ಕೆ.ರವಿಕುಮಾರ್, ಚನ್ನಪ್ಪ, ನಾಗರಾಜು, ಎನ್‌ಎಸ್‌ಯುಐನ ಮೋಹನ್ ನಗು, ಶಿವಮೂರ್ತಿ ಎಂ.ಸುಹೇಲ್ ಆಲಿ ಖಾನ್, ನಗರಸಭಾ ಸದಸ್ಯರಾದ ಚಿನ್ನಮ್ಮ, ವೈದ್ಯ ಘಟಕದ ಅಧ್ಯಕ್ಷ ಡಾ.ಅತೀಯಾ ಫೈರೋಜ್, ಅಯೂಬ್ ಖಾನ್, ಎಹೆಚ್‌ಎನ್ ಖಾನ್ ಇತರರಿದ್ದರು.

## ಅರ್ಜಿ ಆಹ್ವಾನ

ಚಾಮರಾಜನಗರ ಸೆ.8– ನಗರದ ಪ್ರಗತಿ ಕೌಶಲ್ಯ ಅಕಾಡೆಮಿ ಶೇ.50 ರಿಯಾಯಿತಿ ಶುಲ್ಕಯೊಂದಿಗೆ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪಾಸ್, ಫೇಲ್ ವಿದ್ಯಾರ್ಥಿಗಳಿಗೆ ಸಿಸಿ++, ಆಟೋಕ್ಯಾಡ್, ಬೇಸಿಕ್, ಇಂಟರ್‌ನೆಟ್ ವಿಷಯದಲ್ಲಿ ತರಬೇತಿ ನೀಡಲಿದ್ದು, ಆಸಕ್ತರು ಸೆ.15ರೊಳಗೆ ಸಂಸ್ಥೆಯಿಂದ ಅರ್ಜಿ ಪಡೆದು ಭರ್ತಿ ಮಾಡಿ ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## 210 ಸೋಲಿಗ ವಿದ್ಯಾರ್ಥಿಗಳ ದತ್ತು ಪಡೆಯಲು ಮುಂದಾದ ಅಧಿಕಾರಿಗಳು



ಚಾಮರಾಜನಗರ, ಸೆ.8– ಎಸ್‌ಎಸ್‌ಎಲ್‌ಸಿಯಲ್ಲಿ ಅನುತ್ತೀರ್ಣ ರಾದ ಮತ್ತು ಆರ್ಥಿಕವಾಗಿ ಹಿಂದುಳಿದ 210 ಸೋಲಿಗ ವಿದ್ಯಾರ್ಥಿಗಳನ್ನು ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಶೈಕ್ಷಣಿಕ ದತ್ತು ಪಡೆಯಲು ಮುಂದಾಗಿದ್ದಾರೆ.

ಅಶಕ್ತರು, ಏಕಪಾಲಕರು ಹಾಗೂ ಸೋಲಿಗ ಸಮುದಾಯದ ಮಕ್ಕಳು ಶಿಕ್ಷಣದಿಂದ ವಂಚಿತರಾಗಬಾರದು ಎಂದು ಜಿಲ್ಲಾಧಿಕಾರಿ ಸಿ.ಟಿ.ಶಿಲ್ಪಾನಾಗ್ ಈ ನೂತನ ಕಾರ್ಯಕ್ರಮ ಜಾರಿಗೆ ತರುತ್ತಿದ್ದು, ಆ ಮೂಲಕ ಜಿಲ್ಲಾಡಳಿತ ಶೈಕ್ಷಣಿಕ ಕ್ರಾಂತಿಗೆ ಮುಂದಾಗಿದೆ. ಹೀಗಾಗಿ ಎಸ್‌ಎಸ್‌ಎಲ್‌ಸಿಯಲ್ಲಿ ಅನುತ್ತೀರ್ಣರಾದ ಹಾಗೂ ಬುಡಕಟ್ಟು ವಿದ್ಯಾರ್ಥಿಗಳನ್ನು ಅಧಿಕಾರಿಗಳು ಶೈಕ್ಷಣಿಕ ದತ್ತು ತೆಗೆದುಕೊಳ್ಳಲಿದ್ದಾರೆ.

**ಜಿಲ್ಲಾ, ತಾಲೂಕು ಮಟ್ಟದ ಅಧಿಕಾರಿಗಳಿಗೆ ಟಾಸ್ಕ್:** ಕ್ಷೇತ್ರ ಶಿಕ್ಷಣಾಧಿಕಾರಿ, ಸಮಾಜ ಕಲ್ಯಾಣ ಇಲಾಖೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ವರ್ಗ ಕಲ್ಯಾಣ ಇಲಾಖೆಯ ತಲಾ ಓರ್ವ ಅಧಿಕಾರಿ 10 ವಿದ್ಯಾರ್ಥಿಗಳನ್ನು ಶೈಕ್ಷಣಿಕ ದತ್ತು ಪಡೆದು ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆ ಮೇಲೆ ನಿಗಾ ಇಡಲಿದ್ದಾರೆ. ಜೊತೆಗೆ ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆ ಬಗೆಹರಿಸಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ ತೇರ್ಗಡೆಯಾಗುವ ಜೊತೆಗೆ ಪಿಯು ಶಿಕ್ಷಣ ಮುಂದುವರೆಸುವ ತನಕವೂ ಅಧಿಕಾರಿಗಳು ಕ್ರಮ ವಹಿಸಲಿದ್ದಾರೆ.

**210 ಮಂದಿ ವಿದ್ಯಾರ್ಥಿಗಳು:** ಜಿಲ್ಲೆಯಲ್ಲಿ ಬುಡಕಟ್ಟು ಸಮುದಾಯದ 166 ಮಂದಿ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ವ್ಯಾಸಂಗ ಮಾಡುತ್ತಿದ್ದು, ಕಳೆದ ಬಾರಿ 88 ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಫೇಲಾಗಿದ್ದು, ಇವರಲ್ಲಿ ಕೋವಿಡ್ ಸಂತ್ರಸ್ತರ ಮಕ್ಕಳು, ಬುಡಕಟ್ಟು ಸಮುದಾಯ, ಸಿಂಗಲ್ ಪೇರೆಂಟ್ ವಿದ್ಯಾರ್ಥಿಗಳಿದ್ದು, ಇವರನ್ನು ಅಧಿಕಾರಿಗಳು ಶೈಕ್ಷಣಿಕ ದತ್ತು ಪಡೆಯಲಿದ್ದಾರೆ. ನವೆಂಬರ್‌ನಿಂದ ಡಿಸೆಂಬರ್‌ವರೆಗೆ ವಿಶೇಷ ತರಗತಿ ನಡೆಸಲು ನಿರ್ಧಾರ ಮಾಡಲಾಗಿದ್ದು, 210 ವಿದ್ಯಾರ್ಥಿಗಳನ್ನು ದತ್ತು ಪಡೆಯಲು ತಯಾರಿ ನಡೆಸಲಾಗುತ್ತಿದೆ. ಮಕ್ಕಳ ಶೈಕ್ಷಣಿಕ ವೆಚ್ಚ, ಊಟ, ವಸತಿ ವ್ಯವಸ್ಥೆಗೆ ಜಿಲ್ಲಾಡಳಿತ ಪ್ಲಾನ್ ಮಾಡಿಕೊಂಡಿದೆ.

ಜಿಲ್ಲಾಧಿಕಾರಿ ಶಿಲ್ಪಾನಾಗ್ ಮಾತನಾಡಿ, ಕಳೆದೆರಡು ಶೈಕ್ಷಣಿಕ ವರ್ಷದಲ್ಲಿ ಅನುತ್ತೀರ್ಣರಾದ ಮಕ್ಕಳನ್ನು ಒಟ್ಟಿಗೆ ಸೇರಿಸಿ ಮುಂದಿನ ಪರೀಕ್ಷೆಯಲ್ಲಿ ತೇರ್ಗಡೆ ಹೊಂದುವಂತೆ ಅವರಲ್ಲಿ ಕೌಶಲ್ಯಗಳನ್ನು ಬೆಳೆಸುವ ಕಾರ್ಯ ಮಾಡಲಾಗುವುದು. ಅದಕ್ಕಾಗಿ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಗುವುದು. ಅಲ್ಲದೇ ಮಕ್ಕಳ ದೈಹಿಕ ಶಿಕ್ಷಣ, ಊಟ ಸೇರಿದಂತೆ ವಸತಿಗೂ ವ್ಯವಸ್ಥೆ ಮಾಡಲಾಗುವುದು. ಆರ್ಥಿಕವಾಗಿ ಹಿಂದುಳಿದ ಮತ್ತು ಕೋವಿಡ್ ವೇಳೆ ಪಾಲಕರನ್ನು ಕಳೆದುಕೊಂಡ ಮಕ್ಕಳನ್ನೂ ಆಯ್ಕೆ ಮಾಡಿಕೊಳ್ಳಲಾಗಿದೆ. ಅವರಿಗೆ ಪರೀಕ್ಷೆಗೆ ಬೇಕಾದ ಎಲ್ಲಾ ತರಬೇತಿಯನ್ನು ನೀಡಲಾಗುವುದು. ಜತೆಗೆ ಪರೀಕ್ಷಾ ಶುಲ್ಕ ಕಟ್ಟಲಾಗದ ವಿದ್ಯಾರ್ಥಿಗಳ ಶುಲ್ಕವನ್ನು ನಾವೇ ಭರಿಸಲಿದ್ದೇವೆ. ಸಹಾಯಕ್ಕಾಗಿ ಸಂಘ ಸಂಸ್ಥೆಗಳು ಮುಂದಾಗಿವೆ. ರೋಟರಿ ಇಂಟರ್‌ನ್ಯಾಷನಲ್ ಸಂಸ್ಥೆ ಮಕ್ಕಳಿಗೆ ಊಟ ಹಾಗೂ ಶಿಕ್ಷಕರ ವೇತನಕ್ಕೆ ಸಹಾಯ ಮಾಡುವುದಾಗಿ ಹೇಳಿದೆ. ಮಕ್ಕಳು ಉಳಿದುಕೊಳ್ಳಲು ಹಾಸ್ಟೆಲ್, ಆಶ್ರಮಗಳಲ್ಲಿ ವ್ಯವಸ್ಥೆ ಕೂಡ ಮಾಡಲಾಗಿದೆ ಎಂದರು.

## ತೆರಕಣಾಂಬಿಹುಂಡಿ ಡೈರಿಗೆ 1.16 ಲಕ್ಷ ನಿವ್ವಳ ಲಾಭ



ಗುಂಡ್ಲುಪೇಟೆ, ಸೆ.8– ಪ್ರಸಕ್ತ ಸಾಲಿನಲ್ಲಿ ತೆರಕಣಾಂಬಿಹುಂಡಿ ಹಾಲು ಉತ್ಪಾದಕರ ಸಹಕಾರ ಸಂಘ 1.16 ಲಕ್ಷ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ನಾಗಪ್ಪ ತಿಳಿಸಿದರು.

ತಾಲೂಕಿನ ತೆರಕಣಾಂಬಿಹುಂಡಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆವರಣದಲ್ಲಿ ನಡೆದ ಸರ್ವ ಸದಸ್ಯರ ವಾರ್ಷಿಕ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತ ನಾಡಿದ ಅವರು, ಹೈನುಗಾರಿಕೆ ರೈತರ ಜೀವಾಳವಾಗಿದೆ. ಹೀಗಾಗಿ ಹೆಚ್ಚಿನ ಪ್ರಮಾಣ ದಲ್ಲಿ ರೈತರು ಹೈನುಗಾರಿಕೆಯಲ್ಲಿ ತೊಡಗುವ ಮೂಲಕ ಗುಣಮಟ್ಟದ ಹಾಲನ್ನು ಸಂಘಕ್ಕೆ ಸರಬರಾಜು ಮಾಡಬೇಕು. ಆ ಮೂಲಕ ಉತ್ತಮ ಲಾಭ ಗಳಿಸಬೇಕು ಎಂದು ಸಲಹೆ ನೀಡಿದರು. ಚಾಮುಲ್ ವಿಸ್ತರಣಾಧಿಕಾರಿ ಹೆಚ್.ಪ್ರಕಾಶ್, ಮಾರ್ಗ ವಿಸ್ತರಣಾಧಿಕಾರಿ ಮಂಜೇಶ್ ಕುಮಾರ್ ಮಾತನಾಡಿ, ಚಾಮುಲ್ ರೈತರ ಹಿತಾಸಕ್ತಿ ಕಾಪಾಡಿಕೊಂಡು ಬರುತ್ತಿದೆ ಎಂದರು.

ಸಭೆಯಲ್ಲಿ ಉಪಾಧ್ಯಕ್ಷ ಶಂಕರಪ್ಪ, ನಿರ್ದೇಶಕರಾದ ನಾಗಮಲ್ಲಪ್ಪ, ನಂಜಪ್ಪ, ಮಹೇಶ್, ನಾಗರಾಜು, ನಾಗಮಲ್ಲಪ್ಪ, ಗುರುಸ್ವಾಮಪ್ಪ, ಪುಟ್ಟದಾಸಯ್ಯ, ಸುರೇಶ್, ಬಿ.ಮಹದೇವಮ್ಮ, ಮಹದೇವಮ್ಮ ಮತ್ತು ಸಂಘದ ಸಿಇಓ ಜಿ.ಸುಂದರೇಶ್, ಹಾಲು ಪರೀಕ್ಷಕ ಎಂ.ಮಾದಪ್ಪ, ಗುಮಾಸ್ತ ಬಿ.ಮಹೇಂದ್ರ, ಸಹಾಯಕ ಬಿ.ನವೀನ್ ಮತ್ತು ಹಾಲು ಉತ್ಪಾದಕರು ಭಾಗವಹಿಸಿದ್ದರು.

## ಮುಂದಿನ ದಿನಗಳಲ್ಲಿ ತಾಲೂಕು ಮಟ್ಟದಲ್ಲಿ ಮಹದೇಶ್ವರ ಜಯಂತಿ ಆಚರಣೆ: ಶಿವಮೂರ್ತಿ ಕಾನ್ಯ



ಹನೂರು, ಸೆ.8– ಮುಂದಿನ ದಿನಗಳಲ್ಲಿ ಕೋಟ್ಯಾಂತರ ಭಕ್ತರ ಆರಾಧ್ಯ ದೈವ ಮಲೆ ಮಹದೇಶ್ವರರ ಜಯಂತಿಯನ್ನು ತಾಲೂಕು ಮಟ್ಟದಲ್ಲಿ ವಿಜೃಂಭಣೆಯಿಂದ ಆಚರಿಸಲಾಗುವುದು ಎಂದು ಮಲೆ ಮಹದೇಶ್ವರ ಜಯಂತಿ ಮಹೋತ್ಸವ ಸಮಿತಿ ಅಧ್ಯಕ್ಷ ಶಿವಮೂರ್ತಿ ಕಾನ್ಯ ತಿಳಿಸಿದರು.

ಮಲೆ ಮಹದೇಶ್ವರ ಬೆಟ್ಟದಲ್ಲಿ ಮಲೆ ಮಹದೇಶ್ವರ ಜಯಂತಿ ಮಹೋತ್ಸವ ಸಮಿತಿಯಿಂದ ಮಹದೇಶ್ವರ ಜಯಂತಿ ಅಂಗವಾಗಿ ವಿವಿಧ ಪೂಜಾ ಕಾರ್ಯಕ್ರಮ ಹಮ್ಮಿಕೊಂಡು ಅವರು ಮಾತನಾಡಿದರು. ಸರ್ಕಾರ ವಿವಿಧ ಯೋಜನೆಗಳನ್ನು ನೀಡುತ್ತಿದೆ. ಅದರೊಂದಿಗೆ ಜಾನಪದ ಕಲಾವಿದರಿಗೆ ಮಾಸಾಶನ ನೀಡಬೇಕಿದೆ. ಅಲ್ಲದೇ ಮಲೆ ಮಹದೇಶ್ವರ ಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಬೆಟ್ಟದ ಸುತ್ತಮುತ್ತಲಿನ ಗ್ರಾಮಗಳ ಅಭಿವೃದ್ಧಿಪಡಿಸಬೇಕು ಎಂದು ಒತ್ತಾಯಿಸಿದರು.

ಮಲೆ ಮಹದೇಶ್ವರ ಜಯಂತಿ ಅಂಗವಾಗಿ ಮಾದಪ್ಪನ ಸನ್ನಿಧಿಯಲ್ಲಿ ವಿವಿಧ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದ್ದು, ಮುಂದಿನ ದಿನಗಳಲ್ಲಿ ತಾಲೂಕು ಹಾಗೂ ಜಿಲ್ಲಾ ಮಟ್ಟಕ್ಕೆ ವಿಸ್ತರಿಸಲಾಗುವುದು ಎಂದು ತಿಳಿಸಿದರು.

ಮಲೆ ಮಹದೇಶ್ವರ ಬೆಟ್ಟದ ಸಾಲೂರು ಬ್ರಹ್ಮನ್ಮಠದ ಶಾಂತ ಮಲ್ಲಿಕಾರ್ಜುನಸ್ವಾಮಿ ಮಾತನಾಡಿ, ಮಲೆ ಮಹದೇಶ್ವರ ಜಯಂತಿಯನ್ನು ಸಮಿತಿಯಿಂದ ಆಚರಣೆ ಮಾಡುತ್ತಿರುವುದು ಸಂತಸದ ವಿಚಾರ. ಉತ್ತಮ ಮಳೆ, ಬೆಳೆಯಾಗಲಿ ಎಂದು ಮಹದೇಶ್ವರರಲ್ಲಿ ಪ್ರಾರ್ಥನೆ ಮಾಡುವುದಾಗಿ ತಿಳಿಸಿದರು.

ಕುಂದೂರು ಮಠದ ಶರತ್ ಚಂದ್ರ ಸ್ವಾಮೀಜಿ, ಸಮಿತಿ ಉಪಾಧ್ಯಕ್ಷ ಪ್ರಭುಸ್ವಾಮಿ, ಬಸವರಾಜಪ್ಪ ಉಮೇಶ್ ಇನ್ನಿತರರಿದ್ದರು.

# ವರ್ಗೀಕೃತ ಜಾಹೀರಾತು

ಪ್ರತಿ ಸೋಮವಾರ, ಗುರುವಾರ ಮತ್ತು ಶನಿವಾರ

ರೂ. 600 + 30 ಮಾತ್ರ

ಜಾಹೀರಾತಿಗೆ ಸಂಪರ್ಕಿಸಿ 0821–2496522/23



**ಮೈಸೂರು ಮಿತ್ರ ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

ಮತ್ತಷ್ಟು ವರ್ಗೀಕೃತ ಜಾಹೀರಾತು ಪುಟ 10 ರಲ್ಲಿ

# ಸ್ವದೇಶ ದರ್ಶನ 2.0 ಯೋಜನೆ: ಮೈಸೂರು ಪ್ರವಾಸಿ ತಾಣಗಳ ಸಮೀಕ್ಷೆ





ಮೈಸೂರು, ಸೆ. 8(ಆರ್‌ಕೆ)– ಕೇಂದ್ರ ಪುರಸ್ಕೃತ ಸ್ವದೇಶ ದರ್ಶನ 2.0 ಮಹತ್ವಾಕಾಂಕ್ಷಿ ಯೋಜನೆ ಅನುಷ್ಠಾನಕ್ಕಾಗಿ ಪ್ರವಾಸೋದ್ಯಮ ಇಲಾಖೆ ಹಾಗೂ ಸಂಬಂಧಿಸಿದ ಪ್ರಾಧಿಕಾರಗಳ ಅಧಿಕಾರಿಗಳು ಇಂದಿನಿಂದ ಕಾರ್ಯಸಾಧ್ಯತಾ (Fisibility) ಅಧ್ಯಯನ ಸಮೀಕ್ಷೆ ಆರಂಭಿಸಿದ್ದಾರೆ.

ನಿನ್ನೆಯಷ್ಟೇ ಜಿಲ್ಲಾಧಿಕಾರಿ ಡಾ. ಕೆ.ವಿ. ರಾಜೇಂದ್ರ ಮೈಸೂರಿನ ಪ್ರಮುಖ ಪ್ರವಾಸಿ ತಾಣಗಳಿಗೆ ಭೇಟಿ ನೀಡಿ ಫಿಸಿಬಿಲಿಟಿ ಅಧ್ಯಯನ ಮಾಡಿ ಪ್ರವಾಸೋದ್ಯಮ ಅಭಿವೃದ್ಧಿಗೊಳಿಸಲು ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಡಿಪಿಆರ್ ತಯಾರಿಸುವಂತೆ ಸೂಚನೆ ನೀಡಿದ್ದ ಹಿನ್ನೆಲೆಯಲ್ಲಿ ಇಂದು ಪ್ರವಾಸೋದ್ಯಮ ಇಲಾಖೆ ಜಂಟಿ ನಿರ್ದೇಶಕಿ ಎಂ.ಕೆ.ಸವಿತಾ ಮೈಸೂರಿನ ಮೃಗಾಲಯ, ದಸರಾ ವಸ್ತುಪ್ರದರ್ಶನ ಆವರಣ, ಕಾರಂಜಿ ಕೆರೆ, ಅರಮನೆ ವರಹಾ ಗೇಟ್‌ಗಳಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು.

ಮೃಗಾಲಯ ಎದುರಿನ ವಾಹನ ನಿಲುಗಡೆಯನ್ನು ದಸರಾ ವಸ್ತುಪ್ರದರ್ಶನ ಆವರಣಕ್ಕೆ ಸ್ಥಳಾಂತರಿಸಿ ಅಲ್ಲಿ ಪಬ್ಲಿಕ್ ಪ್ಲಾಜಾ ಮಾಡುವುದು, ರೆಸ್ಟೋರೆಂಟ್ ಇಂಟೀರಿಯರ್ಸ್ ಅಭಿವೃದ್ಧಿ, ರೋಪ್ ಬ್ರಿಡ್ಜ್, ಅಡ್ವೆಂಚರ್ ಕೋರ್ಸ್, ಬೌಲ್ಡರಿಂಗ್ /ರಾಕ್ ಕ್ಲೈಂಬಿಂಗ್, ಎಕೋ ಬ್ರಿಡ್ಜ್, ಜಿಪಲೈನ್, ಎಕೋ ವ್ಯೂ ಟವ್, ಕ್ಯಾನಪಿ ವಾಕ್, ಟಾಯ್ ಟ್ರೇನ್ ಇಂಟಿಗ್ರೇಷನ್, ಗ್ರೀನ್ ಹೌಸ್, ವೆಬ್‌ಸೈಟ್, ಆ್ಯಪ್, ಸೋಷಿಯಲ್ ಮೀಡಿಯಾ ಮೂಲಕ ಪ್ರವಾಸಿ ತಾಣಗಳ ಪರಿಚಯ, ಪ್ರಚಾರ ಮಾಡಲು ಈ ಯೋಜನೆಯಡಿ ಸಮಗ್ರ ಯೋಜನಾ ವರದಿ (ಡಿಪಿಆರ್) ತಯಾರಿಸಲು ಅಧಿಕಾರಿಗಳು ಸಿದ್ಧತೆ ನಡೆಸುತ್ತಿದ್ದಾರೆ.

ಡೆಸ್ಟಿನೇಷನ್ ಮ್ಯಾನೇಜ್‌ಮೆಂಟ್ ಸಮಿತಿಯಲ್ಲಿ ಚರ್ಚೆಯಾದಂತೆ ಅಧಿಕಾರಿಗಳು ದಸರಾ ವಸ್ತುಪ್ರದರ್ಶನ ಆವರಣದಲ್ಲಿ ಡೆಲ್ಲಿ ಹಾತ್ ಮಾದರಿಯ ವಸ್ತು ಪ್ರದರ್ಶನ, ಮೈಸೂರಿನಲ್ಲಿ ತಯಾರಾದ ಉತ್ಪನ್ನಗಳ ಪರಿಚಯ ಮತ್ತು ಮಾರಾಟಕ್ಕೆ ಒತ್ತು ನೀಡುವುದು, ಸಾಂಪ್ರದಾಯಿಕ ಟಾಂಗಾ ವೃತ್ತಿನಿರತರಿಗೆ ಸಮವಸ್ತ್ರ, ಮೂಲ ಸೌಲಭ್ಯ ಕಲ್ಪಿಸಿ, ಅರಮನೆ ದಕ್ಷಿಣ ದ್ವಾರದ ಬಳಿ ಟಾಂಗಾ ನಿಲ್ದಾಣ ನಿರ್ಮಾಣ ಸೇರಿದಂತೆ ಪ್ರವಾಸಿಗರಿಗೆ ಮತ್ತಷ್ಟು ಸೌಲಭ್ಯ ಕಲ್ಪಿಸಲು ಉದ್ದೇಶಿಸಲಾಗಿದೆ.

ಮೃಗಾಲಯ ಮತ್ತು ಕಾರಂಜಿ ಕೆರೆಗೆ ಸಂಪರ್ಕ ಕಲ್ಪಿಸುವ ಸಬ್ ವೇ, ಎತ್ತರದ ವ್ಯೂ ಪಾಯಿಂಟ್ ನಿರ್ಮಾಣ, ಮೈಸೂರಿನ ಕಲಾಕೃತಿ, ಕಸೂತಿ ಕಲೆಗಳ ಪ್ರೋತ್ಸಾಹ ಸೇರಿದಂತೆ ಪ್ರವಾಸೋದ್ಯಮ ಪ್ರೋತ್ಸಾಹಿಸಲು ಕ್ರಿಯಾತ್ಮಕ ಅಂಶಗಳನ್ನು ಗಮನದಲ್ಲಿರಿಸಿ ಸ್ವದೇಶ ದರ್ಶನ 2.0 ಯೋಜನೆ ಅನುಷ್ಠಾನಕ್ಕೆ ಅಭಿಪ್ರಾಯದೊಂದಿಗೆ ಅಧಿಕಾರಿಗಳು ವರದಿ ಸಿದ್ಧಪಡಿಸಲಿದ್ದಾರೆ.

ಕರ್ನಾಟಕ ಮೃಗಾಲಯ ಪ್ರಾಧಿಕಾರದ ಕಾರ್ಯನಿರ್ವಾಹಕ ನಿರ್ದೇಶಕ ಮಹೇಶ್ ಕುಮಾರ್, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಎಕ್ಸಿಕ್ಯೂಟಿವ್ ಆಫೀಸರ್ ರಾಜೇಶ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ರಾಘವೇಂದ್ರ, ಡೆಲಾಯ್ಟೀಟೋಚ್ ಟೋ ಮತ್ತು ಇಂಡಿಯಾ ಎಲ್‌ಎಲ್‌ಪಿ ಜೆವಿಐಬಿಐ ಗ್ರೂಪ್ ಪ್ರೈವೇಟ್ ಲಿಮಿಟೆಡ್‌ನ ಅಶ್ವಿನ್ ಹಾಗೂ ಸಿದ್ದೇಶ ಹಾಗೂ ಇತರರು ಸ್ಥಳ ಸಮೀಕ್ಷೆ ಕಾರ್ಯದಲ್ಲಿ ಪಾಲ್ಗೊಂಡಿದ್ದರು.

## ಪ್ರಾಣಿಗಳ ಉಪಟಳ ತಡೆಗೆ ಉನ್ನತ ಮಟ್ಟದ ಸಭೆ

ಮೈಸೂರು, ಸೆ.8(ಬಿಎಲ್‌ಯು)–



ಮೈಸೂರಿನ ಹೆಚ್.ಡಿ. ಕೋಟೆಯ ಕಾಡಂಚಿನ ಗ್ರಾಮಗಳಲ್ಲಿ ಪ್ರಾಣಿಗಳಿಂದ ಬೆಳೆ ಹಾಗೂ ಪ್ರಾಣ ಹಾನಿ ತಡೆಯುವ ನಿಟ್ಟಿನಲ್ಲಿ ಮಾರ್ಗೋಪಾಯ ರೂಪಿಸಲು ಉನ್ನತ ಮಟ್ಟದ ಸಭೆ ನಡೆಸಬೇಕು ಎಂದು ಮಾಜಿ ಸಚಿವ ಎಂ.ಶಿವಣ್ಣ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಹೆಚ್.ಡಿ.ಕೋಟೆ ತಾಲೂಕು ಕಲ್ಲಟ್ಟಿ ಗ್ರಾಮದಲ್ಲಿ ಹುಲಿ ದಾಳಿಯಿಂದ ಸಾವನ್ನಪ್ಪಿದ ಬಾಲಕನ ಕುಟುಂಬಸ್ಥರನ್ನು ಭೇಟಿ ಮಾಡಿದ ವೇಳೆ ಮಾತನಾಡಿದ ಅವರು, ಹುಲಿಗೆ ಬಲಿಯಾದ ಬಾಲಕನ ಕುಟುಂಬಕ್ಕೆ ಈಗಾಗಲೇ ಅರಣ್ಯ ಇಲಾಖೆ ಪರಿಹಾರ ನೀಡಿದೆ. ಆದರೂ ಮತ್ತಷ್ಟು ಪರಿಹಾರ ದೊರಕಿಸುವ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಮಾಡುತ್ತೇನೆ ಎಂದು ಭರವಸೆ ನೀಡಿದರು. ಬಾಲಕ ಹುಲಿ ದಾಳಿಯಿಂದ ಮೃತ ಪಟ್ಟಿದ್ದಾನೆ. ಇದರಿಂದ ಸುತ್ತಮುತ್ತಲ ಗ್ರಾಮಸ್ಥರು ಭಯಭೀತರಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಅರಣ್ಯ ಇಲಾಖೆಯವರು ಕೂಡಲೇ ಹುಲಿಯನ್ನು ಸೆರೆ ಹಿಡಿಯಬೇಕು ಎಂದು ಆಗ್ರಹಿಸಿದರು. ತಾಲೂಕು ಬಿಜೆಪಿ ಅಧ್ಯಕ್ಷ ಗುರುಸ್ವಾಮಿ, ಅಣ್ಣೂರು ಶಕ್ತಿ ಕೇಂದ್ರದ ಅಧ್ಯಕ್ಷ ಎನ್.ಎನ್. ಗುರುಸ್ವಾಮಿ, ಚಕ್ಕೋಡನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ರಾಜೇಶ್ವರಿ ಶ್ರೀನಿವಾಸ್, ಮೊತ್ತ ಬಸವರಾಜಪ್ಪ, ಉಡ ನಾಗರಾಜು, ಯುವ ಮುಖಂಡ ಗಿರಿಪ್ರಸಾದ್, ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕುಮಾರ ನಾಯಕ್ ಸೇರಿದಂತೆ ಇತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಕೆ.ಆರ್.ಬ್ಯಾಂಕ್‌ನಿಂದ ಹಿರಿಯ ಸಹಕಾರಿಗಳಿಗೆ ಸನ್ಮಾನ

ಮೈಸೂರು, ಸೆ.8(ಬಿಎಲ್‌ಯು)– ಮೈಸೂರಿನ ಶ್ರೀ ಕೃಷ್ಣರಾಜೇಂದ್ರ ಕೋಆಪರೇಟಿವ್ ಬ್ಯಾಂಕ್ ವತಿಯಿಂದ ಸೆ.10 ರಂದು ಹಿರಿಯ ಸಹಕಾರಿಗಳಿಗೆ ಸನ್ಮಾನ ಸಮಾರಂಭ ಆಯೋಜಿಸಲಾಗಿದೆ.

ಮೈಸೂರಿನ ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ನಡೆಯುವ ಸಮಾರಂಭದಲ್ಲಿ ಮಲೈಮಹದೇಶ್ವರ ಬೆಟ್ಟದ ಶ್ರೀ ಕ್ಷೇತ್ರ ಸಾಲೂರು ಮಠದ ಶ್ರೀ ಶಾಂತಮಲ್ಲಿಕಾರ್ಜುನ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದು, ಸಂಸದ ಪ್ರತಾಪ್ ಸಿಂಹ ಸಮಾರಂಭ ಉದ್ಘಾಟಿಸುವರು. ಶಾಸಕ ತನ್ವೀರ್ ಸೇಠ್ ಅಧ್ಯಕ್ಷತೆ ವಹಿಸಲಿದ್ದು, ಕೊಳ್ಳೆಗಾಲ ಶಾಸಕ ಎ.ಆರ್. ಕೃಷ್ಣಮೂರ್ತಿ ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಹಿರಿಯ ಸಹಕಾರಿಗಳಾದ ಮಲ್ಲಿಕಾರ್ಜುನಸ್ವಾಮಿ ಎಂ., ರಂಗಸ್ವಾಮಿ ಆರ್., ಸಿದ್ದಲಿಂಗಸ್ವಾಮಿ ಎಸ್., ಮೋಹನ್‌ರಾಜು ಎಸ್., ಮಲ್ಲಿಕಾರ್ಜುನಸ್ವಾಮಿ ಎನ್., ತಿಮ್ಮಯ್ಯ, ಸುಬ್ಬಣ್ಣ ಎಸ್.ಇ., ಚನ್ನೇಗೌಡ, ಕರಿಬಸಪ್ಪ ಎಸ್.ಎಂ., ಸಿದ್ದಪ್ಪ ಎಂ., ಆನಂದ ಕುಮಾರ್ ಡಿ., ಸಂಪತ್ ಕುಮಾರಾಚಾರ್ ಎ., ನಟರಾಜ್ ಎಂ.ಎಸ್., ಮುಕುಂದ ಎಂ., ಸಿದ್ದರಾಮಯ್ಯ, ಬಸಪ್ಪ ಎಸ್., ಮಹಮ್ಮದ್ ಅನ್ವರ್, ಚಂದ್ರಮ್ಮ, ಅನುಸೂಯ, ಪದ್ಮಾವತಮ್ಮ ಅವರಿಗೆ ಸಹಕಾರ ರತ್ನ ಬಿರುದು ನೀಡಿ ಗೌರವಿಸಲಾಗುವುದು. ಬ್ಯಾಂಕ್ ಅಧ್ಯಕ್ಷ ಪ್ರತಿಧ್ವನಿ ಪ್ರಸಾದ್, ಉಪಾಧ್ಯಕ್ಷ ಡಿ.ಬಸವರಾಜು (ಬಸಪ್ಪ) ಹಾಗೂ ಪ್ರಭಾರ ವ್ಯವಸ್ಥಾಪಕ ಡಿ.ಅನಂತವೀರಪ್ಪ ಇತರರು ಸಮಾರಂಭದಲ್ಲಿ ಉಪಸ್ಥಿತರಿದ್ದರು.

## ಮಹಿಳಾ ಜಿಮ್ ಟ್ರೈನರ್ ಸೇರಿ ಇಬ್ಬರ ಬಂಧನ; ಎಂಡಿಎಂಎ ಮಾದಕ ವಸ್ತು ವಶ

ಮೈಸೂರು, ಸೆ. 8– ಮಹಿಳಾ ಜಿಮ್ ಟ್ರೈನರ್ ಸೇರಿದಂತೆ ಇಬ್ಬರನ್ನು ಬಂಧಿಸಿರುವ ಮೈಸೂರು ನಗರ ಸೆನ್ ಠಾಣೆ ಪೊಲೀಸರು ಎಂಡಿಎಂಎ ಮಾದಕ ವಸ್ತುವನ್ನು ವಶಪಡಿಸಿಕೊಂಡಿದ್ದಾರೆ.

ಮೂಲತಃ ಮಳವಳ್ಳಿ ಟೌನ್ ನಿವಾಸಿಯಾಗಿದ್ದು, ಬನ್ನಿಮಂಟಪದ ಸ್ಕಲ್ಪ್ ಝೋನ್ ಜಿಮ್‌ನಲ್ಲಿ ಟ್ರೈನರ್ ಆಗಿರುವ ಕುಸುಮಾರಾಜ್(22) ಮತ್ತು ಮೈಸೂರು ಬೆಮೆಲ್ ಲೇಔಟ್‌ನ ಭವ್ಯ ಭಾರತ ಬಡಾವಣೆ ನಿವಾಸಿಯಾಗಿದ್ದು, ಬೆಂಗಳೂರಿನ ತಾಜ್ ಹೋಟೆಲ್‌ನಲ್ಲಿ ಅಡುಗೆ ಭಟ್ಟನಾಗಿರುವ ಅನಿಲ್ ಬೋಬ್ಡೆ (25) ಬಂಧಿತರಾಗಿದ್ದು, ಜಿಮ್ ಟ್ರೈನರ್ ಕುಸುಮಾರಾಜ್‌ಗೆ ಎಂಡಿಎಂಎ ಮಾದಕ ವಸ್ತುವನ್ನು ಅನಿಲ್ ಬೋಬ್ಡೆ ಮಾರಾಟ ಮಾಡುತ್ತಿದ್ದ ವೇಳೆ ಪೊಲೀಸರಿಗೆ ಸಿಕ್ಕಿಬಿದ್ದಿದ್ದಾರೆ.

**ವಿವರ:** ದೇವರಾಜ ಉಪ ವಿಭಾಗದ ಎಸಿಪಿ ಶಾಂತಮಲ್ಲಪ್ಪ ಅವರು ಸೆಪ್ಟೆಂಬರ್ 6ರಂದು ಸಂಜೆ 5.20ರ ಸುಮಾರಿನಲ್ಲಿ ಸೆನ್ ಠಾಣೆ ಸಿಬ್ಬಂದಿಯೊಡಗೂಡಿ ಗಸ್ತು ತಿರುಗುತ್ತಿದ್ದ ವೇಳೆ ಚಾಮುಂಡಿ ವಿಹಾರ ಲೇಔಟ್ ಬಳಿ ಇರುವ ಟ್ರಿಣ್ ಟ್ರಿಣ್ ಸೈಕಲ್ ಸ್ಟ್ಯಾಂಡ್ ಮುಂಭಾಗ ಇವರಿಬ್ಬರು ಆರೋಪಿಗಳು ದ್ವಿಚಕ್ರ ವಾಹನಗಳಲ್ಲಿ ನಿಂತಿದ್ದು, ಪೊಲೀಸ್ ವಾಹನ ಕಂಡೊಡನೆ ಓಡಲಾರಂಭಿಸಿದ್ದಾರೆ. ಅವರನ್ನು ಬೆನ್ನತ್ತಿ ಹಿಡಿದ ಪೊಲೀಸರು, ಪರಿಶೀಲನೆ ನಡೆಸಿದಾಗ ಅವರ ಬಳಿ 16.57 ಗ್ರಾಂ ಎಂಡಿಎಂಎ ಮಾದಕ ವಸ್ತು ದೊರೆತಿದೆ. ವಿಚಾರಣೆಗೊಳಪಡಿಸಿದ ವೇಳೆ ಅನಿಲ್ ಬೋಬ್ಡೆ ಎಂಡಿಎಂಎ ಮಾದಕ ವಸ್ತುವನ್ನು ಕುಸುಮಾರಾಜ್‌ಗೆ ಮಾರಾಟ ಮಾಡುತ್ತಿದ್ದನೆಂಬುದು ಗೊತ್ತಾಗಿದೆ. ಬಂಧಿತರಿಂದ ಮಾದಕ ವಸ್ತು ಜೊತೆ ಡಿಯೋ ಸ್ಕೂಟರ್ (ಕೆಎ 11–ಇಕೆ 9247) ಮತ್ತು ಹೋಂಡಾ ಆಕ್ಟೀವಾ ಸ್ಕೂಟರ್ ಹಾಗೂ 2 ಮೊಬೈಲ್‌ಗಳನ್ನು ವಶಪಡಿಸಿಕೊಂಡು ಪ್ರಕರಣ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

## ದಸರಾಗೆ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ಆಫ್ ಇಂಡಿಯಾ ಉದ್ಘಾಟನೆ

ಮೈಸೂರು, ಸೆ.8(ಬಿಎಲ್‌ಯು)– ಮೈಸೂರಿನ ಹೆಬ್ಬಾಳಿನ ಇನ್ಫೋಸಿಸ್ ಬಳಿ ನೂತನವಾಗಿ ನಿರ್ಮಿಸಿರುವ ಸಾಫ್ಟ್‌ವೇರ್ ಟೆಕ್ನಾಲಜಿ ಪಾರ್ಕ್ ಆಫ್ ಇಂಡಿಯಾವನ್ನು ದಸರಾ ವೇಳೆ ಉದ್ಘಾಟಿಸಲಾಗುವುದು ಎಂದು ಸಂಸದ ಪ್ರತಾಪ್ ಸಿಂಹ ತಿಳಿಸಿದರು.

ಒಟ್ಟು 27.64 ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿರುವ ಸಾಫ್ಟ್ ವೇರ್ ಟೆಕ್ನಾಲಜಿ ಪಾರ್ಕ್ ಇಂಡಿಯಾವನ್ನು ಕೇಂದ್ರ ಮಾಹಿತಿ ಮತ್ತು ತಂತ್ರಜ್ಞಾನ ಸಚಿವ ರಾಜೀವ್ ಚಂದ್ರಶೇಖರ್ ಉದ್ಘಾಟಿಸುತ್ತಾರೆ. ದಸರಾ ಸಂದರ್ಭದಲ್ಲಿ ಉದ್ಘಾಟನಾ ಸಮಾರಂಭವನ್ನು ಆಯೋಜಿಸಲಾಗುವುದು ಎಂದರು.




ಮೈಸೂರಿನ ಹುಣಸೂರು ರಸ್ತೆಯ ಗ್ರ್ಯಾಂಡ್ ಮೌರ್ಯ ಹೋಟೆಲ್‌ನಿಂದ ಲಿಂಗದೇವರ ಕೊಪ್ಪಲು ಬಳಿಯ ಸೆಂಟ್ ಜೋಸೆಫ್ ಸ್ಕೂಲ್ ತನಕ ರಸ್ತೆ ಅಗಲೀಕರಣ ಕಾಮಗಾರಿ ನಡೆಯುತ್ತಿದೆ. ರಸ್ತೆ ನಿರ್ಮಾಣದ ಜಾಗ ತಮಗೆ ಸೇರಿದೆ ಎಂದು ಕೆಲವರು ತಡೆದಿದ್ದರು. ಆದರೆ ಈಗ ಆ ಸಮಸ್ಯೆ ನಿವಾರಣೆ ಮಾಡಿ ಕಾಮಗಾರಿಯನ್ನು ಚುರುಕಿನಿಂದ ನಡೆಸಲಾಗುತ್ತಿದೆ ಎಂದರು. ಬೆಳವಾಡಿ ಹಾಗೂ ಕೂರ್ಗಳ್ಳಿ ಜಂಕ್ಷನ್ ಬಳಿ ವಿಶಾಲವಾದ ಸರ್ಕಲ್ ಅನ್ನು ಕೂಡ ನಿರ್ಮಾಣ ಮಾಡಲಾಗುತ್ತಿದೆ ಎಂದು ಪ್ರತಾಪ್ ಸಿಂಹ ತಿಳಿಸಿದರು.

# ತಮಿಳುನಾಡಿಗೆ ಕಾವೇರಿ ನೀರು ಹರಿಸಿದ್ದನ್ನು ಖಂಡಿಸಿ ಬಿಜೆಪಿ ಪ್ರತಿಭಟನೆ

● ಮುಖ್ಯಮಂತ್ರಿ ಸಿದ್ದರಾಮಯ್ಯರದ್ದು ರೈತ ವಿರೋಧಿ ಸರ್ಕಾರ ● ಅಧಿಕಾರಕ್ಕೆ ಬಂದ ದಿನದಿಂದಲೂ ಭ್ರಷ್ಟಾಚಾರ ತಾಂಡವ ● ಸೆ.16ರಿಂದ ರಾಜ್ಯಾದ್ಯಂತ ಪ್ರವಾಸ; ಕಾಂಗ್ರೆಸ್ ದುರಾಡಳಿತದ ವಿರುದ್ಧ ಸಮರ



ಬೆಂಗಳೂರು, ಸೆ.8(ಕೆಎಂಶಿ)– ತಮಿಳುನಾಡಿಗೆ ಕಾವೇರಿ ನದಿ ನೀರು ಹರಿಸಿರುವುದನ್ನು ಖಂಡಿಸಿ ಭಾರತೀಯ ಜನತಾ ಪಕ್ಷ (ಬಿಜೆಪಿ) ನಗರದಲ್ಲಿಂದು ಭಾರೀ ಪ್ರತಿಭಟನೆ ನಡೆಸಿತು.

ರಾಜ್ಯ ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿ ನಗರದ ಸ್ವಾತಂತ್ರ್ಯ ಉದ್ಯಾನವನದಲ್ಲಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿತು. ಇಂಡಿಯಾ ಸಂಘಟನೆಗಾಗಿ ಡಿಎಂಕೆ ಪಕ್ಷವನ್ನು ಓಲೈಸಿಕೊಳ್ಳಲು ತಮಿಳುನಾಡಿಗೆ ಕದ್ದುಮುಚ್ಚಿ ಕಾವೇರಿ ನೀರು ಹರಿಸಿ ನಾಡಿನ ರೈತರು ಮತ್ತು ಜನತೆಗೆ ಕಾಂಗ್ರೆಸ್ ಸರ್ಕಾರ ದ್ರೋಹ ಎಸಗಿದೆ.

ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್.ಯಡಿಯೂರಪ್ಪ, ಡಿ.ವಿ.ಸದಾನಂದ ಗೌಡ, ಬಸವರಾಜ ಬೊಮ್ಮಾಯಿ, ಮಾಜಿ ಉಪ ಮುಖ್ಯಮಂತ್ರಿಗಳಾದ ಆರ್. ಅಶೋಕ್, ಗೋವಿಂದ ಕಾರಜೋಳ, ಮಾಜಿ ಸಚಿವ ಗೋಪಾಲಯ್ಯ, ಭೈರತಿ ಬಸವರಾಜ್ ಸೇರಿದಂತೆ ಬಿಜೆಪಿಯ ಸಂಸದರು, ಶಾಸಕರು, ಮಾಜಿ ಸಚಿವರು ಹಾಗೂ ಮುಖಂಡರು ಪ್ರತಿಭಟನೆಯಲ್ಲಿ ಪಾಲ್ಗೊಂಡು ಸರ್ಕಾರದ ರೈತ ವಿರೋಧಿ ನೀತಿಯನ್ನು ಖಂಡಿಸಿದರು.

ತಮಿಳುನಾಡಿಗೆ ಕದ್ದುಮುಚ್ಚಿ ನೀರು ಹರಿಸಿರುವುದರಿಂದ ಒಂದೆಡೆ ರೈತರು ಸಂಕಷ್ಟಕ್ಕೆ ಸಿಲುಕಿದ್ದರೆ, ಬರುವ ಡಿಸೆಂಬರ್ ವೇಳೆಗೆ ಕುಡಿಯುವ ನೀರಿಗೆ ಹಾಹಾಕಾರ ವಾಗಲಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದ ದಿನದಿಂದಲೂ ಭ್ರಷ್ಟಾಚಾರದಲ್ಲಿ ಮುಳುಗಿದೆ. ಶಾಸಕರ ಭವನ ಹಾಗೂ ಕುಮಾರಕೃಪ ಅತಿಥಿ ಗೃಹ ವರ್ಗಾವಣೆ ಕೇಂದ್ರವಾಗಿವೆ.

ವರ್ಗಾವಣೆ ಅವಧಿ ಮುಗಿದರೂ ಇನ್ನೂ ವರ್ಗಾವಣೆ ಪ್ರಕ್ರಿಯೆ ನಡೆಯುತ್ತಿದೆ. ಒಂದು ಕಾಳು ಅಕ್ಕಿಯನ್ನು ಹೆಚ್ಚುವರಿಯಾಗಿ ನೀಡದೆ, ಅನ್ನಭಾಗ್ಯ ಯೋಜನೆ ತಂದಿದ್ದೇವೆ ಎಂದು ಥಾಂ ಡೂಂ ಮಾಡುತ್ತಿದ್ದಾರೆ.

**ರೈತರ ಬೀದಿಗೆ ತಂದಿದ್ದಾರೆ:** ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಕಿಡಿಕಾರಿದ ಯಡಿಯೂರಪ್ಪ, ಇದೇ 16ರಿಂದ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಇವರ ಬಣ್ಣವನ್ನು ಜನತೆ ಮುಂದೆ ಬಯಲು ಮಾಡುತ್ತೇವೆ ಎಂದರು.

ಸರ್ಕಾರ ಅಧಿಕಾರ ಕಳೆದುಕೊಂಡು ಮನೆಗೆ ಮರಳುವವರೆಗೂ ಹೋರಾಟ ಮಾಡುತ್ತೇವೆ. ರಾಜ್ಯದ ಪ್ರತಿ ಜಿಲ್ಲೆಯಲ್ಲೂ ಪ್ರತಿಭಟನೆ ನಡೆಸಿ ವಾಸ್ತವಾಂಶ ಜನರ ಮುಂದಿಡುತ್ತೇವೆ. ಕಳೆದ 100 ದಿನಗಳಿಂದ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ಆಡಳಿತ ನೋಡಿದ್ದೇವೆ. ಇವರು ಸುಧಾರಣೆ ಮಾಡಿಕೊಳ್ಳುತ್ತಾರೆ ಎಂದು ಕಾದಿದ್ದೆವು. ಇವರು ಯಾವುದೇ ಸುಧಾರಣೆ ಮಾಡಲಿಲ್ಲ. ಈ ಸರ್ಕಾರ ಅಧಿಕಾರದಲ್ಲಿ ಮುಂದುವರೆಯುವ ನೈತಿಕ ಹಕ್ಕು ಕಳೆದುಕೊಂಡಿದೆ. ರಾಜ್ಯದ ವಾಸ್ತವ ಸ್ಥಿತಿಯನ್ನು ಕಾವೇರಿ ನದಿ ಪ್ರಾಧಿಕಾರದ ಮುಂದೆ ಸಮರ್ಪಕವಾಗಿ ವಾದ ಮಂಡಿಸದೇ ನಮ್ಮ ರೈತರನ್ನು ಬೀದಿಗೆ ತಂದಿದ್ದಾರೆ.

ಕಾವೇರಿ ಹೋರಾಟವನ್ನು ತೀವ್ರಗೊಳಿಸಲಾಗುವುದು. ಇದೇ 15 ಹಾಗೂ 16ರಂದು ಕೋಲಾರ ಜಿಲ್ಲೆಯ ಕುರುಡುಮಲೆ ದರ್ಶನ ಮಾಡಿ ಸರ್ಕಾರದ ವಿರುದ್ಧ ಹೋರಾಟ ಆರಂಭಿಸಲಾಗುವುದು ಎಂದರು.

**ಅಧಿಕಾರಿಗಳ ಹರಾಜು:** ಬಸವರಾಜ ಬೊಮ್ಮಾಯಿ ಮಾತನಾಡಿ, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಗ್ಯಾರಂಟಿಗಳ ಹೆಸರಲ್ಲಿ ದೋಖಾ, ವರ್ಗಾವಣೆ ದಂಧೆಯಲ್ಲಿ ಅಧಿಕಾರಿಗಳ ಹರಾಜು ನಡೆಯುತ್ತಿದೆ. ನಮ್ಮ ಸರ್ವೋಚ್ಚ ನಾಯಕ ಯಡಿಯೂರಪ್ಪ ಅವರ ನೇತೃತ್ವದಲ್ಲಿ ಸರ್ಕಾರದ ವಿರುದ್ಧ ರಣಕಹಳೆ ಊದಿದ್ದೇವೆ. ಇದನ್ನು ಮುಂದಿನ ಒಂದು ವರ್ಷ ರಾಜ್ಯದ ಎಲ್ಲ ಮನೆಗಳಿಗೆ ತಲುಪಿಸಿ, ಮತ್ತೆ ಕೇಂದ್ರದಲ್ಲಿ ಬಿಜೆಪಿ ಅಧಿಕಾರಕ್ಕೆ ತರಲು ಹೋರಾಟ ಆರಂಭಿಸಿದ್ದೇವೆ ಎಂದರು. ರಾಜ್ಯದಲ್ಲಿ 200 ಯುನಿಟ್ ಫ್ರೀ ಕರೆಂಟ್ ಕೊಡುವುದಾಗಿ ಹೇಳಿ ಈಗ ರಾಜ್ಯದಲ್ಲಿ ಕರೆಂಟ್ ಸಿಗದ ಪರಿಸ್ಥಿತಿ ನಿರ್ಮಾಣ ಆಗಿದೆ. ಝಿರೊ ಕರೆಂಟ್ ಝಿರೊ ಬಿಲ್ ಯೋಜನೆ ಜಾರಿಗೆ ಬರುತ್ತದೆ. ವಿದ್ಯುತ್ ಉತ್ಪಾದನೆ ಕಡಿಮೆಯಾಗಿದೆ. ನವೆಂಬರ್‌ನಿಂದ ರಾಜ್ಯದಲ್ಲಿ ಕತ್ತಲೆ ಆವರಿಸುತ್ತದೆ ಎಂದರು.

ಬಿಜೆಪಿ ಕಾರ್ಯಕರ್ತರನ್ನು ಸಣ್ಣಪುಟ್ಟ ವಿಷಯಗಳಿಗೆ ಬಂಧನ ಮಾಡುತ್ತಿದ್ದಾರೆ. ಹಾಸನದ ಕಾರ್ಯಕರ್ತರನ್ನು ಬೆಂಗಳೂರಿಗೆ ಕರೆತಂದು ವಿಚಾರಣೆ ನಡೆಸುತ್ತಿದ್ದಾರೆ. ಪೊಲೀಸ್ ಅಧಿಕಾರಿಗಳು ಕಾನೂನು ಪ್ರಕಾರ ಕೆಲಸ ಮಾಡಬೇಕು.

ಮೂರು ತಿಂಗಳಲ್ಲಿ 172 ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಂತ್ರಿಗಳು ರೈತರು ಐದು ಲಕ್ಷ ಪರಿಹಾರಕ್ಕಾಗಿ ಸಾಯುತ್ತಾರೆ ಎಂದು ಹೇಳಿದ್ದಾರೆ. ಯಾರಾದರೂ ರೈತರು ಹಣಕ್ಕಾಗಿ ಆತ್ಮಹತ್ಯೆ ಮಾಡಿಕೊಳ್ಳುತ್ತಾರಾ? ಯಡಿಯೂರಪ್ಪ ಅವರ ಕಾಲದಲ್ಲಿ ರೈತರ ಕಲ್ಯಾಣಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದರು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಯೋಜನೆಯಡಿ ರಾಜ್ಯದ ರೈತರಿಗೆ ನಾಲ್ಕು ಸಾವಿರ ಕೊಡುವುದನ್ನು ನಿಲ್ಲಿಸಿದ್ದಾರೆ. ನಾನು ಜಾರಿಗೆ ತಂದಿದ್ದ ರೈತ ವಿದ್ಯಾನಿಧಿ ಯೋಜನೆ ರದ್ದುಪಡಿಸಿದ್ದಾರೆ ಎಂದರು.

### ತಮಿಳುನಾಡಿಗೆ ನೀರು ಬಿಡುತ್ತಿರುವುದನ್ನು ವಿರೋಧಿಸಿ

# ನಂಜನಗೂಡಲ್ಲಿ ಬಿಜೆಪಿ ಬೃಹತ್ ಪ್ರತಿಭಟನೆ



ನಂಜನಗೂಡು, ಸೆ.8– ತಮಿಳುನಾಡಿಗೆ ನೀರು ಬಿಡುವ ಮೂಲಕ ಕಾಂಗ್ರೆಸ್ ಸರ್ಕಾರ ರೈತ ವಿರೋಧಿ ಆಡಳಿತ ನಡೆಸುತ್ತಿದೆ ಎಂದು ಆಪಾದಿಸಿ ಬಿಜೆಪಿ ಕಾರ್ಯಕರ್ತರು, ಮುಖಂಡರು ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಹುಲ್ಲಹಳ್ಳಿ ವೃತ್ತದ ಬಳಿ ಜಮಾವಣೆಗೊಂಡ ಬಿಜೆಪಿ ಕಾರ್ಯಕರ್ತರು ಕಾಂಗ್ರೆಸ್ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಶಾಸಕ ಬಿ.ಹರ್ಷವರ್ಧನ್ ಮಾತನಾಡಿ, ಕಾಂಗ್ರೆಸ್ ಸರ್ಕಾರ ಆಡಳಿತಕ್ಕೆ ಬಂದ 125 ದಿನಗಳಲ್ಲಿ ರೈತ ವಿರೋಧಿ ನೀತಿಯನ್ನು ಅನುಸರಿಸಿ ರೈತರಿಗೆ ಮರಣ ಶಾಸನ ಬರೆಯುತ್ತಿದೆ. ಈಗಾಗಲೇ ಮಳೆಯ ಕೊರತೆಯಿಂದಾಗಿ ಕೆಆರ್‌ಎಸ್ ಜಲಾಶಯದ ನೀರಿನ ಮಟ್ಟ ಕುಸಿದಿದೆ. ಮುಂದಿನ ದಿನಗಳಲ್ಲಿ ಬೇಸಿಗೆ ಸಂದರ್ಭದಲ್ಲಿ ಕುಡಿಯುವ ನೀರಿಗೂ ಹಾಹಾಕಾರ ಉಂಟಾಗಲಿದೆ. ಆದರೂ ಸಹ ಕಾಂಗ್ರೆಸ್ ಸರ್ಕಾರ ತಮಿಳುನಾಡಿಗೆ ನೀರನ್ನು ಹರಿಸಲು ಮುಂದಾಗಿರುವುದು ರೈತರಿಗೆ ಮಾಡಿದ ದ್ರೋಹವಾಗಿದೆ ಎಂದು ವಾಗ್ದಾಳಿ ನಡೆಸಿದರು.

ಅಲ್ಲದೆ ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಕಿಸಾನ್ ಸಮ್ಮಾನ್ ಯೋಜನೆಯನ್ನು ವಾಪಸ್ ಪಡೆದಿದ್ದಾರೆ. ರೈತ ಮಕ್ಕಳಿಗೆ ನೀಡುವ ವಿದ್ಯಾನಿಧಿ ಯೋಜನೆಯನ್ನು ರದ್ದುಗೊಳಿಸಿದ್ದಾರೆ. ಜೊತೆಗೆ ನಂಜನಗೂಡು ಕ್ಷೇತ್ರದಲ್ಲಿ ಬಿಜೆಪಿ ಸರ್ಕಾರದ ಅವಧಿಯಲ್ಲಿ ಜಾರಿಗೊಳಿಸಲಾಗಿದ್ದ ನೀರಾವರಿ ಯೋಜನೆಗಳ ಅನುದಾನವನ್ನು ಮತ್ತು ಯಡಿಯಾಲ ಭಾಗದ ಕುಡಿಯುವ ನೀರಿನ ಕೆರೆಯ ತುಂಬಿಸುವ ಯೋಜನೆಯ ಅನುದಾನವನ್ನು ಹಿಂದಕ್ಕೆ ಪಡೆದುಕೊಂಡಿರುವುದು ಖಂಡನೀಯ ಎಂದರು.

ಕಾಂಗ್ರೆಸ್ ಸರ್ಕಾರ ಬಿಟ್ಟಿ ಯೋಜನೆಗಳ ಅನುಷ್ಠಾನಕ್ಕಾಗಿ ಎಸ್‌ಇಪಿ, ಟಿಎಸ್ಪಿ, ಅನುದಾನವನ್ನು ದುರ್ಬಳಕೆ ಮಾಡಿಕೊಂಡಿದೆ. ಬಸವರಾಜ ಬೊಮ್ಮಾಯಿ ಸರ್ಕಾರದಲ್ಲಿ ಎಸ್‌ಇಪಿ, ಟಿಎಸ್ಪಿ ಅನುದಾನವನ್ನು 2 ಸಾವಿರ ಕೋಟಿ, ರೂ.ಗಳನ್ನು ಬಳಸಿಕೊಂಡಿದ್ದಕ್ಕಾಗಿ ದಲಿತ ಸಂಘಟನೆಗಳು ಬೀದಿಗಿಳಿದು ಹೋರಾಟ ನಡೆಸಿದ್ದವು. ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ 11 ಸಾವಿರ ಕೋಟಿಗಳನ್ನು ದುರ್ಬಳಕೆ ಮಾಡಿಕೊಂಡಿದ್ದರೂ ಸಹ ಬಾಯಿ ಮುಚ್ಚಿ ಕುಳಿತಿವೆ ಅವರ ಹೋರಾಟ ಎಲ್ಲಿಹೋಯಿತು? ಅನ್ಯಾಯ ನಿಮಗೆ ಕಾಣುತ್ತಿಲ್ಲವೇ? ಎಂದ ಅವರು ಪ್ರಶ್ನಿಸಿದರು.

ಕಾಂಗ್ರೆಸ್ ಪಕ್ಷ ಕಳೆದ ವರ್ಷ ಬಿಟ್ಟಿ ಯೋಜನೆಗಳ ಪ್ರಚಾರಕ್ಕಾಗಿ ಭಾರತ ಜೋಡೋ ಕಾರ್ಯಕ್ರಮವನ್ನು ಹಮ್ಮಿಕೊಂಡಿತ್ತು. ಈಗ ಮತ್ತೆ ಜನರು ಸರ್ಕಾರದ ವಿರುದ್ಧ ತಿರುಗಿ ಬೀಳುತ್ತಾರೆ ಎಂಬ ಭೀತಿಯಿಂದ ರಾಮನಗರದಲ್ಲಿ ಮತ್ತೆ ಭಾರತ ಜೋಡೋ ಯಾತ್ರೆಯನ್ನು ನಡೆಸಿದೆ ಎಂದು ಜರಿದರಲ್ಲದೆ ಕಾಂಗ್ರೆಸ್ ಸರ್ಕಾರದ ರೈತ ವಿರೋಧಿ ಜನವಿರೋಧಿ ನೀತಿಗೆ, ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಬಿಜೆಪಿ ಜಿಲ್ಲಾಧ್ಯಕ್ಷ ಮಂಗಳಾ ಸೋಮಶೇಖರ್ ಮಾತನಾಡಿ ಕರ್ನಾಟಕದ ಜನತೆಗೆ ಕುಡಿಯುವ ನೀರಿಗೆ ತತ್ವಾರ ಪ್ರಾರಂಭವಾಗಿದೆ. ಇಂತಹ ಸಂದಿಗ್ಧ ಪರಿಸ್ಥಿತಿಯಲ್ಲೂ ತಮಿಳುನಾಡು ರಾಜ್ಯಕ್ಕೆ ಮೂರು ಬೆಳೆ ಬೆಳೆಯಲು ನೀರು ಹರಿಸಲು ರಾಜ್ಯ ಸರ್ಕಾರ ಮುಂದಾಗಿರುವುದು ರೈತರಿಗೆ ಮಾಡಿದ ದ್ರೋಹವಾಗಿದೆ. ಈ ಅನ್ಯಾಯವನ್ನು ಖಂಡಿಸಿ, ಬಿಜೆಪಿ ರೈತ ಮೋರ್ಚಾ ವತಿಯಿಂದ ಎಲ್ಲೆಡೆ ಪ್ರತಿಭಟನೆ ನಡೆಸಲಾಗುತ್ತಿದೆ. ಈ ಕೂಡಲೇ ಸರ್ಕಾರ ಎಚ್ಚೆತ್ತುಕೊಂಡು. ನೀರು ಹರಿಸುವ ಕ್ರಮವನ್ನು ನಿಲ್ಲಿಸದಿದ್ದಲ್ಲಿ ಬಿಜೆಪಿ ಪಕ್ಷ ರಾಜ್ಯಾದ್ಯಂತ ಉಗ್ರ ಪ್ರತಿಭಟನೆಯನ್ನು ಹಮ್ಮಿಕೊಂಡು ಸರ್ಕಾರಕ್ಕೆ ತಕ್ಕ ಪಾಠ ಕಲಿಸಲಿದೆ ಎಂದರು.

ಪ್ರತಿಭಟನೆಯಲ್ಲಿ ಕಾಂಪೋಸ್ಟ್ ನಿಗಮದ ಮಾಜಿ ಅಧ್ಯಕ್ಷ ಎಸ್.ಮಹದೇವಯ್ಯ, ಬಿಜೆಪಿ ರಾಜ್ಯ ಮುಖಂಡ ಕುಂಬರಹಳ್ಳಿ ಸುಬ್ಬಣ್ಣ, ಬಿಜೆಪಿ ತಾಲೂಕು ಅಧ್ಯಕ್ಷ ಹೊರಳವಾಡಿ ಪಿ.ಮಹೇಶ್, ನಗರಾಧ್ಯಕ್ಷ ಶ್ರೀನಿವಾಸ್ ರೆಡ್ಡಿ, ನಗರಸಭಾ ಮಾಜಿ ಅಧ್ಯಕ್ಷ ಎಚ್.ಎಸ್. ಮಹದೇವಸ್ವಾಮಿ, ಖಾದಿ ಮಂಡಳಿ ಮಾಜಿ ಅಧ್ಯಕ್ಷ ಎನ್.ಆರ್. ಕೃಷ್ಣಪ್ಪಗೌಡ, ದೇಪು ಮಾಜಿ ಸದಸ್ಯ ಎಸ್.ಎಂ.ಕೆಂಡಪ್ಪ, ಮುಖಂಡರಾದ ಕೆಂಡಗಣ್ಣಪ್ಪ, ಕಣೇನೂರುಪರಮೇಶಮೂರ್ತಿ, ಸಿದ್ದರಾಜು, ಹುಮ್ಮರಾಳ ಶಿವಣ್ಣ, ಶಿರಮಳ್ಳಿ ಮಹಾದೇವಸ್ವಾಮಿ, ಮಧುರಾಜ್ ಸೇರಿದಂತೆ ಬಿಜೆಪಿ ಕಾರ್ಯಕರ್ತರು ಇದ್ದರು.

## ವಾಹನಗಳನ್ನು ಕಳವು ಮಾಡಿ ಬಿಡಿ ಭಾಗಗಳನ್ನು ಮಾರಾಟ ಮಾಡುತ್ತಿದ್ದ ಇಬ್ಬರ ಬಂಧನ

ತಿ.ನರಸಿಪುರ, ಸೆ.8– ವಾಹನಗಳನ್ನು ಕಳ್ಳತನ ಮಾಡಿ ಅದರ ಬಿಡಿ ಭಾಗಗಳನ್ನು ಬಿಚ್ಚಿ ಮಾರಾಟ ಮಾಡುತ್ತಿದ್ದ ಇಬ್ಬರು ಆರೋಪಿಗಳನ್ನು ಪಟ್ಟಣದ ಪೊಲೀಸರು ಬಂಧಿಸಿದ್ದಾರೆ.

ಮೈಸೂರು ನಿವಾಸಿಗಳಾದ ವಾಸಿಂ(35), ಜಾಕವುಲ್ಲ(50) ಎಂಬುವರೇ ಬಂಧಿತರಾಗಿದ್ದು, ಇವರಿಂದ 6 ಲಕ್ಷ ರೂ. ಮೌಲ್ಯದ ವಸ್ತುವನ್ನು ವಶಪಡಿಸಿಕೊಳ್ಳಲಾಗಿದೆ.

ಮೈಸೂರು ದಕ್ಷಿಣ ಠಾಣೆ ವ್ಯಾಪ್ತಿ ಹಾಗೂ ತಾಲೂಕಿನ ಮಳವಳ್ಳಿ ಸಮೀಪದ ಕಿರಗಾವಲು ಪೊಲೀಸ್ ಠಾಣೆ ವ್ಯಾಪ್ತಿ ಮತ್ತು ಪಟ್ಟಣದ ಠಾಣೆ ವ್ಯಾಪ್ತಿ ವಿವಿಧ ವಾಹನಗಳನ್ನು ಕಳ್ಳತನ ಮಾಡುತ್ತಿದ್ದು ಆ ವಾಹನಗಳ ಭಾಗಗಳನ್ನು ಬೇರ್ಪಡಿಸಿ ಮಾರುತ್ತಿದ್ದರು ಎನ್ನಲಾಗಿದೆ.

ಕಾರ್ಯಾಚರಣೆಯಲ್ಲಿ ಡಿವೈಎಸ್ಪಿ ಗೋವಿಂದರಾಜ್, ವೃತ್ತ ನಿರೀಕ್ಷಕ ಆನಂದ್, ಪಿಎಸ್‌ಐ ಅಶೋಕ್, ಅಬ್ದುಲ್ ಲತೀಫ್, ಭಾಸ್ಕರ್, ಮನು ಹಾಗೂ ಸಿಬ್ಬಂದಿವರ್ಗ ಭಾಗವಹಿಸಿದ್ದರು.

## ವೀರೇಂದ್ರ ಹೆಗ್ಗಡೆಯವರು ಜಾರಿಗೆ ತರದ ಯೋಜನೆಗಳೇ ಇಲ್ಲ



ಹೆಚ್.ಡಿ.ಕೋಟೆ, ಸೆ.8– ಆಡು ಮುಟ್ಟದ ಸೊಪ್ಪಿಲ್ಲ ಎಂಬಂತೆ ಶ್ರೀಯುತ ವೀರೇಂದ್ರ ಹೆಗ್ಗಡೆಯವರು ಜಾರಿಗೆ ತಾರದ ಯೋಜನೆಗಳೇ ಇಲ್ಲ, ಇದನ್ನು ಮನಗಂಡು ಮೋದಿಯವರು ಅವರನ್ನು ರಾಜ್ಯಸಭಾ ಸದಸ್ಯರನ್ನಾಗಿ ನೇಮಿಸಿದ್ದಾರೆ ಎಂದು ಮಾಜಿ ಸಚಿವ, ಸಫಾಯಿ ಕರ್ಮಚಾರಿ ಆಯೋಗದ ಮಾಜಿ ಅಧ್ಯಕ್ಷ ಕೋಟೆ ಎಂ.ಶಿವಣ್ಣ ತಿಳಿಸಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಹೆಚ್.ಡಿ.ಕೋಟೆಯ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ. ಟ್ರಸ್ಟ್, ಎಚ್.ಡಿ.ಕೋಟೆ ವಲಯದ ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ ಮತ್ತು ಸಾಮೂಹಿಕ ಶ್ರೀ ವರಮಹಾಲಕ್ಷ್ಮೀ ಪೂಜಾ ಸಮಿತಿಯ ವತಿಯಿಂದ ಸಾಮೂಹಿಕ ವರಮಹಾಲಕ್ಷ್ಮೀ ಪೂಜಾ ಕಾರ್ಯಕ್ರಮ ಮತ್ತು ಧಾರ್ಮಿಕ ಸಭೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು. ಎಲ್ಲರೂ ಒಂದೆಡೆ ಸೇರಿ ಸಾಮೂಹಿಕ ಪೂಜೆ ಸಲ್ಲಿಸುವುದರಲ್ಲಿ ಇರುವಂತಹ ಸುಖ ಮತ್ತು ನೆಮ್ಮದಿ ಎಲ್ಲೂ ದೊರೆಯುವುದಿಲ್ಲ. ಧರ್ಮಸ್ಥಳ ಧರ್ಮಾಧಿಕಾರಿ ಡಾ. ಡಿ.ವಿರೇಂದ್ರ ಹೆಗ್ಗಡೆಯವರು ರಾಜ್ಯದಲ್ಲಿ ಹಮ್ಮಿಕೊಂಡಿರುವ ಯೋಜನೆಗಳನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಹಮ್ಮಿಕೊಂಡಿದ್ದೇ ಆದಲ್ಲಿ ರಾಜ್ಯ ಮತ್ತು ರಾಷ್ಟ್ರಗಳು ಅಭಿವೃದ್ಧಿ ಹೊಂದಲಿವೆ, ಅಷ್ಟು ಮಾದರಿಯಾಗಿ ಧರ್ಮಸ್ಥಳ ಯೋಜನೆಗಳು ಬಲಿಷ್ಠವಾಗಿವೆ ಎಂದು ತಿಳಿಸಿದರು.

29 ವರ್ಷದ ಹಿಂದೆ ಶಾಸಕನಾಗಿದ್ದ ನಾನು ಸಾಮೂಹಿಕ ವಿವಾಹಕ್ಕೆ ಮಾರುಹೋಗಿ ಅಂದೇ ನಾನು ಧರ್ಮಸ್ಥಳದಲ್ಲಿ ಸಾಮೂಹಿಕ ವಿವಾಹವಾದೆ ಎಂದು ತಿಳಿಸಿದರು.

ನಿರ್ದೇಶಕ ಬಿ.ಜಯರಾಮ್ ನೆಲ್ಲಿತಾಯ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಹಣ ಕೊಡುವುದೇ, ಸಾಲ ಕೊಡುವುದೇ ಅಲ್ಲ, ಮಹಿಳೆಯರಿಗೆ ಶಿಕ್ಷಣ ಸೇರಿದಂತೆ ಆರ್ಥಿಕ ಸಬಲೀಕರಣಕ್ಕಾಗಿ 7 ಬ್ಯಾಂಕ್‌ಗಳ ಸಹಯೋಗದೊಂದಿಗೆ ರಾಜ್ಯದಲ್ಲಿ 45 ಸಾವಿರ ಕೋಟಿ ಹಣವನ್ನು ಸಾಲದ ರೂಪದಲ್ಲಿ ನೀಡಲಾಗಿದೆ. ಮೈಸೂರು ಪ್ರಾದೇಶಿಕ ವಲಯ ವ್ಯಾಪ್ತಿಗೆ ಒಳಪಡುವ 47 ತಾಲೂಕುಗಳಲ್ಲಿ ಎಚ್.ಡಿ.ಕೋಟೆ ತಾಲೂಕು ಮುಂಚೂಣಿ ಸ್ಥಾನದಲ್ಲಿದೆ ಎಂದರು.

ಮೈಸೂರಿನ ಬರಡನಪುರದ ಮಹಾಂತೇಶ್ವರ ಮಠದ ಪರಶಿವಮೂರ್ತಿ ಸ್ವಾಮೀಜಿ ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಧರ್ಮಸ್ಥಳ ಯೋಜನಾಧಿಕಾರಿ ವಿ.ಭಾಸ್ಕರ್, ಸರ್ಕಲ್ ಇನ್ಸ್‌ಪೆಕ್ಟರ್ ಶಬ್ಬೀರ್ ಹುಸೇನ್, ಎಸ್‌ಐ ಪ್ರಕಾಶ್, ತಾಲೂಕು ನಾಯಕ ಸಂಘದ ಅಧ್ಯಕ್ಷ ಎಂ.ಸಿ. ದೊಡ್ಡನಾಯಕ, ಪುರಸಭೆಯ ಸ್ಥಾಯಿ ಸಮಿತಿ ಅಧ್ಯಕ್ಷ ಐಡಿಯಾ ವೆಂಕಟೇಶ್, ಸದಸ್ಯರಾದ ಸುಹಾಸಿನಿ, ಶಾಂತಮ್ಮ, ಪೂಜಾ ಸಮಿತಿಯ ಗೌರವಾಧ್ಯಕ್ಷ ಕೊಡಸೀಗೆ ರಾಜೇಗೌಡ, ಅಧ್ಯಕ್ಷ ನಟರಾಜು, ಉಪಾಧ್ಯಕ್ಷರದ ಡೈರಿ ಶ್ರೀಕಾಂತ್, ಬಿ.ವಿ.ಬಸವರಾಜು, ಜೆ.ಪಿ. ಶಿವರಾಜು, ಮೇಲ್ವಿಚಾರ ಪವಿತ್ರ, ಸಹ ಕಾರ್ಯದರ್ಶಿ ಪ್ರಭು, ಕೋಶಾಧಿಕಾರಿ ಮಹೇಶ್, ಸದಸ್ಯರಾದ ಕನ್ನಡ ಪ್ರಮೋದ್, ವಿನಯ ಭಜರಂಗಿ, ನಾಗಣ್ಣ ಇಬ್ರಾಹಿಂ, ರೇವಣ್ಣ, ವಿವಿಧ ಗ್ರಾಮಗಳಿಂದ ಮಹಿಳೆಯರು ಭಾಗವಹಿಸಿದ್ದರು.

## ಹೆಚ್.ಡಿ.ಕೋಟೆ ಪಟ್ಟಣದಲ್ಲಿ ಚಿರತೆ ಪ್ರತ್ಯಕ್ಷ

### ಎರಡು ಮೇಕೆಗಳ ಮೇಲೆ ದಾಳಿ, ಆತಂಕದಲ್ಲಿ ನಿವಾಸಿಗಳು



ಹೆಚ್.ಡಿ.ಕೋಟೆ, ಸೆ.8– ಪಟ್ಟಣದಲ್ಲಿ ಪ್ರತ್ಯಕ್ಷವಾಗಿದ್ದು, ಚಿರತೆಯೊಂದು ಹಾಡಹಗಲೇ ಎರಡು ಮೇಕೆಗಳ ಮೇಲೆ ದಾಳಿ ನಡೆಸಿರುವ ಘಟನೆ ಪಟ್ಟಣದ ಹೌಸಿಂಗ್ ಬೋರ್ಡ್ ಬಡಾವಣೆಯ ಸಮೀಪ ಸಂಭವಿಸಿದೆ.

ಒಂದು ಮೇಕೆಯನ್ನು ಸ್ಥಳದಲ್ಲೇ ಬಿಟ್ಟು ಮತ್ತೊಂದು ಮೇಕೆಯನ್ನು ಒತ್ತೊಯ್ದಿದಿದೆ. ಪಟ್ಟಣದಲ್ಲಿ ಚಿರತೆ ಪ್ರತ್ಯಕ್ಷವಾಗಿ ದಾಳಿ ನಡೆಸಿರುವುದರಿಂದ ನಿವಾಸಿಗಳು ಆತಂಕಗೊಂಡಿದ್ದಾರೆ.

ಪಟ್ಟಣದ ಸಿದ್ದಪ್ಪಾಜಿ ರಸ್ತೆಯ ನಿವಾಸಿ ಸಣ್ಣಯ್ಯ ದಿನನಿತ್ಯದಂತೆ ಮೇಕೆಗಳನ್ನು ಮೇಯಿಸಲು ಪಟ್ಟಣದ ಹೌಸಿಂಗ್ ಬೋರ್ಡ್ ಸಮೀಪ ಇರುವ ಬಿಜೆಪಿ ಮುಖಂಡ ವಿವೇಕ್, ಅವರ ತೋಟದ ಬಳಿ ಬಿಡುತ್ತಿದ್ದರು. ಈ ಸಂದರ್ಭದಲ್ಲಿ ಏಕಾಏಕಿ ಚಿರತೆ ಎರಡು ಮೇಕೆಗಳ ಮೇಲೆ ದಾಳಿ ಮಾಡಿ ಬಲಿ ಪಡೆದಿದೆ.

ಅರಣ್ಯ ಇಲಾಖೆಯ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು ರೈತರಿಗೆ ಪರಿಹಾರ ನೀಡುವ ಭರವಸೆ ನೀಡಿದ್ದಾರೆ. ಬಿಜೆಪಿ ಮುಖಂಡ ವಿವೇಕ್ ಮಾತನಾಡಿ, ಈ ಭಾಗದಲ್ಲಿ ನಿರಂತರವಾಗಿ ಚಿರತೆ ದಾಳಿ ನಡೆಯುತ್ತಿದೆ ಅರಣ್ಯ ಇಲಾಖೆಯ ಅಧಿಕಾರಿಗಳು ತಕ್ಷಣವೇ ಬೋನನ್ನು ಇಟ್ಟು ಚಿರತೆಗಳನ್ನು ಸೆರೆ ಹಿಡಿದು ಕಾಡಿಗೆ ಬಿಡಬೇಕು ಎಂದು ಒತ್ತಾಯಿಸಿದ್ದಾರೆ.

ಹೆಚ್.ಡಿ.ಕೋಟೆ ಪ್ರಾದೇಶಿಕ ವಲಯ ಅರಣ್ಯ ಅಧಿಕಾರಿ ಪೂಜಾ ಮಾತನಾಡಿ, ಈ ಭಾಗದಲ್ಲಿ ಇಂಥ ಘಟನೆಗಳು ಹೆಚ್ಚಾಗುತ್ತಿದೆ ಎಂದು ಸ್ಥಳೀಯರು ಮಾಹಿತಿ ನೀಡಿದ್ದಾರೆ. ಆದ್ದರಿಂದ ತಕ್ಷಣದಲ್ಲಿ ಬೋನು ಇರಿಸಿ, ಚಿರತೆ ಸೆರೆ ಹಿಡಿಯುವ ಕಾರ್ಯ ಕೈಗೊಳ್ಳುತ್ತೇವೆ ಎಂದು ತಿಳಿಸಿದ್ದಾರೆ.

## ಗ್ರಾಮಸ್ಥರ ಮನೆ ಬಾಗಿಲಿಗೆ ಅಧಿಕಾರಿಗಳು...

### ಸ್ಥಳದಲ್ಲೇ ಸಮಸ್ಯೆ ನಿವಾರಣೆ; ಶಾಸಕ ದರ್ಶನ್ ಧ್ರುವನಾರಾಯಣ್



ಮಲ್ಕುಂಡಿ, ಸೆ.8– ಗ್ರಾಮೀಣ ಪ್ರದೇಶದ ಸಮಸ್ಯೆಗಳನ್ನು ಬಗೆಹರಿಸಲು ಅಧಿಕಾರಿಗಳು ಮುಂದಾಗಬೇಕಿದೆ ಎಂದು ಶಾಸಕ ದರ್ಶನ್ ಧ್ರುವನಾರಾಯಣ್ ಸೂಚಿಸಿದ್ದಾರೆ.

ನಂಜನಗೂಡು ತಾಲೂಕಿನ ಹಲ್ಲರೆ ಗ್ರಾಪಂ ವ್ಯಾಪ್ತಿಯ ಮಲ್ಕುಂಡಿ, ಮಲ್ಲಹಳ್ಳಿ, ದೇಪೆಗೌಡನಪುರ, ಗ್ರಾಮಗಳಲ್ಲಿ ಜನ ಸಂಪರ್ಕ ಸಭೆ ನಡೆಸಿ ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಮಾತನಾಡಿದ ಅವರು ಗ್ರಾಮೀಣ ಭಾಗಗಳಲ್ಲಿ ಹಲವು ಸಮಸ್ಯೆಗಳಿವೆ. ಅದನ್ನು ಹಂತ ಹಂತವಾಗಿ ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದರು.

ಏನೇ ಸಮಸ್ಯೆ ಬಂದರು ನನ್ನ ಗಮನಕ್ಕೆ ತನ್ನಿ, ಅಧಿಕಾರಿಗಳು ನಿಮ್ಮ ಬಳಿಗೆ ಬಂದು ಸಮಸ್ಯೆ ಬಗೆಹರಿಸಲಿದ್ದಾರೆ. ಸಾರ್ವಜನಿಕರು ಕಛೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಲು ಅಧಿಕಾರಿಗಳೇ ನಿಮ್ಮ ಬಳಿ ಬರುತ್ತಿದ್ದಾರೆ. ಯಾವುದೇ ಸಮಸ್ಯೆ ಇದ್ದರೂ ಸ್ಥಳದಲ್ಲೇ ಪರಿಹರಿಸಲು ಜನ ಸಂಪರ್ಕ ಸಭೆ ನಡೆಸಲಾಗುತ್ತಿದೆ ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ. ಈಗಾಗಲೇ ಗೃಹಲಕ್ಷ್ಮಿ, ಗೃಹಜ್ಯೋತಿ ಯೋಜನೆಗಳನ್ನು ಜಾರಿ ಮಾಡಿ ಬಡವರ ಪರ ಕೆಲಸ ಮಾಡುತ್ತಿದೆ. ಕ್ಷೇತ್ರದಲ್ಲಿ ಇನ್ನೂ ಹಲವಾರು ಅಭಿವೃದ್ಧಿ ಕಾಮಗಾರಿಗಳು ಉಳಿದಿದ್ದು ಹೆಚ್ಚಿನ ಅಭಿವೃದ್ಧಿಗಾಗಿ ನಾನು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಕ್ಷೇತ್ರವನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುವುದಾಗಿ ಭರವಸೆ ನೀಡಿದರು.

ಮಾಜಿ ಶಾಸಕ ಕಳಲೆ ಕೇಶವಮೂರ್ತಿ, ಬ್ಲಾಕ್ ಅಧ್ಯಕ್ಷ ಕುರಹಟ್ಟಿ ಕೆ.ಜಿ.ಮಹೇಶ್, ಹುಲ್ಲಹಳ್ಳಿ ಬ್ಲಾಕ್ ಅಧ್ಯಕ್ಷ ಶ್ರೀಕಂಠನಾಯಕ, ಹಿಂದುಳಿದ ವರ್ಗದ ಜಿಲ್ಲಾಧ್ಯಕ್ಷ ಕೆ.ಮಾರುತಿ, ಗ್ರಾಪಂ ಅಧ್ಯಕ್ಷೆ ದೇವಮ್ಮ, ದುಗ್ಗಹಳ್ಳಿ ಗ್ರಾಪಂ ಅಧ್ಯಕ್ಷ ಶಿವನಾಗಪ್ಪ, ಹಾಡ್ಯ ಗ್ರಾಪಂ ಅಧ್ಯಕ್ಷ ಹರೀಶ್ ಕುಮಾರ್, ಇಓ ರಾಜೇಂದ್ರ, ಗ್ರಾಪಂ ಉಪಾಧ್ಯಕ್ಷ ರೆಹಮಾತ್ ಉಲ್ಲಾ, ಮುಖಂಡರುಗಳಾದ ಶಿವಪ್ಪದೇವರು, ದೊರೆಸ್ವಾಮಿ ನಾಯಕ, ಮಹದೇವು, ಜಯರಾಂ, ಎಂ.ಹೆಚ್. ಪುಟ್ಟಬುದ್ಧಿ, ಸತೀಶ್, ನಾಗರಾಜು ಸೇರಿದಂತೆ ಪ್ರಮುಖರು ಹಾಜರಿದ್ದರು



22 ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ತಿ.ನರಸೀಪುರ ಪಟ್ಟಣ ನಿವಾಸಿ, ಕರುವಟ್ಟಿ ಪ್ರಾಥಮಿಕ ಶಾಲೆಯ ಶಿಕ್ಷಕಿ ಭಾಗ್ಯಮ್ಮ 2023ನೇ ಸಾಲಿನ ಉತ್ತಮ ಶಿಕ್ಷಕ ಪ್ರಶಸ್ತಿಯನ್ನು ಗಳಿಸಿದ್ದು, ಪ್ರಶಸ್ತಿ ಫಲಕ ನೀಡಿ ಗೌರವಿಸಲಾಯಿತು. ಇವರು ಬಿಜೆಪಿ ಹಿರಿಯ ಮುಖಂಡ ತೋಟದಪ್ಪ ಬಸವರಾಜು ಸಹೋದರಿ.

## ಕಸಾಪದಿಂದ ಪ್ರತಿಭಾ ಪುರಸ್ಕಾರ, ಕನ್ನಡ ಶಿಕ್ಷಕರಿಗೆ ಅಭಿನಂದನೆ



ಹುಣಸೂರು, ಸೆ.8– ಇಂದು ಇಂಗ್ಲಿಷ್ ವ್ಯಾಮೋಹ ಹೆಚ್ಚಾಗುತ್ತಿದ್ದು, ಮಾತೃಭಾಷೆ ಉಳಿಸಿ ಬೆಳೆಸುವ ನಿಟ್ಟಿನಲ್ಲಿ ನಾವೆಲ್ಲರೂ ಚಿಂತಿಸಬೇಕಿದೆ ಎಂದು ಶಾಸಕ ಜಿ.ಟಿ. ಹರೀಶ್‌ಗೌಡ ಅಭಿಪ್ರಾಯಪಟ್ಟರು.

ನಗರದ ರೋಟರಿ ಭವನದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ರೋಟರಿ ಸಂಸ್ಥೆ ಸಹಯೋಗದಲ್ಲಿ ಎಸ್‌ಎಸ್‌ಎಲ್‌ಸಿ ಕನ್ನಡದಲ್ಲಿ 125ಕ್ಕೆ 125 ಅಂಕ ಹಾಗೂ ಪಿಯುಸಿಯಲ್ಲಿ ಕನ್ನಡದಲ್ಲಿ 100ಕ್ಕೆ 100 ಅಂಕ ಪಡೆದಿರುವ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಕನ್ನಡ ಶಿಕ್ಷಕರಿಗೆ ಅಭಿನಂದನಾ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆಂಗ್ಲ ಭಾಷೆಯಿಂದ ಮಾತ್ರ ಉದ್ಧಾರ ಸಾಧ್ಯ ಎಂದು ನಂಬಿರುವ ಕಾಲದಲ್ಲಿ ನಮ್ಮ ತಾಲೂಕಿನ 45 ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ 125ಕ್ಕೆ 125 ಹಾಗೂ ಪಿಯುಸಿಯ 5 ವಿದ್ಯಾರ್ಥಿಗಳು 100ಕ್ಕೆ 100 ಅಂಕಗಳನ್ನು ಪಡೆದು ಅತ್ಯುತ್ತಮ ಸಾಧನೆ ಮಾಡಿರುವುದು ಇಡೀ ತಾಲೂಕು ಹೆಮ್ಮೆ ಪಡುವ ಸಂಗತಿಯಾಗಿದೆ. ಈ ಸಾಧನೆ ಮಾಡುವಲ್ಲಿ ಕನ್ನಡ ಶಿಕ್ಷಕರು ಶ್ರಮಿಸಿದ್ದಾರೆ ಎಂದು ಅವರು ಹೇಳಿದರು.

ವಿದ್ಯಾರ್ಥಿಗಳು ಮಾತೃಭಾಷೆಗೆ ಒತ್ತು ನೀಡಿ ಉತ್ತಮ ಅಂಕ ಗಳಿಸುತ್ತಿರುವುದು ಮೆಚ್ಚುವಂತಹುದು. ನಮ್ಮ ಸಂಸ್ಕೃತಿ, ಭಾಷೆ, ಇಲ್ಲಿನ ಕವಿಗಳು, ಬರಹಗಾರರಿಗೆ ಗೌರವ ನೀಡಬೇಕು. ಮಕ್ಕಳು ಉನ್ನತ ವ್ಯಾಸಾಂಗಕ್ಕೆ ಹೋದಾಗ ಇಂಗ್ಲಿಷ್ ಅಗತ್ಯವೆಂಬ ಭಾವನೆ ಇದೆ. ಮೆಡಿಕಲ್ ಹಾಗೂ ಇಂಜಿನಿಯರಿಂಗ್ ಕೋರ್ಸ್‌ಗಳು ಕನ್ನಡದಲ್ಲಿ ಇಲ್ಲದಿರುವುದು ಇದಕ್ಕೆ ಕಾರಣ ಎಂದು ಅವರು ಹೇಳಿದರು.

ಮಾದಹಳ್ಳಿ ಉಕ್ಕಿನಕಂತೆ ಮಠದ ಶ್ರೀ ಸಾಂಬಸದಾಶಿವ ಸ್ವಾಮಿಗಳು ಹಾಗೂ ಗಾವಡಗೆರೆ ಗುರುಲಿಂಗ ಜಂಗಮ ದೇವರ ಮಠದ ಶ್ರೀ ನಟರಾಜಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮುಖ್ಯಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್.ರೇವಣ್ಣ ಮಾತನಾಡಿದರು. ಅಧ್ಯಕ್ಷತೆಯನ್ನು ಮೈಸೂರು ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್ ವಹಿಸಿದ್ದರು. ರೋಟರಿ ಸಂಸ್ಥೆ ಅಧ್ಯಕ್ಷ ಚನ್ನಕೇಶವ ಆಶಯ ನುಡಿಗಳನ್ನಾಡಿದರು.

ಜಿಲ್ಲಾ ಕಸಾಪದ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್, ಜಿಲ್ಲಾ ಕಸಾಪ ಹಿರಿಯ ಉಪಾಧ್ಯಕ್ಷ ಎಸ್.ಜಯರಾಮು, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಎಸ್. ಗೋವಿಂದೇಗೌಡ, ಪ್ರಾಶಾ ಶಿಕ್ಷಕರ ಸಂಘದ ಅಧ್ಯಕ್ಷ ನರಸಿಂಹ, ತಾಲೂಕು ಕಸಾಪ ಅಧ್ಯಕ್ಷ ಹರವೆ ಮಹದೇವ ಇತರರಿದ್ದರು.

# 35 ಲಕ್ಷ ರೂ. ವೆಚ್ಚದಲ್ಲಿ ಹೆಗ್ಗೂರು ಪಿಎಸಿಸಿ ನೂತನ ಕಟ್ಟಡ



ತಿ.ನರಸೀಪುರ.ಸೆ.8– ರಾಜ್ಯ ಅಫೆಕ್ಸ್ ಬ್ಯಾಂಕ್ ಉಪಾಧ್ಯಕ್ಷ ಜಿ.ಡಿ.ಹರೀಶ್‌ಗೌಡ ಹಾಗೂ ಸಹಕಾರ ಮಹಾ ಮಂಡಲದ ಅನುದಾನದಲ್ಲಿ ಹೆಗ್ಗೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ನೂತನ ಕಟ್ಟಡವನ್ನು 35 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ ಎಂದು ಹೆಗ್ಗೂರು ಪಿಎಸಿಸಿ ಅಧ್ಯಕ್ಷ ಹೆಚ್.ಕೆ.ಶಿವಕುಮಾರ್ ತಿಳಿಸಿದ್ದಾರೆ.

ತಾಲೂಕಿನ ಹೆಗ್ಗೂರು ಗ್ರಾಮದ ಸಹಕಾರ ಸಂಘದ ಆವರಣದಲ್ಲಿ ನಡೆದ 2022–23ನೇ ಸಾಲಿನ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಘಕ್ಕೆ ಅತಿ ಅವಶ್ಯಕವಾಗಿ ಬೇಕಿರುವ ನೂತನ ಕಟ್ಟಡವನ್ನು 35 ಲಕ್ಷ ರೂ.ಗಳ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದ್ದು, ಕಟ್ಟಡ ನಿರ್ಮಾಣಕ್ಕೆ ಎಲ್ಲಿಂದಲೂ ಸಾಲ ಪಡೆದಿಲ್ಲ, ಅಪೆಕ್ಸ್ ಬ್ಯಾಂಕ್ ಉಪಾಧ್ಯಕ್ಷ ಜಿ.ಡಿ.ಹರೀಶ್ ಗೌಡರು ಕಟ್ಟಡ ನಿರ್ಮಾಣಕ್ಕೆ 10 ಲಕ್ಷ ರೂ. ನೀಡಿದ್ದು, 2 ಲಕ್ಷವನ್ನು ಸಹಕಾರ ಮಹಾ ಮಂಡಲ ನೀಡಿದೆ. ಆದಾಗ್ಯೂ ಕಟ್ಟಡ ನಿರ್ಮಾಣಕ್ಕೆ ಹಣದ ಕೊರತೆ ಎದುರಾಗಿದ್ದು ದಾನಿಗಳಿದ್ದಲ್ಲಿ ಸಹಾಯ ಮಾಡಬಹುದು ಎಂದು ಮನವಿ ಮಾಡಿದರು.

ಸಂಘದಲ್ಲಿ ಸದಸ್ಯರು ಸುಸ್ತಿದಾರರಾಗದೇ ಪಡೆದ ಸಾಲವನ್ನು ಸಕಾಲಕ್ಕೆ ಮರು ಪಾವತಿ ಮಾಡಬೇಕು. ಸುಸ್ತಿದಾರರಾದರೇ ಸಂಘದ ಬೆಳವಣಿಗೆ ಆಗುವುದಿಲ್ಲ. ಈಗ ಸಂಘದಲ್ಲಿ 4 ಮಂದಿ ಸುಸ್ತಿದಾರರಾಗಿದ್ದು, 2.32 ಲಕ್ಷ ರೂ.ಗಳ ಬಾಕಿ ಉಳಿಸಿಕೊಂಡಿದ್ದಾರೆ ಎಂದರು.

ಬನ್ನೂರು ಶಾಖೆಯ ಜಿಲ್ಲಾ ಬ್ಯಾಂಕ್ ಪ್ರತಿನಿಧಿ ರಾಜಪ್ಪ ಮಾತನಾಡಿ ಸಹಕಾರ ಸಂಘವು ಜಿಲ್ಲಾ ಸಂಘಕ್ಕೆ ಸಾಲಕ್ಕೆ ಬೇಕಾದ ಅಗತ್ಯ ದಾಖಲಾತಿಗಳನ್ನು ಒದಗಿಸಿಕೊಟ್ಟಲ್ಲಿ ಹೆಚ್ಚಿನ ಸಾಲ ದೊರಕುತ್ತದೆ. ಮಹಿಳಾ ಸಹಕಾರ ಸಂಘಗಳು ಸಂಘದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಖಾತೆ ತೆರೆಯಬೇಕು ಎಂದರು. ಸಂಘದ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಪಿ.ರಘು ವಾರ್ಷಿಕ ವರದಿ ಮಂಡಿಸಿ ಪ್ರಸಕ್ತ ಸಾಲಿನಲ್ಲಿ ಸಂಘವು 3,38,935 ರೂ.ಗಳ ನಿವ್ವಳ ಲಾಭಗಳಿಸಿದೆ ಎಂದು ಮಾಹಿತಿ ನೀಡಿದರು.

ಷೇರು ಡೆವಿಡೆಂಟನ್ನು ಕಟ್ಟಡ ನಿಧಿಗೆ ವರ್ಗಾಯಿಸಿಕೊಳ್ಳಲು ಸಭೆಯಲ್ಲಿ ಸದಸ್ಯರು ಒಪ್ಪಿಗೆ ಸೂಚಿಸಿದರು. ಮುಂದಿನ ಸಭೆಯಲ್ಲಿ ಲಾಭಾಂಶ ವಿಲೇವಾರಿ ಮಾಡಿಕೊಳ್ಳಲು ನಿರ್ಧಾರ ಕೈಗೊಳ್ಳಲಾಯಿತು.

ಸಂಘದ ಉಪಾಧ್ಯಕ್ಷ ಹೆಚ್.ಎಸ್.ಕೆಂಪೇಗೌಡ, ಹೆಚ್.ಎನ್. ನಾಗೇಶ್, ವಿ.ಶಂಕರ್, ಹೆಚ್.ಪಿ.ಅಂಕರಾಜೇಗೌಡ, ಶಂಕರೇಗೌಡ, ಅಮದಾನಿ, ಈಶ್ವರೇಗೌಡ, ರುದ್ರಶೆಟ್ಟಿ, ಹೆಚ್.ಸುಜಾತ, ಮಹದೇವಮ್ಮ, ರತ್ನಮ್ಮ, ಜಿಲ್ಲಾ ಪ್ರತಿನಿಧಿ ರಾಜಪ್ಪ, ಜಿಲ್ಲಾ ವ್ಯವಸ್ಥಾಪಕ ಹೇಮಂತ್, ಹೆಚ್.ಎನ್. ಶಿವರಾಜು, ಹೆಚ್.ಎ.ಚಂದ್ರು ಮತ್ತಿತರರಿದ್ದರು.

## ಮೈಸೂರು ಚಿತ್ರಮಂದಿರಗಳಲ್ಲಿ



| | |
|---|---|
| **ಪದ್ಮ ಚಿತ್ರಮಂದಿರ** | (ದೂ: 2521923) |
| ಕಿಕ್ (ತ) | 4 ಪ್ರದರ್ಶನಗಳು |
| **ವುಡ್‌ಲ್ಯಾಂಡ್ಸ್ ಚಿತ್ರಮಂದಿರ** | (ದೂ: 2422871) |
| ಜೈಲರ್(ತ) | 4 ಪ್ರದರ್ಶನಗಳು |
| **ಬಾಲಾಜಿ ಚಿತ್ರಮಂದಿರ** | (ದೂ: 2497199) |
| ಜವಾನ್ (ಹಿ) | 4 ಪ್ರದರ್ಶನಗಳು |
| **ಮಹದೇಶ್ವರ ಚಿತ್ರಮಂದಿರ** | (ಮೊ:9900820093) |
| ಕಥಾ ಚಿತ್ರ (ಕ) | 4 ಪ್ರದರ್ಶನಗಳು |
| **ಗಾಯಿತ್ರಿ** | |
| ಜೈಲರ್ (ಕ) | 4 ಪ್ರದರ್ಶನಗಳು |
| **ರಾಜ್‌ಕಮಲ್** | |
| ಜವಾನ್ (ಹಿ) | 4 ಪ್ರದರ್ಶನಗಳು |
| **ಸಂಗಂ** | |
| ಜವಾನ್ (ಹಿ) | 4 ಪ್ರದರ್ಶನಗಳು |
| **ಲಿಡೋ** | |
| ಖುಷಿ (ಕ) | 4 ಪ್ರದರ್ಶನಗಳು |
| **ತಿಬ್ಬಾದೇವಿ** | |
| ಜವಾನ್ (ಹಿ) | 4 ಪ್ರದರ್ಶನಗಳು |
| **ಪ್ರಭಾ** | |
| ನಮೋ ಭೂತಾತ್ಮ (ಕ) | 4 ಪ್ರದರ್ಶನಗಳು |

### ಡಿಆರ್‌ಸಿ ಸಿನಿಮಾಸ್
ದೂ : 4240422/4241800

| | |
|---|---|
| ಸ್ಕ್ರೀನ್ 1 | ಸಪ್ತಸಾಗರದಾಚೆ ಎಲ್ಲೋ (ಕ): ಬೆ.10.20ಕ್ಕೆ, ಮ.1.10ಕ್ಕೆ, ರಾ.7.15ಕ್ಕೆ, ರಾ.10.05ಕ್ಕೆ, ಜವಾನ್ (ಹಿಂ): ಸಂ.4ಕ್ಕೆ. |
| ಸ್ಕ್ರೀನ್ 2 | ಲೂಸಿಯಾ (ಕ): ಬೆ.10.05ಕ್ಕೆ, ಜೈಲರ್ (ಕ): ಮ.12.45ಕ್ಕೆ, ಜೈಲರ್ (ತ): ಮ.3.55ಕ್ಕೆ, ಖುಷಿ (ತೆ): ರಾ.7.10ಕ್ಕೆ, ಜವಾನ್ (ಹಿಂ): ರಾ.10.25ಕ್ಕೆ. |
| ಸ್ಕ್ರೀನ್ 3 | ದಿ ನನ್ 2 (ಇಂ): ಬೆ.10.55ಕ್ಕೆ, ರಾ.10.10ಕ್ಕೆ, ಟೋಬಿ (ಕ): ಮ.1.10ಕ್ಕೆ, ಸಪ್ತಸಾಗರದಾಚೆ ಎಲ್ಲೋ (ಕ): ಸಂ.4.05ಕ್ಕೆ, ಜವಾನ್ (ಹಿಂ): ರಾ.7ಕ್ಕೆ. |
| ಸ್ಕ್ರೀನ್ 4 | ಜವಾನ್ (ಹಿಂ): ಬೆ.9.45ಕ್ಕೆ, ಮ.1ಕ್ಕೆ, ಸಂ.6.55ಕ್ಕೆ, ರಾ.10.15ಕ್ಕೆ, ಸಪ್ತ ಸಾಗರದಾಚೆ ಎಲ್ಲೋ (ಕ): ಸಂ.4.10ಕ್ಕೆ. |

### ಐನಾಕ್ಸ್ ಮೂವೀಸ್
INOX LIVE THE MOVIE

ದೂ : 2533444 / 2433456

| | |
|---|---|
| ಸ್ಕ್ರೀನ್ 1 | ಜೈಲರ್ (ಕ): ಬೆ.11.20ಕ್ಕೆ, ರಾ.9.50ಕ್ಕೆ, ಜೈಲರ್ (ತ): ಮ.2.50ಕ್ಕೆ, ಸಂ.6.20ಕ್ಕೆ. |
| ಸ್ಕ್ರೀನ್ 2 | ಗೂಮರ್ (ಹಿಂ): ಬೆ.9.55ಕ್ಕೆ, ಓಎಂಜಿ 2 (ಹಿಂ): ಮ.12.55ಕ್ಕೆ, ರಾ.7.15ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಸಂ.4.10ಕ್ಕೆ, ಬ್ಲೂ ಬೀಟಲ್ (ಇಂ): ರಾ.10.30ಕ್ಕೆ. |
| ಸ್ಕ್ರೀನ್ 3 | ಗದರ್ 2 (ಹಿಂ): ಬೆ.9.55ಕ್ಕೆ, ರಾಖಿ ಔರ್ ರಾಣಿ ಕೀ ಪ್ರೇಮ್ ಕಹಾನಿ (ಹಿಂ): ಮ.1.25ಕ್ಕೆ, ಬ್ಲೂ ಬೀಟಲ್ (ಇಂ): ಸಂ.4.55ಕ್ಕೆ, ಆಚಾರ್ & ಕೋ (ಕ): ರಾ.7.45ಕ್ಕೆ, ಗೂಮರ್ (ಹಿಂ): ರಾ.10.10ಕ್ಕೆ. |
| ಸ್ಕ್ರೀನ್ 4 | ಜೈಲರ್ (ತ): ಬೆ.10.30ಕ್ಕೆ, ಗದರ್ 2(ಹಿಂ): ಮ.2ಕ್ಕೆ, ಸಂ.6.10ಕ್ಕೆ, ಓಎಂಜಿ 2 (ಹಿಂ): ರಾ.9.40ಕ್ಕೆ. |

### ಮೈಸೂರು ವಿಷನ್ ಸಿನಿಮಾ
ದೂ : 0821–2973519

| | |
|---|---|
| ಸ್ಕ್ರೀನ್ 1 | ಈ ಪಟ್ಟಣಕ್ಕೆ ಏನಾಗಿದೆ (ಕ): ಬೆ.10.45ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಮ.1.15ಕ್ಕೆ, ಶೀಲಾ (ಕ): ಸಂ.4.15ಕ್ಕೆ, ಡಿಡಿ ರಿಟರ್ನ್ಸ್ (ತ): ಸಂ.6.30ಕ್ಕೆ, ರಾ.9ಕ್ಕೆ. |
| ಸ್ಕ್ರೀನ್ 2 | ಕೌಸಲ್ಯ ಸುಪ್ರಜಾ ರಾಮ (ಕ): ಬೆ.1.15ಕ್ಕೆ, ರಾ.7ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ) ಸಂ.4.15ಕ್ಕೆ. |
| ಸ್ಕ್ರೀನ್ 3 | ಕೌಸಲ್ಯ ಸುಪ್ರಜಾ ರಾಮ (ಕ): ಬೆ.10.30ಕ್ಕೆ, ಸಂ.4ಕ್ಕೆ, ಮೆಗ್ 2 ದಿ ಟ್ರೆಂಚ್ (3ಡಿ) (ಇಂ): ಮ.1.20ಕ್ಕೆ, ಸಂ.6.55ಕ್ಕೆ, ರಾ.9.15ಕ್ಕೆ. |
| ಸ್ಕ್ರೀನ್ 4 | ಮೆಗ್ 2 ದಿ ಟ್ರೆಂಚ್ (3ಡಿ)(ಇಂ): ಬೆ.10.45ಕ್ಕೆ, ನಮೋ ಭೂತಾತ್ಮ (ಕ): ಮ.1.10ಕ್ಕೆ, ಮ.3.50ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ಸಂ.6.30ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ರಾ.9.15ಕ್ಕೆ. |

### ಪಿವಿಆರ್ ಸಿನಿಮಾಸ್
ಮೊ.ನಂ: 8951357139

ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ,

ಜೈಲರ್ (ತ): ಬೆ.8.35ಕ್ಕೆ, ಬೆ.11.40ಕ್ಕೆ, ಮ.3.40ಕ್ಕೆ, ಸಂ.6.45ಕ್ಕೆ, ರಾ.10.30ಕ್ಕೆ, ಜೈಲರ್ (ಕ): ಬೆ.8.25ಕ್ಕೆ, ಮ.3.10ಕ್ಕೆ, ಓಎಂಜಿ 2 (ಹಿಂ): ಬೆ.8.20ಕ್ಕೆ, ಬೆ.11.50ಕ್ಕೆ, ಸಂ.6.40ಕ್ಕೆ, ರಾ.10.15ಕ್ಕೆ, ಗದರ್ 2 (ಹಿಂ): ಮ.12.05ಕ್ಕೆ, ಮ.3.10ಕ್ಕೆ, ರಾ.7.10ಕ್ಕೆ, ರಾ.10ಕ್ಕೆ, ಹಾಸ್ಟೆಲ್ ಹುಡುಗರು ಬೇಕಾಗಿದ್ದಾರೆ (ಕ): ರಾ.9.45ಕ್ಕೆ, ಆಚಾರ್ & ಕೋ (ಕ): ಮ.3.55ಕ್ಕೆ, ಕೌಸಲ್ಯ ಸುಪ್ರಜಾ ರಾಮ (ಕ): ಮ.3.25ಕ್ಕೆ, ರಾ.10.30ಕ್ಕೆ, ನಮೋ ಭೂತಾತ್ಮ (ಕ): ಬೆ.11.55ಕ್ಕೆ, ರಾಖಿ ಔರ್ ರಾಣಿ (ಹಿಂ): ಬೆ.9.20ಕ್ಕೆ, ಸಂ.6.20ಕ್ಕೆ, ರಾ.9.50ಕ್ಕೆ, ಓಪನ್‌ಹೈಮರ್ (ಇಂ): ಸಂ.6.35ಕ್ಕೆ, ಭೋಳಾ ಶಂಕರ್ (ತೆ): ಬೆ.9.05ಕ್ಕೆ, ಮ.12.30ಕ್ಕೆ, ಮ.2.55ಕ್ಕೆ, ಸಂ.6.20ಕ್ಕೆ, ಮೆಗ್ 2 (ಇಂ): ಮ.12.50ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

## ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ರಾಘವೇಂದ್ರಗೆ ಪ್ರಥಮ ಬಹುಮಾನ



ನಂಜನಗೂಡು,ಸೆ.8– ತಾಲೂಕಿನ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ನಡೆದ 2023–24ನೇ ಸಾಲಿನ ತಾಲೂಕು ಮಟ್ಟದ ಕ್ರೀಡಾಕೂಟದಲ್ಲಿ ಕಾರ್ಮೆಲ್ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿ ರಾಘವೇಂದ್ರ ಎನ್.ಎನ್. ಉದ್ದ ಜಿಗಿತದಲ್ಲಿ ಪ್ರಥಮ ಸ್ಥಾನ, ಮತ್ತು ಓಟ ಸ್ಪರ್ಧೆಯಲ್ಲಿ ತೃತೀಯ ಸ್ಥಾನವನ್ನು ಪಡೆದುಕೊಂಡು ಕಾಲೇಜಿಗೆ ಕೀರ್ತಿ ತಂದಿದ್ದಾನೆ ಎಂದು ಪ್ರಕಟಣೆ ತಿಳಿಸಿದೆ.



ವರುಣ ವಿಧಾನಸಭಾ ಕ್ಷೇತ್ರದ ಚಿಕ್ಕಳ್ಳಿ ವ್ಯವಸಾಯ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ಪ್ರಭುಸ್ವಾಮಿ, ಉಪಾಧ್ಯಕ್ಷರಾಗಿ ಪುಟ್ಟ ಮಾದಪ್ಪ ಆಯ್ಕೆಯಾದರು. ಈ ಸಂದರ್ಭದಲ್ಲಿ ನಿರ್ದೇಶಕರುಗಳಾದ ಮಂಜುನಾಥ್, ಬೆಟ್ಟಪ್ಪ ಇನ್ನಿತರರು ಹಾಜರಿದ್ದು, ನೂತನ ಪದಾಧಿಕಾರಿಗಳನ್ನು ಅಭಿನಂದಿಸಿದರು. ವರುಣ ಮಹೇಶ್, ಬುಗುತಗಳ್ಳಿ ಮಹೇಶ್, ಕಂಟ್ರಾಕ್ಟರ್ ಮಹದೇವಸ್ವಾಮಿ ಭಾಗವಹಿಸಿದ್ದರು.

## ಹುಣಸೂರಿನ ಮೂವರು ಶಿಕ್ಷಕರಿಗೆ ಜಿಲ್ಲಾ ಮಟ್ಟದ ಪ್ರಶಸ್ತಿ



ಮಾದುಪ್ರಸಾದ್



ವಾಣಿಶ್ರೀ



ಶಿಲ್ಪ

ಹುಣಸೂರು.ಸೆ.8– ಹುಣಸೂರು ತಾಲೂಕಿನ ಮೂವರು ಶಿಕ್ಷಕರು ಜಿಲ್ಲಾ ಮಟ್ಟದ ಪ್ರಶಸ್ತಿಗೆ ಭಾಜನರಾಗಿದ್ದಾರೆ ಎಂದು ಬಿಇಓ ರೇವಣ್ಣ ತಿಳಿಸಿದ್ದಾರೆ.

ಹುಣಸೂರು ಸರಕಾರಿ ಬಾಲಕರ ವಿಜ್ಞಾನ ಶಿಕ್ಷಕಿ ವಾಣಿಶ್ರೀ, ಹುಣಸೂರು ಬಾಲಕರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕ ಡಾ.ಮಾದುಪ್ರಸಾದ್ ಹಾಗೂ ನಾಡಪ್ಪನಹಳ್ಳಿ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ಶಿಲ್ಪ ಪ್ರಶಸ್ತಿಗೆ ಬಾಜನರಾಗಿದ್ದಾರೆ.

## ಪ್ರತಿಭಟನಾ ಮೆರವಣಿಗೆ – ಪ್ರಕಟಣೆ

ಮಾನ್ಯ, ಜೆಎಸ್‌ಎಸ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘದ ಸದಸ್ಯ / ಸಹಸದಸ್ಯಬಾಂಧವರೆ,

ಸದರಿ ಸಂಘ 2ನೇ ಹಂತಕ್ಕೆ 1995–96ರಲ್ಲಿ 27 ವರ್ಷಗಳ ಹಿಂದೆ, 3ನೇ ಹಂತಕ್ಕೆ 2005–06ರಲ್ಲಿ 17 ವರ್ಷಗಳ ಹಿಂದೆ, 4ನೇ ಹಂತಕ್ಕೆ 2010–11 ರಲ್ಲಿ 12 ವರ್ಷಗಳ ಹಿಂದೆ ಸುಮಾರು 3500 ಸದಸ್ಯರುಗಳಿಂದ ರೂ. 200 ಕೋಟಿಗೂ ಮಿಗಿಲಾಗಿ ನಿವೇಶನಕ್ಕಾಗಿ ಹಣ ಕಟ್ಟಿಸಿಕೊಂಡು ಸದಸ್ಯ/ಸಹಸದಸ್ಯರುಗಳಾದ ನಮಗೆ ಇದುವರೆಗೂ ನಿವೇಶನ ನೀಡಿರುವುದಿಲ್ಲ. ಸಂಘದ ಈ ಹಿಂದಿನ ಮೂರು ಆಡಳಿತ ಮಂಡಳಿಗಳು ಸಹಕಾರ ಕಾಯಿದೆ, ನಿಯಮ ಹಾಗೂ ಉಪನಿಯಮಗಳನ್ನು ಉಲ್ಲಂಘನೆ ಮಾಡಿ, ಅಧಿಕಾರ ದುರುಪಯೋಗ, ಆರ್ಥಿಕ ನಿರ್ವಹಣೆಯಲ್ಲಿ ಕರ್ತವ್ಯಲೋಪ ಹಾಗೂ ನಕಲಿ ರಶೀದಿ ಸೃಷ್ಟಿಸಿರುವುದು ಮತ್ತು ಸಂಘ/ಸದಸ್ಯರ ಹಿತರಕ್ಷಣೆಗೆ ವಿರುದ್ಧವಾಗಿ ನಿರ್ಣಯ ಕೈಗೊಂಡು ಸಂಘಕ್ಕೆ ನಷ್ಟ ಉಂಟುಮಾಡಿರುವುದು ಸಹಕಾರ ಇಲಾಖಾ ಅಧಿಕಾರಿಗಳ ತನಿಖೆ / ವಿಚಾರಣೆಗಳಿಂದ ಸಾಭೀತಾಗಿರುತ್ತದೆ. ಸಹಕಾರ ಸಂಘದ ಕಾಯಿದೆ, ನಿಯಮದ ಕಲಂ 68/29(ಸಿ)/28ರ ಅಡಿಯಲ್ಲಿ ತಪ್ಪಿತಸ್ಥ ಆಡಳಿತ ಮಂಡಳಿ ಪದಾಧಿಕಾರಿಗಳು ಮತ್ತು ನಿರ್ದೇಶಕರುಗಳನ್ನು ಅನರ್ಹಗೊಳಿಸಿ, ತಪ್ಪಿತಸ್ಥರ ಮೇಲೆ ಕ್ರಿಮಿನಲ್ ಮತ್ತು ಸಿವಿಲ್ ಮೊಕದ್ದೊಮ್ಮೆ ದಾಖಲಿಸಲು ಸಹಕಾರ ಇಲಾಖೆಯ ಸಂಘದ ಅಪರನಿಬಂಧಕರು ಸಂಘಕ್ಕೆ ನಿರ್ದೇಶಿಸಿರುತ್ತಾರೆ.

ಈ ಮೇಲ್ಕಂಡ ಹಿನ್ನೆಲೆಯಲ್ಲಿ ಸಂಘದ ನಿರ್ದೇಶಕ ಮಂಡಳಿಗಳ ಅನ್ಯಾಯದ ವಿರುದ್ಧ ಪ್ರತಿಭಟಿಸಿ, ಇಲಾಖಾ ಅಧಿಕಾರಿಗಳು, ಸಂಘದ ತಪ್ಪಿತಸ್ಥರ ಮೇಲೆ ಕ್ರಮಕೈಗೊಂಡು ಸದಸ್ಯ/ಸಹಸದಸ್ಯರುಗಳಿಗೆ ನ್ಯಾಯ ಒದಗಿಸಿಕೊಡುವಂತೆ ಒತ್ತಾಯಿಸಿ **ದಿನಾಂಕ 11.09.2023ನೇ ಸೋಮವಾರದಂದು ಬೆಳಗ್ಗೆ 11.00 ಕ್ಕೆ ಮೈಸೂರಿನ ನ್ಯಾಯಾಲಯದ ಮುಂಭಾಗವಿರುವ ಮಹಾತ್ಮಗಾಂಧಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ** ಮೆರವಣಿಗೆ ಮೂಲಕ ಕಾಡಾ ಕಛೇರಿ ತಲುಪಿ, ಸಹಕಾರ ಇಲಾಖಾ ಜಂಟಿ ನಿರ್ದೇಶಕರಿಗೆ ಮನವಿ ಅರ್ಪಿಸಲು ಪ್ರತಿಭಟನಾ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ನ್ಯಾಯಯುತವಾಗಿ ನಮಗೆ ದೊರಕಬೇಕಾದ ನಿವೇಶನ ಪಡೆದುಕೊಳ್ಳುವ ಸಲುವಾಗಿ ಸಂಘದ ಸದಸ್ಯ/ಸಹಸದಸ್ಯರುಗಳು ಹೆಚ್ಚಿನ ಸಂಖ್ಯೆಯಲ್ಲಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲು ಕೋರಿದೆ. (ಆ ಸಂದರ್ಭದಲ್ಲಿ ಮಳೆಯಿದ್ದರೆ, ಜಂಟಿ ನಿರ್ದೇಶಕರಿಗೆ ಮೆರವಣಿಗೆ ಬದಲು ಮನವಿಯನ್ನು ಮಧ್ಯಾಹ್ನ 1.00 ಗಂಟೆಗೆ ಅರ್ಪಿಸಲಾಗುವುದು.)

**ಸಂಘದ ಸದಸ್ಯ/ಸಹಸದಸ್ಯರ ಪರವಾಗಿ**

**ಪ್ರೊ. ಕೆ.ಎಂ. ವೀರಯ್ಯ, ಮಹದೇವ್ (ನಿ.ಪ್ರಾ), ಪಿ. ಬಸವಣ್ಣ**

## ಶ್ರೀ ಶಾಶ್ವತಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿ ಲಿ.

ನೋಂದಣಿ (UBC-4/119/RGN/47933/2014/15)

# 54/ಂ, 9ನೇ ಮೇನ್, 5ನೇ ಕ್ರಾಸ್, ಜವರೇಗೌಡ ಪಾರ್ಕ್ ಹತ್ತಿರ, ಸರಸ್ವತಿಪುರಂ, ಮೈಸೂರು–570009

### 2022–23ನೇ ಸಾಲಿನ ಸಂಘದ 8ನೇ ವಾರ್ಷಿಕ ಮಹಾಸಭೆಯ ಆಹ್ವಾನ ಪತ್ರಿಕೆ

ಸನ್ಮಾನ್ಯ ಸಹಕಾರಿ ಬಂಧುಗಳೇ

ನಮ್ಮ ಸಹಕಾರಿಯ 2022–23ನೇ ಸಾಲಿನ 8ನೇ ವಾರ್ಷಿಕ ಸರ್ವಸದಸ್ಯರ ಮಹಾಸಭೆಯನ್ನು ತಾರೀಕು 16.09.2023ನೇ ಶನಿವಾರ ಬೆಳಗ್ಗೆ 11 ಗಂಟೆಗೆ ಸರಿಯಾಗಿ ಶ್ರೀ ಶಾಶ್ವತಿ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ ಮುಖ್ಯ ಕಾರ್ಯಾಲಯ ನಂ 54/ಆ–1, 9ನೇ ಮೇನ್, 5ನೇ ಕ್ರಾಸ್, ಜವರೇಗೌಡ ಪಾರ್ಕ್ ಹತ್ತಿರ, ಸರಸ್ವತಿಪುರಂ, ಮೈಸೂರು, ನಮ್ಮ ಸಂಘದ ಅಧ್ಯಕ್ಷರಾದ ಡಾ.ವಿ. ಭಾನು ಪ್ರಕಾಶ್ ಶರ್ಮಾರವರ ಅಧ್ಯಕ್ಷತೆಯಲ್ಲಿ ಕರೆಯಲಾಗಿದೆ. ಆಹ್ವಾನ ಪತ್ರಿಕೆ ತಲುಪದ ಸನ್ಮಾನ್ಯ ಸದಸ್ಯರು ಇದನ್ನೇ ಆಹ್ವಾನವೆಂದು ತಿಳಿದುಸಭೆಗೆ ಸಕಾಲಕ್ಕೆ ಆಗಮಿಸಿ ಸಭೆಯನ್ನು ಯಶಸ್ವಿಯಾಗಿ ನಡೆಸಿಕೊಡಬೇಕೆಂದು ವಿನಂತಿಸಿದೆ.

**ಸರ್ವರಿಗೂ ಆದರದ ಸುಸ್ವಾಗತ**

ಸ್ಥಳ: ಮೈಸೂರು — ಆಡಳಿತ ಮಂಡಳಿ ಅಪ್ಪಣೆಯ ಮೇರೆಗೆ ತಮ್ಮ ವಿಶ್ವಾಸಿ

ಸಹಿ/–ಡಿ.ಟಿ.ಪ್ರಕಾಶ್, ಉಪಾಧ್ಯಕ್ಷರು

## PUBLIC NOTICE

It is hereby notified that, my client intends to purchase the schedule property from its present owners **Sri. Chamarajanagar Vishwanath Shridhar (Sri C V Shridhar)** aged about 77 years S/o Late C V Vishwanath & (02) **Smt. Bhavani Shridhar** aged about 72 years W/o C V Shridhar Both are presently residing at flat no 402 No 1611, KBR Nirvana Ramakrishna nagar Mysure & this schedule property presently been held under Mortgage with HDFC Bank and my client intends to purchase the same and proceed to pay the entier mortgage outstanding amount to HDFC bank as a part of the sale consideration.

So if Any other person or persons holding having any kind of claim on the foot of any agreement or on foot of any documents or claiming or ascertaining any rights, title, interest, claim or whatsoever in the schedule property or any part there of in any manner holding any claims against the schedule property under any law or has secured attachment from courts or intends to object for sale in favour of my client and the proposed mortgage to made out by my client in favourof his bankers on any legal grounds or by holding the original possession certificate and that of first charge over the property and holding these above mentioned records in original are hereby notified to submit their objections along with documents to the undersigned within **7 days** of the issuance of this public notice with all documentary proof.

If no response is received within the said time my client shall proceed with the sale process & will be concluded and there after no body whom-so-ever would have any claim what-so-ever and how-so-ever.

**SCHEDULE**

All that piece and parcel of the residential Site bearing no 3 Khatha no 673/1N1/2B Situated at Karanji Mansion century Park layout, Vasanthamahal Road, Nazarbad Mohalla, Mysore measuring East to West 50.00 and North to South 100 feet with residentail building thereon **Bounded on;** East by: Site no 02, West by: Site no 04, North by: Road, South by: Karanji Tank Bund.

**S. SURESH** B.B.M LL.,B
ADVOCATE
No, 974, 7th Main, 3rd Stage,
Gokulam, Mysore - 570 002

Place: Mysore
Date: 08.09.2023



## ಸಿಎಫ್‌ಟಿಆರ್‌ಐ ವಿದ್ಯಾ ಸಂಸ್ಥೆ, ಮೈಸೂರು

(ಸಿಎಫ್‌ಟಿಆರ್‌ಐ ಶಾಲೆ)

### ಕಟ್ಟಡ ದುರಸ್ತಿ ಕಾಮಗಾರಿ ಕೆಲಸದ ಬಗ್ಗೆ

ಸಿಎಫ್‌ಟಿಆರ್‌ಐ ಶಾಲೆಯಲ್ಲಿನ ತಂಗುದಾಣ ಕೊಠಡಿಗಳ (Girls toilet) ದುರಸ್ತಿ ಕಾಮಗಾರಿಗಳ ಬಗ್ಗೆ ಲೋಕೋಪಯೋಗಿ ಇಲಾಖೆಯ ದೃಢೀಕೃತ ಕಂಟ್ರಾಕ್ಟರ್ ರವರಿಂದ ತಂಗುದಾಣ ಕೊಠಡಿಗಳ ದುರಸ್ತಿ ಕಾಮಗಾರಿಗೆ ತಗಲುವ ಹಣಕಾಸು ವೆಚ್ಚವನ್ನು ನಿಗಧಿಪಡಿಸಿ ಸಲ್ಲಿಸಬೇಕೆಂದು ಕೋರಲಾಗಿದೆ. ದುರಸ್ತಿ ಕಾಮಗಾರಿಯ ಪೂರ್ಣ ಮಾಹಿತಿಯ ವಿವರಗಳನ್ನು ಸಿಎಫ್‌ಟಿಆರ್‌ಐ ಶಾಲೆಯಲ್ಲಿ ಪಡೆಯಬಹುದಾಗಿದೆ. ಹಣಕಾಸು ವೆಚ್ಚದ ವಿವರಗಳುಳ್ಳ ಪೂರ್ಣ ಮಾಹಿತಿಯ ವಿವರಗಳನ್ನು ಈ ಜಾಹಿರಾತಿ ಪ್ರಕಟವಾದ 7 (ಏಳು ದಿನ) ಗಳೊಳಗಾಗಿ ಶಾಲೆಗೆ ಸಲ್ಲಿಸಬೇಕೆಂದು ತಿಳಿಸಲಾಗಿದೆ.

ಸಹಿ–/ ಗೌರವ ಕಾರ್ಯದರ್ಶಿಗಳು,
ಸಿಎಫ್‌ಟಿಆರ್‌ಐ ವಿದ್ಯಾಸಂಸ್ಥೆ, ಮೈಸೂರು– 570020

## ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಅರಸೀಕೆರೆ

ದೂರವಾಣಿ: 08174 232203

ಸಂಖ್ಯೆ : ಕೃಉಮಾಸ/ಅರಸೀಕೆರೆ/673/2023–24 ದಿನಾಂಕ: 23/08/2023

### ಟೆಂಡರ್ ಪ್ರಕಟಣೆ (Karnataka Public Procurement Portal ಮೂಲಕ)

2023–24 ನೇ ಸಾಲಿಗಾಗಿ ಅರಸೀಕೆರೆ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮಾರುಕಟ್ಟೆ ಪ್ರಾಂಗಣದಲ್ಲಿ ಹಾಗೂ ಜಾವಗಲ್, ಗಂಡಸಿ, ಜೆ.ಸಿ. ಪುರ, ಹಬ್ಬನಘಟ್ಟ ಕಾವಲ್ ಉಪ ಮಾರುಕಟ್ಟೆ ಪ್ರಾಂಗಣಗಳಲ್ಲಿ ಭದ್ರತಾ ಸೇವೆಗಾಗಿ ಭದ್ರತಾ ಸಂಸ್ಥೆಯು ಕರ್ನಾಟಕ ಖಾಸಗಿ ಭದ್ರತಾ ಏಜೆನ್ಸಿ ನಿಯಮ 2008 (The Karnataka Private Security Agencies Rules 2008) ರನ್ವಯ ಸಂಬಂಧಪಟ್ಟ ಗೃಹ/ ಪೊಲೀಸ್ ಇಲಾಖೆಯಿಂದ ಲೈಸೆನ್ಸ್ ಪಡೆದಿರುವ ಹಾಗೂ ಕಾರ್ಮಿಕ ಇಲಾಖೆಯಲ್ಲಿ ನೊಂದಾಯಿತ ಅರ್ಹ ಗುತ್ತಿಗೆದಾರರಿಂದ/ ಸಂಸ್ಥೆಗಳಿಂದ Karnataka Public Procurement Portal, https://kppp.karnataka.gov.in ಮೂಲಕ ಟೆಂಡರ್‌ಗಳನ್ನು ಏಕ ಲಕೋಟೆ ಪದ್ಧತಿಯಲ್ಲಿ ಆಹ್ವಾನಿಸಲಾಗಿದೆ. 1)ಭರ್ತಿ ಮಾಡಿದ ಇ–ಟೆಂಡರ್ ಸ್ವೀಕರಿಸಲು ಕೊನೆಯ ದಿನಾಂಕ: 26/09/2023 ಸಂಜೆ 4–00 ಗಂಟೆವರೆಗೆ. 2)ಇ–ಟೆಂಡರ್ ಗಳನ್ನು ತೆರೆಯುವ ದಿನಾಂಕ: 27/09/2023 ಸಂಜೆ 4–00 ಗಂಟೆಗೆ ಒಂದು ವೇಳೆ ಸದರಿ ದಿನಾಂಕಗಳಂದು ಸಾರ್ವತ್ರಿಕ ರಜೆ ಘೋಷಣೆ ಆದಲ್ಲಿ ಕಾರ್ಯಾಲಯದ ಮುಂದಿನ ಕೆಲಸದ ದಿನ ಸಿಂಧುವಾಗಿರುತ್ತದೆ. ಕ್ರ.ಸಂ.1)ಕೆಲಸದ ಹೆಸರು: ಹೊರಗುತ್ತಿಗೆ ಆಧಾರದ ಮೇಲೆ ಭದ್ರತಾ ಸಿಬ್ಬಂದಿ ಪೂರೈಸುವುದು. ಪೂರೈಸಬೇಕಾದ ಸಿಬ್ಬಂದಿ ಸಂಖ್ಯೆ: 13 ಇ.ಎಂ.ಡಿ ಮೊತ್ತ: ರೂ. 75,000=00 ಖಾಲಿ ಟೆಂಡರ್ ಫಾರಂ ಬೆಲೆ: Karnataka Public Procurement Portal ನಿಯಮ ಗಳನ್ವಯ. ವಿವರ: ಬೆರಳಚ್ಚುಗಾರರು/ಕಂಪ್ಯೂಟರ್ ಆಪರೇಟರ್–02 ಡಾಟಾ ಎಂಟ್ರಿ ಅಪರೇಟರ್–02, ವಾಹನ ಚಾಲಕರು–02, ಭದ್ರತಾ ಕಾವಲುಗಾರರು–07 ಟೆಂಡರ್ ಪ್ರೊಸೆಸ್ಸಿಂಗ್ ಫೀ Karnataka Public Procurement Portal ನ ನಿಯಮಗಳನ್ವಯ ಇದ್ದು, ಟೆಂಡರ್ ಷರತ್ತುಗಳು ಹಾಗೂ ನಿಬಂಧನೆಗಳು Karnataka Public Procurement Portal ನಲ್ಲಿ ನಮೂದಿಸಿರುವಂತೆ ಇದ್ದು, ಹೆಚ್ಚಿನ ಮಾಹಿತಿಯನ್ನು ರಜಾ ದಿನಗಳನ್ನು ಹೊರತುಪಡಿಸಿ, ಕಛೇರಿ ವೇಳೆಯಲ್ಲಿ ಕಛೇರಿಯಿಂದ ಅಥವಾ https://kppp.karnataka.gov.in ವೆಬ್ ಸೈಟ್‌ನಲ್ಲಿ ಪಡೆಯಬಹುದಾಗಿದೆ. Karnataka Public Procure ment Portal ಟೆಂಡರ್‌ನಲ್ಲಿ ಭಾಗವಹಿಸಲು ನೊಂದಾಯಿಸುವ ಬಗ್ಗೆ ಸಹಾಯವಾಣಿ ದೂರವಾಣಿ ಸಂಖ್ಯೆ +91–8046010000, +91–8068948777 ಅಥವಾ ಕಛೇರಿ ದೂರವಾಣಿ ಸಂಖ್ಯೆ 08174–232203 ನ್ನು ಸಂಪರ್ಕಿಸಬಹುದು.

| ಸಹಿ/–(ಸಿ.ಎಲ್. ಸಿದ್ಧರಂಗಸ್ವಾಮಿ) ಕಾರ್ಯದರ್ಶಿ, ಕೃ.ಉ.ಮಾ.ಸ, ಅರಸೀಕೆರೆ. | ಸಹಿ/–(ಎಂ.ಜಿ. ಸಂತೋಷ್ ಕುಮಾರ್) ಆಡಳಿತಾಧಿಕಾರಿಗಳು, ಕೃ.ಉ.ಮಾ.ಸ, ಅರಸೀಕೆರೆ. |
|---|---|

ವಾಸಾಸಂಇ/ಹಿಸನಿ/ಹಾಸನ/276/ಕೆಎಸ್‌ಎಂಸಿಎ/284/2023–24

## ಕರ್ನಾಟಕ ಸರ್ಕಾರ
## ಕಾಲೇಜು ಶಿಕ್ಷಣ ಇಲಾಖೆ

Phone: 0821-2421666
Mobile no: 9731475901/9448603302
Email: machwmysore@gmail.com

ಮಹಾರಾಣಿ ಮಹಿಳಾ ಕಲಾ ಕಾಲೇಜು ವಿದ್ಯಾರ್ಥಿನಿಲಯ, ಝಾನ್ಸಿರಾಣಿ ಲಕ್ಷ್ಮಿಬಾಯಿ ರಸ್ತೆ, ಮೈಸೂರು– 570005

ಸಂಖ್ಯೆ: ಮಮಕಕಾ/ವಿನಿ/ಮೈ/21/2023–24 ದಿನಾಂಕ: 08.09.2023

### ಟೆಂಡರ್ ಪ್ರಕಟಣೆ

ಮಹಾರಾಣಿ ಮಹಿಳಾ ಕಲಾ ಕಾಲೇಜು ವಿದ್ಯಾರ್ಥಿನಿಲಯ, ಮೈಸೂರು ಇಲ್ಲಿಗೆ ದಿನಸಿ ಸಾಮಾಗ್ರಿಗಳು & ತರಕಾರಿ ಸರಬರಾಜು ಮಾಡಲು ಓಪನ್ ಟೆಂಡರ್ ಕರೆಯಲಾಗಿದ್ದು, ದಿನಸಿ ಸಾಮಾಗ್ರಿಗಳಿಗೆ ಮಾಸಿಕ ಅಂದಾಜು ಮೊತ್ತ 3,00,000–00 ಗಳು ಹಾಗೂ ತರಕಾರಿ ಸರಬರಾಜಿಗೆ ಮಾಸಿಕ ಅಂದಾಜು ಮೊತ್ತ ರೂ.50,000–00 ಗಳಾಗಿದ್ದು, ಇ.ಎಂ.ಡಿ ಮೊತ್ತ ಒಟ್ಟು ರೂ 10,500 ವಿದ್ಯಾರ್ಥಿನಿಲಯದ ಕಛೇರಿಯಲ್ಲಿ ಅರ್ಜಿ ಪಡೆದು, ಭರ್ತಿ ಮಾಡಿದ ಅರ್ಜಿ ಜೊತೆ ಇ.ಎಂ.ಡಿ ಮೊತ್ತವನ್ನು ಡಿಡಿ ಮೂಲಕ ಸಲ್ಲಿಸಲು ಕೊನೆಯ ದಿನಾಂಕ: 22.09.2023ರ ಸಂಜೆ 4.00 ಗಂಟೆಯಾಗಿರುತ್ತದೆ. ದಿನಾಂಕ: 25.09.2023 ರಂದು ಮಧ್ಯಾಹ್ನ 3.00ಗಂಟೆಗೆ ಟೆಂಡರ್ ತೆರೆಯಲಾಗುವುದು. ಹೆಚ್ಚಿನ ವಿವರ ಗಳಿಗೆ ವಿದ್ಯಾರ್ಥಿನಿಲಯದ ಕಛೇರಿಯನ್ನು ಸಂಪರ್ಕಿಸುವುದು.

ಸಹಿ/– ಪ್ರಾಂಶುಪಾಲರು ಗ್ರೇಡ್ 2/ ಅಧ್ಯಕ್ಷರು

## ಪುರಸಭಾ ಕಾರ್ಯಾಲಯ, ಪಿರಿಯಾಪಟ್ಟಣ
## ಮೈಸೂರು ಜಿಲ್ಲೆ –571107

Email: itstaff_ulb_periyapatna@yahoo.com

Ph(O): 08223-273036

ಸಂ:ಪಿಪುಸ/ಪ.ಅ/ಟೆಂಡರ್–03/2023–24 ದಿನಾಂಕ: 07.09.2023

### ಟೆಂಡರ್ ಪ್ರಕಟಣೆ (ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ)

ಪಿರಿಯಾಪಟ್ಟಣ ಪುರಸಭೆಯ ವಿವಿಧ ಯೋಜನೆಯಡಿ ಸರಕು ಸಾಮಾಗ್ರಿಗಳನ್ನು ಸರಬರಾಜು ಮಾಡಿಕೊಳ್ಳಲು ಅರ್ಹ ನೋಂದಾಯಿತ ಸರಬರಾಜುದಾರರಿಂದ ಪಡೆಯಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಈ ಕೆಳಕಂಡಂತೆ ಟೆಂಡರ್‌ಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು ಇ–ಪ್ರೊಕ್ಯುರ್‌ಮೆಂಟ್ ಪೋರ್ಟಲ್‌ನ https://kppp.karnataka.gov.in ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದು. **1)** ಟೆಂಡರ್‌ನ್ನು ಸಲ್ಲಿಸಲು ಕಡೆಯ ದಿ: 22.09.2023 ಸಂಜೆ 4.00 ಗಂಟೆಯವರೆಗೆ. **2)** ಟೆಂಡರ್ ತೆರೆಯುವ ದಿ: 25.09.2023ರ ಬೆಳಿಗ್ಗೆ 11.00 ಗಂಟೆಗೆ ಅಥವಾ ಮುಂದೆ ಸೂಚಿಸುವದಿನಾಂಕದಂದು ತೆರೆಯಲಾಗುವುದು.

| ಕ್ರ ಸಂ | ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ ರೂಗಳಲ್ಲಿ |
|---|---|---|---|
| 1. | DMA/2023-24/IND0365 | 4.95 | 12398/– |
| 2. | DMA/2023-24/IND0364 | 36.32 | 72659/– |
| 3. | DMA/2023-24/IND0366 | 9.50 | 23750/– |
| 4. | DMA/2023-24/IND0367 | 9.98 | 24950/– |

**ಕಾಲಾವಧಿ:** 3 ತಿಂಗಳು

ಸೂಚನೆ:1. ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳಾದಲ್ಲಿ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಇ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು ಗುತ್ತಿಗೆದಾರರು https://kppp.karnataka.gov.in ಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

| ಸಹಿ/– ಆಡಳಿತಾಧಿಕಾರಿಗಳು ಪುರಸಭೆ, ಪಿರಿಯಪಟ್ಟಣ | ಸಹಿ/–ಮುಖ್ಯಾಧಿಕಾರಿ ಪುರಸಭೆ, ಪಿರಿಯಪಟ್ಟಣ |
|---|---|

DIPR/DDMYS/KSMCA/314/2023-24